

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 3 ಮಂಗಳವಾರ 2024

ಸಂಪುಟ: 45 | ಸಂಚಿಕೆ: 139 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮುಡಾ ನಿವೇಶನ ಹಗರಣ: ಮಾಜಿ ಆಯುಕ್ತ

ದಿನೇಶ್‌ಕುಮಾರ್ ಅಮಾನತು



ಮುಡಾದ ಹಿಂದಿನ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್

ಮೈಸೂರು, ಸೆ. 2– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಬದಲಿ ನಿವೇಶನ ಮಂಜೂರಾತಿ ಹಾಗೂ ಶೇ. 50:50 ಅನುಪಾತದ ನಿಯಮಬಾಹಿರವಾಗಿ ನಿವೇಶನ ಮಂಜೂರಾತಿಗೆ ಸಂಬಂಧಪಟ್ಟಂತೆ ಮುಡಾದ ಹಿಂದಿನ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ ಅವರನ್ನು ಅಮಾನತುಪಡಿಸಲಾಗಿದೆ. ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಅಧೀನ ಕಾರ್ಯದರ್ಶಿ ಉಮಾದೇವಿ ಆದೇಶ ಹೊರಡಿಸಿದ್ದಾರೆ.

ಮುಡಾದಿಂದ ವರ್ಗಾವಣೆ ಮಾಡಲಾಗಿದ್ದ ದಿನೇಶ್‌ಕುಮಾರ್‌ಗೆ ಕೆಲ ದಿನಗಳಿಂದ ಸ್ಥಳ ನಿಯೋಜನೆ ಮಾಡಿರಲಿಲ್ಲ. ಆಗಸ್ಟ್ 29ರಂದು ಅವರನ್ನು ಹಾವೇರಿ ವಿಶ್ವವಿದ್ಯಾಲಯದ ಕುಲಸಚಿವರನ್ನಾಗಿ ನೇಮಕ ಮಾಡಲಾಗಿತ್ತು. ಇದರ ಬಗ್ಗೆ ವ್ಯಾಪಕ ಟೀಕೆ ವ್ಯಕ್ತವಾಗಿತ್ತು. ದಿನೇಶ್ ಕುಮಾರ್, ಮುಡಾ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದ ಅವಧಿಯಲ್ಲಿ ಕೈಗೊಂಡಿರುವ ನಿಯಮಬಾಹಿರ ನಿರ್ಧಾರಗಳ ಸಂಬಂಧ ತನಿಖೆಗಾಗಿ ಸರ್ಕಾರದಿಂದ ರಚಿಸಲಾಗಿದ್ದ ತಾಂತ್ರಿಕ ಸಮಿತಿಯ ವರದಿಯನ್ನಾಧರಿಸಿ ಈ ಕ್ರಮ ಕೈಗೊಳ್ಳಲಾಗಿದೆ. ಈ ಸಮಿತಿ ಮುಡಾಗೆ ಭೇಟಿ ನೀಡಿ ಕಡತಗಳನ್ನು ಪರಿಶೀಲಿಸಿ, ದಿನೇಶ್ ಕುಮಾರ್ ನಿಯಮಬಾಹಿರವಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ ವಿಸ್ತೃತವಾದ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಿತ್ತು.

ಸರ್ಕಾರದ ಪೂರ್ವಾನುಮೋದನೆ ಇಲ್ಲದೆ ಕಾಮಗಾರಿ: ಸರ್ಕಾರದಿಂದ ಪೂರ್ವಾನುಮೋದನೆ ■9ನೇ ಪುಟಕ್ಕೆ

ಕರ್ತವ್ಯ ಲೋಪ...

- ನಿಯಮಬಾಹಿರವಾಗಿ ಹಳೆ ಬಡಾವಣೆಗಳಲ್ಲಿ ಶೇ. 50:50 ನಿವೇಶನ ಮಂಜೂರು
- ನಿಯಮಗಳು, ಸರ್ಕಾರದ ನಿರ್ದೇಶನಗಳಿಗೆ ವ್ಯತಿರಿಕ್ತವಾಗಿ ಸಭೆಯಲ್ಲಿ ತೀರ್ಮಾನ
- ನಿಯಮಬಾಹಿರವಾಗಿ ಬದಲಿ ನಿವೇಶನ ಮಂಜೂರಾತಿಗೆ ಶಿಫಾರಸು
- ಭೂಸ್ವಾಧೀನವಾದ ಎಷ್ಟೋ ವರ್ಷಗಳ ನಂತರ ಭೂ ಪರಿಹಾರ ಮೊತ್ತ ಪಾವತಿ
- ವಾರ್ಷಿಕವಾಗಿ ಲಭ್ಯವಿರುವ ನಿವೇಶನಗಳ ಬಗ್ಗೆ ದಾಖಲಿಸದೇ ಇರುವುದು



ಹಳೇ ಬಡಾವಣೆಗಳಿಗೆ 50:50 ಅನ್ವಯಿಸಲ್ಲ

2020ರ ನವೆಂಬರ್ 6 ಮತ್ತು 20ರಂದು ಮುಡಾ ಸಾಮಾನ್ಯ ಸಭೆಯಲ್ಲಿ ಈ ಹಿಂದೆ ಭೂಸ್ವಾಧೀನಪಡಿಸಿಕೊಳ್ಳದೇ ನಿರ್ಮಿಸಿರುವ ಬಡಾವಣೆಗಳ ಬಗ್ಗೆ ಕೆಲವೊಂದು ನಿರ್ಣಯಗಳನ್ನು ಕೈಗೊಳ್ಳಲಾಗಿತ್ತು. ಆದರೆ, ಸದರಿ ನಿರ್ಣಯಗಳನ್ನು ಉಲ್ಲಂಘಿಸಿ, ಮುಡಾ ಸಭೆಯ ಗಮನಕ್ಕೂ ತಾರದೆ ಬದಲಿ ನಿವೇಶನ ಹಾಗೂ ತುಂಡು ಭೂಮಿ ಮಂಜೂರಾತಿಗಾಗಿ ದಿನೇಶ್‌ಕುಮಾರ್ ತೀರ್ಮಾನ ಕೈಗೊಂಡಿರುವುದು ಕಂಡುಬಂದಿದೆ. ಅಲ್ಲದೇ, ಪ್ರಾಧಿಕಾರವು ವಿವಿಧ ಉಪಯೋಗಗಳಿಗೆ ಬಳಸಿಕೊಂಡಿರುವ ಜಮೀನಿಗೆ ಬದಲಾಗಿ ಅಭಿವೃದ್ಧಿಪಡಿಸಿದ ಬಡಾವಣೆಗಳಲ್ಲಿ ಶೇ. 50:50ರ ಅನುಪಾತದಡಿ ನಿವೇಶನಗಳನ್ನು ನೀಡುವ ಪ್ರಸ್ತಾವವನ್ನು ಪ್ರಾಧಿಕಾರದ ಸಭೆಗೆ ಕುಡಾ ಕಾಯ್ದೆ ಉಲ್ಲಂಘಿಸಿ ಮಂಡಿಸಿರುವುದು ಕಂಡುಬಂದಿದೆ. 50:50 ಅನುಪಾತದ ನಿಯಮಗಳು 2009ರ ಜುಲೈ 30ರಿಂದ ಜಾರಿಗೆ ಬಂದಿದ್ದು, ನಿಯಮ–3(ಇ) ರಲ್ಲಿ ಭೂಸ್ವಾಧೀನಪಡಿಸಿಕೊಂಡ ಬಡಾವಣೆಯಲ್ಲೇ ಲಾಟರಿ ಮೂಲಕ ನಿವೇಶನ ಹಂಚಿಕೆ ಮಾಡಲು ಅವಕಾಶವಿದ್ದು, ಹೊಸದಾಗಿ ಕೈಗೊಳ್ಳುವ ವಸತಿ ಯೋಜನೆಗಳಿಗೆ ಮಾತ್ರ ಈ ನಿಯಮಗಳು ಅನ್ವಯಿಸುವುದರಿಂದ ಈಗಾಗಲೇ ಅಭಿವೃದ್ಧಿಪಡಿಸಿದ ಹಳೇ ಬಡಾವಣೆಗಳಿಗೆ ಶೇ. 50:50 ಅನುಪಾತದ ನಿಯಮಗಳು ಅನ್ವಯವಾಗದೇ ಇದ್ದರೂ ನಿಯಮ ಉಲ್ಲಂಘಿಸಿ ಶೇ. 50:50ರ ಅನುಪಾತದಡಿ ನಿವೇಶನಗಳನ್ನು ಮಂಜೂರಾತಿ ಮಾಡಿ ಕ್ರಮ ವಹಿಸಲಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

“ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶೇ. 50:50 ಅನುಪಾತದಲ್ಲಿ ಅಕ್ರಮವಾಗಿ ನಿವೇಶನ ಪಡೆದುಕೊಂಡಿದ್ದಾರೆ ಎಂಬ ನನ್ನ ಆರೋಪ ಸುಳ್ಳು ಎಂದು ಹಲವು ಮಹಾನುಭಾವರು ಬೊಬ್ಬೆ ಹೊಡೆದದ್ದೇ ಹೊಡೆದದ್ದು. ಅವರಿಗೆ ತಕ್ಕ ಉತ್ತರವನ್ನು ಸಿದ್ದರಾಮಯ್ಯನವರ ಸರ್ಕಾರವೇ ನೀಡಿದೆ. ಮುಡಾ ಹಿಂದಿನ ಆಯುಕ್ತ ದಿನೇಶ್ ಕುಮಾರ್ ಅವರನ್ನು ಅಮಾನತು ಮಾಡಿರುವ ಆದೇಶದಲ್ಲಿ 50:50 ಅನುಪಾತದಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಿರುವುದು ನಿಯಮಬಾಹಿರವೆಂದು ಸ್ಪಷ್ಟವಾಗಿ ತಿಳಿಸಲಾಗಿದೆ. ಸಿದ್ದರಾಮಯ್ಯನವರು ನಿಯಮಾನುಸಾರ ನಿವೇಶನಗಳನ್ನು ಪಡೆಯಲಾಗಿದೆ ಎಂದಿದ್ದರು. ಮಹಾನುಭಾವರ ಪ್ರಕಾರ ರೌಡಿಯಾದ ನನ್ನ ಮಾತು ನಿಜವಾಯಿತು. ಮುಖ್ಯಮಂತ್ರಿ ಹೇಳಿದ ಮಾತು ಸುಳ್ಳಾಯಿತು. ನನ್ನನ್ನು ರೌಡಿ ಆಸಾಮಿ ಎಂದು ಹೇಳಿದ ಮಹಾನುಭಾವರು ಇದಕ್ಕೆ ಏನು ಹೇಳುತ್ತಾರೋ ಕಾದು ನೋಡಬೇಕಾಗಿದೆ. ದಿನೇಶ್ ಕುಮಾರ್ ಅವರನ್ನು ಅಮಾನತು ಮಾಡಿದ ಸಿದ್ದರಾಮಯ್ಯ ಸರ್ಕಾರ 50:50 ಅನುಪಾತದಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಿದ ಮತ್ತೊಬ್ಬ ಆಯುಕ್ತ ಡಿ.ಬಿ.ನಟೇಶ್ ಅವರನ್ನು ಅಮಾನತು ಮಾಡಿರುವುದಿಲ್ಲ. ಏಕೆಂದರೆ ನಟೇಶ್ ಅವರು 50:50 ಅನುಪಾತದಲ್ಲೇ ಸಿದ್ದರಾಮಯ್ಯನವರ ಕುಟುಂಬಕ್ಕೆ ನಿವೇಶನಗಳನ್ನು ಹಂಚಿಕೆ ಮಾಡಿದ್ದಾರೆ. ಇದರ ಋಣ ತೀರಿಸಲು ನಟೇಶ್ ಅವರನ್ನು ಅಮಾನತು ಮಾಡಿಲ್ಲ.

– ಸ್ನೇಹಮಯಿ ಕೃಷ್ಣ, ಸಾಮಾಜಿಕ ಕಾರ್ಯಕರ್ತ

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ


ಸೆ.9ಕ್ಕೆ ವಿಚಾರಣೆ ಮುಂದೂಡಿಕೆ

ಸಿಎಂ ಸಿದ್ದರಾಮಯ್ಯ ಸದ್ಯ ಕೂಲ್ ಕೂಲ್...

- ಎಜಿ ಶಶಿಕಿರಣ್ ಶೆಟ್ಟಿ ವಾದ ಮಂಡನೆಗೆ ಅವಕಾಶ
- ಸೆ.12ರೊಳಗೆ ವಾದ–ಪ್ರತಿವಾದಕ್ಕೆ ನ್ಯಾಯಮೂರ್ತಿ ಸಲಹೆ



ಮುಖ್ಯಮಂತ್ರಿ ಸಿದ್ದರಾಮಯ್ಯ





ವಕೀಲ ಅಭಿಷೇಕ್ ಮನು ಸಿಂಘ್ವಿ



ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ



ಹಿರಿಯ ವಕೀಲ ಕೆ.ಜಿ.ರಾಘವನ್

ಬೆಂಗಳೂರು, ಸೆ.2(ಕೆಎಂಶಿ)– ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿರುವ ಅರ್ಜಿ ವಿಚಾರಣೆಯನ್ನು, ರಾಜ್ಯ ಹೈಕೋರ್ಟ್ ಸೆಪ್ಟೆಂಬರ್ 9ಕ್ಕೆ ಮುಂದೂಡಿದೆ.

ವಿಚಾರಣೆ ಕೈಗೆತ್ತಿಕೊಂಡ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು, ಪ್ರಕರಣವನ್ನು ಗಣೇಶ ಚತುರ್ಥಿಗೂ ಮುನ್ನವೇ ಮುಗಿಸೋಣ ಎಂದು ವಾದಿ ಮತ್ತು ಪ್ರತಿವಾದಿ ವಕೀಲರುಗಳಿಗೆ ಸಲಹೆ ನೀಡಿದರು. ಆದರೆ, ಅಡ್ವೋಕೇಟ್ ಜನರಲ್ (ಎಜಿ) ಶಶಿಕಿರಣ್ ಶೆಟ್ಟಿ ಅವರು, ತಾವು ಈ ವಿಷಯದಲ್ಲಿ ವಾದ ಮಾಡಬೇಕಿದೆ. ನನಗೆ ಒಂದು ವಾರ ಸಮಯಾವಕಾಶ ಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರ ಪರ ವಕೀಲ ಅಭಿಷೇಕ್ ಮನು ಸಿಂಘ್ವಿ, ನನಗೆ ಸೆಪ್ಟೆಂಬರ್ 21ರವರೆಗೂ ಸಮಯವಿಲ್ಲ, 9ರಂದು ಅಡ್ವೋಕೇಟ್ ಜನರಲ್ ವಾದ ಮಂಡಿಸಿದ ನಂತರ ನನ್ನ ವಾದ ಮಂಡನೆ ಮಾಡಬೇಕಿದೆ ಎಂದರು.

ಆಗ ನ್ಯಾಯಮೂರ್ತಿಗಳು, ಅ.2ರಿಂದ ನ್ಯಾಯಾಲಯಗಳಿಗೆ ರಜೆ ಇರಲಿದೆ, ಅದಕ್ಕೆ ಮುನ್ನವೇ ಪ್ರಕರಣ ಮುಗಿಸುವ ಅಗತ್ಯವಿದೆ. ಅಡ್ವೋಕೇಟ್ ಜನರಲ್ ಸಲಹೆಯಂತೆ ಸೆ.9ಕ್ಕೆ ವಿಚಾರಣೆ ಕೈಗೆತ್ತಿಕೊಳ್ಳೋಣ. ಆದರೆ ಸೆ.12ಕ್ಕೆ ವಾದ–ಪ್ರತಿವಾದ ಪೂರ್ಣಗೊಳ್ಳಬೇಕು, ಇದನ್ನು ಮತ್ತಷ್ಟು ಮುಂದುವರೆಸಲು ಸಾಧ್ಯವಿಲ್ಲ ಎಂದು ತಿಳಿಸಿ, ಈ ತಿಂಗಳ 9ಕ್ಕೆ ವಿಚಾರಣೆಯನ್ನು ಮುಂದೂಡಿದರು.

ಇದಕ್ಕೂ ಮುನ್ನ ಸ್ನೇಹ ಮಯಿ ಕೃಷ್ಣ ಪರ ಹಿರಿಯ ವಕೀಲ ಕೆ.ಜಿ.ರಾಘವನ್ ಸುದೀರ್ಘ ವಾದ ಮಂಡಿಸಿ ಕರ್ನಾಟಕ ಸರ್ಕಾರ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಬಿಡಿ ನಿವೇಶನಗಳ ಹಂಚಿಕೆಗೆ ಸಂಬಂಧಿಸಿದಂತೆ ನ್ಯಾಯಾಂಗ ತನಿಖೆ ನಡೆಸುತ್ತಿದೆ. ಆದರೆ, ರಾಜ್ಯಪಾಲರು, ಮುಖ್ಯಮಂತ್ರಿ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು, ಅವರ ಕುಟುಂಬದವರು ಬೆಲೆ ಬಾಳುವ 14 ನಿವೇಶನಗಳನ್ನು ಪಡೆದು ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದ್ದಾರೆ ಎಂಬ ಹಿನ್ನೆಲೆಯಲ್ಲಿ ಎಂದರು. ■9ನೇ ಪುಟಕ್ಕೆ

“ಮುಖ್ಯಮಂತ್ರಿ ಅವರು ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು, ಪ್ರಭಾವ ಬಳಸಿ ತಮ್ಮ ಕುಟುಂಬಕ್ಕೆ ನಿವೇಶನಗಳನ್ನು ನೀಡಿದ್ದಾರೆ ಎಂಬುದಕ್ಕಷ್ಟೇ ಸೀಮಿತ. ಸಿದ್ದರಾಮಯ್ಯ ಕರ್ನಾಟಕ ಸರ್ಕಾರದಲ್ಲಿ ಕಳೆದ ಎರಡು ದಶಕಗಳಿಂದ ಒಂದಲ್ಲಾ ಒಂದು ಅಧಿಕಾರದಲ್ಲಿ ಭಾಗಿಯಾಗಿದ್ದಾರೆ. ಅವರು ಎರಡು ಬಾರಿ ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ನಿವೇಶನಗಳ ಹಂಚಿಕೆ ಆಗದಿರಬಹುದು. ಆದರೆ, ಅವರು ಬೇರೆ ಬೇರೆ ಅಧಿಕಾರ ಹುದ್ದೆಯಲ್ಲಿ ಇದ್ದಾಗ ಈ ಪ್ರಕ್ರಿಯೆ ನಡೆದಿದೆ.

–ಹಿರಿಯ ವಕೀಲ ರಾಘವನ್

ಕೆಎಎಸ್ ಪೂರ್ವಭಾವಿ ಪರೀಕ್ಷೆಯಲ್ಲಿ ಎಡವಟ್ಟು: 2 ತಿಂಗಳಲ್ಲಿ

ಮರು ಪರೀಕ್ಷೆಗೆ ಮುಖ್ಯಮಂತ್ರಿ ಸೂಚನೆ

ಬೆಂಗಳೂರು, ಸೆ.2(ಕೆಎಂಶಿ)– ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ)ದ ಕೆಎಎಸ್ ಪೂರ್ವಭಾವಿ ಪರೀಕ್ಷೆಯ ಕನ್ನಡ ಅನುವಾದಿತ ಪ್ರಶ್ನೆಗಳು ಅಸಮರ್ಪಕವಾಗಿರುವ ಆರೋಪದ ಹಿನ್ನೆಲೆಯಲ್ಲಿ ಕರ್ತವ್ಯ ಲೋಪ ಎಸಗಿದ ಅಧಿಕಾರಿಗಳನ್ನು, ಕರ್ತವ್ಯದಿಂದ ಮುಕ್ತಗೊಳಿಸಿ, ಮರು ಪರೀಕ್ಷೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಹೊರಡಿಸಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ಪರೀಕ್ಷಾರ್ಥಿಗಳಿಗೆ ಅನ್ಯಾಯವಾಗಬಾರದು. ಮುಂದಿನ ಎರಡು ತಿಂಗಳಲ್ಲಿ ಮರುಪರೀಕ್ಷೆ ನಡೆಸುವಂತೆ ಆಯೋಗಕ್ಕೆ ಸೂಚನೆ ನೀಡಿದ್ದಾರೆ.

ಮುಂದೆ ಕೈಗೊಳ್ಳಲಾಗುವ ಗೆಜೆಟೆಡ್ ಪ್ರೊಬೆಷನರಿ ಮರುಪರೀಕ್ಷೆಗಳನ್ನು ಅತ್ಯಂತ ಜವಾಬ್ದಾರಿ ಹಾಗೂ ಸಮರ್ಪಕವಾಗಿ ನಡೆಸುವಲ್ಲಿ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಬೇಕು. ಗೆಜೆಟೆಡ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳ ಸಮಗ್ರತೆ ಮತ್ತು ನಂಬಿಕಾರ್ಹತೆಯನ್ನು ಎತ್ತಿಹಿಡಿದು ಪರೀಕ್ಷಾರ್ಥಿಗಳ ಹಿತರಕ್ಷಿಸಲು ಸರ್ಕಾರ ಬದ್ಧವಾಗಿದೆ ಎಂದು ಅವರು ಟ್ವೀಟ್‌ನಲ್ಲಿ ಸ್ಪಷ್ಟಪಡಿಸಿದ್ದಾರೆ.

ಕಳೆದ ಆಗಸ್ಟ್ 27ರಂದು 2023–24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು ಗ್ರೂಪ್ 'ಬಿ' ವೃಂದದ ಒಟ್ಟು 384 ಹುದ್ದೆಗಳಿಗೆ ಆಯೋಗ ಪೂರ್ವಭಾವಿ ಪರೀಕ್ಷೆ ನಡೆಸಿತ್ತು.

ಸುಮಾರು 2 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದು, ಕನ್ನಡದ ಪ್ರಶ್ನೆಗಳು ತಪ್ಪಾಗಿದ್ದವು, 60ಕ್ಕೂ ಹೆಚ್ಚು ತಪ್ಪುಗಳನ್ನು ಪತ್ತೆ ಮಾಡಲಾಗಿತ್ತು, ಇದರಿಂದ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ತೊಂದರೆಯಾಗಿತ್ತು.

ಸ್ವಾಗತಾರ್ಹ: ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ಪೂರ್ವಭಾವಿ ಮರುಪರೀಕ್ಷೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆದೇಶ ಹೊರಬಿದ್ದ ಬೆನ್ನಲ್ಲೇ ಟ್ವೀಟ್ ಮಾಡಿರುವ ವಿಧಾನ ಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್, ಸರ್ಕಾರ ತನ್ನ ಲೋಪಗಳನ್ನು ಒಪ್ಪಿಕೊಂಡು ಮರುಪರೀಕ್ಷೆ ನಡೆಸಲು ಕೈಗೊಂಡಿರುವ ನಿರ್ಧಾರ ಅತ್ಯಂತ ಸ್ವಾಗತಾರ್ಹ, ಇದು ಲಕ್ಷಾಂತರ ಉದ್ಯೋಗಾಕಾಂಕ್ಷಿಗಳು ಹಾಗೂ ಪ್ರತಿಪಕ್ಷಗಳ ಹೋರಾಟಕ್ಕೆ ಸಿಕ್ಕ ಜಯವಾಗಿದೆ ಎಂದಿದ್ದಾರೆ. ಮರುಪರೀಕ್ಷೆ ಸಮರ್ಪಕವಾಗಿ ನಡೆಸಬೇಕು, ಇನ್ನಿತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೂ ತೊಂದರೆಯಾಗದಂತೆ ಪರೀಕ್ಷಾ ದಿನಾಂಕಗಳ ನಿಗದಿ, ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರಗಳ ಹಂಚಿಕೆ, ಪ್ರಶ್ನೆ ಪತ್ರಿಕೆಗಳ ರಚನೆ, ಕನ್ನಡ ಅನುವಾದ ಸೇರಿದಂತೆ ಎಲ್ಲ ಅಂಶಗಳನ್ನು ಪರಿಗಣಿಸಿ ಅತ್ಯಂತ ಜಾಗರೂಕತೆ ಹಾಗೂ ಸುವ್ಯವಸ್ಥಿತ ಪರೀಕ್ಷೆ ನಡೆಸಬೇಕು ಎಂದರು.

ಮೈಸೂರು ಮೇಯರ್ ಉಪಮೇಯರ್ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲು



ಬೆಂಗಳೂರು, ಸೆ.2–ಮೈಸೂರು ಸೇರಿದಂತೆ ರಾಜ್ಯದ ಹತ್ತು ಮಹಾನಗರಪಾಲಿಕೆಗಳಿಗೆ ಮೇಯರ್ ಹಾಗೂ ಉಪಮೇಯರ್ ಮೀಸಲಾತಿ ಪಟ್ಟಿಯನ್ನು ರಾಜ್ಯ ಸರ್ಕಾರ ಪ್ರಕಟಿಸಿದೆ.

ಮೈಸೂರು ಮೇಯರ್ ಹಾಗೂ ಉಪಮೇಯರ್ ಎರಡೂ ಸ್ಥಾನಗಳನ್ನು ಸಾಮಾನ್ಯ ಮಹಿಳೆಗೆ ಮೀಸಲಿಡಲಾಗಿದೆ. ಬಳ್ಳಾರಿ– ಮೇಯರ್ ಸಾಮಾನ್ಯ ಮಹಿಳೆ, ಉಪಮೇಯರ್ ಸಾಮಾನ್ಯ. ಬೆಳಗಾವಿ– ಮೇಯರ್ ಸಾಮಾನ್ಯ ಉಪಮೇಯರ್ ಸಾಮಾನ್ಯ ಮಹಿಳೆ. ದಾವಣಗೆರೆ– ಮೇಯರ್ ಹಿಂದುಳಿದ ವರ್ಗ ಎ, ಉಪಮೇಯರ್ ಹಿಂದುಳಿದ ವರ್ಗ ಬಿ. ಹುಬ್ಬಳ್ಳಿ–ದಾರವಾಡ– ಮೇಯರ್ ಪರಿಶಿಷ್ಟ ಜಾತಿ ಮಹಿಳೆ, ಉಪಮೇಯರ್ ಸಾಮಾನ್ಯ ಮಹಿಳೆ. ಕಲಬುರ್ಗಿ– ಮೇಯರ್ ಸಾಮಾನ್ಯ, ಉಪಮೇಯರ್ ಪರಿಶಿಷ್ಟ ಜಾತಿ ಮಹಿಳೆ. ಮಂಗಳೂರು– ಮೇಯರ್ ಸಾಮಾನ್ಯ, ಉಪಮೇಯರ್ ಹಿಂದುಳಿದ ವರ್ಗ ಎ ಮಹಿಳೆ. ಶಿವಮೊಗ್ಗ– ಮೇಯರ್ ಪರಿಶಿಷ್ಟ ಪಂಗಡ, ಉಪಮೇಯರ್ ಹಿಂದುಳಿದ ವರ್ಗ ಎ. ತುಮಕೂರು– ಮೇಯರ್ ಹಿಂದುಳಿದ ವರ್ಗ ಎ ಮಹಿಳೆ, ಉಪಮೇಯರ್ ಸಾಮಾನ್ಯ ವಿಜಯಪುರ– ಮೇಯರ್ ಸಾಮಾನ್ಯ, ಉಪಮೇಯರ್ ಹಿಂದುಳಿದ ವರ್ಗ ಎ ಮಹಿಳೆಗೆ ಮೀಸಲಿಡಲಾಗಿದೆ ಎಂದು ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಟಿ.ಮಂಜುನಾಥ್ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಪ್ರವೇಶ ಪಡೆಯುವ ಬಿಪಿಎಲ್ ಕಾರ್ಡ್‌ವುಳ್ಳವರು, ಆಟೋ, ಕ್ಯಾಬ್ ಚಾಲಕರ ಮಕ್ಕಳಿಗೆ ಶುಲ್ಕ ರಿಯಾಯಿತಿ

- ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ ಮಾಹಿತಿ
- ತೃತೀಯ ಲಿಂಗಿಗಳು, ದೃಷ್ಟಿಹೀನ ಮಕ್ಕಳಿಗೆ ಉಚಿತ ಪ್ರವೇಶ
- ಕೋವಿಡ್‌ನಲ್ಲಿ ಪೋಷಕರ ಕಳೆದುಕೊಂಡವರಿಗೆ ಪೂರ್ಣ ವಿನಾಯಿತಿ
- ಮುಕ್ತ ವಿವಿ ಪದವಿ ಸಾಂಪ್ರದಾಯಿಕ ಶಿಕ್ಷಣ ಕ್ರಮಕ್ಕೆ ಸಮ
- ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ 1 ಲಕ್ಷ ಪ್ರವೇಶಾತಿಯ ಗುರಿ

ಮೈಸೂರು, ಸೆ.2(ಬಿಎಲ್‌ಯು)– ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಬೋಧನಾ ಶುಲ್ಕದಲ್ಲಿ ಬಿಪಿಎಲ್ ಕಾರ್ಡ್ ಹೊಂದಿರುವವರು, ಆಟೋ, ಕ್ಯಾಬ್ ಚಾಲಕರ ಮಕ್ಕಳು ಹಾಗೂ ಪತಿ–ಪತ್ನಿಗೆ ರಿಯಾಯಿತಿ ನೀಡಲಾಗುವುದು ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ತಿಳಿಸಿದರು.

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅತಿಥಿ ಗೃಹದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಕ್ಷಣಾ ಇಲಾಖೆಯ ವಿದ್ಯಾರ್ಥಿಗಳು, ರಸ್ತೆ ಸಾರಿಗೆ ಸಂಸ್ಥೆಯ ನೌಕರರಿಗೂ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳ ಬೋಧನಾ ಶುಲ್ಕದಲ್ಲಿ ರಿಯಾಯಿತಿ ನೀಡಲಾಗುವುದು ಎಂದು ಹೇಳಿದರು.

ಇವರಲ್ಲದೆ ತೃತೀಯಲಿಂಗಿಗಳು, ದೃಷ್ಟಿಹೀನ ವಿದ್ಯಾರ್ಥಿಗಳು ಹಾಗೂ ಕೋವಿಡ್ ಸಮಯದಲ್ಲಿ ಪೋಷಕರ ಕಳೆದುಕೊಂಡ ಮಕ್ಕಳಿಗೆ ಕೂಡ ಪೂರ್ಣ ಶುಲ್ಕ ವಿನಾಯಿತಿ ನೀಡಿ ಉಚಿತ ಪ್ರವೇಶಾತಿ ನೀಡಲಾಗುವುದು ಎಂದು ಪ್ರೊ.ಶರಣಪ್ಪ ವಿ.ಹಲಸೆ ಮಾಹಿತಿ ನೀಡಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಮಾತ್ರವಲ್ಲದೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಅಗತ್ಯ ದಾಖಲೆ ಒದಗಿಸಿದರೆ ಎಸ್‌ಎಸ್‌ಪಿ ಮೂಲಕ ವಿದ್ಯಾರ್ಥಿ ವೇತನ ನೀಡಲಾಗುತ್ತದೆ ಎಂದರು.

ದೂರ ಶಿಕ್ಷಣ ನೀಡುವ ಏಕೈಕ ಸಂಸ್ಥೆ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಹೊರತುಪಡಿಸಿ ಬೇರೆ ಯಾವುದೇ ಸಾಂಪ್ರದಾಯಿಕ ವಿಶ್ವವಿದ್ಯಾನಿಲಯಗಳು ದೂರ ಶಿಕ್ಷಣ ಕಾರ್ಯಕ್ರಮ ನಡೆಸುವಂತಿಲ್ಲ ಎಂದು ಕರ್ನಾಟಕ ಸರ್ಕಾರ ಡಿಸೆಂಬರ್ 30, 2020ರಂದು ಆದೇಶ ಹೊರಡಿಸಿದೆ. ಈ ಮೂಲಕ ನಮ್ಮದು ದೂರ ಶಿಕ್ಷಣ ನೀಡುವ ಕರ್ನಾಟಕದ ಏಕೈಕ ವಿಶ್ವವಿದ್ಯಾನಿಲಯವಾಗಿದೆ ಎಂದು ತಿಳಿಸಿದರು.

ಫೆಬ್ರವರಿ, 2018ರಂದು ಯುಜಿಸಿ ನೀಡಿರುವ ಸಾರ್ವಜನಿಕ ಪ್ರಕಟಣೆ ಪ್ರಕಾರ ಮುಕ್ತ ವಿಶ್ವವಿದ್ಯಾನಿಲಯಗಳ ದೂರ ಶಿಕ್ಷಣದ ಪದವಿ ಸಾಂಪ್ರದಾಯಿಕ ವಿಶ್ವವಿದ್ಯಾನಿಲಯಗಳು ನೀಡುವ ಶಿಕ್ಷಣ ಕ್ರಮಗಳಿಗೆ ಸಮಾನವಾಗಿರುತ್ತದೆ. ವಿಶ್ವವಿದ್ಯಾನಿಲಯದ ಕುಲಸಚಿವರಾದ ಪ್ರೊ.ಪ್ರವೀಣ್, ವಿಶ್ವನಾಥ್, ಡೀನ್ ಡಾ.ಲಕ್ಷ್ಮಿ, ರಮೇಶ್ ಕಾಳಪ್ಪ, ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಅತಿಥಿ ಗೃಹದಲ್ಲಿ ಸೋಮವಾರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮುಕ್ತ ವಿವಿ ಶೀರ್ಷಿಕೆ ಗೀತೆ ಲೋಕಾರ್ಪಣೆ

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಶೀರ್ಷಿಕೆ ಗೀತೆಯನ್ನು ಮೈಸೂರಿನ ಅರ್ಕಧಾಮದ ಶ್ರೀನಿವಾಸ ಅರ್ಕ ಲೋಕಾರ್ಪಣೆ ಮಾಡಿದರು.

ಭಾರತದಲ್ಲಿ ಉತ್ತಮ ಶಿಕ್ಷಣ ದೊರೆಯುತ್ತಿದೆ. ಇದರಿಂದ ಇಲ್ಲಿ ವಿದ್ಯಾಭ್ಯಾಸ ಮಾಡಿದ ಬಹಳಷ್ಟು ಮಂದಿ ವಿದೇಶಕ್ಕೆ ಹೋಗುತ್ತಿದ್ದಾರೆ ಎಂದು ಹೇಳಿದರು.

ಮುಕ್ತ ವಿಶ್ವವಿದ್ಯಾನಿಲಯದ ಶೀರ್ಷಿಕೆ ಗೀತೆಯನ್ನು ಮುಕ್ತ ವಿವಿ ಸಿಬ್ಬಂದಿಯೂ ಆದ ಜಿ.ಬಿ. ಸರಗೂರು ಸಿದ್ದೇಗೌಡ ರಚನೆ ಮಾಡಿದ್ದು, ನಾಗೇಶ್ ಕಂದೇಗೌಡ ಗೀತೆ ಗಾಯನ ಮಾಡುವುದರ ಜೊತೆಗೆ ಸಂಗೀತ ಸಂಯೋಜನೆ ಮಾಡಿದ್ದಾರೆ.

ಯುಜಿಸಿ 'A' ಪ್ಲಸ್ ಮಾನ್ಯತೆ

ಯುಜಿಸಿ ಮಾನ್ಯತೆ ಪಡೆದಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯಕ್ಕೆ ಎ ಪ್ಲಸ್ ಮಾನ್ಯತೆ ದೊರೆತಿದೆ. ಎಂಬಿಎ ಕಾರ್ಯಕ್ರಮಗಳಿಗೆ ಎಐಸಿಟಿಇ ಮಾನ್ಯತೆ ಕೂಡ ದೊರೆತಿದೆ ಎಂದು ಪ್ರೊ.ಶರಣಪ್ಪ ವಿ.ಹಲಸೆ ವಿವರಿಸಿದರು.

ರಾಜ್ಯಾದ್ಯಂತ 37 ಪ್ರಾದೇಶಿಕ ಕೇಂದ್ರ ಹಾಗೂ 142 ಕಲಿಕಾರ್ಥಿ ಸಹಾಯ ಕೇಂದ್ರಗಳ ಮೂಲಕ ವಿದ್ಯಾರ್ಥಿ ಸ್ನೇಹಿ ಶಿಕ್ಷಣ ಸೇವೆ ನೀಡಲಾಗುತ್ತಿದೆ. 64 ಸ್ನಾತಕ, ಸ್ನಾತಕೋತ್ತರ ಪದವಿ, ಡಿಪ್ಲೊಮಾ ಶಿಕ್ಷಣ ಕ್ರಮಗಳಿಗೆ ಪ್ರವೇಶಾತಿ ನೀಡಲಾಗುತ್ತಿದ್ದು, ಎಂಬಿಎ, ಎಂಸಿಎ ಹಾಗೂ 10 ಆನ್‌ಲೈನ್ ಕೋರ್ಸ್‌ಗಳಿಗೆ ಪ್ರವೇಶಾತಿ ನೀಡಲಾಗುತ್ತಿದೆ ಎಂದರು. ಕಳೆದ ವರ್ಷ 40 ಸಾವಿರ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿದ್ದರು, ಈಗ ಒಂದು ಲಕ್ಷ ಪ್ರವೇಶಾತಿ ಸಾಧಿಸಬೇಕೆಂಬ ಗುರಿ ಹೊಂದಲಾಗಿದೆ ಎಂದು ಹೇಳಿದರು. ಯುಜಿಸಿ ನಿಯಮಾವಳಿ ಪ್ರಕಾರ ಸಾಂಪ್ರದಾಯಿಕ ವಿಶ್ವವಿದ್ಯಾನಿಲಯಗಳಲ್ಲಿ ವ್ಯಾಸಂಗ ಮಾಡುವುದರ ಜೊತೆಗೆ ದೂರ ಶಿಕ್ಷಣ ಕೋರ್ಸ್ ಕೂಡ ಏಕಕಾಲದಲ್ಲಿ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು. ಪ್ರಸ್ತುತ 2024–25ನೇ ಶೈಕ್ಷಣಿಕ ಸಾಲಿನ ಆವೃತ್ತಿಯ ಪ್ರವೇಶಾತಿ ಪ್ರಕ್ರಿಯೆ ನಡೆಯುತ್ತಿದ್ದು, ಅಕ್ಟೋಬರ್ 31 ಕೊನೆಯ ದಿನವಾಗಿದೆ ಎಂದರು.

ಭಾರತದಲ್ಲಿ 17 ದೂರ ಶಿಕ್ಷಣ ವಿಶ್ವವಿದ್ಯಾನಿಲಯಗಳಿದ್ದು, ಇಂದಿರಾ ಗಾಂಧಿ ಮುಕ್ತ ವಿಶ್ವವಿದ್ಯಾನಿಲಯ ಬಿಟ್ಟರೆ ಅತೀ ಹೆಚ್ಚು ಕೋರ್ಸ್‌ಗಳಿರುವ ಎರಡನೇ ವಿಶ್ವವಿದ್ಯಾನಿಲಯ ನಮ್ಮದಾಗಿದೆ ಎಂದು ಪ್ರೊ.ಶರಣಪ್ಪ ವಿ.ಹಲಸೆ ತಿಳಿಸಿದರು.

ಮೈಸೂರು ಮಿತ್ರ ಮಂಗಳವಾರ 3 ಸೆಪ್ಟೆಂಬರ್ 2024

ದುರಸ್ತಿಗಾಗಿ ಹಳ್ಳ ತೋಡಿದ ಪಾಲಿಕೆ ಸಿಬ್ಬಂದಿ

ಹೆಬ್ಬಾಳಿನ ಅಭಿಷೇಕ್ ಸರ್ಕಲ್ ಬಳಿ ನಿರ್ಮಾಣಗಳು ಕುಸಿಯುವ ಭೀತಿ!



ಹೆಬ್ಬಾಳು ಬಡಾವಣೆಯ ಅಭಿಷೇಕ್ ಸರ್ಕಲ್ ಬಳಿಯಿರುವ ಅಪಾಯದ ಹೊಂಡ

ಮೈಸೂರು,ಸೆ.2(ಆರ್‌ಕೆ)–ಕುಸಿದಿದ್ದ ಚರಂಡಿ ದುರಸ್ತಿಗಾಗಿ ಗುಂಡಿ ತೆಗೆದು ಹಾಗೆಯೇ ಬಿಟ್ಟಿರುವುದರಿಂದ ಹೊಂಡ ಅಪಾಯಕ್ಕಾಗಿ ಬಾಯ್ತೆರೆದು ಕಾಯುತ್ತಿರುವುದು ಮೈಸೂರಿನ ಹೆಬ್ಬಾಳು ಬಡಾವಣೆಯ ಅಭಿಷೇಕ್ ಸರ್ಕಲ್ ಬಳಿ ಕಂಡು ಬಂದಿದೆ.

ವಿಜಯನಗರದಿಂದ ರಿಂಗ್ ರೋಡ್ ವರೆಗೆ ಹಾದು ಹೋಗಿರುವ ಡಾ.ಅಂಬರೀಷ್ ರಸ್ತೆಯ ಅಭಿಷೇಕ್ ಸರ್ಕಲ್ ಬಳಿಯ ಒಂದು ಬದಿಯ ದೊಡ್ಡ ಚರಂಡಿ ಕುಸಿದಿತ್ತು. ಅಪಾಯ ಸಂಭವಿಸುವುದನ್ನು ತಡೆಯುವ ಸಲುವಾಗಿ ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳು ದುರಸ್ತಿಗಾಗಿ ಕಾಮಗಾರಿ ಕೈಗೆತ್ತಿಕೊಂಡು ಜೆಸಿಬಿಯಿಂದ ಸುಮಾರು 10 ಅಡಿ ಆಳ, 8 ಅಡಿ ಅಗಲಕ್ಕೆ ಗುಂಡಿ ತೆಗೆದಿದ್ದಾರೆ.

ಗುಂಡಿ ತೆಗೆದು ಸುಮಾರು 10 ದಿನಗಳಾದರೂ ಕಾಮಗಾರಿ ಆರಂಭಿಸದ ಕಾರಣ ಬಾಯ್ತೆರೆದ ಗುಂಡಿ ಅಪಾಯಕ್ಕೆ ಆಹ್ವಾನಿಸುತ್ತಿದೆ. ಈ ರಸ್ತೆಯಲ್ಲಿ ವಾಣಿಜ್ಯ ವಹಿವಾಟು, ವಾಹನ ಸಂಚಾರ ದಟ್ಟವಾಗಿರುವುದರಿಂದ ಯಾವುದೇ ಸಂದರ್ಭದಲ್ಲಾದರೂ, ವೇಗವಾಗಿ ಬರುವ ವಾಹನಗಳು ಈ ಗುಂಡಿಗೆ ಬೀಳುವ ಸಾಧ್ಯತೆ ಇದೆ.

ಕಾಮಗಾರಿಗಾಗಿ ತೆಗೆದ ಗುಂಡಿ ಬಳಿ ಮುಂಜಾಗ್ರತೆಗಾಗಿ ಯಾವುದೇ ಬ್ಯಾರಿಕೇಡ್ ಅಳವಡಿಸಿಲ್ಲ. ಸಾರ್ವಜನಿಕರಿಗೆ ಎಚ್ಚರಿಕೆ ಫಲಕವನ್ನೂ ಹಾಕಿಲ್ಲ. ಅಲ್ಲದೆ, ವಾಣಿಜ್ಯ ಮಳಿಗೆ, ಅಂಗಡಿ ಮುಂಗಟ್ಟು, ವೈದ್ಯರ ಕ್ಲಿನಿಕ್‌ಗಳು, ಮೆಡಿಕಲ್ ಸ್ಟೋರ್ ಹಾಗೂ ಪೇಯಿಂಗ್ ಗೆಸ್ಟ್‌ಗಳಿರುವುದರಿಂದ ಅಡ್ಡಲಾಗಿ ದೊಡ್ಡ ಹೊಂಡ ತೆಗೆದು ಹಾಗೆಯೇ ಬಿಟ್ಟಿರುವುದು ಅಪಾಯಕ್ಕೆ ಆಹ್ವಾನ ನೀಡುತ್ತಿದೆ. ತುರ್ತು ಕೆಲಸ ಎಂದು ಗೊತ್ತಿದ್ದರೂ ಪಾಲಿಕೆ ಅಧಿಕಾರಿಗಳು, ತರಾತುರಿಯಲ್ಲಿ ಗುಂಡಿ ತೆಗೆದು ಕಾಮಗಾರಿ ಆರಂಭಿಸದೇ ನಿರ್ಲಕ್ಷ್ಯ ತೋರುತ್ತಿರುವುದರಿಂದ ಗುಂಡಿಗೆ ಬಿದ್ದು ಪ್ರಾಣಾಪಾಯ ಸಂಭವಿಸುವ ಸಾಧ್ಯತೆ ಇದೆ.

ಎಲ್.ನಾಗೇಂದ್ರಗೆ ಅಭಿನಂದನೆ



ಮೈಸೂರಿನ ಪಡುವಾರಹಳ್ಳಿಯ ವಿನಾಯಕ ಕನ್ವೆನ್ಷನ್ ಹಾಲ್‌ನಲ್ಲಿ ನಡೆದ ಸಮಾರಂಭದಲ್ಲಿ ಮೈಸೂರು ನಗರ ಬಿಜೆಪಿ ಅಧ್ಯಕ್ಷರು, ಮಾಜಿ ಶಾಸಕ ಎಲ್.ನಾಗೇಂದ್ರ ಅವರನ್ನು ಸನ್ಮಾನಿಸಲಾಯಿತು. ಟ್ರಸ್ಟ್ ಅಧ್ಯಕ್ಷ ಮಹದೇವಸ್ವಾಮಿ, ಕಾರ್ಯದರ್ಶಿ ಭೈರಪ್ಪ, ಲಿಂಗಪ್ಪ, ಈ.ಬಸವರಾಜ್, ಸಿ.ಡಿ.ಕುಮಾರ್, ಯೋಗಾನಂದ ಇತರರಿದ್ದರು.

ಶನೇಶ್ವರಸ್ವಾಮಿ ಪೂಜಾ ಮಹೋತ್ಸವ...



ಮೈಸೂರಿನ ಸುಣ್ಣದಕೇರಿ ನಾಲ್ಕನೇ ಕ್ರಾಸ್‌ನಲ್ಲಿ ನಡೆದ ಶ್ರೀ ಶನೇಶ್ವರ ಸ್ವಾಮಿ ಪೂಜಾ ಮಹೋತ್ಸವದ ಹಿನ್ನೆಲೆಯಲ್ಲಿ ಅನ್ನದಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಚಾಲನೆ ನೀಡಲಾಯಿತು. ಈ ವೇಳೆ ಮುಖಂಡರಾದ ಸತೀಶ್, ಶೇಖರ್ ನಾಯಕ್, ಪ್ರಶಾಂತ್ ನಾಯಕ್, ಅವಿನಾಶ್ ಮತ್ತಿತರರು ಉಪಸ್ಥಿತರಿದ್ದರು.


ದಸರಾ ದೀಪಾಲಂಕಾರ ಕೆಲವು ರಸ್ತೆ, ಸರ್ಕಲ್‌ಗಳಿಗೆ ಮಾತ್ರ ಅಳವಡಿಸಲು ಮನವಿ



ಮೈಸೂರು, ಸೆ.2–ದಸರಾ ದೀಪಾಲಂಕಾರವು ಅರಸು ರಸ್ತೆ, ಸಯ್ಯಾಜಿ ರಾವ್ ರಸ್ತೆ ಹಾಗೂ ಮೈಸೂರಿನ ಸರ್ಕಲ್‌ಗಳಿಗೆ ಮಾತ್ರ ಸೀಮಿತವಾಗಬೇಕು. ರಸ್ತೆಗಳಿಗೆ ದೀಪಾಲಂಕಾರ ವ್ಯವಸ್ಥೆಯಿಂದ ಪ್ರವಾಸಿಗರಿಗೆ, ವಾಹನ ಸವಾರರಿಗೆ ತೊಂದರೆ ಉಂಟಾಗಲಿದೆ ಎಂದು ಆಮ್ ಆದ್ಮಿ ಪಕ್ಷದ ಮುಖಂಡ ಹೇಮಂತ್ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ನಾಡಹಬ್ಬ ದಸರೆಯ ಪ್ರಮುಖ ಆಕರ್ಷಣೆ ದೀಪಾಲಂಕಾರ. ದೀಪಾಲಂಕಾರದಲ್ಲಿ ಜಗಮಗಿಸುತ್ತಿರುವ ಅರಮನೆಯನ್ನು ಕಣ್ತುಂಬಿಕೊಳ್ಳಲು ಸ್ಥಳೀಯರಲ್ಲದೆ ದೇಶದ ನಾನಾ ಭಾಗಗಳಿಂದ ಪ್ರವಾಸಿಗರು ಬರುತ್ತಾರೆ. ಆದರೆ ಇದೇ ದೀಪಾಲಂಕಾರದಿಂದ ರಸ್ತೆಗಳಲ್ಲಿ ಪ್ರವಾಸಿಗರಿಗೆ ಹಾಗೂ ಸಾರ್ವಜನಿಕರಿಗೆ ತೀವ್ರ ಮಟ್ಟದಲ್ಲಿ ಕಿರಿಕಿರಿ ಉಂಟಾಗುವ ಸಾಧ್ಯತೆಗಳು ಹೆಚ್ಚಿವೆ. ಕೆಲವು ಬದಲಾವಣೆಗೆ ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಮೈಸೂರಿನ ಆರ್ ಗೇಟ್ ಸರ್ಕಲ್‌ನಿಂದ ಅರಮನೆಯ ಎದುರು ಇರುವ ಕೋಟೆ ಆಂಜನೇಯ ಸರ್ಕಲ್, ಕೆ.ಆರ್ ಸರ್ಕಲ್ ಮತ್ತು ಸಯ್ಯಾಜಿ ರಾವ್ ರಸ್ತೆ, ದೇವರಾಜ ಅರಸು ರಸ್ತೆಗೆ ದೀಪಾಲಂಕಾರ ಕೊನೆಗೊಳ್ಳಬೇಕು. ಇನ್ನಿತರ ಸರ್ಕಲ್‌ಗಳಲ್ಲೂ ದೀಪಾಲಂಕಾರ ಇರಲಿ. ಅರಸು ರಸ್ತೆಯಲ್ಲಿ ದಸರಾ ವೇಳೆ ನಿತ್ಯ 6 ಗಂಟೆ ಮೇಲೆ ವಾಹನ ಸಂಚಾರಕ್ಕೂ ನಿಷೇಧ ವಿಧಿಸಬೇಕು. ಇಲ್ಲಿ ದೀಪಾಲಂಕಾರವನ್ನು ಪ್ರವಾಸಿಗರು, ಸಾರ್ವಜನಿಕರು ನಡಿಗೆ ಮುಖಾಂತರ ಅಲ್ಲಿನ ದೀಪಾಲಂಕಾರಕ್ಕೆ ಹೆಚ್ಚು ಮೆರಗು ಮಾಡಿ ಕೊಡಬೇಕಾಗಿದೆ ಎಂದು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

ಸತ್ಯನಾರಾಯಣ ನಿಧನ



ಹೆಚ್.ಡಿ.ಕೋಟೆ, ಸೆ.2– ಮೂಲತಃ ಬೀಚನಹಳ್ಳಿ ನಿವಾಸಿ, ಹಾಲಿ ಮೈಸೂರಿನ ಅರವಿಂದ ನಗರದ ಸತ್ಯನಾರಾಯಣ(81) ಸೋಮವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ಮಂಗಳವಾರ ಮಧ್ಯಾಹ್ನ ನಡೆಯಲಿದೆ ಎಂದು ಕುಟುಂಬ ವರ್ಗ ತಿಳಿಸಿದೆ.

ಅನ್ಯರಿಗೆ ಆಶ್ರಯ ನೀಡುವಂತಹ ಹೃದಯ ಶ್ರೀಮಂತಿಕೆ ಕನ್ನಡಿಗರದ್ದು

‘ಅಕ್ಕ’ ಸಮ್ಮೇಳನದಲ್ಲಿ ಸುತ್ತೂರು ಶ್ರೀಗಳ ಪ್ರಶಂಸೆ



ಅಮೆರಿಕದ ವರ್ಜೀನಿಯಾದ ರಿಚ್ಮಂಡ್‌ನಲ್ಲಿ ಅಮೆರಿಕ ಕನ್ನಡ ಕೂಟಗಳ ಆಗರ ‘ಅಕ್ಕ’ ವತಿಯಿಂದ ನಡೆದ 12ನೇ ಅಕ್ಕ ವಿಶ್ವ ಕನ್ನಡ ಸಮ್ಮೇಳನವನ್ನು ಶ್ರೀ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಜ್ಯೋತಿ ಬೆಳಗಿಸಿ, ಉದ್ಘಾಟಿಸಿದರು.

> “ಅಮೆರಿಕದಲ್ಲಿ ನೆಲೆಸಿರುವ ಕನ್ನಡಿಗರು ನಾಡಿನ ಸಂಸ್ಕೃತಿ, ಸಂಪ್ರದಾಯ, ಸಂಸ್ಕಾರಗಳನ್ನು ಮರೆಯಬಾರದು ಎಂಬ ಕಾರಣಕ್ಕಾಗಿ ಅಮೆರಿಕ ಕನ್ನಡ ಕೂಟಗಳ ಆಗರವನ್ನು ಸ್ಥಾಪಿಸಿ, ಪ್ರತಿ ಎರಡು ವರ್ಷಗಳಿಗೊಮ್ಮೆ ಅಕ್ಕ ವಿಶ್ವ ಕನ್ನಡ ಸಮ್ಮೇಳನವನ್ನು ನಡೆಸುತ್ತಿರುವುದು ಸಂತಸದ ಸಂಗತಿ. ಕಲೆ, ಸಾಹಿತ್ಯ, ನೃತ್ಯ, ಸಂಗೀತ, ನಾಟಕ, ಜನಪದ ನೃತ್ಯಗಳ ಸಾಂಸ್ಕೃತಿಕ ಸಂಭ್ರಮಗಳನ್ನು ಅಮೆರಿಕದ ಅಕ್ಕ ಸಮ್ಮೇಳನದಲ್ಲಿ ಕಾಣಬಹುದಾಗಿದೆ. **–ಸುತ್ತೂರು ಶ್ರೀ**

ಮೈಸೂರು,ಸೆ.2–ಕನ್ನಡ ಹೃದಯವಂತ ಭಾಷೆ. ಜಗತ್ತಿನ ಪ್ರತಿಯೊಂದು ಜೀವಿಗೂ ಒಂದು ಭಾಷೆಯಿದೆ. ಮನುಷ್ಯನ ಬದುಕಿಗೂ ಮಾಧ್ಯಮವಾಗಿ ಭಾಷೆ ಅವಶ್ಯಕವಾದುದು. ಒಂದು ಭಾಷೆ ಕೇವಲ ಸಂವಹನಕ್ಕೆ ಮಾತ್ರವಲ್ಲ, ಅದರ ಮೂಲಕ ಸಂಸ್ಕೃತಿ ಮತ್ತು ಸಂಸ್ಕಾರಗಳನ್ನು ಪಡೆದುಕೊಳ್ಳಲು ಸಹಕಾರಿಯಾಗಲಿದೆ ಎಂದು ಶ್ರೀ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಹೇಳಿದರು.

ಅಮೆರಿಕದ ವರ್ಜಿನಿಯಾದ ರಿಚ್ಮಂಡ್‌ನಲ್ಲಿ ಅಮೆರಿಕ ಕನ್ನಡ ಕೂಟಗಳ ಆಗರ ‘ಅಕ್ಕ’ ವತಿಯಿಂದ ನಡೆದ 12ನೇ ಅಕ್ಕ ವಿಶ್ವ ಕನ್ನಡ ಸಮ್ಮೇಳನವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು.

ಮಾತೃಭಾಷೆಯಲ್ಲಿ ಆತ್ಮೀಯ ಸಂಬಂಧ ಹಾಗೂ ಪರಸ್ಪರ ಅನ್ಯೋನ್ಯತೆಗಳಿರುತ್ತವೆ. ಹೃದಯದ ಅನಿಸಿಕೆಗಳನ್ನು ಹಂಚಿಕೊಳ್ಳಲು ಭಾಷೆಯ ಅವಶ್ಯಕತೆಯಿದೆ. ಕನ್ನಡ ಭಾಷೆಗೆ ವಿಶೇಷವಾದ ಶಾಸ್ತ್ರೀಯ ಭಾಷೆಯ ಸ್ಥಾನಮಾನವಿದೆ. ಭಾರತದ ಎಲ್ಲ ರಾಜ್ಯಗಳಿಂದಲೂ ಬಂದು ಹೆಚ್ಚು ಜನ ನೆಲಸುವಂತಹ ನಾಡು ಎಂದರೆ ಕರ್ನಾಟಕ. ಆಧ್ಯಾತ್ಮಿಕ, ರಾಜಕೀಯ, ಔದ್ಯೋಗಿಕವಾಗಿ ಅನ್ಯರಿಗೂ ಆಶ್ರಯ ನೀಡುವಂತಹ ಹೃದಯವಂತಿಕೆ ಕನ್ನಡಿಗರಿಗಿದೆ. ಟಿಬೆಟ್‌ನಿಂದ ಜನರು ನಿರಾಶ್ರಿತರಾಗಿ ಬಂದಾಗ ಕರ್ನಾಟದಲ್ಲಿಯೂ ಅವರಿಗೆ ಆಶ್ರಯ ನೀಡಿದುದನ್ನು ದಲೈಲಾಮ ಯಾವಾಗಲೂ ನೆನೆಯುತ್ತಾರೆ ಎಂದರು.

ರಿಚ್‌ಮಂಡ್ ನಗರ ಸಾಂಸ್ಕೃತಿಕವಾಗಿ ಶ್ರೀಮಂತವಾಗಿದೆ. ಕರ್ನಾಟಕದಿಂದ ಅನೇಕ ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಲು ಆಗಮಿಸಿದ್ದಾರೆ. ವಿಶೇಷವಾಗಿ ಈ ಬಾರಿ ಪೌರಕಾರ್ಮಿಕ ಕಲಾವಿದರೂ ಜನಪದ ಕಾರ್ಯಕ್ರಮಗಳನ್ನು ನೀಡುತ್ತಿದ್ದಾರೆ. ಕಾವೇರಿ ಹಾಗೂ ರಿಚ್ಮಂಡ್ ಕನ್ನಡ ಸಂಘಗಳ ಸಹಯೋಗದಲ್ಲಿ ಸಮ್ಮೇಳನ ನಡೆಯುತ್ತಿರುವುದು ಶ್ಲಾಘನೀಯ ಎಂದರು.

ಡಾ.ಅಮರನಾಥಗೌಡರಿಗೆ ಇಲ್ಲಿನ ಎಲ್ಲ ಕನ್ನಡ ಸಂಘಗಳು ಬೆನ್ನೆಲುಬಾಗಿ ನಿಂತಿರುವುದು ಸ್ತುತ್ಯಾರ್ಹ. ಸಂಘಟಿತವಾದ ಪ್ರಯತ್ನದಿಂದ ಈ ಕಾರ್ಯಕ್ರಮ ಯಶಸ್ವಿಯಾಗಿ ನಡೆಯುತ್ತಿದೆ ಎಂದರು.

ಅಕ್ಕ ಅಧ್ಯಕ್ಷ ಡಾ. ಅಮರನಾಥಗೌಡ, ಸ್ವಾಗತ ಸಮಿತಿ ಅಧ್ಯಕ್ಷ ರವಿ ಬೋರೇಗೌಡ, ಕಾರ್ಯದರ್ಶಿ ಮಾದೇಶ್ ಬಸವರಾಜು, ಸೆನೆಟರ್ ಡಾ.ಡೇವಿಡ್ ಓವನ್, ಅಟಾರ್ನಿ ಜನರಲ್ ಶ್ರೀಮತಿ ಶಾನನ್ ಟೇಲರ್ ಹಾಗೂ ಡಾ.ನಾ.ಸೋಮೇಶ್ವರ ಮಾತನಾಡಿದರು. ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕಸಾಪ ಅಧ್ಯಕ್ಷ ಡಾ.ಮಹೇಶ್ ಜೋಶಿ, ನವೀನ್ ಕೃಷ್ಣ, ಷಣ್ಮುಖ ಅಯ್ಯರ್, ಹರಿದಾಸ್, ನಾಗಶಂಕರ್, ಶಿವಮೂರ್ತಿ ಕೀಲಾರ, ತುಮಕೂರು ದಯಾನಂದ, ಪ್ರಭುದೇವ್ ಮತ್ತಿತರರು ಉಪಸ್ಥಿತರಿದ್ದರು.

ಗೋಕುಲಂ ಕೊಡವ ಸಂಘದ ನೂತನ ಪದಾಧಿಕಾರಿಗಳು



ಮೈಸೂರಿನ ಗೋಕುಲಂ ಕೊಡವ ಸಂಘದಲ್ಲಿ 2024–2026ರ ಅವಧಿಗೆ ನಡೆದ ಎಜಿಎಂನಲ್ಲಿ ಆಯ್ಕೆಯಾದ ನೂತನ ಪದಾಧಿಕಾರಿಗಳು. (ಎಡದಿಂದ ಕುಳಿತವರು) ಚೇನಂಡ ಅಶ್ವಿನಿ (ನ್ಯಾನ್ಸಿ) ಕುಟ್ಟಪ್ಪ–ಖಜಾಂಚಿ; ಚೇಂದಂಡ ನವೀನ್–ಕಾರ್ಯದರ್ಶಿ; ಐತ್ತಿಚಂಡ ಲಾಲಾ ಮುದ್ದಯ್ಯ–ಅಧ್ಯಕ್ಷರು; ಇಟ್ಟೀರ ಕಾಶ್ಯಪ್–ಉಪಾಧ್ಯಕ್ಷ, ಉಳ್ಳಿಯಡ ಚಿದಾನಂದ–ಜಂಟಿ ಕಾರ್ಯದರ್ಶಿ; (ಎಡದಿಂದ ನಿಂತವರು) ಸಮಿತಿ ಸದಸ್ಯರು–ಉಳ್ಳಿಯಡ ತಾರಾ, ಮಾಚೆಟ್ಟಿರ ರೇಖಾ, ಮುಕ್ಕಾಟಿರ ಸುಜಾತ, ಇಟ್ಟೀರ ಜ್ಯೋತಿ, ಬೊಳ್ಳಚಂಡ ಜಾನ್ಸಿ, ಚೇಂದ್ರಿಮಾಡ ಅಪ್ಪಯ್ಯ, ಚೊಟ್ಟೆಮಂಡ ಅಪ್ಪಚ್ಚು, ಉದ್ದಿನಾಡಂಡ ಸಾಬು, ಬೊಟ್ಟೆಂಗಡ ಬೆಳ್ಳಿಯಪ್ಪ, ಇಟ್ಟೀರ ಅಪ್ಪಾಜಿ (ರಾಜಾ).

ಮಕ್ಕಳಿಗೆ ಪರಿಸರ ಸ್ನೇಹಿ ಜೇಡಿ ಮಣ್ಣಿನ ಗಣಪತಿ ಕಾರ್ಯಾಗಾರ

ಮೈಸೂರು,ಸೆ.2–ಶ್ರೀ ದುರ್ಗಾ ಫೌಂಡೇಶನ್ ವತಿಯಿಂದ ಪರಿಸರ ಸ್ನೇಹಿ ಗಣಪತಿ ಹಬ್ಬ ಆಚರಿಸುವ ನಿಟ್ಟಿನಲ್ಲಿ ಮಕ್ಕಳಿಗೆ ಪರಿಸರ ಸ್ನೇಹಿ ಜೇಡಿ ಮಣ್ಣಿನ ಗಣಪತಿ ಕಾರ್ಯಾಗಾರವನ್ನು ಮಂಚೇಗೌಡನಕೊಪ್ಪಲು ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ನಾಳೆ (ಸೆ.3) ಬೆಳಗ್ಗೆ 10 ಗಂಟೆಗೆ ಕಲಾವಿದರಾದ ಆರ್.ಲಕ್ಷ್ಮಿ ಚಲಪತಿ ನೇತೃತ್ವದಲ್ಲಿ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಶಾಸಕ ಹರೀಶ್‌ಗೌಡ, ಇಂದಿರಾ ಗಾಂಧಿ ಬ್ಲಾಕಿನ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಶಾಲೆಯ ಶಿಕ್ಷಕ ವೃಂದ ಭಾಗವಹಿಸಲಿದ್ದಾರೆ.

ಯೂಟ್ಯೂಬ್‌ನಲ್ಲಿ 10ನೇ ತರಗತಿ ವಿಜ್ಞಾನ ಪಾಠ

ಮೈಸೂರು,ಸೆ.2(ಜಿಎ)–ಮಂಡ್ಯದ ಅರಿವು ಚಾರಿಟೆಬಲ್ ಟ್ರಸ್ಟ್ ವತಿಯಿಂದ ಹತ್ತನೇ ತರಗತಿ ಮಕ್ಕಳಿಗೆ ವಿಜ್ಞಾನದ ಪಾಠವನ್ನು ಯುಟ್ಯೂಬ್‌ನಲ್ಲಿ ಅಪ್‌ಲೋಡ್ ಮಾಡಿದ್ದು, ಮಕ್ಕಳು ವೀಕ್ಷಿಸಬಹುದಾಗಿದೆ. ಇದೇ ರೀತಿ ಒಂಭತ್ತು, ಹತ್ತು ಮತ್ತು ದ್ವಿತೀಯ ಪಿಯುಸಿ ವಾರಾಂತ್ಯದ ತರಗತಿಗಳನ್ನೂ ಯೂಟ್ಯೂಬ್‌ನಲ್ಲಿ ಅಪ್‌ಲೋಡ್ ಮಾಡಲಾಗುತ್ತಿದೆ ಎಂದು ಟ್ರಸ್ಟ್ ಸಂಸ್ಥಾಪಕ ಮಂಗಲ ಪ್ರಕಾಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಿಕ್ಷಣಕ್ಕೆ ಸಂಬಂಧಿಸಿದ ಪಾಠ, ಆರೋಗ್ಯ ತಪಾಸಣೆ, ಗ್ರಂಥಾಲಯ, ಕಂಪ್ಯೂಟರ್ ತರಬೇತಿ ಕೇಂದ್ರ ಆರಂಭ, ಶುದ್ಧ ಕುಡಿಯುವ ನೀರಿನ ಘಟಕ ಆರಂಭ ಮೊದಲಾದ ಚಟುವಟಿಕೆಗಳಲ್ಲಿ ತಮ್ಮ ಸಂಸ್ಥೆ ತೊಡಗಿಸಿಕೊಂಡಿದೆ. ಹೀಗಾಗಿ ಆಸಕ್ತರು ಹೆಚ್ಚಿನ ಮಾಹಿತಿಗೆ ದೂ.99646 66400 ಸಂಪರ್ಕಿಸಿ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಉಪಾಧ್ಯಕ್ಷ ನಾರಾಯಣ್ ಉಪಸ್ಥಿತರಿದ್ದರು.

ಶಿಕ್ಷಣ, ಸಾಹಿತ್ಯ, ಕಲೆ, ಸಂಗೀತ ಬೆಳವಣಿಗೆಗೆ ರಾಜೇಂದ್ರ ಶ್ರೀಗಳ ಕೊಡುಗೆ ಅಪಾರ



ಜೆಎಸ್‌ಎಸ್ ಮಹಾವಿದ್ಯಾಪೀಠ ಪ್ರಕಟಣಾ ವಿಭಾಗದ ಶ್ರೀ ನಗರ್ಲೆ ಶಿವಕುಮಾರ್ ಮಾತನಾಡಿದರು.

ಮೈಸೂರು, ಸೆ. 2– ಶಿಕ್ಷಣ, ಸಾಹಿತ್ಯ, ಕಲೆ, ಸಂಗೀತ ಬೆಳವಣಿಗೆಗೆ ರಾಜೇಂದ್ರ ಶ್ರೀಗಳ ಕೊಡುಗೆ ಅಪಾರ ಎಂದು ಜೆಎಸ್‌ಎಸ್ ಮಹಾವಿದ್ಯಾಪೀಠ ಪ್ರಕಟಣಾ ವಿಭಾಗದ ಶ್ರೀ ನಗರ್ಲೆ ಶಿವಕುಮಾರ್ ಹೇಳಿದರು.

ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ ಹಾಗೂ ಬೋಗಾದಿ ಬಸವ ಬಳಗ ಸೇವಾ ಟ್ರಸ್ಟ್‌ನಿಂದ ಮೈಸೂರು ಸಾತಗಳ್ಳಿ 2ನೆಯ ಹಂತದಲ್ಲಿ ಏರ್ಪಡಿಸಿದ್ದ 316ನೆಯ ಶಿವಾನುಭವ ದಾಸೋಹ ಕಾರ್ಯಕ್ರಮದಲ್ಲಿ ‘ಜಗದ ಜಂಗಮ ಪರಮಪೂಜ್ಯ ರಾಜೇಂದ್ರ ಶ್ರೀಗಳು’ ವಿಷಯ ಕುರಿತು ಮಾತನಾಡುತ್ತಾ ತಿಳಿಸಿದರು.

ರಾಜೇಂದ್ರ ಶ್ರೀಗಳು ಸ್ವಾತಂತ್ರ್ಯ ಪೂರ್ವದಲ್ಲೇ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಿದರು. ನಂತರ ಗ್ರಾಮಾಂತರ ಪ್ರದೇಶಗಳಲ್ಲಿ ಶಾಲಾ ಕಾಲೇಜುಗಳನ್ನು ತೆರೆದು ಅಕ್ಷರ ಕ್ರಾಂತಿಯನ್ನು ಉಂಟುಮಾಡಿದರು. ಸಾಕ್ಷರತೆಯ ಪ್ರಮಾಣ ಹೆಚ್ಚಿಸಲು ಹಲವಾರು ಯೋಜನೆಗಳನ್ನು ರೂಪಿಸಿದರು. ಗ್ರಾಮಾಂತರ ಜನರ ಆರೋಗ್ಯಕ್ಕಾಗಿ ಆಸ್ಪತ್ರೆಯನ್ನು ತೆರೆದರು. ಧಾರ್ಮಿಕ ಗುರುಗಳಾಗಿ ಸಮಾಜಕ್ಕೆ ಹಲವಾರು ರೀತಿಯಲ್ಲಿ ಕೊಡುಗೆಗಳನ್ನು ನೀಡಿದರು ಎಂದು ಸ್ಮರಿಸಿದರು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಬೋಗಾದಿ ಬಸವ ಬಳಗ ಸೇವಾ ಟ್ರಸ್ಟ್‌ನ ಅಧ್ಯಕ್ಷ ಬಸವರಾಜು ಮಾತನಾಡಿದರು. ಶ್ರೀಮತಿ ಡಿ.ಎಂ.ಮಂಜುಳ ಮತ್ತು ಎಲ್.ಬಿ.ಚನ್ನಬಸಪ್ಪ ವಚನಗಾಯನ ನಡೆಸಿಕೊಟ್ಟರು. ಎನ್.ಶ್ರೀಕಂಠಮೂರ್ತಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಆಧ್ಯಾತ್ಮಿಕ ಜಿಜ್ಞಾಸುಗಳು, ಸಾರ್ವಜನಿಕರು, ಸಾತಗಳ್ಳಿ 2ನೆಯ ಹಂತದ ನಿವಾಸಿಗಳು ಭಾಗವಹಿಸಿದ್ದರು.

ಡಿ.ಎ.ವಿ ಶಾಲೆಯ ವಿದ್ಯಾರ್ಥಿಗಳ ಸಾಧನೆ



ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಆಯೋಜಿಸಲಾಗಿದ್ದ 2024–25ನೇ ಸಾಲಿನ ಕರ್ನಾಟಕ ರಾಜ್ಯ ಮಟ್ಟದ ಹತ್ತನೇ ಅಂತರ ಶಾಲಾ ಸಾಮೂಹಿಕ ಭಜನೆ ಗಾಯನ ಸ್ಪರ್ಧೆಯಲ್ಲಿ ಡಿ.ಎ.ವಿ ಶಾಲೆಯ ಮಕ್ಕಳು ದ್ವಿತೀಯ ಬಹುಮಾನವನ್ನು ಪಡೆದಿದ್ದಾರೆ. ಶಾಲೆಯ ಆಡಳಿತ ಮಂಡಳಿ ಸಿ.ಇ.ಓ ಜಯಶ್ರೀ ಎಸ್.ಮೂರ್ತಿ, ಶಾಲೆಯ ಪ್ರಾಂಶುಪಾಲರಾದ ಕೆ.ಆರ್.ಶೋಭಾ, ಉಪಪ್ರಾಂಶುಪಾಲರಾದ ಕಾವ್ಯಶ್ರೀ, ಮುಖ್ಯಶಿಕ್ಷಕಿ ಬಿಂದುಶ್ರೀ, ಶಿಕ್ಷಕಿ ರೂಪ ಸಾಧನೆಗೈದಿರುವ ಮಕ್ಕಳೊಂದಿಗಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

3.09.2024 ಮಂಗಳವಾರ, ಮಳೆ ನಕ್ಷತ್ರ: ಪುಬ್ಬ, 31.08.2024 ರಿಂದ 12.09.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಶುಕ್ಲ ಪಕ್ಷ,
ತಿಥಿ: ಪಾಡ್ಯ, ನಕ್ಷತ್ರ: ಪುಬ್ಬ, ರಾಹುಕಾಲ : ಮಧ್ಯಾಹ್ನ 3 ರಿಂದ 4.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ‘ಬಂಜೆತನ, ಮುಟ್ಟಿನ ಸಮಸ್ಯೆ’ ಹಾಗೂ ಆರೋಗ್ಯಾಯುಷ್ಯ ಆರೋಗ್ಯವರ್ಧಕ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಅವಧೂತ ದತ್ತ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ದತ್ತಪೀಠ ಉತ್ತರಾಧಿಕಾರಿ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತ ದೀಕ್ಷಾ ಮಹೋತ್ಸವ, ಇಷ್ಟಿಯಾಗ (ವಿಶೇಷ ಫಲವನ್ನು ನೀಡುವ ಸಾರಸ್ವತೇಷ್ಟಿ ಎಂಬ ಮಹಾಯಾಗವು ನಡೆಯಲಿದೆ) ಸ್ಥಳ: ಆಶ್ರಮದ ಆವರಣ, ಬೆಳಗ್ಗೆಯಿಂದ.

■ **ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ನೌಕರರ ಕ್ಷೇಮಾಭಿವೃದ್ಧಿ ಸಂಘ :** ನೂತನ ಸಂಘದ ಉದ್ಘಾಟನಾ ಸಮಾರಂಭ ಮತ್ತು ಮೈಸೂರು ಜಿಲ್ಲಾ ಹಾಲು ಒಕ್ಕೂಟದ ನೂತನ ಅಧ್ಯಕ್ಷರಿಗೆ ಸನ್ಮಾನ ಸಮಾರಂಭ, ಉದ್ಘಾಟನೆ : ಮೈಮುಲ್ ಅಧ್ಯಕ್ಷ ಆರ್. ಚೆಲುವರಾಜ್, ಡಾ. ವರ್ಗೀಸ್ ಕುರಿಯನ್ ಭಾವಚಿತ್ರ ಅನಾವರಣ : ಮೈಮುಲ್ ಮಾಜಿ ಅಧ್ಯಕ್ಷ ಪಿ.ಎಂ. ಪ್ರಸನ್ನ, ಜಿಲ್ಲಾ ಮಟ್ಟದ ನೌಕರರ ಕ್ಷೇಮಾಭಿವೃದ್ಧಿ ಸಂಘದ ಉದ್ಘಾಟನೆ : ಮೈಮುಲ್ ಮಾಜಿ ಅಧ್ಯಕ್ಷ ಎ.ಟಿ. ಸೋಮಶೇಖರ್, ಅಧ್ಯಕ್ಷತೆ : ಸಂಘದ ಅಧ್ಯಕ್ಷೆ ಶ್ರೀಮತಿ ಆರ್. ಮಂಗಳ, ಮುಖ್ಯ ಅತಿಥಿಗಳು : ಕೆ.ಜಿ. ಮಹೇಶ್, ಕೆ. ಉಮಾಶಂಕರ್, ಓಂಪ್ರಕಾಶ್, ಕೆ. ಈರೇಗೌಡ, ಕೆ.ಎಸ್. ಕುಮಾರ್, ಶ್ರೀಮತಿ ದ್ರಾಕ್ಷಾಯಣಿ ಬಸವರಾಜಪ್ಪ, ಶ್ರೀಮತಿ ಲೀಲಾ ಬಿ.ಕೆ. ನಾಗರಾಜ್, ಸ್ಥಳ: ಚಾಮುಂಡೇಶ್ವರಿ ಕನ್ವೆನ್ಷನ್ ಹಾಲ್, ದೇವೇಗೌಡ ಸರ್ಕಲ್, ಆಲನಹಳ್ಳಿ, ಬೆಳಗ್ಗೆ 11.30ಕ್ಕೆ

■ **ಸುಯೋಗ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಉತ್ತಿಷ್ಠ ಭಾರತ ಪ್ರತಿಷ್ಠಾನ :** ರಾಷ್ಟ್ರೀಯ ಪೌಷ್ಟಿಕಾಂಶ ಸಪ್ತಾಹದ ಅಂಗವಾಗಿ ನಮ್ಮ ಆರೋಗ್ಯದಲ್ಲಿ ಪೌಷ್ಟಿಕಾಂಶದ ಮಹತ್ವ ಕುರಿತು ವಿಚಾರ ಸಂಕಿರಣ, ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣಾ ಕಾರ್ಯಕ್ರಮ, ಉದ್ಘಾಟನೆ : ಡಾ. ಎಸ್. ಪೂರ್ಣಿಮಾ, ಪ್ರಾಸ್ತಾವಿಕ ನುಡಿ : ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ. ಎಸ್.ಪಿ. ಯೋಗಣ್ಣ, ಅಧ್ಯಕ್ಷತೆ: ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮುಖ್ಯ ಅತಿಥಿಗಳು : ಡಾ.ಕೆ. ರಘುರಾಂ ವಾಜಪೇಯಿ, ಡಾ.ಕೆ. ಲೀಲಾಪ್ರಕಾಶ್, ಡಾ.ಕೆ. ಕೃಷ್ಣಮೂರ್ತಿ, ಎಂ. ರಮೇಶ್‌ಬಾಬು, ಸ್ಥಳ: ಸುಯೋಗ್ ಆಸ್ಪತ್ರೆ, ರಾಮಕೃಷ್ಣನಗರ, ಸಂಜೆ 4ಕ್ಕೆ

■ **ಕರ್ನಾಟಕ ಜಾನಪದ ಅಕಾಡೆಮಿ, ಏಕತಾರಿ ಸಾಂಸ್ಕೃತಿಕ ಸಂಘಟನೆ :** ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಜನಪದ ನೃತ್ಯಗಳು ಮತ್ತು ಜನಪದ ಗೀತೆಗಳ ಕಲಿಕಾ ತರಬೇತಿ ಶಿಬಿರದ ಸಮಾರೋಪ ಸಮಾರಂಭ, ಉದ್ಘಾಟನೆ : ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷ ಗೊಲ್ಲಳ್ಳಿ ಶಿವಪ್ರಸಾದ್, ಉಪಸ್ಥಿತರು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಡಾ.ಉಮೇಶ್, ಡಾ.ಗುರುರಾಜ್, ಮಂಜೇಶ್ ಚನ್ನಾಪುರ, ಮಲ್ಲಿಕಾರ್ಜುನ ಕೆಂಕೆರೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಶ್ರೀಮತಿ ವಿಮಲಾ ವೀರೇಶ್, ಸ್ಥಳ: ಕಿರುರಂಗಮಂದಿರ, ಕಲಾಮಂದಿರ ಆವರಣ, ಸಂಜೆ 5.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ‘ಶ್ರದ್ಧೆಯ ಶಿಲ್ಪ’ ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಅಮೃತಾ ನಿತಿನ್ ಶಾಸ್ತ್ರಿ, ಎಂ.ಎಸ್. ಲಕ್ಷ್ಮೀಶ, ವ್ಯಾಖ್ಯಾನ–ಮೊರಬದ ಮಲ್ಲಿಕಾರ್ಜುನ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಅ.ನ.ಕೃ. ಅವರ ‘ಉದಯರಾಗ’ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ : ಉಮೇಶ್ ಎಸ್. ಎಸ್., 8.30 ಬಾನುಲಿ ಇಂಗ್ಲೀಷ್ ಪಾಠ– ರೇಡಿಯೋ ಸರಣಿ, ಪ್ರಸ್ತುತಿ : ಸದಾನಂದ. ಆರ್, 8.40 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 9.05 ಸಾರ್ಕೋಮ ಜಾಗೃತಿ ಕುರಿತು ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಇಂಡಿಯನ್ ಕ್ಯಾನ್ಸರ್ ಕೇರ್ ಸೊಸೈಟಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಅಕ್ಕರೈ ಸುಬ್ಬಲಕ್ಷ್ಮೀ ಮತ್ತು ಅಕ್ಕರೈ ಸ್ವರ್ಣಲತಾ–ಯುಗಳ ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ –ಕಥೆಯಲ್ಲಿದೆ ಉತ್ತರ, ಪ್ರಸ್ತುತಿ : ಪ್ರಭುಸ್ವಾಮಿ ಮಳಿಮಠ್ ಹಾಗೂ ಚೈತ್ರಿಕಾ

ಮಧ್ಯಾಹ್ನ: 12.05 ವನಿತಾ ವಿಹಾರ ‘ಹೀಗಿದೆ ನೋಡಿ ನಮ್ ಜೋಡಿ’ ಗಾಯಕಿ ಹಾಗೂ ಅಧ್ಯಾಪಕಿ ಸುರಭಿ ಮತ್ತು ವನ್ಯಜೀವಿ ಸಂರಕ್ಷಕ ಹಾಗೂ ಪ್ರಾಣಿಗಳ ಪುನರ್ವಸತಿ ಕಾರ್ಯಕರ್ತ ಸಂತೋಷ್ ಕುಮಾರ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಅಬ್ದುಲ್ ರಶೀದ್, 12.30 ದೇವರನಾಮ –ನಿತ್ಯಶ್ರೀ. ಆರ್, 12.45 ಕನ್ನಡದಲ್ಲಿ ಭಾಷಣ : ಜಾತ್ರಾ ವಿಶೇಷ–ಬಾನುಲಿ ಮಾಲಿಕೆಯಲ್ಲಿ ಮುಡುಕುತೊರೆ ಜಾತ್ರೆ ಕುರಿತು ಮಾತನಾಡುತ್ತಾರೆ ಡಾ. ಕೃಷ್ಣಮೂರ್ತಿ ಹನೂರು ಹಾಗೂ ಡಾ. ಮೈಸೂರು ಗುರುರಾಜ್. ಢಕ್ಕೆಯ ಜೊತೆಗಾರ ಜಿ.ಪೃಥ್ವಿರಾಜ್, 1.00 ಬಾನುಲಿ ಇಂಗ್ಲೀಷ್ ಪಾಠ–ರೇಡಿಯೋ ಸರಣಿ, ಪ್ರಸ್ತುತಿ : ಸದಾನಂದ. ಆರ್, 1.20 ಭಾವಗೀತೆಗಳು–ಸಂಗೀತಾ ಕಟ್ಟಿ, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಎಂ. ಚಂದ್ರಶೇಖರನ್–ವೈಯೋಲಿನ್, 4.00 ಕಥಾ ಕಾಲಕ್ಷೇಪ–ಭಕ್ತ ಸುಧಾಮ, ಪ್ರಸ್ತುತಿ–ವಿದ್ವಾನ್. ಆರ್. ಗುರುರಾಜುಲು ನಾಯ್ಡು, 6.50 ಕೃಷಿರಂಗ: ಕಿಸಾನ್ ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ರೇಷ್ಮೆ ಐಸಿರಿ – ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಮಿಶ್ರ ತಳಿಗಳ ಪಾಲನೆ ಈ ಕುರಿತು ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿ ಡಾ. ಶಿವಕುಮಾರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ‘ಮೈಸೂರು ಜಂಕ್ಷನ್’ ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ : ಜಾಂಪಣ್ಣ ಆಶೀಹಾಳ್, 8.00 ಕ್ರೀಡಾಲೋಕ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಮಧುರೈ ಟಿ. ಎನ್. ಎಸ್ ಕೃಷ್ಣ – ಹಾಡುಗಾರಿಕೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ವಾಚನ : ಹೆಚ್. ಎಲ್. ಶ್ರೀ ಕಂಠ, ವ್ಯಾಖ್ಯಾನ : ಹೆಚ್. ಎಸ್. ಗೋಪಾಲ್, ಪ್ರಸ್ತುತಿ: ಡಾ. ಎ.ಎಸ್. ಶಂಕರನಾರಾಯಣ

ಅ.2 ರಂದು 1,000 ಶಾಲೆಗಳಲ್ಲಿ 'ಸ್ವಚ್ಛ ಬೆಂಗಳೂರು' ಪ್ರತಿಜ್ಞಾ ವಿಧಿ



ಬೆಂಗಳೂರು: ಮಹಾತ್ಮ ಗಾಂಧಿ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡು 100 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಅ.2ರಂದು ನಗರದಾದ್ಯಂತ ಸ್ವಚ್ಛತಾ ಅಭಿಯಾನ ಆಯೋಜಿಸಲಾಗುತ್ತಿದ್ದು, ಒಂದು ಸಾವಿರ ಶಾಲಾ ಮಕ್ಕಳು ಆನ್‌ಲೈನ್ ಮೂಲಕ ಪ್ರತಿಜ್ಞಾವಿಧಿ ತೆಗೆದುಕೊಳ್ಳಲಿದ್ದಾರೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೋಮವಾರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು, ಸ್ವಚ್ಛತೆಯ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಲು ಸರ್ಕಾರ ಈ ಕ್ರಮ ಕೈಗೊಂಡಿದೆ. ಅಕ್ಟೋಬರ್ 2 ರಂದು 1 ಸಾವಿರ ಶಾಲಾ–ಕಾಲೇಜುಗಳಲ್ಲಿ ಸ್ವಚ್ಛತೆಯ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಲು ಸ್ವಚ್ಛ ಬೆಂಗಳೂರು ಪ್ರತಿಜ್ಞಾ ವಿಧಿ ಬೋಧಿಸಲಾಗುವುದು ಎಂದರು. ನಗರದ ಗುಂಡಿಗಳ ಪರಿಸ್ಥಿತಿ ಕುರಿತು ಮಾತನಾಡಿದ ಡಿಕೆ ಶಿವಕುಮಾರ್, ಗುರುತಿಸಲಾದ 2,795 ಗುಂಡಿಗಳನ್ನು ಮುಚ್ಚುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಮುಖ್ಯವಾಗಿ ಪ್ರಮುಖ ರಸ್ತೆಗಳಲ್ಲಿ ಕಡಿಮೆ ಗಮನ ಹರಿಸಲಾಗಿದೆ. ಹಿಂದಿನ ವರ್ಷಗಳಿಗೆ ಹೋಲಿಸಿದರೆ ಈ ವರ್ಷ ಬೆಂಗಳೂರಿನಲ್ಲಿ ಮಳೆಯಿಂದಾಗಿ ನಾವು ಕಡಿಮೆ ತೊಂದರೆ ಎದುರಿಸಿದ್ದೇವೆ ಎಂದು ತಿಳಿಸಿದರು. ಇನ್ನು ಎತ್ತಿನ ಹೊಳೆ ಯೋಜನೆ ಕುರಿತು ಮಾತನಾಡಿದ ಡಿ.ಕೆ.ಶಿವಕುಮಾರ್, ಸೆ. 6ರಂದು ಸಿಎಂ ಸಿದ್ದರಾಮಯ್ಯ ಅವರಿಂದ ಉದ್ಘಾಟನೆಯಾಗಲಿದ್ದು, ಪಕ್ಷದ ಎಲ್ಲ ಮುಖಂಡರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಅವರು ಹೇಳಿದರು.

ಗೃಹಲಕ್ಷ್ಮಿಯರಿಗೆ ಮತ್ತೊಂದು ಆಫರ್; ರೀಲ್ಸ್ ಮಾಡಿ, ಬಹುಮಾನ ಗೆಲ್ಲಿ

ಬೆಂಗಳೂರು: ಯುವಜನತೆಯಲ್ಲಿ ರೀಲ್ಸ್ ಕ್ರೇಜ್ ಹೆಚ್ಚಾಗಿದೆ.



ಲಕ್ಷ್ಮೀ ಹೆಬ್ಬಾಳ್ಕರ್

ಇದರ ಮಧ್ಯೆಯೇ ರಾಜ್ಯದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಗೃಹಲಕ್ಷ್ಮಿ ಯೋಜನೆಯ ಫಲಾನುಭವಿ ಮಹಿಳೆಯರು ರೀಲ್ಸ್ ಮಾಡಿ ಬಹುಮಾನ ಗೆಲ್ಲಲು ಅವಕಾಶ ಕಲ್ಪಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ಜಾರಿಯಾಗಿ ಒಂದು ವರ್ಷವಾಗಿದೆ. ಈ ಸಂದರ್ಭದಲ್ಲಿ ಕುಟುಂಬದ ಎಲ್ಲ ಮಹಿಳೆಯರಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಶುಭಾಶಯ ಮತ್ತು ಅಭಿನಂದನೆ ಸಲ್ಲಿಸಿದ್ದಾರೆ. ಜೊತೆಗೆ ಯಜಮಾನಿಯರಿಗೆ ಒಂದು ಬಹುಮಾನವನ್ನೂ ಘೋಷಿಸಿದ್ದಾರೆ.

ರಾಜ್ಯದ ಕೋಟ್ಯಂತರ ಮನೆಯೊಡತಿಯರ ಕುಟುಂಬ ನಿರ್ವಹಣೆಯ ಜವಾಬ್ದಾರಿಯೊಂದಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಅನುಷ್ಠಾನಗೊಳಿಸಿರುವ 'ಗೃಹಲಕ್ಷ್ಮಿ' ಯೋಜನೆ ಯಶಸ್ವಿಯಾಗಿ ವರ್ಷ ಪೂರೈಸಿರುವ ಸಂಭ್ರಮದಲ್ಲಿದೆ. ಮನೆಯೊಡತಿಯರಿಗೆ, ಕುಟುಂಬಗಳಿಗೆ ಗೃಹಲಕ್ಷ್ಮಿ ಯೋಜನೆಯಿಂದ ಏನೆಲ್ಲ ಬದಲಾವಣೆಗಳಾಗಿವೆ ಎಂಬುದನ್ನು ತಿಳಿದುಕೊಳ್ಳಲು ಕಾತುರಳಾಗಿದ್ದೇನೆ. ನಿಮ್ಮ ಜೀವನದಲ್ಲಿ ಗೃಹಲಕ್ಷ್ಮಿ ಯೋಜನೆಯಿಂದಾದ ಬದಲಾವಣೆಯ ಕುರಿತು ಸೆಪ್ಟೆಂಬರ್ 30ರೊಳಗೆ ರೀಲ್ಸ್ ಮೂಲಕ ಸೋಷಿಯಲ್ ಮಿಡಿಯಾಗಳಲ್ಲಿ ಪೋಸ್ಟ್ ಮಾಡಿ ನಮ್ಮೊಂದಿಗೆ ಹಂಚಿಕೊಳ್ಳಿ, ಯಾವ ರೀಲ್ಸ್‌ಗಳು ಹೆಚ್ಚಿನ ವೀಕ್ಷಣೆ ಪಡೆದುಕೊಳ್ಳುತ್ತವೆಯೋ ಅಂತಾ ರೀಲ್ಸ್‌ಗಳಿಗೆ ವೈಯಕ್ತಿಕವಾಗಿ ಬಹುಮಾನ ವಿತರಿಸಲಿದ್ದೇನೆ ಎಂದು ತಿಳಿಸಿದ್ದಾರೆ.

ಮೊದಲ 50 ಮನೆಯೊಡತಿಯರಿಗೆ ರೀಲ್ಸ್ ಹಾದಿಯನ್ನು ಎದುರು ನೋಡುತ್ತಿದ್ದೇನೆ. ಈ ಒಂದು ಗೃಹಲಕ್ಷ್ಮಿ ಯೋಜನೆಯಿಂದ ಜೀವನದಲ್ಲಿ ಆದ ಬದಲಾವಣೆಯನ್ನು ನಮ್ಮೆಲ್ಲ ಕರ್ನಾಟಕದ ಜನರ ಮುಂದೆ ಹಂಚಿಕೊಳ್ಳಬೇಕೆಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಗೃಹಲಕ್ಷ್ಮಿ ಯೋಜನೆಯ ಎಲ್ಲ ಯಜಮಾನಿಯರಲ್ಲಿ ಮನವಿ ಮಾಡಿದ್ದಾರೆ.

ಮುಖ್ಯಮಂತ್ರಿ ಸಾಮಾಜಿಕ ಮಾಧ್ಯಮ ನಿರ್ವಹಣೆಗೆ 35 ಜನರ ತಂಡ!

ತಿಂಗಳಿಗೆ 54 ಲಕ್ಷ ಖರ್ಚು–ವೆಚ್ಚ

ಬೆಂಗಳೂರು: ಹಿಂದೊಮ್ಮೆ ಸಿದ್ದರಾಮಯ್ಯ ಸಿಎಂ ಆಗಿದ್ದ ಅವಧಿಯಲ್ಲಿ ಟೀ ಮತ್ತು ಬಿಸ್ಕೇಟ್‌ಗಾಗಿ ಸಿಎಂ ಕಚೇರಿ 200 ಕೋಟಿ ರೂ ವ್ಯಯಿಸಿದ್ದು ಸುದ್ದಿಯಾಗಿತ್ತು.

ಈಗ ಸಿದ್ದರಾಮಯ್ಯ ಅವರ 2 ನೇ ಅವಧಿಯಲ್ಲಿ ಅವರ ಸರ್ಕಾರದ ಸಾಮಾಜಿಕ ಮಾಧ್ಯಮ ನಿರ್ವಹಣೆಯ ಖರ್ಚು ಹೆಚ್ಚು ಸದ್ದು ಮಾಡುತ್ತಿದೆ. ಸಿದ್ದರಾಮಯ್ಯ ಅವರ ಕಚೇರಿ ಅಧಿಕೃತ ಮತ್ತು ವೈಯಕ್ತಿಕ ಸಾಮಾಜಿಕ ಮಾಧ್ಯಮ ಖಾತೆಗಳನ್ನು ನಿರ್ವಹಿಸಲು ತಿಂಗಳಿಗೆ ಸುಮಾರು 54 ಲಕ್ಷ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ! ಆರ್‌ಟಿಐ ಮಾಹಿತಿಯ ಮೂಲಕ ಇದು ಬಹಿರಂಗವಾಗಿದೆ

ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಹೆಣಗುತ್ತಿರುವ ಸರ್ಕಾರ, ಅಭಿವೃದ್ಧಿ ಕಾಮಗಾರಿಗಳಿಗೆ ಹಣ ಹೊಂದಿಸಲು ಸಾಧ್ಯವಾಗದೇ ಪರದಾಡುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಸಿಎಂ ಕಚೇರಿ ಕೇವಲ ಪ್ರಚಾರಕ್ಕಾಗಿ ಇಷ್ಟು ಮೊತ್ತದ ಹಣವನ್ನು ತಿಂಗಳಿಗೆ ಖರ್ಚು ಮಾಡುತ್ತಿರುವುದು ಆಕ್ಷೇಪಕ್ಕೆ ಗುರಿಯಾಗಿದೆ. ಕಾಂಗ್ರೆಸ್ ಸರ್ಕಾರ ಗುತ್ತಿಗೆದಾರರ ಬಿಲ್ ಇತ್ಯರ್ಥ ಮಾಡಲು ಹೆಣಗಾಡುತ್ತಿದೆ. ಇಂಥ ಸಮಯದಲ್ಲಿ ಸಾಮಾಜಿಕ ಮಾಧ್ಯಮ ಖಾತೆಗಳ ನಿರ್ವಹಣೆಗೆ ಭಾರಿ ವೆಚ್ಚ ಮಾಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬಂದ ಹಿನ್ನೆಲೆಯಲ್ಲಿ ಆರ್‌ಟಿಐ ಅಡಿ ಮಾಹಿತಿ ಕೋರಿ ಅರ್ಜಿ ಸಲ್ಲಿಸಿದ್ದೆ ಎಂದು ಆರ್‌ಟಿಐ ಕಾರ್ಯಕರ್ತ ಮಾರಲಿಂಗ ಗೌಡ ಮಾಲಿ ಪಾಟೀಲ್ ಮಾಧ್ಯಮಕ್ಕೆ ತಿಳಿಸಿದ್ದಾರೆ. ಆದರೆ, ಈ ಹಿಂದಿನ ಮುಖ್ಯಮಂತ್ರಿಗಳ ಖರ್ಚಿಗೆ ಹೋಲಿಸಿದರೆ ಇದು ಕಡಿಮೆ ಎಂದು ಮುಖ್ಯಮಂತ್ರಿ ಕಚೇರಿ ಅಧಿಕಾರಿಗಳು ಸಮರ್ಥಿಸಿಕೊಂಡಿದ್ದಾರೆ.

ಹಿಂದಿನ ಮುಖ್ಯಮಂತ್ರಿಗಳು ಸಾಮಾಜಿಕ ಜಾಲತಾಣಗಳ ನಿರ್ವಹಣೆಗೆ ತಿಂಗಳಿಗೆ 2 ಕೋಟಿ ರೂ. ಖರ್ಚು ಮಾಡುತ್ತಿದ್ದರು ಎಂದು ಸಿಎಂಒ ಅಧಿಕಾರಿಗಳು ಹೇಳಿದ್ದಾರೆ. ಆರ್‌ಟಿಐ ಮಾಹಿತಿಯ ಪ್ರಕಾರ ಸಿಎಂಒ ಕಳೆದ ವರ್ಷ ಅಕ್ಟೋಬರ್ 25ರಿಂದ 2024ರ ಮಾರ್ಚ್‌ರವರೆಗೆ ಸುಮಾರು 3 ಕೋಟಿ ರೂ.ಗಳನ್ನು ಖರ್ಚು ಮಾಡಿದೆ.

ಮಹಾರಾಷ್ಟ್ರದ ಮರಾಠವಾಡದಲ್ಲಿ ಭಾರಿ ಮಳೆ, ನಾಲ್ವರ ಸಾವು

ಮರಾಠವಾಡ: ಮಹಾರಾಷ್ಟ್ರದ ಮರಾಠವಾಡ ಪ್ರದೇಶದಲ್ಲಿ ಕಳೆದ 24 ಗಂಟೆಗಳಲ್ಲಿ ಭಾರಿ ಮಳೆಯಾಗಿದೆ. ಪರ್ಭಾನಿ ಜಿಲ್ಲೆಯ ಪತ್ರಿ ಗ್ರಾಮದಲ್ಲಿ ಅತಿ ಹೆಚ್ಚು 314 ಮಿಮೀ ಮಳೆಯಾಗಿದ್ದು, ನಾಲ್ವರು ಸಾವನ್ನಪ್ಪಿದ್ದಾರೆ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಪ್ರಾಥಮಿಕ ಅಂದಾಜಿನ ಪ್ರಕಾರ, ಕನಿಷ್ಠ 63 ಗ್ರಾಮಗಳ ಜನರು ಮಳೆ ಬಾಧಿತವಾಗಿದ್ದು, 45 ಹೆಕ್ಟೇರ್ ಪ್ರದೇಶದಲ್ಲಿನ ಕೆಲವು ಮನೆಗಳು ಮತ್ತು ಬೆಳೆಗಳಿಗೆ ಹಾನಿಯಾಗಿದೆ.ನಾಂದೇಡ್‌ನ ವಿಷ್ಣುಪುರಿ ಅಣೆಕಟ್ಟಿನ ಗೇಟ್‌ಗಳನ್ನು ಸೋಮವಾರ ಬೆಳಗ್ಗೆ ತೆರೆಯಲಾಗಿದೆ. ಜಯಕ್ವಾಡಿ ಅಣೆಕಟ್ಟಿನ ನೀರಿನ ಮಟ್ಟ ಏರಿಕೆಯಾಗಿರುವುದರಿಂದ ಗೋದಾವರಿ ನದಿಯ ಕೆಳಭಾಗದ ಗ್ರಾಮಗಳ ಜನರಿಗೆ ಎಚ್ಚರಿಕೆ ನೀಡಲಾಗಿದೆ.

ವಿಶ್ವದಲ್ಲಿ 14 ಕೋಟಿ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿವೆ

ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗದ ಪ್ರೊ.ಎಸ್.ಕೌಸಲ್ಯ ಕಳವಳ

ಮೈಸೂರು, ಸೆ.2(ಎಂಕೆ)– ಮಕ್ಕಳು ಹಾಗೂ ಮಹಿಳೆಯರ ಮರಣ ಪ್ರಮಾಣ ಹೆಚ್ಚಲು ಅಪೌಷ್ಟಿಕತೆಯೇ ಕಾರಣ. ವಿಶ್ವದಲ್ಲಿ 5 ವರ್ಷದೊಳಗಿನ 14 ಕೋಟಿ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ ಎಂದು ಕೊಯಮತ್ತೂರಿನ ಅವಿನಾಶಿಲಿಂಗಮ್ ಇನ್ಸ್ಟಿಟ್ಯೂಟ್ ಫಾರ್ ಹೋಮ್ ಸೈನ್ಸ್ ಅಂಡ್ ಹೈಯರ್ ಎಜುಕೇಶನ್ ಫಾರ್ ವುಮೆನ್‌ನ ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗದ ಪ್ರೊ.ಎಸ್.ಕೌಸಲ್ಯ ಆತಂಕ ವ್ಯಕ್ತಪಡಿಸಿದರು.

ಮೈಸೂರಿನ ಕೇಂದ್ರೀಯ ಆಹಾರ ತಂತ್ರಜ್ಞಾನ ಮತ್ತು ಸಂಶೋಧನಾ ಸಂಸ್ಥೆ(ಸಿಎಫ್‌ಟಿಆರ್‌ಐ)ಯಲ್ಲಿ ಆಯೋಜಿಸಿರುವ ರಾಷ್ಟ್ರೀಯ ಪೌಷ್ಟಿಕ ಆಹಾರ ಸಪ್ತಾಹ ಹಾಗೂ ಗ್ಲೋಬಲ್ ಬಯೊ ಇಂಡಿಯಾ ರೋಡ್‌ಶೋ–2024 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, 4.7 ಕೋಟಿ ಮಕ್ಕಳು ಆಹಾರ ಸಿಗದೇ ಅಗತ್ಯ ತೂಕಕ್ಕಿಂತ ಸಣ್ಣಗಿದ್ದರೆ, 3.8 ಕೋಟಿ ಮಕ್ಕಳು ಅತಿತೂಕ ಸಮಸ್ಯೆಯಿಂದ ತೊಂದರೆಗೀಡಾಗಿದ್ದಾರೆ. ಆದ್ದರಿಂದ ಪೌಷ್ಟಿಕ ಆಹಾರ ನೀಡುವ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನ ಆಗಬೇಕಿದೆ. ಪೌಷ್ಟಿಕ ಆಹಾರದ ಬಗ್ಗೆ ಅರಿವು ಮೂಡಿಸುವುದು ತುರ್ತಾಗಿದೆ ಎಂದು ಪ್ರತಿಪಾದಿಸಿದರು. ವಿಶ್ವಸಂಸ್ಥೆಯ 17 ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಬಡತನ ಹಾಗೂ ಹಸಿವು ಮುಕ್ತ ಸಮಾಜ ನಿರ್ಮಾಣವೇ ಮೊದಲ ಎರಡು ಸ್ಥಾನ ಪಡೆದಿವೆ. ಸುಸ್ಥಿರ ಕೃಷಿಯು ಆಹಾರ ಭದ್ರತೆಯನ್ನು ಪ್ರತಿ ದೇಶಕ್ಕೂ ನೀಡುವುದಾಗಿದೆ. ಅಗತ್ಯವಿರುವಷ್ಟು ಆಹಾರ ಉತ್ಪಾದನೆಯಾದರೂ ಆಹಾರ ನಷ್ಟದ ಪ್ರಮಾಣ ಹೆಚ್ಚಾಗುತ್ತಿದೆ. ಹೀಗಾಗಿ ಪೌಷ್ಟಿಕ ಆಹಾರ ಹಾಗೂ ಆಹಾರ ಸುರಕ್ಷತೆ ಬಗ್ಗೆ ಕಾಳಜಿ ಮೂಡಿಸಲು ಶ್ರಮಿಸಬೇಕಿದೆ ಎಂದರು.

ಬದಲಾದ ಜೀವನ ಶೈಲಿಯಿಂದಾಗಿ ಆಹಾರವನ್ನು ಮನೆಯಿಂದ ಹೊರಗಡೆಯೇ ಹೆಚ್ಚು ಸೇವಿಸಲಾಗುತ್ತಿದೆ. ಇದರಿಂದ ಆರೋಗ್ಯದ ಮೇಲೆ ಪರಿಣಾಮ ಬೀರಲಿದೆ. ಅಲ್ಲದೆ ನಿತ್ಯ ವ್ಯಾಯಾಮ ಮಾಡದಿರುವುದು ಅನಾರೋಗ್ಯಕ್ಕೆ ಮುಖ್ಯ ಕಾರಣವಾಗಿದೆ. ಇದೆಲ್ಲದರ ಪರಿಣಾಮದಿಂದಾಗಿ ಕ್ಯಾನ್ಸರ್, ಮಧುಮೇಹ, ಹೃದಯ ಸಂಬಂಧಿ ಕಾಯಿಲೆಗಳಿಗೆ ತುತ್ತಾಗುವ ಸಾಧ್ಯತೆ ಹೆಚ್ಚು, ಜೊತೆಗೆ ಕಾರ್ಯದೊತ್ತಡದಿಂದ ಮಾನಸಿಕ ಖಿನ್ನತೆಗೆ ಒಳಗಾಗುತ್ತಿದ್ದಾರೆ. ಅದರಲ್ಲೂ ಯುವ ಸಮುದಾಯವು ಫಿಟ್‌ನೆಸ್‌ಗಾಗಿ ಜಾಹೀರಾತುಗಳಲ್ಲಿ ಬರುವ ಔಷಧ, ಆಹಾರ ಪದಾರ್ಥ ಸೇವಿಸಿ, ಅಡ್ಡ ಪರಿಣಾಮಗಳನ್ನು ಎದುರಿಸುವಂತಾಗಿದೆ ಎಂದು ಎಚ್ಚರಿಸಿದರು.



ಸಿಎಫ್‌ಟಿಆರ್‌ಐನಲ್ಲಿ ರಾಷ್ಟ್ರೀಯ ಪೌಷ್ಟಿಕ ಆಹಾರ ಸಪ್ತಾಹ ಹಾಗೂ ಗ್ಲೋಬಲ್ ಬಯೊ ಇಂಡಿಯಾ ರೋಡ್‌ಶೋ–2024 ಕಾರ್ಯಕ್ರಮದ ಅಂಗವಾಗಿ ನಡೆದ ವಿವಿಧ ಸ್ಪರ್ಧಾ ವಿಜೇತರೊಂದಿಗೆ (ಎಡದಿಂದ) ಬಿಐಆರ್‌ಎಸಿ ವ್ಯವಸ್ಥಾಪಕಿ ಡಾ.ಪ್ರಾಚಿ ಅಗರ್‌ವಾಲ್, ಸಿಎಫ್‌ಟಿಆರ್‌ಐ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್, ಆಹಾರ ವಿಜ್ಞಾನಿ ಡಾ.ಕೌಸಲ್ಯ ಅವರನ್ನು ಕಾಣಬಹುದು.

ಬಹುಮಾನ ವಿತರಣೆ: ರಾಷ್ಟ್ರೀಯ ಪೌಷ್ಟಿಕ ಆಹಾರ ಸಪ್ತಾಹ ಅಂಗವಾಗಿ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಣೆ ಮಾಡಲಾಯಿತು. ಆಶುಭಾಷಣ ಸ್ಪರ್ಧೆಯಲ್ಲಿ ಎ.ಜಿ.ಪವಿತ್ರ ಪ್ರಥಮ, ಹಾದಿಯಾ ತಾಹೀರ್ ದ್ವಿತೀಯ ಹಾಗೂ ಅಶ್ಮಿತಾ ತನ್ವರ್ ತೃತೀಯ ಬಹುಮಾನ ಪಡೆದರೆ, ಎಂ.ಐಶ್ವರ್ಯ ಮತ್ತು ರಾಜೇಶ್ ಸಮಾಧಾನಕರ ಬಹುಮಾನ ಪಡೆದರು. ಪ್ರಬಂಧ ಸ್ಪರ್ಧೆಯಲ್ಲಿ ಎಂ.ಪ್ರಕೃತಿ ಪ್ರಥಮ, ಎಂ.ದೀಪಿಗಾ ದ್ವಿತೀಯ, ಕೀರ್ತಿ ತೃತೀಯ ಬಹುಮಾನ ಪಡೆದರೆ, ಹರಪ್ರಿಯ ಸಾಹೂ ಮತ್ತು ಟ್ವಿಂಕಲ್ ಕೇಶರ್ವಾನಿ ಸಮಾಧಾನಕರ ಬಹುಮಾನ ಪಡೆದುಕೊಂಡರು.

ನವದೆಹಲಿ ಬಯೋಟೆಕ್ನಾಲಜಿ ಇಂಡಸ್ಟ್ರಿ ರಿಸರ್ಚ್ ಅಸಿಸ್ಟೆನ್ಸ್ ಕೌನ್ಸಿಲ್(ಬಿಐಆರ್‌ಎಸಿ) ವ್ಯವಸ್ಥಾಪಕಿ ಡಾ.ಪ್ರಾಚಿ ಅಗರ್‌ವಾಲ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಸಿಎಫ್‌ಟಿಆರ್‌ಐ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್ ಮತ್ತಿತರರು ಉಪಸ್ಥಿತರಿದ್ದರು.

ಖರ್ಗೆ ಕುಟುಂಬದ ಸಿದ್ಧಾರ್ಥ ಟ್ರಸ್ಟ್‌ಗೆ KIADB ಜಮೀನು: ಸರ್ಕಾರದಿಂದ ವಿವರ ಕೇಳಿದ ರಾಜ್ಯಪಾಲ



ಗೆಹ್ಲೋಟ್

ಬೆಂಗಳೂರು: ಪ್ರಭಾವ ಬಳಸಿ ಕೆಐಎಡಿಬಿಯಿಂದ (KIADB) ಸಿದ್ಧಾರ್ಥ ಟ್ರಸ್ಟ್‌ಗೆ ಸಿಎ ನಿವೇಶನ ಪಡೆದಿದ್ದಾರೆಂಬ ಆರೋಪ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಕೇಳಿ ಬಂದಿದ್ದು, ಈ ಬಗ್ಗೆ ವಿವರ ನೀಡುವಂತೆ ರಾಜ್ಯ ಸರ್ಕಾರಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೂಚನೆ ನೀಡಿದ್ದಾರೆಂದು ಸೋಮವಾರ ತಿಳಿದುಬಂದಿದೆ.

ಈ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ರಾಜ್ಯಪಾಲರು ಪತ್ರ ಬರೆದಿದ್ದು, ವಿವರ ನೀಡುವಂತೆ ಸೂಚನೆ ನೀಡಿದ್ದಾರೆಂದು ಮೂಲಗಳು ತಿಳಿಸಿವೆ. ಇತ್ತೀಚೆಗಷ್ಟೇ ಕೆಐಎಡಿಬಿ ಸಿಎ ನಿವೇಶನ ಮಾರಾಟ ಪ್ರಕರಣ ಸಂಬಂಧ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ದೂರು ನೀಡಿದ್ದರು. ನಾರಾಯಣಸ್ವಾಮಿ ದೂರಿನ ಹಿನ್ನೆಲೆಯಲ್ಲಿ ಸರ್ಕಾರದಿಂದ ಹೆಚ್ಚಿನ ವಿವರಣೆ ನೀಡುವಂತೆ ಸೂಚಿಸಿದ್ದಾರೆಂದು ತಿಳಿದುಬಂದಿದೆ. ರಾಜ್ಯಪಾಲರ ಸೂಚನೆ ಬೆನ್ನಲ್ಲೇ ಪ್ರತಿಕ್ರಿಯೆ ನೀಡಿರುವ ಸಚಿವ ಪ್ರಿಯಾಂಕ್ ಖರ್ಗೆಯವರು, ರಾಜ್ಯಪಾಲರಿಗೆ ಎರಡು ಸಂವಿಧಾನ ಇದೆ. ಬಿಜೆಪಿ, ಜೆಡಿಎಸ್‌ನದು ಒಂದು ಸಂವಿಧಾನ. ಕಾಂಗ್ರೆಸ್‌ಗೊಂದು ಸಂವಿಧಾನ ಎಂದು ವಾಗ್ದಾಳಿ ನಡೆಸಿದ್ದಾರೆ.

ನಮ್ಮ ವಿಚಾರದಲ್ಲಿ ಬಿಜೆಪಿಯವರು ಮೊದಲು 10 ಆರೋಪ ಮಾಡುತ್ತಿದ್ದರು. ಎರಡನೇ ದಿನ ಐದು ಆರೋಪಗಳನ್ನು ಮಾಡಿದ್ದರು. ಈಗ ಸುಮ್ಮನಿದ್ದಾರೆ. ಛಲವಾದಿ ನಾರಾಯಣಸ್ವಾಮಿ ಬಿಟ್ಟು ಬೇರೆ ಯಾರೂ ಏಕೆ ಸಿಎ ನಿವೇಶನ ವಿಚಾರ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ.

ವಿಜಯೇಂದ್ರ, ಆರ್.ಅಶೋಕ ಅವರು ನನ್ನ ವಿಚಾರದಲ್ಲಿ ಯಾಕೆ ಮಾತನಾಡುತ್ತಿಲ್ಲ. ನಾನು ಕೆಳಮನೆ ಸದಸ್ಯ ಅಲ್ಲವೇ, ದಲಿತರ ನಡುವೆ ಬಡಿದಾಡಿಸುವುದು ಕೋಮುವಾದ ಸೃಷ್ಟಿಸುವುದು, ಇದೆಲ್ಲ RSS, BJP ಸಂಚು. ಬಿಜೆಪಿ–ಜೆಡಿಎಸ್‌ನವರ ದಾಖಲೆಗಳು ರಾಜ್ಯಪಾಲರ ಟೇಬಲ್‌ನಲ್ಲಿ ಕೊಳೆಯುತ್ತಿವೆ. ಅದಕ್ಕೇನು ವಿವರಣೆ ಕೇಳಿಲ್ಲ. ಬಿಜೆಪಿ ನಾಯಕರ ಪ್ರಕರಣದಲ್ಲಿ ನನ್ನ ಬಳಿ ಕಡತ ಇಲ್ಲ ಎಂದು ರಾಜ್ಯಪಾಲರು ತಪ್ಪು ಮಾಹಿತಿ ಕೊಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಬೆಂಗಳೂರಿನ ಏರೋಸ್ಪೇಸ್ ಪಾರ್ಕ್‌ನಲ್ಲಿ 5 ಎಕರೆ ನಾಗರಿಕ ಸೌಕರ್ಯಗಳ ನಿವೇಶನವನ್ನು ಕೆಐಎಡಿಬಿ ಖರ್ಗೆ ಕುಟುಂಬದ ಒಡೆತನದಲ್ಲಿರುವ ಸಿದ್ಧಾರ್ಥ ಟ್ರಸ್ಟ್‌ಗೆ ಮಂಜೂರು ಮಾಡಿದೆ. ಮಾ.4 ರಂದು ಅರ್ಜಿಗಳ ಪರಿಶೀಲನೆ ನಡೆದಿದ್ದು, ಮಾ.5 ರಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ನಿರ್ಣಯ ಕೈಗೊಂಡು ಮಾ.6 ರಿಂದ ಹಂಚಿಕೆ ಪತ್ರಗಳನ್ನು ನೀಡಲಾಗಿದೆ. ಇಷ್ಟೊಂದು ಅವಸರದಲ್ಲಿ ಹಂಚಿಕೆ ಮಾಡಿದ್ದು ಯಾಕೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದ್ದಾರೆ. ಟ್ರಸ್ಟ್‌ಗೆ ನೀಡಲಾಗಿರುವ ನಿವೇಶನ ಹಂಚಿಕೆಯಲ್ಲಿ ಹಲವು ಲೋಪಗಳಾಗಿವೆ. ಈ ಅಕ್ರಮದಿಂದ ಸರ್ಕಾರಕ್ಕೆ ಸುಮಾರು 1,000 ಕೋಟಿ ನಷ್ಟವಾಗಿದೆ ಎಂದು ಆರೋಪಿಸಿದ್ದರು.



ಪ್ರಿಯಾಂಕ್ ಖರ್ಗೆ

ಅರ್ಜಿ ಸಲ್ಲಿಸಲು ಕೇವಲ 14 ದಿನಗಳ ಕಾಲಾವಕಾಶ ನೀಡಿ ತರಾತುರಿಯಲ್ಲಿ ಪ್ರಕ್ರಿಯೆ ಮುಗಿಸಿರುವುದರಿಂದ ಸಿಎ ನಿವೇಶನಗಳ ಹಂಚಿಕೆಗೆ ಅಧಿಸೂಚನೆ ಹೊರಡಿಸಿರುವ ಬಗ್ಗೆಯೂ ಹಲವರಿಗೆ ತಿಳಿಯದಂತಾಗಿದೆ. ಇದು KIADB ಇತಿಹಾಸದಲ್ಲಿ ನಡೆದಿರುವ ಅತಿದೊಡ್ಡ ಲೋಪ ಎಂದು ಆರೋಪಿಸಿದ್ದರು.

ಖರ್ಗೆ ಕುಟುಂಬದ ವಿರುದ್ಧ ಮತ್ತೊಂದು ಗಂಭೀರ ಆರೋಪ

ಟ್ರಸ್ಟ್‌ಗೆ ಉಚಿತವಾಗಿ 19 ಎಕರೆ ಸರ್ಕಾರಿ ಭೂಮಿ



ಸಿರೋಯಾ

ಬೆಂಗಳೂರು: ಕಾಂಗ್ರೆಸ್ ಅಧ್ಯಕ್ಷ ಎಂ. ಮಲ್ಲಿಕಾರ್ಜುನ ಖರ್ಗೆ ಕುಟುಂಬದ ವಿರುದ್ಧ ಮತ್ತೊಂದು ಗಂಭೀರ ಆರೋಪ ಕೇಳಿಬಂದಿದ್ದು, ಸಿದ್ಧಾರ್ಥ ವಿಹಾರ ಟ್ರಸ್ಟ್ ನಡೆಸುತ್ತಿರುವ ಸಂಸ್ಥೆಗೆ 19 ಎಕರೆ ಸರ್ಕಾರಿ ಭೂಮಿಯನ್ನು ಉಚಿತವಾಗಿ ನೀಡಲಾಗಿದೆ ಎಂದು ಬಿಜೆಪಿ ಸಂಸದ ಲೆಹರ್ ಸಿಂಗ್ ಸಿರೋಯಾ ಸೋಮವಾರ ಆರೋಪಿಸಿದ್ದಾರೆ.

ಸಿದ್ಧಾರ್ಥ ವಿಹಾರ ಟ್ರಸ್ಟ್ ನಡೆಸುತ್ತಿರುವ ಕಲಬುರಗಿಯ ಪಾಲಿ, ಸಂಸ್ಕೃತ ಮತ್ತು ತುಲನಾತ್ಮಕ ತತ್ವಶಾಸ್ತ್ರದ ಇಂಟರ್‌ನ್ಯಾಶನಲ್ ಇನ್‌ಸ್ಟಿಟ್ಯೂಟ್‌ಗೆ 19 ಎಕರೆ ಸರ್ಕಾರಿ ಭೂಮಿಯನ್ನು ಉಚಿತವಾಗಿ ನೀಡಲಾಗಿದೆ ಎಂದು ಹೊಸ ದಾಖಲೆಗಳು ಬಹಿರಂಗಪಡಿಸುತ್ತಿವೆ. ಈ ಕುರಿತು ಸ್ವತಂತ್ರ ಸಂಸ್ಥೆಯಿಂದ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಸಭಾ ಸದಸ್ಯ ಒತ್ತಾಯಿಸಿದ್ದಾರೆ. ಅದರ ಟ್ರಸ್ಟಿಗಳಲ್ಲಿ ಖರ್ಗೆ ಅವರ ಪತ್ನಿ, ಅಳಿಯ ಮತ್ತು ಇಬ್ಬರು ಪುತ್ರರು ಇದ್ದಾರೆ. ಖರ್ಗೆ ಅವರ ಅಳಿಯ ಹಾಗೂ ಹಾಲಿ ಸಂಸದ ರಾಧಾಕೃಷ್ಣ ದೊಡ್ಡಮನಿ ಅವರು ಪಾಲಿ ಸಂಸ್ಥೆಯ ಕಾರ್ಯದರ್ಶಿಯಾಗಿದ್ದಾರೆ ಎಂದು ಸಿರೋಯಾ ಹೇಳಿದ್ದಾರೆ.

2014ರ ಮಾರ್ಚ್‌ನಲ್ಲಿ ಅಂದಿನ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ 16 ಎಕರೆ ಸರ್ಕಾರಿ ಭೂಮಿಯನ್ನು 30 ವರ್ಷಗಳ ಕಾಲ ಪಾಲಿ ಇನ್‌ಸ್ಟಿಟ್ಯೂಟ್‌ಗೆ ಲೀಸ್ ನೀಡಿತ್ತು. ನಂತರ ಒಂದೆರಡು ವರ್ಷಗಳಲ್ಲಿ 16 ಎಕರೆ ಲೀಸ್ ಆಸ್ತಿಗೆ 3 ಎಕರೆ ಹೆಚ್ಚುವರಿ ಜಮೀನು ಸೇರ್ಪಡೆಯಾಯಿತು ಮತ್ತು ಅಂತಿಮವಾಗಿ, ಮಾರ್ಚ್ 2017 ರಲ್ಲಿ ಎಲ್ಲಾ 19 ಎಕರೆಗಳನ್ನು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಖರ್ಗೆ ಕುಟುಂಬ ನಡೆಸುವ ಸಂಸ್ಥೆಗೆ ಉಚಿತವಾಗಿ ವರ್ಗಾಯಿಸಿತು. ಒಂದು ಪ್ರಮುಖ ಸಂಗತಿಯೆಂದರೆ ಖರ್ಗೆಯವರ ಮಗ ಪ್ರಿಯಾಂಕ್ ಖರ್ಗೆ ಅವರು ಭೂಮಿ ಮಂಜೂರು ಮಾಡಿದಾಗ ಈಗಿನಂತೆ ಆಗಿನ ರಾಜ್ಯ ಸರ್ಕಾರದಲ್ಲಿ ಕ್ಯಾಬಿನೆಟ್ ಸಚಿವರಾಗಿದ್ದರು ಎಂದು ಆರೋಪಿಸಿದ್ದಾರೆ. 5 ಎಕರೆ ಕೆಐಎಡಿಬಿ ಭೂ ಮಂಜೂರಾತಿಯಂತೆ 19 ಎಕರೆ ಭೂಮಿ ಹಸ್ತಾಂತರವನ್ನು ಸ್ವತಂತ್ರ ಸಂಸ್ಥೆಯಿಂದ ತನಿಖೆ ನಡೆಸಬೇಕು ಎಂದು ನಾನು ಒತ್ತಾಯಿಸುತ್ತೇನೆ.

ಬ್ಲೇಡ್ ಕಂಪನಿಗಳಿಂದ ವಂಚನೆಗೀಡಾದ ಸಂತ್ರಸ್ತರ ಪ್ರತಿಭಟನೆ; ಹಣ ವಾಪಸ್ ಕೊಡಿಸಲು ಆಗ್ರಹ

ಮೈಸೂರು,ಸೆ.2(ಎಂಟಿವೈ)– ಬ್ಲೇಡ್ ಕಂಪನಿ ಹಾಗೂ ಸೊಸೈಟಿಗಳಲ್ಲಿ ಹೂಡಿಕೆ ಮಾಡಿ ವಂಚನೆಗೊಳಗಾಗಿರುವ ಠೇವಣಿದಾರರು, ತಮಗೆ ಹಣ ಕೊಡಿಸಿ, ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಿ ಎಂದು ಒತ್ತಾಯಿಸಿ ತಮ್ಮ ಕುಟುಂಬ ಸದಸ್ಯರೊಂದಿಗೆ ಪ್ರತಿಭಟನೆ ನಡೆಸಿದರು.

ಮೈಸೂರಿನ ಸಿದ್ಧಾರ್ಥನಗರದ ನೂತನ ಜಿಲ್ಲಾಧಿಕಾರಿ ಕಚೇರಿ ಬಳಿ ಸೋಮವಾರ ಪ್ರತಿಭಟನೆ ನಡೆಸಿದ ಠೇವಣಿದಾರರು ನ್ಯಾಯ ಒದಗಿಸುವಂತೆ ಮನವಿ ಮಾಡಿದರು.

ಕಂಪನಿಗಳಲ್ಲಿ ಠೇವಣಿದಾರರು ಹೂಡಿಕೆ ಮಾಡಿದ ಹಣವನ್ನು ಅರ್ಜಿ ಹಾಕಿದ 180 ದಿನಗಳಲ್ಲಿ ಮರುಪಾವತಿ ಮಾಡಬೇಕೆಂಬ ಕಾನೂನಿದೆ. ಆದರೆ ಕಾನೂನು ಜಾರಿಯಾಗಿ 5 ವರ್ಷವಾದರೂ ಕೇಂದ್ರ ಹಾಗೂ ರಾಜ್ಯ ಸರ್ಕಾರ, ಬಡ್ಸ್ ಕಾಯ್ದೆ 2018ರ ಅಡಿಯಲ್ಲಿ ಸಂತ್ರಸ್ತರಿಂದ ಅರ್ಜಿಗಳನ್ನು ತೆಗೆದುಕೊಂಡ ನಂತರ ಅವರ ಹಣವನ್ನು ಕಾನೂನುಬದ್ಧವಾಗಿ ಹಿಂದಿರುಗಿಸಿಲ್ಲ. ಇದರಿಂದ ಕೋಟ್ಯಂತರ ಜನರಿಗೆ ಅನ್ಯಾಯವಾಗಿದೆ. ಇದು ಶಾಶ್ವತ ಕಾಯ್ದೆಯಾಗಿದ್ದು, ಇದರ ಅಡಿಯಲ್ಲಿ ನೇಮಕಗೊಂಡ ಅಧಿಕಾರಿ ಕಾಯಂ ಆಧಾರದ ಮೇಲೆ ವಿಚಾರಣೆ ನಡೆಸಬೇಕು. ಆದರೆ, ಕಳೆದ 5 ವರ್ಷಗಳಲ್ಲಿ ಆರಂಭವೇ ಆಗಿಲ್ಲ. ಇದುವರೆಗೆ ಹಲವು ರಾಜ್ಯಗಳಲ್ಲಿ ಅರ್ಜಿಗಳಿಗೆ ನೋಟಿಸ್ ನೀಡಲಾಗಿಲ್ಲ. ಈ ಸಮಗ್ರ ಕಾಯ್ದೆ ಕಡೆಗಣಿಸಿ ಸಹಾರಾ ಸಿಆರ್‌ಸಿಯು ಸೆಬಿ ಪರ್ಲ್ಸ್‌ನಂತಹ ಪೋರ್ಟಲ್‌ಗಳನ್ನು ತೆರೆಯುವುದಾಗಿ ಭರವಸೆ ನೀಡುವ ಮೂಲಕ ಬಡ್ಸ್ ಕಾಯ್ದೆಯನ್ನು ನಾಶಮಾಡಲು ಕಾನೂನುಬಾಹಿರ ಪಿತೂರಿ ನಡೆಯುತ್ತಿದೆ ಎಂದು ಕಿಡಿಕಾರಿದರು.



ವಿವಿಧ ಕಂಪನಿಗಳಲ್ಲಿ ಹಣ ಹೂಡಿಕೆ ಮಾಡಿ ವಂಚನೆಗೆ ಒಳಗಾಗಿರುವ ಹೂಡಿಕೆದಾರರು ತಮ್ಮ ಕುಟುಂಬದ ಸದಸ್ಯರೊಂದಿಗೆ ಮೈಸೂರು ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟಿಸಿದರು.

ನಗರ, ಗ್ರಾಮಗಳಲ್ಲಿ ಲಕ್ಷಾಂತರ ಜನರು ವಂಚನೆಗೆ ಬಲಿಯಾದವರಿದ್ದಾರೆ. ಅವರು ಕಷ್ಟಪಟ್ಟು ಸಂಪಾದಿಸಿದ ಹಣವನ್ನು ಸರ್ಕಾರಿ ಸಂಸ್ಥೆಗಳು ಮತ್ತು ದರೋಡೆಕೋರರು ದೋಚಿದ್ದಾರೆ. ಜಿಲ್ಲಾಡಳಿತ ಮತ್ತು ಸಕ್ಷಮ ಅಧಿಕಾರಿಗಳು ಪದೇ ಪದೆ ಅರ್ಜಿ ಸಲ್ಲಿಸಿದರೂ ಹಿಂತಿರುಗಿಸುತ್ತಿಲ್ಲ. ಇದರಿಂದ ಲಕ್ಷಾಂತರ ಕುಟುಂಬಗಳು ಸಮಸ್ಯೆ ಎದುರಿಸುತ್ತಿವೆ. ಹಸಿವಿನಿಂದ ಸಾಯುವ ರೀತಿಯೂ ಎದುರಾಗಿದೆ. ಹೀಗಾಗಿ ಕಾನೂನಿನಡಿಯಲ್ಲಿ ಪಾವತಿ ಶಿಬಿರಗಳನ್ನು ಆಯೋಜಿಸುವ ಮೂಲಕ ಸಂಸತ್ತು, ಸರ್ಕಾರ ಮತ್ತು ಕಾನೂನಿನ ಘನತೆ ಉಳಿಸಬೇಕು. ವಂಚನೆಗೊಳಗಾದ ಸಂತ್ರಸ್ತರ ಠೇವಣಿ ಹಣವನ್ನು ಕೂಡಲೇ ಪಾವತಿಸಬೇಕು. ತಪ್ಪಿತಸ್ಥ ಅಧಿಕಾರಿಗಳನ್ನು ಶಿಕ್ಷಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಅಲ್ಲಾಭಕ್ಷ್, ವೆಂಕಟರಾಮು, ಎಂ.ಎಸ್. ರಾಮಮೂರ್ತಿ, ಹರೀಶ್, ಹೆಚ್.ಎಂ.ಶಿವಣ್ಣ ಸೇರಿದಂತೆ ಹಲವರು ಭಾಗವಹಿಸಿದ್ದರು.

ನಕ್ಕರೆ ಅದೇ ಸ್ವರ್ಗ

ಗೆಳೆಯ : (ಬಂದವನೇ... ಬಾಟಲಲ್ಲಿದ್ದ ಪೆಪ್ಸಿ ಕುಡಿದ ನಂತರ) ಯಾಕೋ ಗುಂಡ ಬೇಜಾರಾಗಿದ್ದೀಯಾ?

ಗುಂಡ : ನನ್ನ ಲೈಫೇ ಹಾಳಾಗೋಯ್ತು ಕಣೋ. ನಿನ್ನೆ ನನ್ನ ಹೆಂಡತಿ ಮನೆ ಬಿಟ್ಟು ಹೋದಳು! ಆಫೀಸ್‌ಗೆ ಹೋಗುವಾಗ ಕಾರ್ ಆಕ್ಸಿಡೆಂಟ್ ಆಗಿ ಹಾಳಾಯ್ತು! ಲೇಟಾಯ್ತು ಅಂತ ಬಾಸ್ ಕೆಲಸದಿಂದ ಕಿತ್ತಾಕಿದ್ರು. ಜೀವನಾನೇ ಬೇಜಾರಾಗಿ ಸಾಯೋಣ ಅಂತ ಪೆಪ್ಸಿಗೆ ವಿಷ ಹಾಕಿ ತೊಗೊಂಡು ಇಲ್ಲಿ ಬಂದ್ರೆ ಅದನ್ನೂ ನೀನು ಕುಡಿದುಬಿಟ್ಟೆ..!!

ಮೈಸೂರು ಮಿತ್ರ

ಮಂಗಳವಾರ, 3 ಸೆಪ್ಟೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........


ಸಾವಿನ ಬಗ್ಗೆ ಎಚ್ಚರಿಸಲು ಕಾಲರಾಯನು ವರ್ಷಕ್ಕೊಮ್ಮೆ ಗಂಟೆ ಬಾರಿಸುವ ದಿನವೇ ಜನ್ಮದಿನ. – ಬೀಚೀ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದಕ್ಷಿಣೆಗಾದರೆ ಮಾತು ಹಿಡಿದಾನು, ಮಂತ್ರಕ್ಕಾದರೆ ಬೆನ್ನು ತೋರ್ಸಿಯಾನು.

ನಿಮ್ಮ ಪತ್ರಗಳು

■ ಈ ಬಾರಿ ಪರಿಸರಸ್ನೇಹಿ ಗಣಪನ ಪೂಜಿಸೋಣ!

ಮಾನ್ಯರೆ,



ಭಾರತದಲ್ಲಿ ವೈಭವದಿಂದ ಆಚರಿಸುವ ಹಬ್ಬಗಳಲ್ಲಿ ಗೌರಿ ಗಣೇಶ ಹಬ್ಬ ಕೂಡ ಒಂದು. ವಿಘ್ನವಿನಾಶಕ, ಮೋದಕ ಪ್ರಿಯ ಗಣೇಶನ ಹಬ್ಬಕ್ಕೆ ಇದೀಗ ದಿನಗಣನೆ ಆರಂಭವಾಗಿದೆ.

ರಾಜ್ಯದ ಯಾವುದೇ ರಸ್ತೆಯಲ್ಲಿ ಹಾದು ಹೋದರು ಅವುಗಳ ಬದಿ ಮಾರಾಟಕ್ಕಿಟ್ಟ ಬಣ್ಣ ಬಣ್ಣದ ಗಣಪನ ವಿಗ್ರಹಗಳೇ ಕಣ್ಣಿಗೆ ಬೀಳುತ್ತಿವೆ. ಗಣೇಶ ಚತುರ್ಥಿ ದಿನ ಪ್ರತಿಷ್ಠಾಪನೆಯಾಗುವ ಗಣಪ ಆಯಾಯ ಮನೆಯವರ ಪದ್ಧತಿಯಂತೆ ಪೂಜಿಸಿಕೊಂಡು, ಕೊನೆಗೆ ನೀರಿನಲ್ಲಿ ವಿಸರ್ಜನೆಗೊಳ್ಳುತ್ತಾನೆ. ಆದರೆ ಮಾರುಕಟ್ಟೆಯಲ್ಲಿ ಇತ್ತೀಚಿನ ದಿನಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಗಣಪತಿ ಮೂರ್ತಿಗಳು ಹೆಚ್ಚು ಮಾರಾಟವಾಗುತ್ತಿದ್ದು, ಇದರಲ್ಲಿ ವಿಷಕಾರಿ ರಾಸಾಯನಿಕ ಮತ್ತು ಲೋಹ ಲೇಪಿತ ಬಣ್ಣಗಳನ್ನು ಬಳಸಲಾಗುತ್ತದೆ. ಇವುಗಳನ್ನು ನೀರಿನಲ್ಲಿ ವಿಸರ್ಜನೆ ಮಾಡುವುದರಿಂದ ಜಲಚರಗಳಿಗಲ್ಲದೆ, ಪರಿಸರಕ್ಕೂ ಹಾನಿಯುಂಟಾಗುತ್ತದೆ. ಇದನ್ನು ತಡೆಯುವ ಸಲುವಾಗಿ ಪರಿಸರ ಸ್ನೇಹಿ ಗಣಪನನ್ನು ಪ್ರತಿಷ್ಠಾಪಿಸಿಕೊಳ್ಳುವುದು ಉತ್ತಮ.

ಇದಲ್ಲದೇ ಪಕ್ಕದ ಮನೆಯವರಿಗಿಂತ ನಮ್ಮ ಮನೆಯಲ್ಲಿ ಹೆಚ್ಚು ಶ್ರೀಮಂತಿಕೆ ತೋರಿಸಿಕೊಳ್ಳುವ ಆಸೆ ಕೆಲವರಲ್ಲಿ ಇರುತ್ತದೆ! ಈ ನಿಟ್ಟಿನಲ್ಲಿ ದೊಡ್ಡ ದೊಡ್ಡ ಧ್ವನಿವರ್ಧಕಗಳನ್ನು ತಂದು, ಬೆಳಿಗ್ಗೆಯಿಂದ ಸಂಜೆ ತನಕ ಹಾಡನ್ನು ಹಚ್ಚಿಯೇ ಇಡುವುದು, ವಾಯುಮಾಲಿನ್ಯ ಉಂಟಾಗುವಷ್ಟು ಪಟಾಕಿ ಸಿಡಿಸುವುದು, ವಿಸರ್ಜನೆಯ ಸಂದರ್ಭದಲ್ಲೂ ಗಣೇಶನನ್ನು ಎಲ್ಲೆಂದರಲ್ಲಿ ನೀರಲ್ಲಿ ಬಿಟ್ಟು ಬರುವ ಕೆಲಸ ಮಾಡುತ್ತಾರೆ. ಈ ಎಲ್ಲಾ ತಪ್ಪುಗಳಿಂದ ಪರಿಸರ ಮಾಲಿನ್ಯ ಉಂಟಾಗುವುದೆಂಬ ಅರಿವು ನಮಗಿರಬೇಕು.

ಪರಿಸರವನ್ನು ಈಗಾಗಲೇ ಸಾಕಷ್ಟು ಹದಗೆಡಿಸಿದ್ದೇವೆ. ನಾವು ಪರಿಸರ ಕಾಪಾಡಿದರೆ, ಪರಿಸರ ನಮ್ಮನ್ನು ಅಷ್ಟೇ ಚೆನ್ನಾಗಿ ನೋಡಿಕೊಳ್ಳುತ್ತದೆ. ಪ್ರಕೃತಿ ವಿಕೋಪದಿಂದ ನಾವುಗಳು ಈಗಾಗಲೇ ಸಾಕಷ್ಟು ಸಮಸ್ಯೆ ಎದುರಿಸಿದ್ದೇವೆ. ಹೀಗಾಗಿ ಈ ಬಾರಿಯ ಗಣೇಶನ ಹಬ್ಬದಲ್ಲಿ ಪರಿಸರ ಸ್ನೇಹಿ ಗಣಪನ ಮೊರೆ ಹೋಗೋಣ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ಇಂತಹ ಬೇಜವಾಬ್ದಾರಿ ವರ್ತನೆ ಹತ್ತಿಕ್ಕದಿದ್ದರೆ ಅನಾಹುತ ಗ್ಯಾರಂಟಿ



ಮಾನ್ಯರೆ,

ಮೈಸೂರಲ್ಲಿ ವಾಹನ ಚಾಲನೆ ವೇಳೆ ಮೊಬೈಲ್ ಬಳಕೆ ವ್ಯಾಪಕಗೊಳ್ಳುತ್ತಿದ್ದು, ಪೊಲೀಸ್ ಇಲಾಖೆ ಈ ವಿಚಾರ ನಮಗೆ ಸಂಬಂಧಿಸಿದ್ದಲ್ಲ ಎಂಬ ನಿಲುವು ತಾಳಿದಂತಿದೆ. ಎಲ್ಲಾ ರೀತಿಯ ವಾಹನ ಸವಾರರು, ಚಾಲಕರು ಚಾಲನೆ ವೇಳೆ ಮೊಬೈಲ್ ಬಳಸುವುದರಿಂದ ಅವರ ಗಮನವೆಲ್ಲಾ ಅವರು ಮಾತನಾಡುವ ವಿಚಾರದತ್ತಲೇ ಇರುವುದರಿಂದ ಇತ್ತ ವಾಹನ ದಿಕ್ಕೆಟ್ಟು ಓಡುತ್ತಿರುತ್ತದೆ. ಹಾಗಾಗಿ ಪ್ರತಿನಿತ್ಯ ನಗರದಲ್ಲಿ ಒಂದಲ್ಲ ಒಂದು ಕಡೆ ಈ ಕಾರಣದಿಂದ ಅಪಘಾತ ಸಂಭವಿಸುತ್ತಲೇ ಇವೆ. ಇಂತಹ ಬೇಜವಾಬ್ದಾರಿ, ಬುದ್ಧಿಗೇಡಿ ಜನರಿಂದ ಅಮಾಯಕರು, ಏನೂ ತಪ್ಪು ಮಾಡದವರು ತೊಂದರೆ ಅನುಭವಿಸಬೇಕಾಗಿ ಬಂದಿದೆ. ಈ ರೀತಿ ಮೊಬೈಲ್‌ನಲ್ಲಿ ಮಾತನಾಡಿಕೊಂಡು ವಾಹನ ಚಾಲನೆ ಮಾಡುವವರ ದಿಕ್ಕನ್ನು ಅರಿತು ನಾವು ಸುರಕ್ಷಿತವಾಗಿರಬೇಕಾದ ದುರ್ಗತಿ ಬಂದೊದಗಿದೆ. ಈ ಸಂಬಂಧ ಪೊಲೀಸ್ ಇಲಾಖೆ ಕಠಿಣಾತಿಕಠಿಣ ಕ್ರಮ ಕೈಗೊಳ್ಳದೇ ಹೋದಲ್ಲಿ ದೊಡ್ಡ ಅನಾಹುತಗಳೇ ಸಂಭವಿಸುವ ದಿನಗಳು ದೂರವಿಲ್ಲ.

–ಕೃಷ್ಣಪ್ರಸಾದ್, ವಿಜಯನಗರ, ಮೈಸೂರು.

■ ಶಾಲಾ ಮಕ್ಕಳ ಸುರಕ್ಷತೆಗಿಂತ ಸುಪ್ರೀಂಕೋರ್ಟ್ ಆದೇಶ ಮುಖ್ಯವೇ



ಮಾನ್ಯರೆ,

ಇತ್ತೀಚೆಗೆ ಮೈಸೂರಿನ ವಿ.ವಿ. ಮೊಹಲ್ಲಾ 2ನೇ ಮುಖ್ಯ ರಸ್ತೆ ನಿರ್ಮಲಾ ಕಾನ್ವೆಂಟ್ ಬಳಿ ಬೀದಿನಾಯಿಗಳ ಉಪಟಳ ಹೇಳತೀರದಾಗಿದೆ. ಶಾಲಾ ಮಕ್ಕಳಿಗೆ ಕಚ್ಚಿರುವುದು ಉಂಟು. ಈ ಬಗ್ಗೆ ಮೈಸೂರು ಮಹಾನಗರ ಪಾಲಿಕೆಯ ಶ್ವಾನದಳ ಕಾರ್ಯಾಚರಣೆ ವಿಭಾಗಕ್ಕೆ ದೂರು ನೀಡಿದರೂ ಶ್ವಾನದಳದವರು ಸ್ಥಳ ಪರಿಶೀಲನೆ ಮಾಡಿ ಸುಪ್ರೀಂಕೋರ್ಟ್ ಆದೇಶವಿದೆ. ನಾವೇನು ಮಾಡಲಾಗದು ಎಂದು ಹೇಳಿ ಏನೂ ಕ್ರಮ ಕೈಗೊಳ್ಳದೆ ಹಾಗೆಯೇ ಹೋಗಿದ್ದಾರೆ. ಮುಂದೆ ಶಾಲಾ ಮಕ್ಕಳಿಗೆ ಬೀದಿನಾಯಿಗಳಿಂದ ಪ್ರಾಣಾಪಾಯವಾದರೆ ಯಾರು ಹೊಣೆ. ಅಪಾಯ ಸಂಭವಿಸುವ ಮುನ್ನ ಕ್ರಮ ಕೈಗೊಳ್ಳಿ.


– ಶಾಲಾ ಮಕ್ಕಳ ಪೋಷಕರು, ಮೈಸೂರು.



ಗುಬ್ಬಿಗೂಡು ರಮೇಶ್
ಮೊ: 97429–34512

ದೀಪ ಸಾಲು

ಆಸಕ್ತಿ, ಅನಾಸಕ್ತಿಗಳ ಗೊಂದಲದಲ್ಲೇ ಪ್ರತಿದಿನದ ಹೊಂದಾಣಿಕೆ!



> ಮನುಷ್ಯನ ನಿತ್ಯದ ಚಟುವಟಿಕೆಗಳು ವಿಸ್ತರಣೆಯ ಮಾರ್ಗದಲ್ಲಿ ಚಲಿಸುತ್ತವೆ. ಅಭಿವೃದ್ಧಿ ಅದರ ಮಂತ್ರ. ಇಂಥ ಹೊತ್ತಿನಲ್ಲಿ ಹಠಕ್ಕೆ ಬಿದ್ದರೆ ಮನಸ್ಸು ಹದವರಿತು ನಡೆಯಬೇಕು. ಇಲ್ಲವಾದರೆ ಸಮಯ ತನ್ನ ಆಟ ತೋರಿಸುತ್ತದೆ. ಮನಸ್ಸು ವರ್ತಮಾನದಲ್ಲಿ ವರ್ತಿಸಿದರೆ ಪ್ರತಿ ಉತ್ಸಾಹ ನೂರ್ಮಡಿಸುತ್ತದೆ. ಚಲನಶೀಲತೆ ಜೊತೆಗೂಡುತ್ತದೆ. ಸೋಲೆಂಬುದು ಮುಕ್ಕಾಲು ಹಾದಿ ನಮ್ಮಿಂದ ಪೇರಿ ಕಿತ್ತಿರುತ್ತದೆ. ದೇಹವನ್ನು ಯಂತ್ರದಂತೆ ದುಡಿಸಬಹುದು. ಆದರೆ ಮನಸ್ಸು ಯಂತ್ರದಂತೆ ನಡೆಯಲಾರದು. ಮನಸ್ಸಿಗೆ ಅದರದ್ದೇ ಆಯಾಸವಿದೆ. ದೇಹವನ್ನೇ ಸೂಪರ್ ಸ್ಪೀಡ್ ಮಾಡುವಷ್ಟು ಅದು ಟ್ಯೂನ್ ಆಗಿರುತ್ತದೆ. ಅದಕ್ಕಾಗಿ ಮನಸ್ಸನ್ನು ವೃತ್ತಿಗೆ ಪ್ರವೃತ್ತಿಗೆ ಹೊಂದಿಸುವಂತೆ ಅಣಿ ಮಾಡಬೇಕು. ಆಗ ನೋಡಿ ಸೋಲು ಮತ್ತು ಸಾವುಗಳು ನಮ್ಮ ನಮ್ಮ ವೃತ್ತಿ–ಪ್ರವೃತ್ತಿಗಳ ಏಳುಬೀಳಿನ ಬೆಂಕಿಯಲ್ಲಿ ಮೈಕಾಯಿಸಿಕೊಂಡು ಬೆಚ್ಚಗಾಗಲು ಬರುವುದಿಲ್ಲ.

ಬದುಕು ಕಟ್ಟಿಕೊಳ್ಳಲಿಕ್ಕಾಗಿ ನೌಕರಿ, ಬೇಸಾಯ, ವ್ಯಾಪಾರ ಕೂಲಿ–ನಾಲಿ ಇತ್ಯಾದಿ ಸಂಪಾದನೆಗಳನ್ನು ಮಾಡಿಕೊಂಡು ಜೀವನರಥ ಎಳೆಯುವ ನಾವು ನಮ್ಮ ನಮ್ಮ ಕೆಲಸಗಳಲ್ಲಿ ಪ್ರತೀ ದಿನ ಇದ್ದಂತೆಯೇ ಇದ್ದು ಬಿಡುವ ಕಾಲ ಮುಗೀತು! ಯಾಕೆಂದರೆ ಈಗ ಕಾಲ ಬದಲಾಗಿದೆ. ಬದಲಾವಣೆ ಜಗದ ನಿಯಮ. ಕಾಲ ಬದಲಾಯಿತು ಎನ್ನುವ ಮಾತು ನಮಗೆ ಇಂದು ನಿನ್ನೆಯದಲ್ಲ. ಪ್ರತೀ ಶತಮಾನಗಳ ಹರಿಯುವಿಕೆ ಮತ್ತು ಯುಗಾಂತ್ಯದ ಕೊನೆವರೆಗೆ ಈ ಮಾತು ಚಾಲ್ತಿಯಲ್ಲಿರುತ್ತದೆ.

ತ್ರೇತ್ರಾಯುಗದಲ್ಲಿ, ಕೃತಯುಗದಲ್ಲಿ, ದ್ವಾಪರದಲ್ಲಿ, ಕಲಿಯುಗದಲ್ಲಿ, ಯಾವುದೆಲ್ಲಾ ಹೇಗಿತ್ತು ಈಗ ಹೇಗಾಯ್ತು ಎಂಬ ವಿಚಾರಗಳನ್ನು ನೈತಿಕತೆ ಮತ್ತು ಧಾರ್ಮಿಕತೆಯ ವಿಷಯಗಳ ಆಧಾರದ ಮೇಲೆ ಉಲ್ಲೇಖಿಸಿದ ಹತ್ತಾರು ವಿವರಗಳು ನಮಗೆ ಗೊತ್ತು. ಆದರೆ ಕೃಷಿ, ಕೈಗಾರಿಕೆ, ವಾಣಿಜ್ಯ, ವಹಿವಾಟು, ನೌಕರಿ, ಉತ್ಪಾದನೆ ಹೀಗೆ ಹತ್ತಾರು ವೃತ್ತಿಗಳಲ್ಲಿ ತೊಡಗಿ ಜೀವನ ನಿರ್ವಹಣೆ ಮಾಡುತ್ತಾ ಬಂದ ಮನುಷ್ಯಲೋಕ ಪ್ರತೀ ಕಾಲಕ್ಕೂ ನಾಗರಿಕತೆಯ ನಾಗಾಲೋಟಕ್ಕೆ ಸ್ಪಂದಿಸಿ ಹೆಜ್ಜೆ ಹಾಕಿದೆ. ಬದಲಾದ ಕಾಲಮಾನಕ್ಕೆ ತಕ್ಕಂತೆ ಮನೋಮಾನ ಬದಲಾಯಿತು. ಆದರೆ 'ಕೌಶಲಾಧಾರಿತ ವೃತ್ತಿ ಪರಿಣತಿ' ಎಂಬ ಹೊಸ ಜಾಗೀರ್‌ದಾರು ಬಂದು ಹೊಸ ಹುಡುಗರ ಪಡೆಯನ್ನು ಹೇಗೆ ಕಂಗೆಡಿಸಿದೆ ಎಂದರೆ ಅದೇ ಒಂದು ವಿಸ್ಮಯ!

ಐಟಿ–ಬಿಟಿ ಕ್ಷೇತ್ರಗಳು ಬೆಳೆದು ಅತೀ ಹೆಚ್ಚು ಸಂಬಳದ ರುಚಿ ತೋರಿಸಿ ಯುವಕ ಸಮುದಾಯವನ್ನು ಆಕರ್ಷಿಸಿದ ಕಾಲಮಾನವಿದು. ದೊಡ್ಡ ದೊಡ್ಡ ಬಹುರಾಷ್ಟ್ರೀಯ ಕಂಪನಿಗಳು, ಮುಗಿಲೆತ್ತರಕ್ಕೆ ತಲೆಎತ್ತಿ ಜಗತ್ತನ್ನೇ ಒಂದು ಮುಷ್ಟಿಯೊಳಗೆ ತಂತ್ರಜ್ಞಾನದ ಮಾಂತ್ರಿಕತೆಯೊಂದಿಗೆ ಪಳಗಿಸಿದ ಬದಲಾವಣೆಯನ್ನು ಕಣ್ಣಾರೆ ಕಂಡವರು ನಾವು. 'ಅಮೆರಿಕನ್ ಟೈಮ್ಸ್' ಪತ್ರಿಕೆಯನ್ನು ಅದು ಪ್ರಿಂಟಾದ ಕೂಡಲೇ ವಿಶ್ವದ ಯಾವ ಮೂಲೆಯಲ್ಲಿದ್ದರೂ ಅಂಗೈಯಲ್ಲಿ ಸ್ಕ್ರಾಲ್ ಮಾಡುತ್ತಾ ಓದಿದವರು ನಾವು, ಭಾರತದಲ್ಲಿ ಬೆಳೆದ ಗುಲಾಬಿ ಫ್ಲೋರಿಡಾದ ಹೂಕುಂಡಗಳಲ್ಲಿ ಬೆಳಗಾಗುವುದರಲ್ಲಿ ಅರಳಿ ನಗುವುದನ್ನು ಕಂಡವರು ನಾವು, ಡೆನ್ಮಾರ್ಕಿನ ಹಾಲು ಆಸ್ಟ್ರೇಲಿಯಾದ ಟೀ ಕೆಟಲುಗಳಲ್ಲಿ ಕುದಿಯುವ ಪರಿ ನೋಡಿದವರು ನಾವು, ವಿಶ್ವದ ಭೂಪಟವೇ ಹೀಗೆ ಚಿಕ್ಕದಾಗಲು ಕಾರಣ ವಿಜ್ಞಾನದ ತಾಂತ್ರಿಕ ಲೋಕ ಅನಾವರಣಗೊಂಡ ಪರಿಣಾಮ.

ಇಂಥ ಕಾಲಘಟ್ಟದಲ್ಲಿ ತಾಂತ್ರಿಕ ಶಿಕ್ಷಣ, ವಿಜ್ಞಾನದ ಪದವೀಧರರು, ಎಂಜಿನಿಯರಿಂಗ್ ಗ್ರಾಜ್ಯುಯೇಟುಗಳು, ಐಟಿ–ಬಿಟಿ ಕ್ಷೇತ್ರಗಳಲ್ಲಿ ಉದ್ಯೋಗ ಅರಸಿ ಜಗತ್ತಿನ ಬೇರೆ ಬೇರೆ ದೇಶಗಳಲ್ಲಿ ಉದ್ಯೋಗ ಗಿಟ್ಟಿಸಿಕೊಂಡು ಅಲ್ಲೇ ನೆಲೆಯೂರಿ ಬದುಕು ಕಟ್ಟಿಕೊಂಡರು. ಅಧಿಕ ಸಂಬಳ ಬರುವ ಕಾರಣ ತರುಣ ತಲೆಮಾರಿನ ಆರ್ಥಿಕ ಸ್ಥಿತಿ ಜೀವನ ಶೈಲಿ ಎಲ್ಲವೂ ಸುಧಾರಿಸಿತು. ಒಂದು ಐಷಾರಾಮಿ ವೈಭವದ ಜೀವನಕ್ಕೆ ಅವರು, ಅದರ ಕುಟುಂಬ ಒಗ್ಗಿ ಹೋಯಿತು. ಕಾರ್ಪೊರೇಟ್ ಸೆಕ್ಟರ್‌ನಲ್ಲಿ ನಮ್ಮ ಮನೆಯ ಹುಡುಗನೊಬ್ಬ ಡಾಲರ್ ಲೆಕ್ಕದಲ್ಲಿ ದುಡಿಯುತ್ತಾನೆ ಎಂಬ ಉದ್ಯೋಗ ಖಾತ್ರಿಯೇ ಆ ಕುಟುಂಬಕ್ಕೊಂದು ಸಾಮಾಜಿಕ ಸ್ಥಾನಮಾನ ಕಲ್ಪಿಸಿದಂತೆ ಇತ್ತು, ಈಗಲೂ ಇದೆ.

ಯಾವಾಗ ಈ ಐಟಿ–ಬಿಟಿ ಕ್ಷೇತ್ರ ಗರಿಗೆದರಿ ಮೂಟೆಗಟ್ಟಲೆ ಸಂಬಳದ ಲೆಕ್ಕದಲ್ಲಿ ದುಡ್ಡು ಕೊಟ್ಟಿತೋ ಸಾಮಾನ್ಯ ಪದವೀಧರರ, ಸರಕಾರಿ ನೌಕರರ ಉದ್ಯೋಗ ಮತ್ತು ಸಂಬಳಗಳು ಐಟಿ–ಬಿಟಿ ಸೆಕ್ಟರಿನ ಸಂಬಳ ಮತ್ತು ಚರಿಷ್ಮಾದ ಮುಂದೆ ಡಲ್ಲು ಹೊಡೆಯ ತೊಡಗಿದವು. ಆದರೆ ಈ ಎರಡೂ ವೃತ್ತಿಗಳ ನಡುವೆ ಕೂದಲೆಳೆಯ ಅಂತರದಲ್ಲಿ ವ್ಯತ್ಯಾಸವೊಂದಿತ್ತು. ಖಾಸಗಿ ಕಂಪನಿಗಳ ಈ ಅಧಿಕ ಸಂಬಳ ಮತ್ತು ಚರಿಷ್ಮಾಗಳು ಬೇಗ ಬೇಗ ದುಪ್ಪಟ್ಟಾಗುತ್ತಿತ್ತು. ಸಾಮಾನ್ಯ ಪದವೀಧರರ ಸಂಬಳ ಸಾರಿಗೆಗಳು ಆಮೆ ವೇಗದಲ್ಲಿ ಏರುತ್ತಿದ್ದವು. ಆರ್ಥಿಕತೆಯ ಹಿಗ್ಗುವಿಕೆ ಸಮಾನಾಂತರವಾಗಿಲ್ಲದಿರುವುದಕ್ಕೆ ಅವರು ಕೊಡುತ್ತಿದ್ದ ಕಾರಣಗಳೇನು ಗೊತ್ತಾ? 'ಕೌಶಲಾಧಾರಿತ ವೃತ್ತಿ ಪರಿಣತಿ' ಎಂಬುದು. ಅಂದರೆ ಕಂಪ್ಯೂಟರಿನ ಮುಂದೆ ಕುಳಿತು ಕೆಲಸ ಮಾಡುವವರ ಸ್ಪೀಡು ಗಂಟೆಗಳ ಲೆಕ್ಕವೇ ಇಲ್ಲದೆ ದುಡಿವ ಅವಿರತ ದುಡಿಮೆ! ಹೀಗೆ ಹಗಲು ರಾತ್ರಿಗಳ ಪರಿವೆಯೇ ಇಲ್ಲದೆ ಕೆಲಸದಲ್ಲಿ ತೊಡಗಿಸಿಕೊಂಡವರ ಶ್ರಮ. ಇವಿಷ್ಟನ್ನೂ ಸಾಮಾನ್ಯ ನೌಕರ ವರ್ಗದಲ್ಲಿ ಕಾಣಲಾಗುವುದಿಲ್ಲ, ಆ ಕಾರಣಕ್ಕೇನೆ ಕಾರ್ಪೊರೇಟ್ ವಲಯ ತನ್ನ ನೌಕರರ ಹಿತ ಕಾಯುತ್ತಿದೆ ಎಂಬ ವರ್ತಮಾನ ಜಾರಿಯಲ್ಲಿತ್ತು. ಇಷ್ಟಾಗಿಯೂ ಕಾಲ ಬದಲಾದಂತೆಲ್ಲಾ ಈ ತಾಂತ್ರಿಕತೆಯ ಮಾಂತ್ರಿಕತೆಯೂ ಕಾಲಕ್ಕೆ ತಕ್ಕಂತೆ ಅಪ್‌ಡೇಷನ್ ಕೇಳುತ್ತಿದೆ. ಇಲ್ಲಿಯೂ ಕಾಲ ಬದಲಾಗಿದೆ. ಬದಲಾದ ಕಾಲಘಟ್ಟದಲ್ಲಿ ಸರ್ಕಾರಿ ನೌಕರನೂ ಕೂಡ ಕಂಪ್ಯೂಟರ್ ಸ್ಕ್ರೀನಿನ ಮುಂದೆ ತನ್ನ ಕನ್ನಡಕವನ್ನು ಸರಿ ಮಾಡಿಕೊಂಡು ವರ್ತಮಾನದಲ್ಲಿ ಕುಳಿತಿದ್ದಾನೆ. ಖಾಸಗಿ ಕ್ಷೇತ್ರದ ಎಲ್ಲ ನೌಕರರು ಅದೇ ತಂತ್ರಜ್ಞಾನದ ತುತ್ತತುದಿಯಲ್ಲಿ ಬೆರಳಾಡಿಸುತ್ತಿದ್ದಾರೆ. ಆದರೆ, ಎಲ್ಲರ ಸಂಬಳ–ಸಾರಿಗೆಗಳು ಮಾತ್ರ ಗುಣಾಕಾರದ ರೀತಿಯಲ್ಲಿ ಜಾಸ್ತಿಯಾಗಲೇ ಇಲ್ಲ. ಸರಕಾರಿ ನೌಕರರ ಹಾಗೂ ಖಾಸಗಿ ವಲಯದ ಕೆಲಸಗಾರರ ಆರ್ಥಿಕತೆ ಸಂಕಲನದ ಲೆಕ್ಕದಲ್ಲಿಯೇ ಓಡುತ್ತಿದೆ. ಹಾಗಾಗಿಯೇ ಯುವಕರಿಗೆ ಗುಣಾಕಾರದ ರೀತಿಯಲ್ಲಿ ಸಂಬಳ ದುಪ್ಪಟ್ಟಾಗುವ ಕಾರ್ಪೊರೇಟ್ ವಲಯದ ಕಡೆಗೆ ಇವತ್ತಿಗೂ ಹೆಚ್ಚಿನ ಆಸಕ್ತಿ.

ಈ ಹಿಂದಿನ ಹತ್ತು ವರ್ಷಗಳಲ್ಲಿ ಕಾರ್ಪೊರೇಟ್ ಕಂಪನಿಗಳಿಗೆ ಕೆಲಸಕ್ಕೆ ಸೇರಿ ಸೀನಿಯರ್ ಎನಿಸಿಕೊಂಡ ಅನೇಕರಿಗೆ ಕೊರೊನಾ ದಿನಗಳಲ್ಲಿ ಸಾಕಷ್ಟು ಕೆಲಸ ಹೋಗಿದೆ. ಹಿಂದೆ ಬರುತ್ತಿದ್ದ ಅಧಿಕ ಸಂಬಳ ಸವಲತ್ತುಗಳು ಕಡಿಮೆಯಾಗಿವೆ. ಈ ಹೆಚ್ಚು ಕಡಿಮೆಗಳು ತೀರಾ ಸಾಮಾನ್ಯವೆನ್ನಬಹುದಾದ ವಿಷಯಗಳು. ಆದರೆ ಈಗ ಶುರುವಾಗಿರುವ ಹೊಸ ಟ್ರೆಂಡ್ ಏನೆಂದರೆ ಒಬ್ಬ ಸೀನಿಯರ್‌ಗೆ ಕೊಡುವ ಸಂಬಳದ ದರಕ್ಕೆ ಮೂರು ಜನ ಹೊಸ ಪ್ರತಿಭೆಗಳು ಆ ಹಿರಿಯ ನೌಕರನ ಸ್ಥಾನ ತುಂಬುತ್ತವೆ ಎಂಬುದು! ಅದರಲ್ಲೂ ಎಂಥ ಸ್ಪರ್ಧೆ ಎಂದರೆ ಈ ಹಿಂದಿನ ಹಿರಿಯ ನೌಕರನಿಗಿಂತ ಹೊಸದಾಗಿ ಸೇರ್ಪಡೆಯಾಗುವ ಉತ್ಸಾಹಿ ಯುವ ಪ್ರತಿಭೆ ತಾಂತ್ರಿಕವಾಗಿ ತುಂಬಾ ಸ್ಟ್ರಾಂಗು. ಕೆಲಸ ಮಾಡುವ ಎನರ್ಜಿ, ಆಸಕ್ತಿ, ಕಲಿತ ವಿದ್ಯೆ, ಮಾಡುವ ಉದ್ಯೋಗ ಎಲ್ಲದಕ್ಕೂ ನೂತನ ಮಾದರಿ. ಬಹು ರಾಷ್ಟ್ರೀಯ ಕಂಪನಿಗಳ ಮೆಷನರಿ ಮನಸ್ಸುಗಳಿಗೆ ಆ ಹಿರಿಯ ನೌಕರನ ಕ್ಷೇಮ, ಆತನ ಕುಟುಂಬ ಮತ್ತು ಆತ ನಡೆಸಿದ ಜೀವನ ಶೈಲಿ ಯಾವುದರ ಬಗ್ಗೆಯೂ ಚಿಂತೆ ಇದ್ದಂತೆ ಕಾಣುತ್ತಿಲ್ಲ. ಮಾರುಕಟ್ಟೆಯಂತೆಯೇ ಮನುಷ್ಯ ಮತ್ತು ಆತನ ಜೀವನಶೈಲಿ ಕೂಡ ದರಪಟ್ಟಿಯಂತೆಯೇ ಕಾಲಾನುಕಾಲಕ್ಕೆ ಬದಲಾಗುತ್ತಿರುತ್ತದೆ. ಅವರ ಆದ್ಯತೆಗಳೇನಿದ್ದರೂ ಕಂಪನಿಯ ಹಿತಾಸಕ್ತಿ. ಆ ಹಿರಿಯ ನೌಕರ ಕೂಡ ಬಂದ ಹೊಸದರಲ್ಲಿ ಈ ತರುಣ ನೌಕರನಂತೆಯೇ ಇದ್ದ. ಕಾಲಕ್ರಮೇಣ ಈ ತರುಣ ನೌಕರ ಕೂಡ ಆ ಹಿರಿಯ ನೌಕರನ ಸ್ಥಿತಿಗೆ ಸರಿದು ಹೋಗುವ ಕಾಲ ಬಂದೇ ಬರುತ್ತದೆ. ಆದರೆ ವ್ಯಾಪಾರಿ ಮನೋವೃತ್ತಿಯ ಕಂಪನಿ ಮನಸ್ಥಿತಿಗಳ ಮುಂದೆ ಅತೀ ದೊಡ್ಡ ಮಾನವ ಸಂಪನ್ಮೂಲ ಕೌಶಲ್ಯಾಧಾರಿತ ಪರಿಣತಿಯೊಂದಿಗೆ ಪರೇಡ್ ಮಾಡುತ್ತಿದೆ. ಕಣ್ಣಿಗೆ ಕಾಣದ ಆರ್ಥಿಕ ಹೊಡೆತವೊಂದು ಪರಿಣತಿ ಮತ್ತು ಅಪ್‌ಡೇಷನ್ನಿನ ಹೆಸರಿನಲ್ಲಿ ಆಡವಾಡುತ್ತಿದೆ. ಅಷ್ಟಕ್ಕೂ ಸರಕಾರಿ ನೌಕರನ ನಿವೃತ್ತಿಯ ವಯಸ್ಸು ಅರವತ್ತಾದರೆ ಬಹುರಾಷ್ಟ್ರೀಯ ಕಂಪನಿಗಳ ಸ್ವಾಮ್ಯದಲ್ಲಿ ಮೂವತ್ತರ ಆಸುಪಾಸಿಗೇನೆ ಕಣ್ಣು, ಬೆನ್ನು, ಮನಸ್ಸು, ವಿಶ್ರಾಂತಿ ಕೇಳುತ್ತದೆ. ಚಲನಶೀಲತೆ ಬೇಕೆಂದರೆ ಅಪ್‌ಡೇಷನ್ ಕೇಳುತ್ತದೆ. ಮನುಷ್ಯನ ದೇಹ ಕೂಡ ಮೆಷಿನ್ ಟೂಲ್ಸ್‌ನಂತೆ ನವೀಕೃತಗೊಂಡು ಅಲಂಕೃತಗೊಂಡು ಆಸೀನವಾಗಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ.

ತಾಂತ್ರಿಕ ಶಿಕ್ಷಣದ ರೀತಿರಿವಾಜುಗಳು ವಾಯುವೇಗದಲ್ಲಿ ಚಲಿಸುತ್ತಿವೆ. ಆ ಚಲಿಸುವ ಮೋಡಗಳ ಮೇಲೆ ಸವಾರಿ ಮಾಡಲು ಪ್ರತಿದಿನವೂ ಹೊಸಹುರುಪಿನಲ್ಲಿ ಅಣಿಯಾಗಬೇಕು. ಸರಕಾರಿ ಸ್ವಾಮ್ಯದ ಅಧಿಕಾರವಲಯವೂ ಪ್ರಸಕ್ತ ದಿನಮಾನಗಳಲ್ಲಿ ತಾಂತ್ರಿಕ ಚಲನೆಯೊಂದಿಗೆ ಸಜ್ಜಾಗಿ ಸೇವೆಗೆ ನಿಂತಿದೆ. ಆನ್‌ಲೈನ್ ಶಿಕ್ಷಣ, ಆನ್‌ಲೈನ್ ಸೇವೆ, ಆನ್‌ಲೈನ್ ಪಾಠ, ಆನ್‌ಲೈನ್ ಪರೀಕ್ಷೆ, ಆನ್‌ಲೈನ್ ಮೀಟಿಂಗು ಎಲ್ಲವೂ ಅಸ್ತಿತ್ವಕ್ಕೆ ಬಂದ ಈ ಹೊತ್ತಿನಲ್ಲಿ ಕೌಶಲಾಧಾರಿತ ವೃತ್ತಿಪರಿಣತಿಯ ಯುವಕರೊಂದಿಗೆ ಹೆಜ್ಜೆ ಹಾಕಲು ಕಲಿಯಬೇಕು. ನಮ್ಮ ಕಾಲು ನಮ್ಮದೇ ಹಾಸಿಗೆಯಿಂದ ಹೊರಚಾಚಬೇಕಾದ ಕಾಲ ಬಂದಿದೆ. ಕಾಲು ಮಡಚಿಕೊಂಡು ಮಲಗಬೇಕು ಇಲ್ಲ ಹಾಸಿಗೆ ಇದ್ದಷ್ಟು ಕಾಲು ಚಾಚಬೇಕು. ಅಪ್‌ಡೇಟ್ ಆಗಲೇಬೇಕಾದ ಈ ಅನಿವಾರ್ಯತೆಯ ಆಲೋಚನೆಗಳ ಬಗೆಗೆ ಬರೆಯಲು ಕುಳ್ಳಿರಿಸಿದ ಪ್ರೇರಣೆಯಾದರೂ ಏನು ಗೊತ್ತ?

ಈ ಹಿಂದಿನ ಕೊರೊನಾ ಕಾಲದಲ್ಲಿ ನನ್ನ ಪರಿಚಯದವರ ಮಗನೊಬ್ಬ ದುಬೈನಲ್ಲಿ ಒಳ್ಳೆಯ ಕೆಲಸದಲ್ಲಿದ್ದ. ಸಂಸಾರ ಮೈಸೂರಿನಲ್ಲಿತ್ತು. ಕೊರೊನಾ ಕಾರಣಕ್ಕೆ ಹುಡುಗ ದುಬೈ ಬಿಟ್ಟು ಊರಿಗೆ ಬಂದ. ಇಲ್ಲಿ ಆತನಿಗೆ ಕಡಿಮೆ ಸಂಬಳದ ಕೆಲಸ ಹಿಡಿಸಲಿಲ್ಲ. ಊರಲ್ಲಿ ಜಮೀನಿತ್ತು. ಆಧುನಿಕ ಕೃಷಿ ಮಾಡಿ ಬದುಕುವ ಯೋಜನೆ ಹಾಕಿಕೊಂಡ. ಹೆಂಡತಿ ಒಪ್ಪಲಿಲ್ಲ. ಐಷಾರಾಮಿ ಬದುಕಿಗೆ ಒಗ್ಗಿಹೋಗಿದ್ದ ಮನಸ್ಸು ಮತ್ತೆ ಅದೇ ಹಳ್ಳಿ, ಅದೇ ಮಣ್ಣು ಅದೇ ಕೃಷಿ ಚಟುವಟಿಕೆಗಳನ್ನು ಒಲ್ಲೆ ಎನ್ನುತ್ತಿತ್ತು. ಹುಡುಗ ಕಾರ್ಪೊರೇಟ್ ವಲಯ ಬಿಟ್ಟು ಅಭಿಮಾನದಿಂದ ಮಣ್ಣಿನೆಡೆಗೆ ಹೊರಟಿದ್ದ. ಹೇಗಾದರೂ ಮಾಡಿ ಆತನ ನಿರ್ಧಾರ ಬದಲಿಸಲೇಬೇಕೆಂದು ಹಠ ತೊಟ್ಟ ಆತನ ಪತ್ನಿ ಗಂಡನನ್ನು ಹೆದರಿಸುವ ಸಲುವಾಗಿ ಇಲಿ ಪಾಷಾಣ ತೆಗೆದುಕೊಂಡಂತೆ ಮಾಡಿದ್ದಳು. ದುರದೃಷ್ಟವೆಂದರೆ ತೆಗೆದುಕೊಳ್ಳುವಾಗ ತೆಗೆದುಕೊಳ್ಳುವ ಡೋಸೇಜು ಆಕೆಗೆ ಗೊತ್ತಾಗಿಲ್ಲ.

ಡೋಸೇಜು ಜಾಸ್ತಿಯಾಗಿ ಸಾವು ಬದುಕಿನ ಜೊತೆ ಹೋರಾಡಿ, ಕಡೆಗೆ ನನ್ನನ್ನು ಬದುಕಿಸಿ ಎಂದು ಅಲವತ್ತುಕೊಂಡಿದ್ದಳು, ನೊಂದಿದ್ದಳು, ಚೀರಿದ್ದಳು. ಕಡೆಗೆ ಚಿಕಿತ್ಸೆ ಫಲಕಾರಿಯಾಗದೆ ತಾನೇ ಮಣ್ಣಿನ ಮಾರ್ಗವಾಗಿ ನಡೆದು ಹೋದಳು.

ಹೀಗೆ ಮನುಷ್ಯನ ನಿತ್ಯದ ಚಟುವಟಿಕೆಗಳು ವಿಸ್ತರಣೆಯ ಮಾರ್ಗದಲ್ಲಿ ಚಲಿಸುತ್ತವೆ. ಅಭಿವೃದ್ಧಿ ಅದರ ಮಂತ್ರ. ಇಂಥ ಹೊತ್ತಿನಲ್ಲಿ ಹಠಕ್ಕೆ ಬಿದ್ದರೆ ಹೇಗೆ? ಮನಸ್ಸು ಹದವರಿತು ನಡೆಯಬೇಕು. ಇಲ್ಲವಾದರೆ ಸಮಯ ತನ್ನ ಆಟ ತೋರಿಸುತ್ತದೆ. ಮನಸ್ಸು ವರ್ತಮಾನದಲ್ಲಿ ವರ್ತಿಸಿದರೆ ಪ್ರತಿ ಉತ್ಸಾಹ ನೂರ್ಮಡಿಸುತ್ತದೆ. ಚಲನಶೀಲತೆ ಜೊತೆಗೂಡುತ್ತದೆ. ಸೋಲೆಂಬುದು ಮುಕ್ಕಾಲು ಹಾದಿ ನಮ್ಮಿಂದ ಪೇರಿ ಕಿತ್ತಿರುತ್ತದೆ. ದೇಹವನ್ನು ಯಂತ್ರದಂತೆ ದುಡಿಸಬಹುದು. ಆದರೆ ಮನಸ್ಸು ಯಂತ್ರದಂತೆ ನಡೆಯಲಾರದು. ಮನಸ್ಸಿಗೆ ಅದರದ್ದೇ ಆಯಾಸವಿದೆ. ದೇಹವನ್ನೇ ಸೂಪರ್‌ಸ್ಪೀಡ್ ಮಾಡುವಷ್ಟು ಅದು ಟ್ಯೂನ್ ಆಗಿರುತ್ತದೆ. ಅದಕ್ಕಾಗಿ ಮನಸ್ಸನ್ನು ವೃತ್ತಿಗೆ– ಪ್ರವೃತ್ತಿಗೆ ಹೊಂದಿಸುವಂತೆ ಅಣಿ ಮಾಡಬೇಕು. ಆಗ ನೋಡಿ ಸೋಲು ಮತ್ತು ಸಾವುಗಳು ನಮ್ಮ ನಮ್ಮ ವೃತ್ತಿ–ಪ್ರವೃತ್ತಿಗಳ ಏಳುಬೀಳಿನ ಬೆಂಕಿಯಲ್ಲಿ ಮೈಕಾಯಿಸಿಕೊಂಡು ಬೆಚ್ಚಗಾಗಲು ಬರುವುದಿಲ್ಲ. ಡಿ.ವಿ.ಜಿ.ಯವರ ಕಗ್ಗವೊಂದಿದೆ.

ಹೊಸತನವೆ ಬಾಳು ಹಳಸಿಕೆಯೆಲ್ಲ ಸಾವುಬಿಡು
ರಸವು ನವನವತೆಯಿಂದನುದಿನವು ಹೊಮ್ಮಿ
ಹಸನೊಂದು ನಡೆಯಲ್ಲಿ ನುಡಿಯಲ್ಲಿ ನೋಟದಲ್ಲಿ
ಒಸರುತಿರೆ ಬಾಳ್ಚೆಲುವೋ ಮಂಕುತಿಮ್ಮ!

ಹೊಸತನದ ಪ್ರತಿಯೊಂದಕ್ಕೂ ಅಪ್‌ಡೇಟೆಡ್ ಆಗುವ ಅನಿವಾರ್ಯತೆ ಬಂದೊದಗಿದೆ. ಅದಕ್ಕೆ ವಯಸ್ಸಿನ ಅಂತರವಿಲ್ಲ. ಆಸಕ್ತಿ, ಅನಾಸಕ್ತಿಗಳ ಗೊಂದಲವಿಲ್ಲ. ಪ್ರತಿದಿನದ ಹೊಂದಾಣಿಕೆಗೆ ಕ್ರಿಯಾಶೀಲವಾಗಿ ತೊಡಗಿಸಿಕೊಳ್ಳುವ ಉತ್ಸಾಹಕ್ಕೆ ಮನಸ್ಸನ್ನು ಅಣಿ ಮಾಡಿ ಹೊಸಹೆಜ್ಜೆ ಇಡಲು ಮನಸ್ಸಿಗೆ ಕನ್ವಿನ್ಸ್ ಮಾಡಬೇಕು. ಮನಸ್ಸು ಮೆಲುದನಿಯ ಮಾತು ಕೇಳಿದಷ್ಟು ಗದರಿಕೆಯ ಮಾತನ್ನು ಕೇಳುವುದಿಲ್ಲ. ಪ್ರತೀ ದಿನ ಪ್ರತೀ ಕ್ಷಣ ಮತ್ತಿನ್ನೇನು ಹೊಸ ಅಪ್‌ಡೇಟ್‌ಗಳು ಬರುತ್ತವೋ ಗೊತ್ತಿಲ್ಲ. ಕೌಶಲ್ಯ, ವೃತ್ತಿಪರತೆ, ಹಣಕಾಸು, ಆಯ–ವ್ಯಯಗಳನ್ನೂ ಕೌಶಲ್ಯಾಧಾರಿತ ಪರಿಣತಿಯಂತೆಯೇ ನಮ್ಮ ಜೀವನಕ್ಕೂ ಡಿಸೈನ್ ಮಾಡಿಕೊಂಡು ಒಪ್ಪಿಸಿಕೊಳ್ಳಬೇಕು. ಏನಂತೀರಿ?

ದೇಸಿ ಬೀಜೋತ್ಪಾದನೆ ಮಾಡಿ ಕೃಷಿ ಆದಾಯ ಹೆಚ್ಚಿಸಿಕೊಳ್ಳಿ

ರೈತರಿಗೆ ಜಿಐಜಡ್ ಜರ್ಮನಿಯ ಹಿರಿಯ ಸಲಹೆಗಾರರಾದ ನಮ್ರತಾ ಶರ್ಮ ಸಲಹೆ



'ದೇಸಿ ಸೀಡ್ಸ್ ಪ್ರೊಡ್ಯೂಸರ ಕಂಪನಿ'ಯ ಸರ್ವ ಸದಸ್ಯರ ವಾರ್ಷಿಕ ಸಭೆಯನ್ನು ಜಿಐಜಡ್ ಜರ್ಮನಿಯ ಹಿರಿಯ ಸಲಹೆಗಾರರಾದ ನಮ್ರತಾ ಶರ್ಮ ಉದ್ಘಾಟಿಸಿದರು.

ಮೈಸೂರು,ಸೆ.2–ನೈಸರ್ಗಿಕ ಕೃಷಿಯನ್ನು ಅಳವಡಿಸಿಕೊಳ್ಳುತ್ತಿರುವ ರೈತರ ಸಂಖ್ಯೆ ದಿನೇ–ದಿನೆ ಹೆಚ್ಚುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೈಸರ್ಗಿಕ ಕೃಷಿ ಉತ್ತೇಜನಕ್ಕೆ ಅನೇಕ ಯೋಜನೆಗಳನ್ನು ರೂಪಿಸಿವೆ. ನೈಸರ್ಗಿಕ ಮತ್ತು ಸಾವಯವ ಕೃಷಿಗೆ ಪೂರಕವಾದ ದೇಸಿ ಬೀಜಗಳಿಗೆ ಬಹಳಷ್ಟು ಬೇಡಿಕೆ ಇದೆ. ರೈತರು ದೇಸಿ ಬೀಜೋತ್ಪಾದನೆ ಮಾಡುವ ಮೂಲಕ ತಮ್ಮ ಕೃಷಿ ಆದಾಯವನ್ನು ಹೆಚ್ಚಿಸಿಕೊಳ್ಳಬಹುದಾಗಿದೆ ಎಂದು ಜಿಐಜಡ್ ಜರ್ಮನಿಯ ಹಿರಿಯ ಸಲಹೆಗಾರರಾದ ನಮ್ರತಾ ಶರ್ಮ ಅಭಿಪ್ರಾಯಪಟ್ಟರು.

ದೇಶದ ಮೊದಲ ರೈತರ ಬೀಜ ಕಂಪನಿ ಎಂಬ ಹೆಗ್ಗಳಿಕೆಯ ದೇಸಿ ಸೀಡ್ಸ್ ಪ್ರೊಡ್ಯೂಸರ ಕಂಪನಿಯ ಹತ್ತನೆಯ ವರ್ಷದ ಸರ್ವ ಸದಸ್ಯರ ವಾರ್ಷಿಕ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಹಕರು ವಿಷಮುಕ್ತವಾಗಿ ಬೆಳೆದ ನಾಟಿ ಹಣ್ಣು, ತರಕಾರಿ ಮತ್ತು ಧಾನ್ಯಗಳ ಬಳಕೆಗೆ ಆಸಕ್ತಿ ತೋರುತ್ತಿದ್ದಾರೆ. ಗುಣಮಟ್ಟದ ಬಿತ್ತನೆ ಬೀಜಗಳ ಕೊರತೆ ಇರುವುದರಿಂದ, ರೈತ ಗುಂಪು ಮತ್ತು ಮಹಿಳಾ ಸಂಘಗಳು ಸಮುದಾಯ ಬೀಜ ಬ್ಯಾಂಕ್‌ಗಳನ್ನು ಆರಂಭಿಸಿ, ದೇಸಿ ಬೀಜೋತ್ಪಾದನೆಗೆ ಉತ್ತೇಜನ ನೀಡಬೇಕು ಎಂದರು.

ಮೈಸೂರು, ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳ ಸಮಾನಮನಸ್ಕ ಬೀಜ ಸಂರಕ್ಷಕರು ಜೊತೆ ಸೇರಿ ಆರಂಭಿಸಿದ ರೈತ ಕಂಪನಿ, ರಾಜ್ಯದ ಇತರ ಜಿಲ್ಲೆಗಳಿಗೂ ವಿಸ್ತರಿಸಿದೆ. 23–24ರ ಸಾಲಿನಲ್ಲಿ 1 ಕೋಟಿ 20 ಲಕ್ಷ ರೂಪಾಯಿಗಳ ವಹಿವಾಟು ಮಾಡಿರುವ ಕಂಪನಿ 4.88 ಲಕ್ಷ ಲಾಭ ಗಳಿಸಿದೆ. ತನ್ನ ಲಾಭಾಂಶವನ್ನು ದೇಸಿ ಬೀಜ ಪೂರೈಸಿದ ಷೇರುದಾರ ರೈತರಿಗೆ ಈ ಸಂದರ್ಭದಲ್ಲಿ ಹಂಚಲಾಯಿತು.

7.5 ಲಕ್ಷ ಮೌಲ್ಯದ ಸಾವಯವ ಬೀಜಗಳನ್ನು ಉತ್ಪಾದಿಸಿದ ಬೆಳಗಾವಿಯ ಶಂಕರ ಲಂಗಟಿ ಮತ್ತು ಅವರ ತಂಡ ರೂ. 37,599 ಬೋನಸ್ ಪಡೆದರು. ಪಿರಿಯಾಪಟ್ಟಣದ ಸಹಜ ಸಾವಯವ ಕೃಷಿಕರ ಬಳಗವು 3.51 ಲಕ್ಷ ಮೌಲ್ಯದ ಬೀಜ ಪೂರೈಸಿ, ರೂ.17,790 ಬೋನಸ್ ಪಡೆದರು. ಕೊಳ್ಳೇಗಾಲದ ಅರೇಪಾಳ್ಯದ ಲೋಕೇಶ್ 2.84 ಲಕ್ಷ ಮೌಲ್ಯದ ಬೀಜ ಪೂರೈಸಿ ರೂ. 14,207 ಬೋನಸ್ ಪಡೆದರು. ಒಟ್ಟು 23 ರೈತರಿಗೆ ಬೋನಸ್ ವಿತರಿಸಲಾಯಿತು.

ಸಹಜ ಸಮೃದ್ಧ ಸಂಸ್ಥೆಯ ಅಧ್ಯಕ್ಷ ಎನ್.ಆರ್.ಶೆಟ್ಟಿ, ರೈತರಿಗೆ ಚೆಕ್‌ಗಳನ್ನು ವಿತರಿಸಿ ಮಾತನಾಡಿ, ಖಾಸಗಿ ಬೀಜ ಕಂಪನಿಗಳು ದುಬಾರಿ ಬೆಲೆಗೆ ಬೀಜಗಳನ್ನು ಮಾರುತ್ತಿವೆ. ಮಾರುಕಟ್ಟೆ ಕುಸಿತ ಅಥವಾ ಹವಾಮಾನ ವೈಪರೀತ್ಯದಿಂದ ಬೆಳೆ ನಾಶವಾದರೆ ರೈತರ ಗೋಳು ಕೇಳುವವರಿಲ್ಲ. ಸ್ಥಳೀಯ ವಾತಾವರಣ ಮತ್ತು ಮಣ್ಣಿಗೆ ಸೂಕ್ತವಾಗಬಲ್ಲ ದೇಸೀಯ ತಳಿಗಳ ಬೀಜಗಳನ್ನು ರೈತರು ಬಳಸಬೇಕು. ಈ ನಿಟ್ಟಿನಲ್ಲಿ ಸಹಜ ಸೀಡ್ಸ್ ಗುಣಮಟ್ಟದ ದೇಸಿ ಬೀಜಗಳನ್ನು ಕೈಗೆಟುಕುವ ದರದಲ್ಲಿ ಮಾರಾಟ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಮುಖ್ಯ ಅತಿಥಿಗಳಾಗಿದ್ದ ಸಹಜ ಆರ್ಗಾನಿಕ್ಸ್‌ನ ಕಾರ್ಯನಿರ್ವಹಣಾಧಿಕಾರಿ ಸೋಮೇಶ್ ಮಾತನಾಡಿ, ದೇಸಿ ಬೀಜಗಳನ್ನು ಉಳಿಸಿ ಬೆಳೆಸುವ ಮಹತ್ವದ ಕಾರ್ಯವನ್ನು ರೈತ ಮಹಿಳೆಯರು ಮಾಡುತ್ತಿದ್ದಾರೆ. ಬೀಜ ಸ್ವಾವಲಂಬನೆಯನ್ನು ಸಾಕಾರಗೊಳಿಸುತ್ತಿರುವ ಇವರ ಕೊಡುಗೆ ಅಮೂಲ್ಯ ಎಂದರು. ದೇಸಿ ಸೀಡ್ಸ್ ಪ್ರೊಡ್ಯೂಸರ ಕಂಪನಿ ನಿರ್ದೇಶಕ ನರಸಿಂಹ ರೆಡ್ಡಿ, ಬೋರೇಗೌಡ, ಶ್ರೀನಿವಾಸ್, ಶ್ರೇಣಿಕ್ ರಾಜ್, ಜಿ.ಕೃಷ್ಣಪ್ರಸಾದ್ ಸಹಜ ಸೀಡ್ಸ್‌ನ ಕಾರ್ಯನಿರ್ವಹಣಾಧಿಕಾರಿ ರವಿ ಮಾಗೆಲ್, ಮಂಜು, ಸೈಯದ್ ಜಮಾಲ್, ಶಿವರುದ್ರ, ಅರ್ಪಿತಾ, ಮನು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಕಾಮಗಾರಿಗೆ ಗುದ್ದಲಿ ಪೂಜೆ...



ಮೈಸೂರಿನ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ 51ನೇ ವಾರ್ಡ್ ವ್ಯಾಪ್ತಿಯ ರಾಚಯ್ಯ ರಸ್ತೆಯಿಂದ ಸಯ್ಯಾಜಿರಾವ್ ರಸ್ತೆ, ರಾಚಯ್ಯ ವೃತ್ತದಿಂದ ರುದ್ರಮೂಗ ವೃತ್ತದವರೆಗೆ ಪುರಂದರ ರಸ್ತೆ ದುರಸ್ತಿ ಕಾಮಗಾರಿ ಹಾಗೂ ವಲಯ ಕಚೇರಿ 1ರ ವ್ಯಾಪ್ತಿ ಅರಮನೆ ಸುತ್ತಲೂ ಪಾದಚಾರಿ ದುರಸ್ತಿ ಲೈನ್ ಪೇಂಟಿಂಗ್ ಕಾಮಗಾರಿಗೆ ಮೈಸೂರು ಅರಮನೆಯ ಕೋಟೆ ಮಾರಮ್ಮ ದೇವಸ್ಥಾನದ ಮುಂಭಾಗ ಶಾಸಕ ಟಿ.ಎಸ್.ಶ್ರೀವತ್ಸ ಗುದ್ದಲಿ ಪೂಜೆ ನೆರವೇರಿಸಿದರು. ಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್, ಪ್ರದೀಪ್‌ಕುಮಾರ್, ಕಿಶೋರ್, ಬಾಲಕೃಷ್ಣ, ಸಂತೋಷ್ (ಶಂಭು), ಹೇಮಂತ್, ಟಿ.ಎಸ್.ಅರುಣ್, ಕಾವೇರಿ, ಶಿವರಾಜ್ ಉಪಸ್ಥಿತರಿದ್ದರು.

50:50 ಅನುಪಾತದ ನಿವೇಶನ ಹಂಚಿಕೆ ಹಗರಣದ ತನಿಖೆ ಹಿನ್ನೆಲೆ

ಮುಡಾದಲ್ಲಿ ಸಾರ್ವಜನಿಕರ ಸೇವೆಗಳು ಸ್ಥಗಿತ

ಮೈಸೂರು, ಸೆ. 2(ಆರ್‌ಕೆ)– ನಿವೇಶನ ಹಂಚಿಕೆ ಹಗರಣ ಕುರಿತು ತನಿಖೆ ಪ್ರಗತಿಯಲ್ಲಿರುವುದರಿಂದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಕಚೇರಿಯಲ್ಲಿ ದೈನಂದಿನ ಕೆಲಸಗಳು ಸ್ಥಗಿತವಾಗಿ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದೆ.

ಶೇ.50:50ರ ಅನುಪಾತ, ಪ್ರೋತ್ಸಾಹದಾಯಕ ಹಾಗೂ ಬದಲಿ ನಿವೇಶನಗಳನ್ನು ನಿಯಮ ಗಾಳಿಗೆ ತೂರಿ ಅಕ್ರಮವಾಗಿ ಮಂಜೂರು ಮಾಡಲಾಗುತ್ತಿದೆ ಎಂಬ ವಿಷಯ ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ತರಾತುರಿಯಲ್ಲಿ ಮೈಸೂರಿಗೆ ಬಂದು ಮುಡಾ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬೆಂಗಳೂರಿಗೆ ಹಿಂದಿರುಗುತ್ತಿದ್ದಂತೆಯೇ ಐಎಎಸ್ ಅಧಿಕಾರಿ ವೆಂಕಟಾಚಲಪತಿ ನೇತೃತ್ವದ ಅಧಿಕಾರಿಗಳನ್ನೊಳಗೊಂಡ ತನಿಖಾ ಸಮಿತಿ ರಚಿಸುತ್ತಿದ್ದಂತೆಯೇ ತನಿಖೆ ಪೂರ್ಣಗೊಂಡು ಸರ್ಕಾರಕ್ಕೆ ವರದಿ ನೀಡುವವರೆಗೆ ಕೆಲಸ ಕಾರ್ಯ, ಸಭೆ, ತೀರ್ಮಾನಗಳನ್ನು ಸ್ಥಗಿತಗೊಳಿಸುವಂತೆ ಆದೇಶ ಹೊರಡಿಸಿದ್ದರು.



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿ.

ಕಳೆದ ಎರಡು ತಿಂಗಳಿಂದ ಸ್ಥಗಿತಗೊಂಡಿರುವ ಮುಡಾ ಕಚೇರಿ ಕೆಲಸಗಳನ್ನು ಆರಂಭಿಸಬಹುದು (ಮುಡಾ ಸಭೆಗಳನ್ನು ಹೊರತುಪಡಿಸಿ) ಎಂದು ಸರ್ಕಾರ ಗ್ರೀನ್ ಸಿಗ್ನಲ್ ನೀಡಿ ತಿಂಗಳಾದರೂ ಅಧಿಕಾರಿಗಳು ಕ್ರಮ ವಹಿಸಲು ಧೈರ್ಯ ಮಾಡುತ್ತಿಲ್ಲ.

ಪರಿಣಾಮ, ನಿವೇಶನಗಳ ಖಾತೆ ನೋಂದಣಿ, ವರ್ಗಾವಣೆ, ನಕ್ಷೆ ಅನುಮೋದನೆ, ಭೂ ಪರಿವರ್ತನೆಗೆ ಅಭಿಪ್ರಾಯ ನೀಡುವುದು, ದೃಢೀಕೃತ ದಾಖಲೆ ಪ್ರತಿ ನೀಡುವುದು ಸೇರಿದಂತೆ ಇನ್ನಿತರ ದೈನಂದಿನ ಕೆಲಸ ಕಾರ್ಯಗಳು ಕುಂಠಿತವಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದೆ. ಅದರಿಂದಾಗಿ ಮುಡಾ ಕಚೇರಿಗೆ ಜನರೇ ಬರುತ್ತಿಲ್ಲ. ಅಧಿಕಾರಿಗಳು, ಸಿಬ್ಬಂದಿ ಮಾತ್ರ ನಿತ್ಯ ಬಂದು ತನಿಖಾ ಆಯೋಗ ಕೇಳುವ ದಾಖಲೆಗಳನ್ನು ಹುಡುಕಿ, ಜೆರಾಕ್ಸ್ ಮಾಡಿ ದೃಢೀಕೃತ ಪ್ರತಿಗಳನ್ನು ಪ್ರತಿದಿನ ಬೆಂಗಳೂರಿಗೆ ಕಳುಹಿಸುತ್ತಿದ್ದಾರೆಯೇ ಹೊರತು, ಸಾರ್ವಜನಿಕರ ಅಹವಾಲುಗಳತ್ತ ಗಮನಹರಿಸುತ್ತಿಲ್ಲ.

ಕೆಆರ್‌ನಗರದಲ್ಲಿ ಆರ್‌ಪಿಎಫ್ ತರಬೇತಿ ಕೇಂದ್ರಕ್ಕೆ ಹೆಚ್‌ಡಿಕೆ ಮನವಿ

ಮೈಸೂರು, ಸೆ.2(ಆರ್‌ಕೆ)–ಮೈಸೂರು ಜಿಲ್ಲೆ ಕೆ.ಆರ್.ನಗರದಲ್ಲಿ ರೈಲ್ವೆ ಪ್ರೊಟೆಕ್ಷನ್ ಫೋರ್ಸ್ (ಆರ್‌ಪಿಎಫ್) ತರಬೇತಿ ಕೇಂದ್ರ ಸ್ಥಾಪಿಸುವಂತೆ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಮನವಿ ಮಾಡಿದ್ದಾರೆ. ಈ ಕುರಿತು ಮಾಜಿ ಸಚಿವ ಸಾ.ರಾ.ಮಹೇಶ್ ಸಲ್ಲಿಸಿದ ಮನವಿಯನ್ನಯ ಕೇಂದ್ರ ರೈಲ್ವೇ ಸಚಿವರಿಗೆ ಪತ್ರ ಬರೆದಿರುವ ಕುಮಾರಸ್ವಾಮಿ, ಈ ಹಿಂದೆ ರೈಲ್ವೇ ಇಲಾಖೆಯ ಸ್ಥಳ ಪರಿಶೀಲಿಸಿ ವರದಿ ನೀಡಿದ್ದು, ತರಬೇತಿ ಕೇಂದ್ರ ಸ್ಥಾಪನೆಯಿಂದ ಮೈಸೂರು ಮತ್ತು ಮಂಡ್ಯ ಜಿಲ್ಲೆಗಳ ಅಭಿವೃದ್ಧಿಗೆ ಸಹಕಾರಿಯಾಗುವುದಲ್ಲದೆ, ಉದ್ಯೋಗಾವಕಾಶಗಳು ಹೆಚ್ಚಾಗುತ್ತವೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.



ಖ್ಯಾತ ಉದ್ಯಮಿ ಅಶೋಕ್ ಅವರಿಗೆ ಹುಟ್ಟುಹಬ್ಬದ ಶುಭಾಶಯ...





ಮೈಸೂರಿನ ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದ ಮಾಲೀಕರು, ವೈಶಾಕ್ ಗ್ರೂಪ್ ಆಫ್ ಹೋಟೆಲ್ಸ್‌ನ ಮಾಲೀಕರೂ ಆದ ಖ್ಯಾತ ಉದ್ಯಮಿ ಅಶೋಕ್ ಅವರಿಗೆ ಕನ್ನೇಗೌಡನಕೊಪ್ಪಲಿನ ಯುವಕ ಮಿತ್ರರಿಂದ ಹುಟ್ಟುಹಬ್ಬದ ಶುಭಾಶಯ ಕೋರಲಾಯಿತು. ಚಿತ್ರದಲ್ಲಿ ಶ್ರೀಮತಿ ವೀಣಾ ಅಶೋಕ್, ಚಲನಚಿತ್ರ ನಟ ಸೋಮಣ್ಣ, ಮುಖಂಡರಾದ ವಿಕ್ರಾಂತ್ ಪಿ.ದೇವೇಗೌಡ, ಮಲ್ಲೇಗೌಡ, ಪೈಲ್ವಾನ್ ಮಂಜುನಾಥ್, ಕಾಳಬೋರಪ್ಪ, ಗಿರೀಶ್ ಡಿ.ಗೌಡ, ಭೈರವ ಗ್ರೂಪ್ ಮಾದೇವ್, ಮರ್ಚಿ ಮಾದೇವ ಇದ್ದಾರೆ. ಬಲಚಿತ್ರದಲ್ಲಿ ಅಶೋಕ್ ಅವರನ್ನು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಅಭಿನಂದಿಸಿ, ಹುಟ್ಟುಹಬ್ಬದ ಶುಭ ಕೋರಿದರು.

ಪೋಸ್ಟ್ ಮೆಟ್ರಿಕ್ ವಿಕಲಚೇತನ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಮೈಸೂರು,ಸೆ.2–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ 2024–25ನೇ ಸಾಲಿನ ವಿಕಲಚೇತನರ ವಿದ್ಯಾರ್ಥಿವೇತನಕ್ಕೆ ಸ್ಟೇಟ್ ಸ್ಕಾಲರ್ ಶಿಪ್ ಪೋರ್ಟಲ್‌ನಲ್ಲಿ ಎಸ್‌ಎಸ್‌ಎಲ್‌ಸಿ ನಂತರದ ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು https://ssp.postmatric.karnataka.gov.in/ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅಕೌಂಟ್ ಕ್ರಿಯೇಟ್ ಮಾಡಲು https://ssp.postmatric.karnataka.gov.in/CA/ ಹಾಗೂ https://ssp.postmatric.karnataka.gov.in/ssppre/ ವೆಬ್‌ಸೈಟ್ ಮೂಲಕ ಪ್ರಿ ಮೆಟ್ರಿಕ್ ಅಪ್ಲಿಕೇಶನ್ ಸಬ್ಮಿಟ್ ಮಾಡಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯ ವಿಕಲಚೇತನರ ಸಹಾಯವಾಣಿ ಕೇಂದ್ರದ ದೂ.ಸಂಖ್ಯೆ: 0821–2490 333 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಸ್ತೆಗೆ ಚಾಚಿರುವ ಮರಗಳ ರೆಂಬೆ ಕೊಂಬೆಗಳ ತೆರವು

ಕೆ.ಆರ್.ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಭರವಸೆ



ಮೈಸೂರಿನ ಸರಸ್ವತಿಪುರಂ ಹಾಗೂ ಕಾಮಾಕ್ಷಿ ಆಸ್ಪತ್ರೆ ಸುತ್ತಮುತ್ತ ಶಾಸಕ ಟಿ.ಎಸ್.ಶ್ರೀವತ್ಸ ಪಾದಯಾತ್ರೆ ನಡೆಸಿದರು.

ಮೈಸೂರು, ಸೆ.2(ಬಿಎಲ್‌ಯು)– ಮೈಸೂರಿನ ಸರಸ್ವತಿಪುರಂ ಹಾಗೂ ಕಾಮಾಕ್ಷಿ ಆಸ್ಪತ್ರೆ ಸುತ್ತಮುತ್ತ ರಸ್ತೆಗೆ ಚಾಚಿರುವ ಮರಗಳ ರೆಂಬೆ ಕೊಂಬೆಗಳನ್ನು ತೆರವುಗೊಳಿಸುವ ಕಾರ್ಯವನ್ನು ನಾಳೆ (ಸೆಪ್ಟೆಂಬರ್ 3) ಯಿಂದಲೇ ಆರಂಭಿಸಲಾಗುವುದು ಎಂದು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಭರವಸೆ ನೀಡಿದರು.


ಇಂದು ಬೆಳಗ್ಗೆ ಮತ್ತು ಸಂಜೆ ಸರಸ್ವತಿಪುರಂ ಹಾಗೂ ಕಾಮಾಕ್ಷಿ ಆಸ್ಪತ್ರೆ ಸುತ್ತಮುತ್ತ ಪಾದಯಾತ್ರೆ ನಡೆಸಿದ ವೇಳೆ ಮರಗಳ ರೆಂಬೆ ಕೊಂಬೆಗಳು ರಸ್ತೆಗೆ ಚಾಚಿಕೊಂಡಿದ್ದು, ಜನರಿಗೆ ತೊಂದರೆಯಾಗಿದೆ ಎಂದು ಜನರು ದೂರು ನೀಡಿದ್ದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಶ್ರೀವತ್ಸ, ನಾಳೆಯಿಂದಲೇ ಮರಗಳ ರೆಂಬೆ ಕೊಂಬೆಗಳನ್ನು ತೆರವು ಮಾಡುವ ಕಾರ್ಯ ಆರಂಭಿಸಲಾಗುವುದು ಎಂದರು. ರಾಜಕಾಲುವೆ ಹಾಗೂ ರಸ್ತೆಗಳ ಸ್ವಚ್ಛತೆಯನ್ನು ಸಮರ್ಪಕವಾಗಿ ಮಾಡುತ್ತಿಲ್ಲ ಎಂದು ಜನರು ದೂರು ನೀಡಿದರು. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಉತ್ತನಹಳ್ಳಿ ದೇವಸ್ಥಾನಕ್ಕೆ ಹೋಗುವ ಭಕ್ತರಿಗೆ ಕಸದ ರಾಶಿ ದರ್ಶನ

ಮೈಸೂರು, ಸೆ. 2(ಆರ್‌ಕೆ)– ಮೈಸೂರಿನ ಉತ್ತನಹಳ್ಳಿ ಶ್ರೀ ತ್ರಿಪುರ ಸುಂದರಿ ಜ್ವಾಲಾಮುಖಿ ಅಮ್ಮನವರ ದೇವರ ದರ್ಶನಕ್ಕೆ ತೆರಳುವ ಮಾರ್ಗದಲ್ಲಿ ಕಸದ ರಾಶಿಯೇ ತುಂಬಿದ್ದು, ಭಕ್ತಾದಿಗಳು ಮೂಗು ಮುಚ್ಚಿಕೊಂಡು ಹೋಗುವಂತಾಗಿದೆ.

ಮೈಸೂರಿನ ನಂಜನಗೂಡು ರಸ್ತೆ ಮಾರ್ಗವಾಗಿ ಉತ್ತನಹಳ್ಳಿ ಹೋಗಲು ಎಡಕ್ಕೆ ತಿರುಗುತ್ತಿದ್ದಂತೆಯೇ ಚಾಮುಂಡಿ ಬೆಟ್ಟದ ತಪ್ಪಲಿನ ರಸ್ತೆಯ ಎಡಭಾಗದಲ್ಲಿ ಜ್ವಾಲಾಮುಖಿ ಅಮ್ಮನವರ ದೇವಸ್ಥಾನಕ್ಕೆ ಹೋಗುವ ರಸ್ತೆಯಲ್ಲಿ ಕಸದ ರಾಶಿಯೇ ಬಿದ್ದಿದೆ. ರಾತ್ರಿ ವೇಳೆ ಸಾರ್ವಜನಿಕರು ಈ ರಸ್ತೆಗೆ ಕಸ ತಂದು ಸುರಿಯುತ್ತಿರುವುದರಿಂದ ಸುಮಾರು ಅರ್ಧ ಕಿ.ಮೀ. ವರೆಗೆ ದುರ್ವಾಸನೆ ಬೀರುತ್ತಿದ್ದು, ಗಾಳಿಗೆ ಕಸ ರಸ್ತೆಗೆ ತೂರಿಕೊಂಡು, ಅಲ್ಲಿ ಪ್ರಯಾಣಿಸುವ ಭಕ್ತರ ಮೇಲೆ ಬೀಳುತ್ತಿದೆ. ನಿತ್ಯ ಸಾವಿರಾರು ಮಂದಿ ಓಡಾಡುವ ದೇವಸ್ಥಾನದ ರಸ್ತೆಯಲ್ಲಿ ಅಧಿಕಾರಿಗಳು, ಪ್ರವಾಸಿಗರು ಓಡಾಡುತ್ತಿದ್ದಾರಾದರೂ ಕಳೆದ ಹಲವು ತಿಂಗಳಿಂದ ಯಾರೂ ಇತ್ತ ಗಮನಹರಿಸಿಲ್ಲ ಎಂದು ಸ್ಥಳೀಯರು ಅಸಮಧಾನ ವ್ಯಕ್ತಪಡಿಸಿದ್ದಾರೆ.





ಉತ್ತನಹಳ್ಳಿ ಶ್ರೀ ತ್ರಿಪುರ ಸುಂದರಿ ಜ್ವಾಲಾಮುಖಿ ಅಮ್ಮನವರ ದರ್ಶನಕ್ಕೆ ತೆರಳುವ ಮಾರ್ಗದಲ್ಲಿ ಕಸದ ರಾಶಿ ಬಿದ್ದಿರುವುದು.

ನಾಳೆ ಚೆಸ್ಕಾಂ ಕಚೇರಿಗೆ ರೈತರ ಮುತ್ತಿಗೆ



ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ನಡೆದ ರೈತ ಮುಖಂಡರ ಪತ್ರಿಕಾಗೋಷ್ಠಿ

ಮೈಸೂರು, ಆ.2(ಬಿಎಲ್‌ಯು)– ರೈತರ ಕೃಷಿ ಪಂಪ್‌ಸೆಟ್‌ಗಳ ಆರ್.ಆರ್. ನಂಬರ್‌ಗೆ ಆಧಾರ್ ಲಿಂಕ್ ಮಾಡಿ ಖಾಸಗೀಕರಣ ಮಾಡಲು ಸರ್ಕಾರ ಹುನ್ನಾರ ನಡೆಸುತ್ತಿರುವುದನ್ನು ವಿರೋಧಿಸಿ ಸೆಪ್ಟೆಂಬರ್ 4ರಂದು ಮೈಸೂರಿನ ಚೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ತಿಳಿಸಿದ್ದಾರೆ.

ನಗರದ ಜಲದರ್ಶಿನಿ ಅತಿಥಿಗೃಹದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಚಾರ ತಿಳಿಸಿದ ಅವರು, ಅಂದು ಬೆಳಗ್ಗೆ 11.30 ಗಂಟೆಗೆ ನಗರದ ಹಿನಕಲ್‌ನಲ್ಲಿರುವ ಚೆಸ್ಕಾಂ ಪ್ರಧಾನ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುವುದು ಎಂದರು.

ರೈತರ ಪಂಪ್‌ಸೆಟ್‌ಗಳಿಗೆ ಟ್ರಾನ್ಸ್‌ಫಾರ್ಮರ್ ಅಳವಡಿಸಿ ವಿದ್ಯುತ್ ಸಂಪರ್ಕ ನೀಡಲು ಈ ಮೊದಲು ರೈತರ ವಂತಿಕೆಯಾಗಿ 17ರಿಂದ 23 ಸಾವಿರ ಪಡೆಯಲಾಗುತ್ತಿತ್ತು. ಆದರೆ ಈಗ ರೈತರೇ ಟ್ರಾನ್ಸ್‌ಫಾರ್ಮರ್ ಅಳವಡಿಸಿಕೊಂಡು ವಿದ್ಯುತ್ ಸಂಪರ್ಕ ಪಡೆಯಬೇಕಿದ್ದು, ಇದರಿಂದ 4 ಲಕ್ಷ ರೂ. ಖರ್ಚಾಗಲಿದೆ ಎಂದರು.

ಅವೈಜ್ಞಾನಿಕವಾದ ಈ ನಿಯಮ ಕೈಬಿಡುವುದು ಸೇರಿದಂತೆ ಹಲವು ಬೇಡಿಕೆಗೆ ಆಗ್ರಹಿಸಿ ಅಂದು ಪ್ರತಿಭಟನೆ ನಡೆಸಲಾಗುವುದು ಎಂದು ಭಾಗ್ಯರಾಜ್ ತಿಳಿಸಿದರು.

ಸಂಘದ ರಾಜ್ಯ ಉಪಾಧ್ಯಕ್ಷ ಅಂಕನಹಳ್ಳಿ ತಿಮ್ಮಪ್ಪ, ಕೆರೆಹುಂಡಿ ರಾಜಣ್ಣ, ನಗರ ಅಧ್ಯಕ್ಷ ದೇವೇಂದ್ರ ಕುಮಾರ್, ಗೌರವಾಧ್ಯಕ್ಷ ಶಿವರುದ್ರಪ್ಪ, ರೈತ ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಪೂಜಾ ಮಹೋತ್ಸವ...



ಮೈಸೂರಿನ ಹುಲ್ಲಿನ ಬೀದಿಯ ಶ್ರೀ ಗೋಪಾಲಕೃಷ್ಣ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಪೂಜಾ ಮಹೋತ್ಸವದಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಪಾಲ್ಗೊಂಡಿದ್ದರು. ದೇವಸ್ಥಾನ ಸಮಿತಿ ಪದಾಧಿಕಾರಿಗಳಾದ ರಾಜು, ನಾಗೇಂದ್ರ, ಸ್ವಾಮಿ, ಮಂಜು, ಅಭಿಶೇಕ್ ಶಿವಣ್ಣ ಮತ್ತಿತರರು ಉಪಸ್ಥಿತರಿದ್ದರು.

ಪಾಲಿ ಹೌಸ್ ಅನುಷ್ಠಾನಗೊಳಿಸಲು ಅರ್ಜಿ ಆಹ್ವಾನ

ಮೈಸೂರು,ಸೆ.2– ವಿಶೇಷ ಕೇಂದ್ರಿಯ ನೆರವಿನಡಿ ಪರಿಶಿಷ್ಟ ಪಂಗಡದ ರೈತರ ಅಭಿವೃದ್ಧಿಗಾಗಿ ಪಾಲಿ ಹೌಸ್ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.


ಅರ್ಜಿ ಸಲ್ಲಿಸಲು ಫಲಾನುಭವಿಯು ಸಣ್ಣ ಮತ್ತು ಅತೀ ಸಣ್ಣ ರೈತರಾಗಿದ್ದು ನೀರಾವರಿ ಸೌಲಭ್ಯ ಹೊಂದಿರಬೇಕು. ವಾರ್ಷಿಕ ಆದಾಯ ರೂ.1.50 ಲಕ್ಷ ಒಳಗಿದ್ದು, ವಿದ್ಯುತ್ ಸಂಪರ್ಕ ಹೊಂದಿರಬೇಕು. ಫಲಾನುಭವಿಯ ಹೆಸರಿನಲ್ಲಿರುವ ಪ್ರಸಕ್ತ ಸಾಲಿನ ಪಹಣಿ ಹೊಂದಿದ್ದು ಅರ್ಜಿದಾರರು ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರು ಸರ್ಕಾರಿ ನೌಕರಿಯಲ್ಲಿರಬಾರದು. ಜಂಟಿ ಖಾತೆ ಹೊಂದಿದ್ದಲ್ಲಿ ಕುಟುಂಬದವರ ಒಪ್ಪಿಗೆ ಪತ್ರ, ಇತರೆ ಖಾತೆದಾರರಿಂದ NOC ಪಡೆದಿರಬೇಕು. ಘಟಕ ಸದುಪಯೋಗಪಡಿಸಿಕೊಳ್ಳುವ ಬಗ್ಗೆ ಪ್ರಮಾಣ ಪತ್ರ, ಮುಚ್ಚಳಿಕೆ ಪತ್ರ ನೀಡಬೇಕು ಹಾಗೂ ಸದರಿ ಅರ್ಜಿದಾರರಾಗಲಿ, ಕುಟುಂಬದ ಸದಸ್ಯರಾಗಲೀ ಯಾವುದೇ ಇಲಾಖೆ, ನಿಗಮದಿಂದ ಯಾವುದೇ ಯೋಜನೆಯಡಿ ಈ ಹಿಂದೆ ಸೌಲಭ್ಯವನ್ನು ಪಡೆದಿರಬಾರದು. ಆಯ್ಕೆಯಾದ ಫಲಾನುಭವಿಗಳು ರೂ.2,11,000 ಗಳ ವಂತಿಕೆಯನ್ನು ಭರಿಸಲು ಬದ್ಧರಾಗಿರಬೇಕು. ಮಾಹಿತಿಗಾಗಿ ದೂ.ಸಂ: 0821–2427140 ಅನ್ನು ಸಂಪರ್ಕಿಸಬಹುದು.

ಪ್ರತಿಭಾ ಕಾರಂಜಿಯಲ್ಲಿ ತಾಲೂಕು ಮಟ್ಟಕ್ಕೆ ಆಯ್ಕೆ



ಮೈಸೂರಿನ ಅನಂತಗೀತ ವಿದ್ಯಾಲಯದ ವಿದ್ಯಾರ್ಥಿಗಳು ಮೈಸೂರು ಉತ್ತರ ವಲಯದ ವ್ಯಾಪ್ತಿಯ ವಿನಾಯಕ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾಗಿ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿಜೇತರನ್ನು ಸಂಸ್ಥೆಯ ಅಧ್ಯಕ್ಷ ವೇಣುಗೋಪಾಲ್ ಕಲ್ಲೂರು, ಕಾರ್ಯದರ್ಶಿ ಗೀತಾ ಅನಂತ ರಾಮಯ್ಯ, ನಿರ್ದೇಶಕಿ ಮಂಜುಳಾ, ಶಾಲೆಯ ಮುಖ್ಯ ಶಿಕ್ಷಕ ಲೋಕೇಶ್, ಸಾಂಸ್ಕೃತಿಕ ವಿಭಾಗದ ಶಿಕ್ಷಕರಾದ ಶಿಲ್ಪ, ರೂಪಶ್ರೀ, ಪುಣ್ಯ, ಸುಷ್ಮಾ, ಸುಲೋಚನಾ, ಗೀತಾ ಅಭಿನಂದಿಸಿದರು.

ಜಗದೀಶ್ವರಮೂರ್ತಿಗೆ ಅಭಿನಂದನೆ...



ಕರ್ನಾಟಕ ರಾಜ್ಯ ಪರಿಶಿಷ್ಟ ಪಂಗಡ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಮೈಸೂರಿನ ಜಗದೀಶ್ವರಮೂರ್ತಿ ಅವರನ್ನು ಉದ್ಯಮಿ ನಿಂಗರಾಜು, ಪ್ರಾಧ್ಯಾಪಕ ಹರದನಹಳ್ಳಿ ನಂಜುಂಡಸ್ವಾಮಿ, ಟೆನ್ನಿಸ್ ಗೋಪಿ, ಅಟೋಮೊಟೀವ್ ಆಕ್ಸೆಲ್‌ನ ರವೀಂದ್ರ ಇನ್ನಿತರರು ಅಭಿನಂದಿಸಿದರು.

ವಿದ್ಯಾರ್ಥಿಗಳಿಗೆ ಅಭಿನಂದನೆ...



ಮೈಸೂರು ತಾಲೂಕಿನ ಮೆಲ್ಲಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿಯರು ರಾಜ್ಯ ಮಟ್ಟದ ಕುಸ್ತಿ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ವಿಜೇತರಾಗಿದ್ದ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಟಿ.ಸತೀಶ್ ಜವರೇಗೌಡ, ಮುಖ್ಯ ಶಿಕ್ಷಕಿ ಪಿ.ಎನ್.ವೀಣಾ, ದೈಹಿಕ ಶಿಕ್ಷಣ ಶಿಕ್ಷಕ ಶಶಿಧರ್ ಉಪಸ್ಥಿತರಿದ್ದರು.

ನಿವೃತ್ತ ಮುಖ್ಯ ಶಿಕ್ಷಕಿಗೆ ಬೀಳ್ಕೊಡುಗೆ



ಇತ್ತೀಚೆಗೆ ನಿವೃತ್ತರಾದ ಮೈಸೂರು ತಾಲೂಕು ಹಂಚ್ಯಾ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಉಮಾ ಅವರನ್ನು ಬೀಳ್ಕೊಡಲಾಯಿತು. ಈ ವೇಳೆ ಹಂಚ್ಯಾ ಗ್ರಾಪಂ ಮಾಜಿ ಅಧ್ಯಕ್ಷ ಹೆಚ್.ಸಿ.ಕುಮಾರಸ್ವಾಮಿ, ಎಸ್‌ಡಿಎಂಸಿ ಅಧ್ಯಕ್ಷೆ ಶ್ವೇತಾ, ಸೇವಾ ಸಹಕಾರ ಸಂಘದ ಅಧ್ಯಕ್ಷ ವೆಂಕಟೇಶ್, ಗ್ರಾಪಂ ಮಾಜಿ ಸದಸ್ಯರಾದ ಬಸವ ರಾಜು, ಹೆಚ್.ಡಿ.ಚೆನ್ನಯ್ಯ, ಮುಖಂಡರಾದ ತಮ್ಮೇಗೌಡ, ಹೆಚ್.ಡಿ.ಮಂಜು, ಚಂದ್ರಶೇಖರ್, ನಿವೃತ್ತ ಶಿಕ್ಷಕ ರಾಮಣ್ಣ ನಾಗಭೂಷಣ್, ಶಿಕ್ಷಕಿ ಸಂಧ್ಯಾ ಮತ್ತು ಸಹ ಶಿಕ್ಷಕರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಜ್ಞಾನ–ವಿದ್ಯೆ ಹಸಿವು ಇದ್ದವರಿಗೆ ದೇವರ ಅನುಗ್ರಹ ಲಭ್ಯ

ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ಅನುಗ್ರಹ ಸಂದೇಶ

ಮೈಸೂರು,ಸೆ.2(ಪಿಎಂ)– ಜ್ಞಾನ–ವಿದ್ಯೆಯ ಹಸಿವು ಇದ್ದವರನ್ನು ದೇವರು ಸದಾ ಅನುಗ್ರಹಿಸುತ್ತಾನೆ. ಹಾಗಾಗಿ ಜ್ಞಾನಿಗೆ ವಿಶ್ವದ ಎಲ್ಲೆಡೆ ಮಾನ್ಯತೆ ಇರುತ್ತದೆ ಎಂದು ಶ್ರೀ ಮಧ್ವಾಚಾರ್ಯರ ಮೂಲ ಮಹಾ ಸಂಸ್ಥಾನದ ಸೋಸಲೆ ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ನುಡಿದರು.

ಸೋಸಲೆ ಗ್ರಾಮದ ಶ್ರೀ ವ್ಯಾಸರಾಜರ ಮಠದಲ್ಲಿ 8ನೇ ಚಾತುರ್ಮಾಸ ವ್ರತದಲ್ಲಿರುವ ಶ್ರೀಗಳು, ಬೆಂಗಳೂರಿನ ಶ್ರೀ ಸರ್ವಜ್ಞ ಸೇವಾ ಸಮಿತಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಮಠದಲ್ಲಿ ಹಮ್ಮಿಕೊಂಡಿದ್ದ 2 ದಿನಗಳ ಶ್ರೀ ಜಗನ್ನಾಥ ದಾಸರ ಹರಿ ಕಥಾಮೃತಸಾರದ ಪ್ರಧಾನ ಪ್ರಮೇಯಗಳನ್ನು ಶಾಸ್ತ್ರ ಗ್ರಂಥಗಳ ಆಧಾರದಿಂದ ವಿವರಿಸುವ ವಿಶೇಷ ಜ್ಞಾನ ಸತ್ರಕ್ಕೆ ಚಾಲನೆ ನೀಡಿ ಅನುಗ್ರಹ ಸಂದೇಶ ನೀಡಿದರು.

ಲೌಕಿಕ ವಿಚಾರಗಳನ್ನು ಕೊಂಚ ಬದಿಗೆ ಇರಿಸಿ ನಾವು ತತ್ವ ಜ್ಞಾನದ ಶ್ರವಣ, ಮನನ ಮತ್ತು ನಿಧಿ ಧ್ಯಾನದಲ್ಲಿ ಆಸಕ್ತರಾದರೆ ಜೀವನ ಸಾರ್ಥಕವಾಗಲಿದೆ. ಹರಿಕಥಾಮೃತಸಾರ ಗ್ರಂಥವು ಜನ ಸಾಮಾನ್ಯರಿಗೂ ಸರಳವಾಗಿ ಅರ್ಥವಾಗುವ ಕನ್ನಡದ ಕೃತಿ. ದೈವಿಕ ಆಸಕ್ತರನ್ನು ಪಾರಮಾರ್ಥಿಕ ವಿಚಾರಗಳತ್ತ ಸಾಗುವಂತೆ ಮಾಡುವ ವಿಶೇಷ ಪದ್ಯಗಳ ರಚನೆ ಅದರಲ್ಲಿ ಇದೆ. ಇದರ ಪ್ರಧಾನ ಪ್ರಮೇಯಗಳನ್ನು ಶಾಸ್ತ್ರ ಗ್ರಂಥಗಳ ಆಧಾರದಿಂದ ಅರ್ಥ ಮಾಡಿಕೊಳ್ಳುವ ನಿಟ್ಟಿನಲ್ಲಿ ಜ್ಞಾನ ಸತ್ರ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಸೋಸಲೆ ಗ್ರಾಮದ ಶ್ರೀ ವ್ಯಾಸರಾಜರ ಮಠದಲ್ಲಿ ಮೈಸೂರಿನ ಹಿರಿಯ ವಿದ್ವಾಂಸ ಆದ್ಯ ಗೋವಿಂದಾಚಾರ್ಯರು 'ಸುಧಾಮ ಚರಿತ್ರೆ' ಕುರಿತು ಹರಿಕಥೆ ನಡೆಸಿಕೊಟ್ಟರು. ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ಅವರನ್ನೂ ಚಿತ್ರದಲ್ಲಿ ಕಾಣಬಹುದು.

ಜಗನ್ನಾಥ ದಾಸರ ಸೇವೆ ದೊಡ್ಡದು: ಬೆಂಗಳೂರಿನ ಶ್ರೀ ಪೂರ್ಣಪ್ರಜ್ಞ ವಿದ್ಯಾಪೀಠದ ಹಿರಿಯ ವಿದ್ವಾಂಸ ವಿದ್ವಾನ್ ಡಾ.ಎ.ವಿ.ನಾಗಸಂಪಿಗೆ ಆನಂದತೀರ್ಥ ಆಚಾರ್ಯ ಪ್ರಸ್ತಾವಿಕವಾಗಿ ಮಾತನಾಡಿ, ದ್ವೈತ ಮತ ಸಿದ್ಧಾಂತಿ ಆಚಾರ್ಯ ಶ್ರೀ ಮಧ್ವರ ಮತ್ತು ಅವರ ಸಂದೇಶಗಳನ್ನು ಜನರಿಗೆ ಸರಳ ಕನ್ನಡದಲ್ಲಿ ತಿಳಿಸಿಕೊಡುವ ನಿಟ್ಟಿನಲ್ಲಿ ಹರಿ ಕಥಾಮೃತಸಾರ ಮಹತ್ವದ್ದಾಗಿದೆ. ಈ ದೆಸೆಯಲ್ಲಿ ದಾಸ ಪರಂಪರೆಯ ಶ್ರೀ ಜಗನ್ನಾಥ ದಾಸರ ಸಾಹಿತ್ಯ ಜ್ಞಾನ ಮತ್ತು ವಿಚಾರ ಪ್ರತಿಪಾದನೆ ಪರಮೋಚ್ಛವಾಗಿದೆ. ದಾಸರ ಕೊಡುಗೆಯನ್ನು ವಿದ್ವತ್ ಪ್ರಪಂಚ ಸದಾ ಸ್ಮರಣೆ ಮಾಡಿಕೊಳ್ಳುತ್ತದೆ ಎಂದರು.

ಮೊದಲನೇ ಗೋಷ್ಠಿಯಲ್ಲಿ ಬೆಂಗಳೂರಿನ ಪೂರ್ಣಪ್ರಜ್ಞ ವಿದ್ಯಾಪೀಠದ ನಿವೃತ್ತ ಪ್ರಾಧ್ಯಾಪಕ ವಿದ್ವಾನ್ ಬದರಿನಾಥ ಆಚಾರ್ಯ ಅವರು 'ಬ್ರಹ್ಮ ಸ್ವರೂಪ' ವಿಷಯ ಮಂಡಿಸಿ, ಪರಬ್ರಹ್ಮನಾದ ಹರಿಯು ಅನಂತ ಕಲ್ಯಾಣ ಗುಣಪೂರ್ಣನಾಗಿದ್ದಾನೆ. ಅವನನ್ನು ವೇದಗಳಿಂದ ಹಾಗೂ ವೇದಾನು ಸಾರಿ ಬ್ರಹ್ಮಸೂತ್ರಾದಿಗಳಿಂದ ಮಾತ್ರ ಸರಿಯಾಗಿ ತಿಳಿಯಲು ಸಾಧ್ಯ. ಈ ವಿಷಯವನ್ನು ಮೊದಲು ಲೋಕಕ್ಕೆ ತಿಳಿಸಿಕೊಟ್ಟವರೇ ಶ್ರೀ ಮಧ್ವಾಚಾರ್ಯರು. ಹಾಗಾಗಿ ಅವರನ್ನು ಪೂರ್ಣಪ್ರಜ್ಞರು ಎಂದು ಲೋಕ ಕೊಂಡಾಡಿತು ಎಂದರು.

ಎರಡನೇ ಗೋಷ್ಠಿಯಲ್ಲಿ ಮೈಸೂರಿನ ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ಯುವ ವಿದ್ವಾಂಸ ಪ್ರಣವಾಚಾರ್ಯ ಮಾತನಾಡಿ, ಅನಂತವಾದ ವೇದಗಳು ಪರಮಾತ್ಮನನ್ನು ಸಮಗ್ರವಾಗಿ ತಿಳಿಸುತ್ತವೆ. ಭಗವಂತನ ಅಧೀನವಾದ ಜೀವಿಗಳು ಭಗವದ್ ಅನುಗ್ರಹದಿಂದ ಮಾತ್ರ ಸುಸ್ಥಿರವಾಗಿರಲು ಸಾಧ್ಯ ಎಂದು ತಿಳಿಸಿದರು.

ಮೂರನೇ ಗೋಷ್ಠಿಯಲ್ಲಿ ಪಂಡಿತ ಕಳಸಾಪುರ ಶ್ರೀಕಾಂತ ಆಚಾರ್ಯ ಅವರು ಧ್ಯಾನದ ಸೋಪಾನಗಳ ಬಗ್ಗೆ ತಿಳಿಸಿರುವ ಪ್ರಮೇಯಗಳನ್ನು ಪ್ರಸ್ತುತಪಡಿಸಿದರು.

ನಾಲ್ಕನೇ ಗೋಷ್ಠಿಯಲ್ಲಿ ವಿದ್ವಾನ್ ಸುಘೋಷ ಆಚಾರ್ಯ ಅವರು 'ಹರಿಕಥಾಮೃತ ಸಾರ' ಕೃತಿಯ ಕರುಣಾ ಸಂಧಿಯ ವಿಶೇಷ ವಿಷಯಗಳನ್ನು ಪ್ರತಿಪಾದಿಸಿದರು. ಕರುಣಾ ಸಾಗರನಾದ ಶ್ರೀಹರಿಯು ತನ್ನ ಭಕ್ತರನ್ನು ಕರುಣಾಪೂರ್ಣ ದೃಷ್ಟಿಯಿಂದ ಅನುಗ್ರಹಿಸುತ್ತಾನೆ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಪಂಡಿತರಾದ ಪಾಂಡುರಂಗ ಮಾಧವಚಾರ್ಯರು ಕೃತಿಯಲ್ಲಿರುವ 'ಸರ್ವ ಸ್ವಾತಂತ್ರ್ಯ ಸಂಧಿ' ಅನ್ನು ವಿಶ್ಲೇಷಣೆ ಮಾಡಿದರು. ಮೈಸೂರಿನ ಹಿರಿಯ ವಿದ್ವಾಂಸ ಆದ್ಯ ಗೋವಿಂದಾಚಾರ್ಯರು 'ಸುಧಾಮ ಚರಿತ್ರೆ' ಕುರಿತು ಹರಿಕಥೆ ನಡೆಸಿಕೊಟ್ಟು ಶ್ರೋತೃಗಳ ಗಮನ ಸೆಳೆದರು.

ಕಬ್ಬು ಕಟಾವು ಬಗ್ಗೆ ವದಂತಿಗಳಿಗೆ ಕಿವಿಗೊಡಬೇಡಿ

ಎಡಿಸಿ ಡಾ: ಹೆಚ್.ಎಲ್.ನಾಗರಾಜು ಮನವಿ

ಮಂಡ್ಯ,ಸೆ.2– ಮೈಶುಗರ್ ಸಕ್ಕರೆ ಕಾರ್ಖಾನೆಯಿಂದ ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಬ್ಬು ಕಟಾವು ಮಾಡುವ ಕಾರ್ಮಿಕರನ್ನು ಒದಗಿಸಲಾಗುವುದು. ರೈತ ಬಾಂಧವರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗಬಾರದೆಂದು ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್.ನಾಗರಾಜು ತಿಳಿಸಿದ್ದಾರೆ.


ಡಾ.ಹೆಚ್.ಎಲ್.ನಾಗರಾಜು

ಮೈಸೂರು ಸಕ್ಕರೆ ಕಂಪನಿಯಿಂದ ಈವರೆಗೆ 43,740 ಮೆ.ಟನ್ ಕಬ್ಬು ನುರಿಸಲಾಗಿದೆ. ಕಬ್ಬು ಸರಬರಾಜು ಮಾಡಿರುವ 163 ರೈತರಿಗೆ ಈಗಾಗಲೇ ರೂ. 2,65,76,127 ಹಣ ಪಾವತಿಸಲಾಗಿದೆ. ಕಬ್ಬು ಕಟಾವು ಮಾಡಿರುವ ಮೇಸ್ತ್ರಿಗಳಿಗೆ 1.40 ಕೋಟಿ, ಕಬ್ಬು ಸಾಗಾಣಿಕೆ ವೆಚ್ಚ ರೂ. 51.05 ಲಕ್ಷ ಹಣ ಪಾವತಿಸಲಾಗಿದೆ. ಒಟ್ಟು ರೂ. 4,57,12,457 ಹಣ ಪಾವತಿಸಲಾಗಿದೆ. ಕಾರ್ಖಾನೆಯಲ್ಲಿ ಕಬ್ಬು ನುರಿಸುವಿಕೆ, ಕಟಾವು, ಹಣ ಪಾವತಿ ಕೆಲಸದಲ್ಲಿ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.

163 ರೈತರು ಕಬ್ಬು ಪೂರೈಸಿದ 14 ದಿನಗಳ ಒಳಗೆ ಕಬ್ಬಿನ ಬಿಲ್ಲಿನ ಹಣವನ್ನು ಪಾವತಿಸಲಾಗಿದೆ. ಮುಂದಿನ ದಿನಗಳಲ್ಲಿ ಕಬ್ಬು ಸರಬರಾಜು ಮಾಡುವ ರೈತರಿಗೆ ನಿಗದಿತ ಸಮಯದಲ್ಲಿ ಕಬ್ಬಿನ ಹಣವನ್ನು ಪಾವತಿಸಲು ಕಂಪನಿ ಬದ್ಧವಾಗಿರುತ್ತದೆ.

ಕಬ್ಬು ಕಟಾವು ಮೇಸ್ತ್ರಿಗಳು ಮುಂಗಡ ಹಣ ಪಡೆದು ಇಲ್ಲಿಯವರೆಗೆ ಬರದಿದ್ದ ಕಾರಣ ಈಗಾಗಲೇ 41 ಮೇಸ್ತ್ರಿಗಳಿಗೆ ನೋಟೀಸ್ ನೀಡಿ ಕಾನೂನು ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುತ್ತಿದೆ. ಹಾಗೂ 30 ಮೇಸ್ತ್ರಿಗಳ ವಿರುದ್ಧ ನ್ಯಾಯಾಲಯದಲ್ಲಿ ಪ್ರಕರಣವನ್ನು ದಾಖಲು ಮಾಡಲಾಗಿರುತ್ತದೆ.

ಮುಂಗಡ ರೂ.3,28,75,000 ಪಡೆದು ಇದರಲ್ಲಿ 2,07,04,897ರೂವನ್ನು ಕಬ್ಬು ಕಟಾವು ಮಾಡಿ ಉಳಿದ ಹಣ ರೂ.1,21,70,103 ವಸೂಲಿ ಮಾಡಲು ಕ್ರಮವಹಿಸಲಾಗಿದೆ.

ಕಂಪನಿಯು ರೈತರ ಹಿತ–ದೃಷ್ಟಿಯಿಂದ ಈಗಾಗಲೇ ಸಾಕಷ್ಟು ಕಬ್ಬು ಕಟಾವು ಕಾರ್ಮಿಕರನ್ನು ಕಂಪನಿ ವತಿಯಿಂದ ಒದಗಿಸಲಾಗಿರುತ್ತದೆ. ಕೆಲವರು ಕಂಪನಿಯ ಅಧಿಕಾರಿಗಳ ಮೇಲೆ ಸುಳ್ಳು ವದಂತಿಗಳು ಹರಡುತ್ತಿದ್ದು, ಇದರಿಂದ ಕಂಪನಿಯ ಅಧಿಕಾರಿಗಳಿಗೆ ಮಾನಸಿಕವಾಗಿ ಒತ್ತಡವಾಗಿರುತ್ತದೆ. ರೈತರು ಯಾವುದೇ ವದಂತಿಗಳಿಗೆ ಕಿವಿಕೊಡಬಾರದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜೃಂಭಣೆಯಿಂದ ಶ್ರೀರಂಗಪಟ್ಟಣ ದಸರಾ ಆಚರಣೆ

ಅಧಿಕಾರಿಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ

ಮಂಡ್ಯ,ಸೆ.2– ಈ ಬಾರಿಯ ಶ್ರೀರಂಗಪಟ್ಟಣ ದಸರಾವನ್ನು ವಿಜೃಂಭಣೆಯಿಂದ ಆಚರಿಸೋಣ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಸೋಮವಾರ ಜಿಲ್ಲಾ ಪಂಚಾಯತ್‌ನ ಕಾವೇರಿ ಸಭಾಂಗಣದಲ್ಲಿ ನಡೆದ ಶ್ರೀರಂಗಪಟ್ಟಣ ದಸರಾ ಆಚರಣೆಯ ಸಂಬಂಧ ಸಭೆ ನಡೆಸಿ ಮಾತನಾಡಿದ ಅವರು, ಅಕ್ಟೋಬರ್ 4 ರಿಂದ 6 ರವರೆಗೆ 3 ದಿನಗಳ ಕಾಲ ಅಥವಾ ಅಕ್ಟೋಬರ್ 4ರಿಂದ 8ರವರೆಗೆ 5 ದಿನಗಳ ಕಾಲ ದಸರಾ ಕಾರ್ಯಕ್ರಮವನ್ನು ನಡೆಸಬೇಕೆಂದಿದ್ದು, ಇದರಲ್ಲಿ ಎಷ್ಟು ದಿನ ಆಚರಣೆ ಮಾಡಬೇಕು ಎಂದು ಶೀಘ್ರವೇ ನಿರ್ಧಾರಿಸಲಾಗುವುದು ಎಂದರು.

ಈಗಾಗಲೇ ಶ್ರೀರಂಗಪಟ್ಟಣ ದಸರಾ ಆಚರಣೆಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದೆ. ಎಲ್ಲಾ ಸಮಿತಿಯು ತಮಗೆ ನೀಡಿರುವ ಜವಾಬ್ದಾರಿಗಳನ್ನು ವಿಳಂಬ ಮಾಡದೆ ಇಂದಿನಿಂದಲೇ ಯೋಜನೆ ಸಿದ್ಧಪಡಿಸಿ ಎಂದು ಸೂಚಿಸಿದರು.

ಸಾಂಸ್ಕೃತಿಕ ಸಮಿತಿಯು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ನೋಡಿಕೊಳ್ಳಬೇಕು. ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದೆ ಕಾರ್ಯಕ್ರಮವನ್ನು ಬಹಳ ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ವೇದಿಕೆ ಸಮಿತಿಯು ಬನ್ನಿಮಂಟಪದಲ್ಲಿ ಆಯೋಜಿಸುವ ಜಂಬೂಸವಾರಿ ಕಾರ್ಯಕ್ರಮಕ್ಕೂ ವೇದಿಕೆ ನಿರ್ಮಾಣ ಮಾಡಬೇಕು. ಮಕ್ಕಳ ಚಲನಚಿತ್ರೋತ್ಸವ


ಶ್ರೀರಂಗಪಟ್ಟಣ ದಸರಾ ಆಚರಣೆ ಸಂಬಂಧ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿದರು.

ಶ್ರೀರಂಗಪಟ್ಟಣ ದಸರಾ ಆಚರಣೆಗೆ ಸಂಬಂಧಿಸಿದಂತೆ ಮಕ್ಕಳ ಚಲನಚಿತ್ರೋತ್ಸವವನ್ನು ಏರ್ಪಡಿಸಬೇಕು. ಮಕ್ಕಳಿಗೂ ಸಹ ಉತ್ತಮ ಸಂದೇಶ ನೀಡುವಂತಹ ಚಲನಚಿತ್ರಗಳು ಸಿನಿಮಾ ಮಂದಿರದಲ್ಲಿ ಪ್ರದರ್ಶನಗೊಳ್ಳಬೇಕು ಎಂದು ಹೇಳಿದರು.

ಹಣಕಾಸು ಸಮಿತಿ ಕಾರ್ಯಕ್ರಮವು ಮುಗಿದ ಒಂದು ವಾರದೊಳಗೆ ಕಲಾವಿದರ ಸಂಭಾವನೆ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ನೀಡಬೇಕಾದ ಬಿಲ್‌ಗಳ ಹಣ ಪಾವತಿಸಬೇಕು. ಮೆರವಣಿಗೆ ಸಮಿತಿಯು ಮೆರವಣಿಗೆ ಹೋಗುವಂತಹ ಮಾರ್ಗದ ರೂಟ್ ಮ್ಯಾಪ್ ಅನ್ನು ಸಿದ್ಧಪಡಿಸಿಕೊಳ್ಳಿ. ಮೆರವಣಿಗೆ ಹೋಗುವ ಮಾರ್ಗಗಳಲ್ಲಿ ಗುಂಡಿಗಳಿದ್ದರೆ ಅವುಗಳನ್ನು ಸರಿಪಡಿಸಿ. ವಿದ್ಯುತ್ ತಂತಿಗಳು ಹಾದು ಹೋಗಿರುವಲ್ಲಿ ಸೂಕ್ತ ಕ್ರಮ ಕೈಗೊಳ್ಳಿ ಎಂದರು.

ವಸ್ತುಪ್ರದರ್ಶನ ಸಮಿತಿಯಲ್ಲಿ ಕಳೆದ ವರ್ಷ ಕಾರ್ಯ ನಿರ್ವಹಿಸಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನೇ ಈ ವರ್ಷವೂ ನೇಮಕ ಮಾಡಲಾಗಿದೆ. ವಸ್ತುಪ್ರದರ್ಶನದಲ್ಲಿ ಒಟ್ಟು 200 ಮಳಿಗೆಗಳನ್ನು ಹಾಕಲಾಗುವುದು. ಅದರಲ್ಲಿ 50 ಮಳಿಗೆಗಳು ಆಹಾರಕ್ಕೆ ಸೀಮಿತವಾಗಿದ್ದು, ಪ್ರತಿಯೊಂದು ಜಿಲ್ಲೆಯಿಂದಲೂ ಕೂಡ ಆಯಾ ಜಿಲ್ಲೆಯ ವಿಶೇಷ ಖಾದ್ಯಗಳು, ತಿಂಡಿ ತಿನಿಸುಗಳನ್ನು ತಯಾರಿಸಬೇಕು. ಇನ್ನುಳಿದ 150 ಮಳಿಗೆಗಳನ್ನು ವಿಭಿನ್ನ ರೀತಿಯ ವಸ್ತುಪ್ರದರ್ಶನಕ್ಕೆ ಮೀಸಲಿಡಿ. ಆಹಾರ ಮಳಿಗೆಗಳ ಬಳಿ ಕಡ್ಡಾಯವಾಗಿ ಕಸದ ಬುಟ್ಟಿಗಳನ್ನು ಇಡಿ, ಸ್ವಚ್ಛತೆಯನ್ನು ಕಾಪಾಡಬೇಕು ಎಂದು ಹೇಳಿದರು.

ಆರೋಗ್ಯ ಮತ್ತು ವೈದ್ಯಕೀಯ ಸೇವಾ ಸಮಿತಿಯು ಆರೋಗ್ಯ ಸೇವೆಗೆ ಸಂಬಂಧಿಸಿದಂತೆ ವೈದ್ಯರು ಹಾಗೂ ಸಿಬ್ಬಂದಿ ವರ್ಗದವರನ್ನು ನೇಮಕ ಮಾಡಬೇಕು. ಸ್ವಚ್ಛತೆ ಮತ್ತು ನೈರ್ಮಲ್ಯ ಸಮಿತಿಯು ಪ್ರತಿ ಮಳಿಗೆಗಳಲ್ಲಿ ಹಾಗೂ ಕಾರ್ಯಕ್ರಮ ನಡೆಯುವ ಸುತ್ತಮುತ್ತಲಿನ ಸ್ಥಳದಲ್ಲಿ ಸ್ವಚ್ಛತೆ ಕಾಪಾಡುವುದು ಬಹುಮುಖ್ಯವಾಗಿದೆ ಎಂದರು.

ನಗರ ವಿದ್ಯುತ್ ಮತ್ತು ಅಲಂಕಾರ ಸಮಿತಿಯವರು ಕಾರ್ಯಕ್ರಮದಲ್ಲಿ ಉತ್ತಮ ಮಟ್ಟದ ವಿದ್ಯುತ್ ದೀಪಾಲಂಕಾರದಿಂದ ಸಾರ್ವಜನಿಕರು ಆಕರ್ಷಣೀಯವಾಗುವಂತೆ ಕಾರ್ಯನಿರ್ವಹಿಸಿ. ಈ ಬಗ್ಗೆ ಸಮಿತಿಯ ಸದಸ್ಯರನ್ನೊಳಗೊಂಡಂತೆ ಚರ್ಚೆ ನಡೆಸಬೇಕು. ಕ್ರೀಡಾ ಮತ್ತು ಯೋಗ ದಸರಾ ಸಮಿತಿಯು ಯಾವ ದಿನದಂದು ಏನೇನು ಕಾರ್ಯಕ್ರಮಗಳನ್ನು ನಡೆಸಬೇಕು ಎಂದು ಒಂದು ವರದಿಯನ್ನು ತಯಾರಿಸಬೇಕು. ದಸರಾದಲ್ಲಿ ನಡೆಯುವ ಕವಿಗೋಷ್ಠಿ, ಮಕ್ಕಳ ಚಲನಚಿತ್ರೋತ್ಸವ, ಯೋಗ, ಮ್ಯಾರಥಾನ್ ಮುಂತಾದ ಕಾರ್ಯಕ್ರಮಗಳು ನಡೆಯಲಿದ್ದು, ಅದನ್ನು ಸಾರ್ವಜನಿಕರಿಗೆ ತಿಳಿಸುವ ಕೆಲಸ ಮಾಡಬೇಕು ಎಂದು ಹೇಳಿದರು.

ಸಭೆಯಲ್ಲಿ ಡಿಒಎಸ್‌ಪಿ ಮುರಳಿ, ಉಪ ವಿಭಾಗಾಧಿಕಾರಿ ಶಿವಮೂರ್ತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸಿದ್ದಲಿಂಗೇಶ್ ಉಪಸ್ಥಿತರಿದ್ದರು.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ಸಿಗಾಗಿ ಮಾಧ್ಯಮ ಸಮನ್ವಯ ಸಮಿತಿ ಸಭೆ

ಮಂಡ್ಯ,ಸೆ.2–ಡಿಸೆಂಬರ್‌ನಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಕ್ಕರೆ ನಗರಿ ಮಂಡ್ಯದಲ್ಲಿ ಸಕಲ ಸಿದ್ಧತೆಗಳು ಜೋರಾಗಿವೆ ಸಮ್ಮೇಳನದ ಯಶಸ್ಸಿಗಾಗಿ ರಚಿಸಿರುವ 28 ವಿವಿಧ ಸಮಿತಿಗಳು, ನಿರಂತರ, ಸರಣಿ ಸಭೆಗಳ ಮೂಲಕ ತಮ್ಮನ್ನ ತಾವು ಸಕ್ರಿಯಗೊಳಿಸಿಕೊಂಡಿವೆ. ಅದರಂತೆ ಮಂಡ್ಯ ನಗರದ ಹೊರವಲಯದ ಅಮರಾವತಿ ಹೋಟೆಲ್‌ನಲ್ಲಿ ಇಂದು ಮಾಧ್ಯಮ ಸಮನ್ವಯ ಸಮಿತಿ ಹಾಗೂ ಸಾಂಸ್ಕೃತಿಕ ಸಮಿತಿಗಳ ಪ್ರತ್ಯೇಕ ಸಭೆಗಳು ನಡೆದವು.


ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮಾಧ್ಯಮ ಸಮನ್ವಯ ಸಮಿತಿ ಸಭೆಯನ್ನು ಎಂಎಲ್‌ಸಿ ದಿನೇಶ್ ಗೂಳಿಗೌಡ ನಡೆಸಿದರು.

ಎರಡೂ ಸಮಿತಿಗಳಿಗೂ ಅಧ್ಯಕ್ಷರಾಗಿರುವ, ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡರು ಅಧ್ಯಕ್ಷತೆ ವಹಿಸಿದ್ದರು.

ಮೊದಲಿಗೆ ನಡೆದ ಮಾಧ್ಯಮ ಸಮನ್ವಯ ಸಮಿತಿ ಸಭೆ ಹಲವು ವಿಶೇಷತೆಗಳು, ಹೊಸತುಗಳಿಗೆ ಸಾಕ್ಷಿಯಾಯಿತು. ಹಳೇ ಬೇರು, ಹೊಸ ಚಿಗುರು ಎಂಬಂತೆ ಹಿರಿಯರು, ಕಿರಿಯರು, ಮಾಧ್ಯಮ ಪ್ರತಿನಿಧಿಗಳು, ಮಾಧ್ಯಮ ಸಂಸ್ಥೆಯ ಮುಖ್ಯಸ್ಥರು, ಅಧಿಕಾರಿಗಳು, ರಾಜಕಾರಣಿಗಳು, ಸಂಘ–ಸಂಸ್ಥೆಗಳ ಪದಾಧಿಕಾರಿಗಳನ್ನೊಳಗೊಂಡ ಸಮಿತಿಯಲ್ಲಿ ಹಲವು ಸಲಹೆ, ಸೂಚನೆ, ಮಾರ್ಗದರ್ಶನಗಳ ವಿನಿಮಯ ಆಯಿತು.

ಸಾಹಿತ್ಯ ಕ್ಷೇತ್ರಕ್ಕೂ ಮಾಧ್ಯಮ ರಂಗಕ್ಕೂ ಈ ಹಿಂದಿನಿಂದಲೂ ಅವಿನಾಭಾವ ಸಂಬಂಧ ಉಂಟು. ಹಲವಾರು ಮಾಧ್ಯಮ ಪ್ರತಿನಿಧಿಗಳು ಸಾಹಿತಿಯಾಗಿ, ಹಲವು ಸಾಹಿತಿಗಳು ಮಾಧ್ಯಮ ರಂಗದಲ್ಲಿ ಜೊತೆ ಜೊತೆಯಾಗೇ ಸಾಗುತ್ತಿರುವ ಅನೇಕ ಉದಾಹರಣೆಗಳು ಸಾಕಷ್ಟು ಇವೆ.

ಹೀಗಾಗಿ, ಕನ್ನಡ ಸಾಹಿತ್ಯ ಸಮ್ಮೇಳನದಂತಹ ಕನ್ನಡದ ಹಬ್ಬದಲ್ಲಿ ಮಾಧ್ಯಮಗಳು, ಮಾಧ್ಯಮ ಪ್ರತಿನಿಧಿಗಳ ಪಾತ್ರ ಕೂಡ ಹೆಚ್ಚಿರುತ್ತೆ. ಇಂತಹ ಮಾಧ್ಯಮ ಸಮನ್ವಯ ಸಮಿತಿಗೆ ಅಧ್ಯಕ್ಷರಾಗಿರುವ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಅವರ ಅನುಭವ, ಮಾಧ್ಯಮ ಕ್ಷೇತ್ರದಲ್ಲಿ ದಶಕಗಳಿಂದ ತಮ್ಮನ್ನ ತಾವು ತೊಡಗಿಸಿಕೊಂಡಿರುವ ಮಾಧ್ಯಮ ಪ್ರತಿನಿಧಿಗಳು, ಅನುಭವಿ, ಯುವ ಉತ್ಸಾಹಿ ಅಧಿಕಾರಿಗಳು ಈ ಸಮಿತಿಯಲ್ಲಿರುವುದು. ಜೊತೆಗೆ ಎಲ್ಲರಿಗೂ ತಮ್ಮ ಅನುಭವವನ್ನ ಹಂಚುತ್ತಾ ಸಲಹೆ ನೀಡಲು ಇರುವ ಹಿರಿಯರು ಇರೋದು ಇನ್ನೂ ವಿಶೇಷ.

ಇಂದಿನ ಸಭೆಯಲ್ಲೇ ಸಮ್ಮೇಳನದ ಯಶಸ್ಸಿನ ಸುಳಿವು ಸಿಕ್ಕಂತೆ ಆಗಿದೆ. ಸಮ್ಮೇಳನದ ಯಶಸ್ಸಿಗೆ ರಚಿತವಾಗಿರುವ 28 ಸಮಿತಿಗಳಲ್ಲೇ ಮಾಧ್ಯಮ ಸಮನ್ವಯ ಸಮಿತಿ ಎಲ್ಲಕ್ಕಿಂತ ಭಿನ್ನ, ವಿಶೇಷ ಎಂಬುದನ್ನ ಸಾಬೀತು ಮಾಡಿದೆ. ಸಭೆಯಲ್ಲಿ ವ್ಯಕ್ತವಾದ ಹಲವರ ಅಭಿಪ್ರಾಯ, ಸಲಹೆಯಂತೆ ಮತ್ತು ಈ ಹಿಂದಿನ ಸಮ್ಮೇಳನಗಳಲ್ಲಿ ಆಗಿರುವ ಲೋಪ–ದೋಷಗಳು ಮರುಕಳಿಸದಂತೆ ಜಾಗ್ರತೆ ವಹಿಸಿ, ನಕಾರಾತ್ಮಕ ಸುದ್ದಿಗಳತ್ತ ಚಿತ್ತ ಹರಿಸದಂತೆ, ಸಕಾರಾತ್ಮಕ ಸುದ್ದಿಗಳಿಗೆ ಹೆಚ್ಚು ಒತ್ತು ನೀಡಬೇಕಿದೆ. ಅದೇ, ರೀತಿ ಹೊರಗಿನಿಂದ ಬರುವ ಪತ್ರಕರ್ತರಿಗೂ ಆ ನಿಟ್ಟಿನಲ್ಲಿ ನೆರವಾಗಿ ಸಮಿತಿ ಮತ್ತು ಮಂಡ್ಯದ ಗೌರವ ಹೆಚ್ಚಿಸುವ ಕೆಲಸಕ್ಕೆ ಕೈಜೋಡಿಸುವ ನಿರ್ಣಯ ಕೈಗೊಳ್ಳಲಾಯಿತು.

ಸಭೆಯಲ್ಲಿ ಸಾಹಿತ್ಯ ಸಮ್ಮೇಳನದ ಸಂಚಾಲಕರಾದ ಡಾ.ಮೀರಾ ಶಿವಲಿಂಗಯ್ಯ, ಸಮ್ಮೇಳನದ ವಿಶೇಷಾಧಿಕಾರಿ ಡಾ.ಚಂದ್ರಶೇಖರ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ.ಪ್ರಕಾಶ್, ಅಶೋಕ್ ಜಯರಾಂ, ವಾರ್ತಾಧಿಕಾರಿ ನಿರ್ಮಲಾ, ಸಮಿತಿ ಸದಸ್ಯರಾದ ಆರ್.ಜಿ.ಸಿದ್ದು, ಡಿ.ಶಶಿಕುಮಾರ್, ಮಂಜುನಾಥ, ಆನಂದ್, ರಾಘವೇಂದ್ರ, ಪ್ರವೀಣ್, ಶಿವಕುಮಾರ್, ಆಶಾಲತಾ ಪುಟ್ಟೇಗೌಡ, ಬಸವೇಗೌಡ, ಹರ್ಷ, ಚೇತನ್, ಮಾನಸ, ಸುಬ್ರಹ್ಮಣ್ಯ ಬಾಬು, ಶಿವರಾಮು, ಅರಸಯ್ಯ, ಸುಧಾಮ, ಹರೀಶ್, ತಳಗವಾದಿ ನಾಗರಾಜು, ಅನುಪಮ ಸೇರಿದಂತೆ ಹಲವರು ಭಾಗವಹಿಸಿದ್ದರು.

ಸೆ.4, 5 ರಂದು ನೀರು ಸರಬರಾಜು ವ್ಯತ್ಯಯ

ಮಂಡ್ಯ,ಸೆ.2– ಮಂಡ್ಯ ನಗರ ನೀರು ಸರಬರಾಜು ವ್ಯವಸ್ಥೆ ನಿರ್ವಹಣೆಯಡಿ ಶ್ರೀರಂಗಪಟ್ಟಣ ಸಮೀಪವಿರುವ ಮೂಲಸ್ಥಾವರಕ್ಕೆ ವಿದ್ಯುತ್ ಸರಬರಾಜು ಮಾಡುವ ಶ್ರೀರಂಗಪಟ್ಟಣ ತಾಲೂಕು ವ್ಯಾಪ್ತಿಗೆ ಸೇರಿದ 66/11 ಕೆ.ವಿ ವಿದ್ಯುತ್ ಉಪ ವಿತರಣಾ ಕೇಂದ್ರದ ನಿರ್ವಹಣಾ ಕಾಮ ಗಾರಿಯನ್ನು ಕೈಗೊಳ್ಳಬೇಕಾಗಿರುವುದರಿಂದ ಮಂಡ್ಯ ನಗರದ ಸಾರ್ವಜನಿಕರಿಗೆ ಸೆಪ್ಟೆಂಬರ್ 4 ಹಾಗೂ 5 ರಂದು ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ನೀರು ಬಂದ ವೇಳೆ ಶೇಖರಿಸಿಟ್ಟುಕೊಂಡು ಜಲಮಂಡಳಿಯೊಂದಿಗೆ ಸಹಕರಿಸಬೇಕೆಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮಂಡ್ಯ ನಿರ್ವಹಣಾ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆ.ಉಮಾದೇವಿ ನಿಧನ

ಮಳವಳ್ಳಿ, ಸೆ.2– ಮಳವಳ್ಳಿ ಪುರಸಭೆ ವಾರ್ಡ್ 11ರ ಸದಸ್ಯ ಸಿದ್ದರಾಜು ಅವರ ಪತ್ನಿ ಕೆ.ಉಮಾದೇವಿ (48) ಭಾನುವಾರ ರಾತ್ರಿ ನಿಧನರಾದರು. ಮೃತರು ಪತಿ ಸಿದ್ದರಾಜು, ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯು ಸ್ವಗ್ರಾಮ ಮಳವಳ್ಳಿ ತಾಲೂಕಿನ ವಡ್ಡರಹಳ್ಳಿಯ ಮೃತರ ಜಮೀನಿನಲ್ಲಿ ಸೋಮವಾರ ಮಧ್ಯಾಹ್ನ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.




ಸಂತಾಪ: ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಮಾಜಿ ಶಾಸಕ ಕೆ.ಅನ್ನದಾನಿ, ಬಿಎಸ್‌ಪಿ ಮುಖಂಡ ಎಂ.ಕೃಷ್ಣಮೂರ್ತಿ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಯುವ ಘಟಕದ ಅಧ್ಯಕ್ಷ ರವಿ, ಮಾಜಿ ಸಚಿವ ಬಿ.ಸೋಮಶೇಖರ್ ಅವರ ಪುತ್ರ ದರ್ಶನ್, ಮಳವಳ್ಳಿ ಪುರಸಭೆ ಸದಸ್ಯರು ಹಾಗೂ ಹಲವು ಮುಖಂಡರು ಮೃತರ ಅಂತಿಮ ದರ್ಶನ ಪಡೆದು ಸಂತಾಪ ಸೂಚಿಸಿದರು.

ಒಂದೆಡೆ ಪೊಲೀಸರು ವಿಶೇಷ ಗಸ್ತು ನಡೆಸಿದರೆ ಮತ್ತೊಂದೆಡೆ ಖದೀಮರ ಕೈಚಳಕ

ಬಿಎಂಶ್ರೀನಗರದಲ್ಲಿ ಮನೆ ಬಾಗಿಲು ಮುರಿದು ಲಕ್ಷಾಂತರ ಮೌಲ್ಯದ ಚಿನ್ನಾಭರಣ, ನಗದು ಕಳವು

ಮೈಸೂರು, ಸೆ.2– ಮನೆ ಬಾಗಿಲು ಮುರಿದು ನಗ–ನಾಣ್ಯ ದೋಚಿರುವ ಘಟನೆ ಮೈಸೂರಿನ ಬಿ.ಎಂ.ಶ್ರೀನಗರದಲ್ಲಿ ನಡೆದಿದೆ.

ಇಲ್ಲಿನ ಒಂದನೇ ಮುಖ್ಯರಸ್ತೆ, 11ನೇ ಕ್ರಾಸ್‌ನಲ್ಲಿರುವ ಉದಯ್‌ಕುಮಾರ್ ಅವರ ಮನೆಯ ಬಾಗಿಲು ಮೀಟಿ ಒಳನುಗ್ಗಿರುವ ಖದೀಮರು ಸುಮಾರು 5.50 ಲಕ್ಷ ರೂ. ನಗ–ನಾಣ್ಯ ಕಳವು ಮಾಡಿದ್ದಾರೆ.



ಪ್ಯಾಕೇಜಿಂಗ್ ಕಂಪನಿಯೊಂದರ ನೌಕರರಾಗಿರುವ ಉದಯ್‌ಕುಮಾರ್, ತನ್ನ ತಾಯಿ ಶಶಿಕಲಾ ಅವರೊಂದಿಗೆ ವರ್ಷದಿಂದ ಬಿ.ಎಂ.ಶ್ರೀನಗರದಲ್ಲಿ ಭೋಗ್ಯದ ಮನೆಯಲ್ಲಿ ವಾಸವಿದ್ದಾರೆ. ತಾಯಿ ಕಡೇ ಶ್ರಾವಣ ಶನಿವಾರದ ಪೂಜೆಗೆಂದು ತಿ.ನರಸೀಪುರದಲ್ಲಿರುವ ತಮ್ಮ ತವರು ಮನೆಗೆ ಹೋಗಿದ್ದರು. ಉದಯ್‌ಕುಮಾರ್ ಆ.31ರ ರಾತ್ರಿ 11.30ರ ಸಮಯದಲ್ಲಿ ಮನೆಗೆ ಬೀಗ ಹಾಕಿಕೊಂಡು ರಾತ್ರಿ ಪಾಳಿ ಕೆಲಸಕ್ಕೆ ಹೋಗಿದ್ದರು. ಮರುದಿನ ಬೆಳಗ್ಗೆ 8ಕ್ಕೆ ಮನೆಗೆ ವಾಪಸ್ಸಾದಾಗ ಮನೆ ಬಾಗಿಲು ಮೀಟಿದ್ದನ್ನು ಕಂಡು ಒಳಹೋಗಿ ಪರಿಶೀಲಿಸಿದಾಗ ಕಳ್ಳತನವಾಗಿರುವುದು ಗೊತ್ತಾಗಿದೆ.

ಕೆಲಸಕ್ಕೆ ಹೋಗುವಾಗ ಬೆಡ್ ರೂಂಗೆ ಬೀಗ ಹಾಕಿ ಕೀಯನ್ನು ಕಾಟ್ ಕೆಳಗೆ ಇಟ್ಟಿದ್ದೆ. ಯಾರೋ ಮನೆಯ ಬಾಗಿಲು ಬ್ರೇಕ್ ಮಾಡಿ, ದೇವರ ಕೋಣೆಯಲ್ಲಿದ್ದ ದೀಪಾಲೆ ಕಂಬ, ದೇವರ ಮುಖವಾಡ, ತಟ್ಟೆ–ಚೊಂಬು, ಗಣಪತಿ ವಿಗ್ರಹ, ಬೆಡ್ ರೂಂ ಬೀರುವಿನಲ್ಲಿ ಪರ್ಸ್‌ನಲ್ಲಿಟ್ಟಿದ್ದ ಕಾಲ್ಗೆಜ್ಜೆ, ಕಾಲುಂಗುರ ಸೇರಿದಂತೆ ಹಲವು ಬೆಳ್ಳಿ ವಸ್ತುಗಳು, ಸುಮಾರು 3 ಲಕ್ಷ ರೂ. ಬೆಲೆಯ ಚಿನ್ನದ ಸರ, 22,500 ರೂ. ಬೆಲೆಯ ಓಲೆ, ಗುಂಡು, ಮೂಗುತಿ, ಡಾಲರ್ ಸೇರಿದಂತೆ ಸುಮಾರು 3.90 ಲಕ್ಷ ರೂ. ಚಿನ್ನಾಭರಣ ಹಾಗೂ 50 ಸಾವಿರ ರೂ. ಹಣ ಕಳ್ಳತನ ಮಾಡಿದ್ದಾರೆ ಎಂದು ಉದಯ್‌ಕುಮಾರ್, ಮೇಟಗಳ್ಳಿ ಪೊಲೀಸ್ ಠಾಣೆಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ.

ನಿವಾಸಿಗಳಲ್ಲಿ ಆತಂಕ: ಬಿ.ಎಂ.ಶ್ರೀ.ನಗರದಲ್ಲಿ ಸರಣಿ ಕಳ್ಳತನ ನಡೆಯುತ್ತಿದ್ದು, ಇಲ್ಲಿನ ನಿವಾಸಿಗಳು ಭಯಭೀತರಾಗಿದ್ದಾರೆ. ಒಂದು ರಾತ್ರಿ ಮನೆಗೆ ಬೀಗ ಹಾಕಿ ಹೊರಹೋಗುವುದಕ್ಕೂ ಹೆದರುತ್ತಿದ್ದಾರೆ. ಹೊಂದಿಕೊಂಡಿರುವ ಮನೆಗಳಲ್ಲೂ ಖದೀಮರು ನಿರ್ಭಯವಾಗಿ ದೋಚುತ್ತಿದ್ದಾರೆ. ದುಷ್ಕರ್ಮಿಗಳು ಬಾಗಿಲು ಬಡಿದು, ಮನೆಯೊಳಗಿದ್ದವರು ಕೂಗಿಕೊಂಡಿದ್ದರಿಂದ ಪರಾರಿಯಾಗಿರುವ ಘಟನೆಗಳೂ ನಡೆದಿವೆ. ಪೊಲೀಸರು ರಾತ್ರಿ ಗಸ್ತು ಮಾಡಿದರೂ ಖದೀಮರು ಹೊಂಚು ಹಾಕಿ ಕಳ್ಳತನ ಮಾಡುತ್ತಿದ್ದಾರೆ. ವಿಶೇಷ ಕಾರ್ಯಾಚರಣೆ ನಡೆಸಿ, ಖದೀಮರ ಹೆಡೆಮುರಿ ಕಟ್ಟುವಂತೆ ಸ್ಥಳೀಯರು ಪೊಲೀಸರಲ್ಲಿ ಮನವಿ ಮಾಡಿದ್ದಾರೆ.

ಒಂದೇ ಮಾದರಿ ಟ್ಯಾಕ್ಸಿ ದರ ನಿಗದಿ ನಿರ್ಧಾರ

ಮೈಸೂರು, ಸೆ.2(ಎಸ್‌ಪಿಎನ್)– ಅಗ್ರಿಗೇಟರ್ ನಿಯಮಗಳಡಿ ಕಾರ್ಯಾಚರಣೆ ಮಾಡುವ ವಿವಿಧ ಮಾದರಿಯ ಟ್ಯಾಕ್ಸಿಗಳ ಪ್ರಯಾಣ ದರಗಳನ್ನು ಒಂದೇ ಮಾದರಿಯಲ್ಲಿ ನಿಗಧಿಪಡಿಸಿದ್ದು, ಈ ಕುರಿತು ಕ್ರಮಕೈಗೊಳ್ಳುವಂತೆ ಸಾರಿಗೆ ಮತ್ತು ರಸ್ತೆ ಸುರಕ್ಷತೆ ಆಯುಕ್ತರ ಕಚೇರಿಯಿಂದ ರಾಜ್ಯದ ಎಲ್ಲಾ ಉಪ ಸಾರಿಗೆ ಆಯುಕ್ತರು ಹಾಗೂ ಸಾರಿಗೆ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ.

ಬೆಂಗಳೂರು ನಗರ ಮಿತಿಯೊಳಗೆ ಕಾರ್ಯಾಚರಣೆ ಮಾಡುವ ಎಲ್ಲಾ ಟ್ಯಾಕ್ಸಿ ಸೇವೆಗಳಿಗೆ 'ಒಂದು ನಗರ ಒಂದು ದರ' ನೀತಿಯನ್ನು ಅನುಷ್ಠಾನಗೊಳಿಸುವಂತೆ ರಾಜ್ಯ ಖಾಸಗಿ ಸಾರಿಗೆ ಅಸೋಸಿಯೇಷನ್ ಅಧ್ಯಕ್ಷರು, ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದ್ದರು. ಈ ಪತ್ರವನ್ನು ಪರಿಶೀಲಿಸಿದ ಸಾರಿಗೆ ಇಲಾಖೆ, ಈಗಾಗಲೇ ಅಧಿಸೂಚನೆಯಲ್ಲಿ ಸೂಚಿಸಿರುವಂತೆ ರಾಜ್ಯಾದ್ಯಂತ (ಬೆಂಗಳೂರು ನಗರ ಸೇರಿದಂತೆ) ಮತ್ತು ಅಗ್ರಿಗೇಟರ್ ನಿಯಮಗಳಡಿ ಕಾರ್ಯಾಚರಣೆ ಮಾಡುವ ವಿವಿಧ ಮಾದರಿ ಟ್ಯಾಕ್ಸಿಗಳ ಪ್ರಯಾಣ ದರಗಳನ್ನು ಒಂದೇ ಮಾದರಿಯಲ್ಲಿ ನಿಗಧಿಪಡಿಸಿ ಆದೇಶಿಸಿದೆ

ವಿಜಯ ವಿಠ್ಠಲ ಶಾಲೆಯಲ್ಲಿ ಅಮ್ಮ–ಕಂದಮ್ಮಗಳ ದಿನ ಆಚರಣೆ


ಮೈಸೂರಿನ ವಿಜಯ ವಿಠ್ಠಲ ಶಾಲೆಯಲ್ಲಿ ಆಯೋಜಿಸಿದ್ದ 'ಅಮ್ಮ ಮತ್ತು ಮುದ್ದು ಕಂದಮ್ಮಗಳ ದಿನ' ವಿಶೇಷ ಕಾರ್ಯಕ್ರಮದಲ್ಲಿ ತಾಯಂದಿರುವ ಹಾಗೂ ಮಕ್ಕಳು ವಿವಿಧ ಚಟುವಟಿಕೆಗಳಲ್ಲಿ ಪಾಲ್ಗೊಂಡು ಸಂಭ್ರಮಿಸಿದರು.

ಮೈಸೂರು, ಸೆ.2– ಮೈಸೂರಿನ ವಿಜಯ ವಿಠ್ಠಲ ಶಾಲೆಯಲ್ಲಿ 'ಅಮ್ಮ ಮತ್ತು ಮುದ್ದು ಕಂದಮ್ಮಗಳ ದಿನ' ಆಚರಿಸಲಾಯಿತು.


ಈ ವಿಶೇಷ ಕಾರ್ಯಕ್ರಮದಲ್ಲಿ ಶಾಲೆಯ ಕೆಜಿ ವಿಭಾಗದ ನೂರಕ್ಕೂ ಹೆಚ್ಚು ಮಕ್ಕಳು ಹಾಗೂ ಅವರ ಕುಟುಂಬದವರು ಒಟ್ಟುಗೂಡಿ ಸಂಭ್ರಮಿಸಿದರು. ತಾಯಂದಿರುವ ಮತ್ತು ಮಕ್ಕಳ ನಡುವಿನ ಬಾಂಧವ್ಯದ ಮಹತ್ವ ಸಾರುವಂತಹ ಸೃಜನಶೀಲ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು.

ಪುಟ್ಟ ಮಕ್ಕಳಲ್ಲಿ ಸಹಾಯ ಮಾಡುವ ಗುಣವನ್ನು ಬಿತ್ತಿ, ಕೆಲ ಚಟುವಟಿಕೆಗಳ ಮೂಲಕ ಮಕ್ಕಳನ್ನು ಪ್ರೋತ್ಸಾಹಿಸಲಾಯಿತು. ಮನೆಯಲ್ಲಿ ಅಮ್ಮನಿಗೆ ಹೇಗೆ ಸಹಾಯ ಮಾಡಬಹುದು ಎಂದು ಮುಗ್ದ ಮನಸ್ಸುಗಳಿಗೆ ತಿಳಿಸಿಕೊಡಲಾಯಿತು. ಮಕ್ಕಳ ಕಲರವ, ಸಂತೋಷವನ್ನು ಕಂಡು ಕುಟುಂಬದವರೂ ಸಂಭ್ರಮಿಸಿದರು.

ಇದಕ್ಕೂ ಮುನ್ನ ಬೋಳು ಮರದ ಚಿತ್ರಕ್ಕೆ ಎಲೆಗಳನ್ನು ಅಂಟಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ಸಂಸ್ಥೆಯ ಗೌರವ ಕಾರ್ಯದರ್ಶಿ ಆರ್.ವಾಸುದೇವ್ ಭಟ್ ಮಾತನಾಡಿ, ಪ್ರಕೃತಿಯೊಂದಿಗೆ ಮಕ್ಕಳ ಬೆಳವಣಿಗೆಯುವುದು ಬಹಳ ಮುಖ್ಯ. ಅದು ಸುಂದರವಾದ ಪ್ರಯಾಣದ ಆರಂಭವನ್ನು ಸಂಕೇತಿಸುತ್ತದೆ ಎಂದು ಹೇಳಿದರು. ಪ್ರಾಂಶುಪಾಲರಾದ ಶ್ರೀಮತಿ ಎಸ್.ಎ. ವೀಣಾ ಅವರು ಪ್ರಸ್ತುತ ಯಾಂತ್ರಿಕ ಯುಗದಲ್ಲಿ ತಾಯಿ ಮತ್ತು ಮಕ್ಕಳ ಬಾಂಧವ್ಯ ಕಾಯ್ದುಕೊಳ್ಳುವ ಅಗತ್ಯತೆ ಹಾಗೂ ಅನಿವಾರ್ಯತೆಯನ್ನು ತಿಳಿಸಿದರು. ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ನರ್ಸಿಂಗ್ ಕಾಲೇಜು ಶುಲ್ಕ ನಿಯಂತ್ರಣಕ್ಕೆ ಪ್ರಾಧಿಕಾರ

ಬೆಂಗಳೂರು: ರಾಜ್ಯದಲ್ಲಿ ನರ್ಸಿಂಗ್ ಕಾಲೇಜುಗಳ ಶುಲ್ಕ ನಿಯಂತ್ರಣಕ್ಕೆ ಪ್ರಾಧಿಕಾರ ರಚಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ ಅವರು ಹೇಳಿದರು.



ವಿಕಾಸಸೌಧದಲ್ಲಿ ಇಲಾಖೆ ಅಧಿಕಾರಿಗಳ ಜತೆ ಸೋಮವಾರ ನಡೆಸಿದ ಸಭೆಯಲ್ಲಿ ಈ ವಿವರ ನೀಡಿದರು. ನರ್ಸಿಂಗ್ ಕಾಲೇಜುಗಳಲ್ಲಿ ಅಧಿಕ ಶುಲ್ಕ ವಸೂಲು ಮಾಡುತ್ತಿರುವ ಬಗ್ಗೆ ನಮ್ಮ ಕಚೇರಿಗೆ ಹಲವಾರು ದೂರುಗಳು ಸಲ್ಲಿಕೆಯಾಗಿವೆ. ಇದರಿಂದ ವಿದ್ಯಾರ್ಥಿಗಳಿಗೆ ಹಣಕಾಸಿನ ಹೊರೆ ಆಗುತ್ತಿದೆ. ಇದನ್ನು ತಪ್ಪಿಸುವ ನಿಟ್ಟಿನಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಜಂಟಿ ಕಾರ್ಯದರ್ಶಿಗಳ ನೇತೃತ್ವದಲ್ಲಿ 5 ಸದಸ್ಯರ ಶುಲ್ಕ ನಿಯಂತ್ರಣ ಪ್ರಾಧಿಕಾರ ರಚಿಸಲಾಗುವುದು ಎಂದು ಹೇಳಿದರು.

ನರ್ಸಿಂಗ್ ಕಾಲೇಜುಗಳ ಶುಲ್ಕಗಳನ್ನು ಪರಿಶೀಲಿಸುವ ಕಾರ್ಯವನ್ನು ಈ ಪ್ರಾಧಿಕಾರಕ್ಕೆ ವಹಿಸಲಾಗುವುದು. ಸರ್ಕಾರ ನಿಗದಿಪಡಿಸಿರುವುದಕ್ಕಿಂತಲೂ ಹೆಚ್ಚು ಶುಲ್ಕ ವಸೂಲು ಮಾಡುತ್ತಿರುವ ಸಂಸ್ಥೆಗಳ ಪ್ರಮಾಣ ಪತ್ರಗಳನ್ನು ರದ್ದುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈಗ ಸರ್ಕಾರಿ ಕೋಟಾದಡಿ ಪ್ರವೇಶ ಪಡೆಯುವ ವಿದ್ಯಾರ್ಥಿಗೆ 10,000, ಆಡಳಿತ ಮಂಡಳಿ ಕೋಟಾದಡಿ ಪ್ರವೇಶ ಪಡೆಯುವ ವಿದ್ಯಾರ್ಥಿಗೆ 1 ಲಕ್ಷ ಮತ್ತು ಹೊರ ರಾಜ್ಯದವರಿಗೆ 1.40 ಲಕ್ಷ ಶುಲ್ಕ ಇದೆ. ಈ ಶುಲ್ಕವನ್ನು ಶೇ 20ರಷ್ಟು ಹೆಚ್ಚಿಸಬೇಕು ಎಂದು ನರ್ಸಿಂಗ್ ಕಾಲೇಜುಗಳ ಆಡಳಿತ ಮಂಡಳಿ ಪ್ರತಿನಿಧಿಗಳು ಇತ್ತೀಚೆಗೆ ಮಾಡಿದ್ದ ಮನವಿಯನ್ನು ಸಚಿವರು ತಿರಸ್ಕರಿಸಿದರು.

ಪ್ರಾಧಿಕಾರವು ಬಿಎಸ್‌ಸಿ ನರ್ಸಿಂಗ್, ಜನರಲ್ ನರ್ಸಿಂಗ್ ಮತ್ತು ಮಿಡ್‌ವೈಫ್ರೀ (ಜಿಎನ್‌ಎಂ) ಡಿಪ್ಲೊಮೊ ಕೋರ್ಸ್‌ಗಳ ಶುಲ್ಕದ ಬಗ್ಗೆಯೂ ನಿಗಾವಹಿಸಲಿದೆ ಎಂದರು. ನರ್ಸಿಂಗ್ ಕಾಲೇಜುಗಳನ್ನು ನಡೆಸಲು ಅನುಮತಿ ಪಡೆದಿರುವ ಕಟ್ಟಡಗಳಲ್ಲಿ ನರ್ಸಿಂಗ್ ಕೋರ್ಸ್‌ಗಳನ್ನು ಮಾತ್ರ ನಡೆಸಬೇಕು. ಬೇರೆ ಯಾವುದೇ ಕೋರ್ಸ್‌ಗಳನ್ನು ನಡೆಸುತ್ತಿದ್ದರೆ ಅಂತಹ ಕಾಲೇಜುಗಳ ಅನುಮತಿ ಹಿಂಪಡೆಯಬೇಕು ಎಂದೂ ಪಾಟೀಲ ನಿರ್ದೇಶನ ನೀಡಿದರು.

ಪ್ಯಾರಾಲಿಂಪಿಕ್ಸ್: ಭಾರತಕ್ಕೆ ನಾಲ್ಕನೇ ಬೆಳ್ಳಿ ಪದಕ



ಪ್ಯಾರಿಸ್: ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಸ್ವಲ್ಪದರಲ್ಲೇ ಚಿನ್ನದ ಪದಕ ಕೈತಪ್ಪಿದೆ. ಇಂದು ನಡೆದ ಮಹಿಳೆಯರ ಸಿಂಗಲ್ಸ್ ಬ್ಯಾಡ್ಮಿಂಟನ್ ಎಸ್‌ಯು5 ಈವೆಂಟ್‌ನಲ್ಲಿ ಭಾರತದ ತುಳಸಿಮತಿ ಮುರುಗೇಶನ್ ಬೆಳ್ಳಿ ಪದಕವನ್ನು ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆ. ಏಕಪಕ್ಷೀಯವಾಗಿ ನಡೆದ ಈ ಫೈನಲ್ ಪಂದ್ಯದಲ್ಲಿ ಚೀನಾದ ಕ್ಯು ಕ್ಸಿಯಾ ಯಾಂಗ್ ವಿರುದ್ಧ 0–2 (17–21, 10–21) ರಿಂದ ಸೋತು ಬೆಳ್ಳಿ ಪದಕವನ್ನು ತನ್ನದಾಗಿಸಿಕೊಂಡರು. ಮಹಿಳೆಯರ SU5 ವಿಭಾಗದಲ್ಲಿ ಚೊಚ್ಚಲ ಪ್ಯಾರಾಲಿಂಪಿಕ್ಸ್ ಬೆಳ್ಳಿ ಪದಕ ಗೆದ್ದ ತುಳಸಿಮತಿ ಮುರುಗೇಶನ್ ಪ್ಯಾರಾಲಿಂಪಿಕ್ಸ್‌ನಲ್ಲಿ ಪದಕ ಗೆದ್ದ ಮೊದಲ ಭಾರತೀಯ ಮಹಿಳಾ ಬ್ಯಾಡ್ಮಿಂಟನ್ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು.ಇದರೊಂದಿಗೆ ಪ್ಯಾರಾಲಿಂಪಿಕ್ಸ್‌ನಲ್ಲಿ ಭಾರತ ಪದಕಗಳ ಸಂಖ್ಯೆ ಎರಡಂಕಿ ಮುಟ್ಟಿದೆ.

ಇತಿಹಾಸ ಸೃಷ್ಟಿಸಿದ ತುಳಸಿಮತಿ: ತುಳಸಿಮತಿ ಮುರುಗೇಶನ್ ಫೈನಲ್ ಪಂದ್ಯದಲ್ಲಿ ಸೋಲನುಭವಿಸಬೇಕಾಗಿ ಬಂದರೂ ಈ ಪಂದ್ಯ ಅವರಿಗೆ ಹಾಗೂ ಇಡೀ ದೇಶಕ್ಕೆ ವಿಶೇಷವಾಗಿದೆ. ಈ ಮೊದಲು ಪ್ಯಾರಾಲಿಂಪಿಕ್ಸ್‌ನಲ್ಲಿ ಬ್ಯಾಡ್ಮಿಂಟನ್ ವಿಭಾಗದಲ್ಲಿ ಭಾರತದ ಯಾವುದೇ ಮಹಿಳಾ ಆಟಗಾರ್ತಿ ಪದಕ ಗೆದ್ದಿರಲಿಲ್ಲ. ಚೀನಾದ ಯಾಂಗ್ ಕ್ಯು ಜಿಯಾ ವಿರುದ್ಧದ ಫೈನಲ್ ಪಂದ್ಯದಲ್ಲಿ ತುಳಸಿಮತಿ ಮುರುಗೇಶನ್ ಉತ್ತಮ ಆರಂಭ ನೀಡಿದರೂ ಲಯವನ್ನು ಕಾಯ್ದುಕೊಳ್ಳಲು ಸಾಧ್ಯವಾಗಲಿಲ್ಲ. ಹೀಗಾಗಿ ಮೊದಲ ಸೆಟ್ ಅನ್ನು 17–21 ರಲ್ಲಿ ಸೋತ ಅವರು ಎರಡನೇ ಸೆಟ್ ಅನ್ನು 10–21 ರಿಂದ ಕಳೆದುಕೊಂಡರು. ಇದರಿಂದಾಗಿ ಅವರು ಬೆಳ್ಳಿ ಪದಕಕ್ಕೆ ತೃಪ್ತಿ ಪಡಬೇಕಾಯಿತು.

ಕಂಚು ಗೆದ್ದ ಮನೀಶಾ ರಾಮದಾಸ್: ಮತ್ತೊಂದೆಡೆ, ಪ್ಯಾರಾ ಬ್ಯಾಡ್ಮಿಂಟನ್ನ ಮಹಿಳೆಯರ SU5 ವಿಭಾಗದಲ್ಲಿ ಅಂದರೆ ಇದೇ ಈವೆಂಟ್‌ನಲ್ಲಿ ಮನೀಶಾ ರಾಮದಾಸ್ ಕಂಚಿನ ಪದಕವನ್ನು ತನ್ನದಾಗಿಸಿಕೊಂಡರು. ಸೆಮಿಫೈನಲ್ ಪಂದ್ಯದಲ್ಲಿ ಮನೀಶಾ ರಾಮದಾಸ್ ಇದೇ ತುಳಸಿಮತಿ ಮುರುಗೇಶನ್ ವಿರುದ್ಧ ಸೋತಿದ್ದರು. ಹೀಗಾಗಿ ಕಂಚಿನ ಪದಕಕ್ಕಾಗಿ ನಡೆದ ಪಂದ್ಯದಲ್ಲಿ ಮನೀಶಾ ರಾಮದಾಸ್, ಡೆನ್ಮಾರ್ಕ್‌ನ ಕ್ಯಾಥರೀನ್ ರೋಸೆಂಗ್ರೆನ್ ಅವರನ್ನು ಏಕಪಕ್ಷೀಯವಾಗಿ ಸೋಲಿಸಿ ಕಂಚು ಗೆದ್ದರು. ಈ ಪಂದ್ಯದ ಮೊದಲ ಗೇಮ್ ಅನ್ನು 21–12 ರಿಂದ ಗೆದ್ದುಕೊಂಡ ಅವರು ಎರಡನೇ ಗೇಮ್ ಅನ್ನು 21–8 ರಲ್ಲಿ ಗೆದ್ದು ಕಂಚಿನ ಪದಕವನ್ನು ಗೆದ್ದರು. ಇದರೊಂದಿಗೆ ಪ್ಯಾರಾಲಿಂಪಿಕ್ಸ್ ನಲ್ಲಿ ಪದಕ ಗೆದ್ದ ಭಾರತದ ಎರಡನೇ ಮಹಿಳಾ ಬ್ಯಾಡ್ಮಿಂಟನ್ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

ಭಾರತ ಇದುವರೆಗೆ 11 ಪದಕಗಳನ್ನು ಗೆದ್ದಿದೆ: ಪ್ಯಾರಿಸ್ ಪ್ಯಾರಾಲಿಂಪಿಕ್ಸ್ 2024 ರಲ್ಲಿ ಭಾರತ ಇದುವರೆಗೆ 11 ಪದಕಗಳನ್ನು ಗೆದ್ದಿದೆ. ಇದರಲ್ಲಿ 2 ಚಿನ್ನ, 4 ಬೆಳ್ಳಿ ಮತ್ತು 5 ಕಂಚಿನ ಪದಕಗಳು ಸೇರಿವೆ. ಭಾರತಕ್ಕೆ ಮೊದಲ ಚಿನ್ನದ ಪದಕವನ್ನು ಶೂಟರ್ ಅವನಿ ಲೇಖರಾ ಅವರು 10 ಮೀಟರ್ ಏರ್ ರೈಫಲ್ SH1 ಈವೆಂಟ್‌ನಲ್ಲಿ ಗೆದ್ದುಕೊಟ್ಟಿದ್ದರು. ಅದಾದ ನಂತರ ಇಂದು ನಡೆದ ಪುರುಷರ ಸಿಂಗಲ್ಸ್ ಬ್ಯಾಡ್ಮಿಂಟನ್ SL3 ವಿಭಾಗದಲ್ಲಿ ಪ್ಯಾರಾ–ಬ್ಯಾಡ್ಮಿಂಟನ್ ಆಟಗಾರ ನಿತೀಶ್ ಕುಮಾರ್ ಎರಡನೇ ಚಿನ್ನದ ಪದಕವನ್ನು ಗೆಲ್ಲುವಲ್ಲಿ ಯಶಸ್ವಿಯಾದರು.

ಐಎಎಫ್ ಸು–30 ಎಂಕೆಐ ಯುದ್ಧ ವಿಮಾನಕ್ಕೆ ಹೆಚ್‌ಎಎಲ್‌ನಿಂದ 240 ಎಂಜಿನ್

ಕೇಂದ್ರ ಸಂಪುಟ ಸಮಿತಿ ಅಸ್ತು



ನವದೆಹಲಿ: ಭಾರತೀಯ ವಾಯುಪಡೆಯಲ್ಲಿರುವ ಸುಖೋಯ್–30ಎಂಕೆಐ ಯುದ್ಧ ವಿಮಾನಕ್ಕೆ ಅಗತ್ಯವಿರುವ 240 ಏರೊ ಎಂಜಿನ್‌ಗಳನ್ನು ಹಿಂದುಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನಿಂದ ಖರೀದಿಸುವ ಪ್ರಸ್ತಾವಕ್ಕೆ ಕೇಂದ್ರ ಸಂಪುಟ ಸಮಿತಿ ಸೋಮವಾರ ಒಪ್ಪಿಗೆ ಸೂಚಿಸಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

ಈ ಕುರಿತು ಪ್ರಕಟಣೆ ನೀಡಿರುವ ಸಚಿವಾಲಯ, 26 ಸಾವಿರ ಕೋಟಿ ಮೊತ್ತದ ವಹಿವಾಟು ಇದಾಗಿದ್ದು, ಎಂಜಿನ್‌ಗಳ ಹಸ್ತಾಂತರ 2025ರಿಂದ ಆರಂಭವಾಗಿ ಮುಂದಿನ ಎಂಟು ವರ್ಷಗಳಲ್ಲಿ ಪೂರ್ಣಗೊಳ್ಳಲಿದೆ ಎಂದಿದೆ. ಸು–30ಎಂಕೆಐ ಭಾರತೀಯ ವಾಯುಸೇನೆಯಲ್ಲಿರುವ ಅತ್ಯಂತ ಶಕ್ತಿಶಾಲಿ ಫೈಟರ್ ಜೆಟ್ ಆಗಿದೆ. ಇದಕ್ಕೆ ಅಗತ್ಯವಿರುವ ಎಎಲ್–31ಎಫ್‌ಪಿ ಎಂಬ ಏರೊ ಎಂಜಿನ್‌ಗಳನ್ನು ಖರೀದಿಸುವ ಕುರಿತು ರಕ್ಷಣಾ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಒಟ್ಟು 240 ಎಂಜಿನ್‌ಗಳಿಗೆ ತೆರಿಗೆ ಹಾಗೂ ಇನ್ನಿತರ ಸುಂಕ ಸೇರಿ ಒಟ್ಟು 26 ಸಾವಿರ ಕೋಟಿಯಾಗಲಿದೆ ಎಂದು ಹೇಳಿದೆ. ಈ ಎಎಲ್–31 ಎಫ್‌ಪಿ ಎಂಜಿನ್ ಭಾರತದಲ್ಲಿ ತಯಾರಾಗುತ್ತಿದ್ದು, ಇದರಲ್ಲಿ ಶೇ. 54ರಷ್ಟು ಸ್ವದೇಶಿ ಉಪಕರಣಗಳಿವೆ. ಈ ಎಂಜಿನ್ ಎಚ್‌ಎಎಲ್‌ನ ಕೋರಾಪುಟ್ ವಿಭಾಗದಲ್ಲಿ ತಯಾರಾಗಲಿದೆ ಎಂದು ಪ್ರಕಟಣೆಯಲ್ಲಿ ಹೇಳಲಾಗಿದೆ.

ಪ್ರಧಾನಮಂತ್ರಿ ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು,ಸೆ.2– 2024–25 ನೇ ಸಾಲಿನ ವೃತ್ತಿಪರ ಕೋರ್ಸ್‌ಗಳಲ್ಲಿ ಮೊದಲನೇ ವರ್ಷದಲ್ಲಿ ಓದುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ (ಸೈನ್ಯಾಧಿಕಾರಿಗಳ ಮಕ್ಕಳನ್ನು ಹೊರತುಪಡಿಸಿ) ಕೇಂದ್ರೀಯ ಸೈನಿಕ ಮಂಡಳಿಯಿಂದ ಪ್ರಧಾನಮಂತ್ರಿ ಶಿಷ್ಯವೇತನಕ್ಕಾಗಿ ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನವಾಗಿದ್ದು, ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು www.ksb.gov.inನಲ್ಲಿ ಸಲ್ಲಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಾನಗರಪಾಲಿಕೆ ನೌಕರರ ಸಂಘದ 97ನೇ ವಾರ್ಷಿಕ ಸಭೆ ಯಶಸ್ವಿ



ಮೈಸೂರಿನ ಟೌನ್‌ಹಾಲ್‌ನಲ್ಲಿ ಮಹಾನಗರಪಾಲಿಕೆ ನೌಕರರ ಸಹಕಾರ ಸಂಘದ 97ನೇ ಸರ್ವ ಸದಸ್ಯರ ಮಹಾಸಭೆ ಯಶಸ್ವಿಯಾಗಿ ನಡೆಯಿತು.

ಮೈಸೂರು,ಸೆ.2–ಮಹಾನಗರ ಪಾಲಿಕೆ ನೌಕರರ ಸಹಕಾರ ಸಂಘದ 97ನೇ ಸರ್ವ ಸದಸ್ಯರ ಮಹಾಸಭೆ ಟೌನ್ ಹಾಲ್‌ನಲ್ಲಿ ಯಶಸ್ವಿಯಾಗಿ ನಡೆಯಿತು.

ವಾರ್ಷಿಕ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಸಂಘದ ಅಧ್ಯಕ್ಷ ಜವರೇಗೌಡ ಮಾತನಾಡಿ, ಶತಮಾನದ ಹೊಸ್ತಿಲಲ್ಲಿರುವ ಸಂಘ ಇಷ್ಟೊಂದು ಯಶಸ್ವಿಯಾಗಿ ಮುನ್ನಡೆಯಲು ಎಲ್ಲಾ ಪದಾಧಿಕಾರಿಗಳು ಹಾಗೂ ನಿರ್ದೇಶಕರು, ಸದಸ್ಯರ ಸಹಕಾರ ಕಾರಣವಾಗಿದೆ ಎಂದು ಹೇಳಿದರು.

ಸಂಘದ ಉಪಾಧ್ಯಕ್ಷ ಸಿ.ರವಿಶಂಕರ್, ಖಜಾಂಚಿ ಎನ್.ಪುಟ್ಟಸ್ವಾಮಿ, ನಿರ್ದೇಶಕರಾದ ಎಂ.ಬಸವಣ್ಣ, ಬಿ.ಭಾಸ್ಕರ್, ಡಿ.ಸುರೇಂದ್ರಕುಮಾರ್, ಶಂಭು, ಮಂಜುಕುಮಾರ್, ಪಿ.ಶೀಲಾ, ಎಸ್.ಮೈತ್ರಿ, ಬಿ.ರಾಜು, ಮಹದೇವ ಸ್ವಾಮಿ, ಕಾರ್ಯದರ್ಶಿ ಶಿವಕುಮಾರ್, ಅಕೌಂಟೆಂಟ್ ಎಂ.ಸಿದ್ದಪ್ಪಾಜಿ, ಮೋಹನ್ ಕುಮಾರ್, ಸುರೇಶ್ ಇನ್ನಿತರರು ಉಪಸ್ಥಿತರಿದ್ದರು.

ಅಭಿನಂದನೆ...



ನಂಜನಗೂಡು ತಾಲೂಕು ಯಡಿಯಾಲದಲ್ಲಿ ಎಸಿಫ್ ಆಗಿ ಕಾರ್ಯನಿರ್ವಹಿಸಿ ಮಂಗಳೂರಿಗೆ ಡಿಸಿಎಫ್ ಆಗಿ ಬಡ್ತಿ ಹೊಂದಿದ ಕೆ.ಪರಮೇಶ್ವರ ಅವರನ್ನು ಮೈಸೂರು ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಕರುವಟ್ಟಿ ಬಸವರಾಜು ಆತ್ಮೀಯವಾಗಿ ಅಭಿನಂದಿಸಿದರು. ತಾಪಂ ಮಾಜಿ ಅಧ್ಯಕ್ಷ ಡಿ.ಎಸ್.ಮಹದೇವಪ್ಪ, ಮಾಜಿ ಅಧ್ಯಕ್ಷ ಬಸವರಾಜು, ಪ್ರಧಾನ ಕಾರ್ಯದರ್ಶಿ ಮಹೇಶ್, ಶಿವನಾಗಪ್ಪ ಇತರರಿದ್ದಾರೆ.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಹೇಳಿಕೆಗೆ ಖಂಡನೆ

ಮೈಸೂರು,ಸೆ.2(ಪಿಎಂ)– ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರ ಕುರಿತು ಪಾಳೇಗಾರಿಕೆ ಮನಸ್ಥಿತಿ ಎಂದಿರುವುದು ರಾಜ್ಯ ಬಿಜೆಪಿ ಉಪಾಧ್ಯಕ್ಷ ಎನ್.ಮಹೇಶ್ ಅವರಿಗೆ ಶೋಭೆಯಲ್ಲ ಎಂದು ಕೆಪಿಸಿಸಿ ಕಾರ್ಯದರ್ಶಿ ವರುಣ ಮಹೇಶ್ ಖಂಡಿಸಿದ್ದಾರೆ.




ವರುಣ ಮಹೇಶ್

ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರ ಬಗ್ಗೆ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರು ಯಾವುದೇ ಅವಹೇಳನಕಾರಿ ಹೇಳಿಕೆ ನೀಡಿಲ್ಲ. ಪ್ರಿಯಾಂಕ್ ಖರ್ಗೆಯವರು ಟ್ರಸ್ಟಿಗೆ ಕಾನೂನು ಪ್ರಕಾರವೇ ಐದು ಎಕರೆ ಭೂಮಿ ಪಡೆದಿದ್ದಾರೆ. ಅವರು ತಮ್ಮ ಸ್ವಂತಕ್ಕಾಗಿ ಭೂಮಿ ಪಡೆದಿಲ್ಲ ಎಂಬುದನ್ನು ಛಲವಾದಿ ನಾರಾಯಣ ಸ್ವಾಮಿ ಹಾಗೂ ಎನ್.ಮಹೇಶ್ ಮೊದಲು ಅರಿಯಬೇಕು. ಎಂ.ಬಿ. ಪಾಟೀಲ ಅವರು ಕ್ಷಮೆ ಯಾಚಿಸುವಂತಹ ಯಾವುದೇ ತಪ್ಪು ಮಾಡಿಲ್ಲ. ಅವರೊಬ್ಬ ಜವಾಬ್ದಾರಿ ಖಾತೆಯ ಸಚಿವರು ಎಂಬುದನ್ನು ತಿಳಿದು ಎನ್.ಮಹೇಶ್ ಮಾತನಾಡಬೇಕು ಎಂದು ಪ್ರಕಟಣೆಯಲ್ಲಿ ಅವರು ಕಿಡಿಕಾರಿದ್ದಾರೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು,ಸೆ.2–ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಪರಿಶಿಷ್ಟ ಜಾತಿಯ ಹೊಸ ವಿದ್ಯಾರ್ಥಿಗಳಿಗೆ (ಇದುವರೆಗೂ SSP ತಂತ್ರಾಂಶದಲ್ಲಿ ನೋಂದಣಿಯಾಗದ ಹಾಗೂ ನೋಂದಣಿಯಾದರೂ ಕಾರಣಾಂತರದಿಂದ ವಿದ್ಯಾರ್ಥಿ ವೇತನ ಮಂಜೂರು ಆಗದೇ ಇರುವವರು) ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 1ರಿಂದ 8ನೇ ತರಗತಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ.6 ಲಕ್ಷ ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ರೂ.2.5 ಲಕ್ಷದ ಒಳಗಿರಬೇಕು. ಆಸಕ್ತ ಅಭ್ಯರ್ಥಿಗಳು https://ssp.postmatric.karnataka.gov.in/ssppre ಮೂಲಕ ಅರ್ಜಿ ಸಲ್ಲಿಸಬಹುದು. ಮಾಹಿತಿಗೆ ಪಡುವಾರಹಳ್ಳಿಯ ಬಾಬು ಜಗಜೀವನರಾಂ ಭವನ ಕಟ್ಟಡದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ದೂ.ಸಂ.2520910 ಅನ್ನು ಸಂಪರ್ಕಿಸಬಹುದು.

ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸಹಾಯಧನ



ಮೈಸೂರು,ಸೆ.2–2024–25ನೇ ಸಾಲಿನ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ–ಸೂಕ್ಷ್ಮ ನೀರಾವರಿ (ಪ್ರತಿ ಹನಿಗೆ ಅಧಿಕ ಬೆಳೆ) ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿದ್ದು, ಆಸಕ್ತ ರೈತರು ಸಂಬಂಧಿಸಿದ ತಾಲೂಕಿನ ತೋಟಗಾರಿಕೆ ಕಚೇರಿಗಳನ್ನು ಸಂಪರ್ಕಿಸಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹನಿ ನೀರಾವರಿ ಮತ್ತು ತುಂತುರು ನೀರಾವರಿ ಅಳವಡಿಸಿದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವರ್ಗದ (RD ಸಂಖ್ಯೆ ಇರುವ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು ಕಡ್ಡಾಯ) ಹಾಗೂ ಇತರೆ ವರ್ಗದ ರೈತರಿಗೆ ಗರಿಷ್ಠ 2 ಹೆಕ್ಟೇರ್ ಪ್ರದೇಶದವರೆಗೆ ಶೇ.90ರಷ್ಟು ಸಹಾಯಧನ ನೀಡಲಾಗುವುದು. ಎಲ್ಲಾ ವರ್ಗದ ರೈತರಿಗೆ ಭಾರತ ಸರ್ಕಾರದ ಮಾರ್ಗಸೂಚಿಯನ್ವಯ 2 ಹೆಕ್ಟೇರ್ ಮೇಲ್ಪಟ್ಟು ಗರಿಷ್ಠ 5 ಹೆಕ್ಟೇರ್ ಪ್ರದೇಶದವರೆಗೆ ಶೇ.45ರಷ್ಟು ಸಹಾಯ ಧನ ನೀಡಲಾಗುವುದು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವರ್ಗದ ರೈತರು ಹನಿ ನೀರಾವರಿಗೆ ಸಹಾಯಧನ ಪಡೆದು 7 ವರ್ಷ ಕಳೆದಿದ್ದಲ್ಲಿ ಅಂತಹ ರೈತರು ಸಹಾಯಧನಕ್ಕೆ ಅರ್ಹರಿರುತ್ತಾರೆ.

ಅರ್ಜಿ, ದಾಖಲಾತಿಗಳ ವಿವರಗಳಿಗಾಗಿ ಮೈಸೂರು ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ.ಸಂ: 0821–2430450, ಹೆಚ್.ಡಿ.ಕೋಟೆ: 08228–255261, ಹುಣಸೂರು: 08222–252447, ಕೆ.ಆರ್.ನಗರ: 08223–262791, ನಂಜನಗೂಡು: 08221–226201, ಪಿರಿಯಾಪಟ್ಟಣ: 08223–273535, ಟಿ.ನರಸೀಪುರದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ.ಸಂ: 08227–260086 ಸಂಪರ್ಕಿಸಬಹುದು.

ಪ್ರತಿಯೊಂದು ಕಾಮಗಾರಿಯಲ್ಲೂ ಗುಣಮಟ್ಟ ಕಾಯ್ದುಕೊಳ್ಳಲು ಶಾಸಕ ಜಿ.ಟಿ.ದೇವೇಗೌಡರ ಸೂಚನೆ



ಮೈಸೂರಿನ ಚಾಮುಂಡಿಬೆಟ್ಟ, ಶ್ರೀರಾಂಪುರ ಹಾಗೂ ಲಿಂಗಾಂಬುದಿಪಾಳ್ಯದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಸೋಮವಾರ ಚಾಲನೆ ನೀಡಿದರು.

ಮೈಸೂರು,ಸೆ.2–ಗುಣಮಟ್ಟದ ಕಾಮಗಾರಿ ನಿರ್ವಹಿಸುವಂತೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಸೂಚಿಸಿದರು. ಅವರು ಚಾಮುಂಡಿಬೆಟ್ಟ, ಶ್ರೀರಾಂಪುರ ಹಾಗೂ ಲಿಂಗಾಂಬುದಿ ಪಾಳ್ಯದಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ, ಮಾತನಾಡಿದರು.

ಚಾಮುಂಡಿಬೆಟ್ಟದ ಪೌರಕಾರ್ಮಿಕರ ಕಾಲೋನಿಗೆ ರಸ್ತೆ, ಚರಂಡಿ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಆದರೆ ಸಂಪರ್ಕ ರಸ್ತೆ ಮತ್ತು ಸ್ಮಶಾನಕ್ಕೆ ಹೋಗುವ ರಸ್ತೆ ಅಭಿವೃದ್ಧಿಪಡಿಸುವಂತೆ ಕೋರಿದ್ದರು. ಇಂದು 50 ಲಕ್ಷ ವೆಚ್ಚದಲ್ಲಿ ಈ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಪಕ್ಕದಲ್ಲಿರುವ ಕೆರೆಯನ್ನು ಜಿ.ಕೆ.ಟೈರ್ಸ್ ಸಿ.ಎಸ್.ಆರ್. ಅನುದಾನದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದ್ದು, ಶೀಘ್ರದಲ್ಲಿ ಉದ್ಘಾಟನೆಗೊಳ್ಳಲಿದೆ ಎಂದು ಹೇಳಿದರು.

ನಂತರ ಶ್ರೀರಾಂಪುರದಲ್ಲಿ ರೂ. 100 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಚಾಲನೆ ನೀಡಿದರು. ಪಟ್ಟಣ ಪಂಚಾಯಿತಿ ವತಿಯಿಂದ ಸ್ವಚ್ಛತೆಯನ್ನು ಕಾಪಾಡುವಂತೆ ಸೂಚಿಸಿದರು. ನಂತರ ಲಿಂಗಾಂಬುದಿಪಾಳ್ಯದಲ್ಲಿ 50 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಚಾಲನೆ ನೀಡಿದರು.

ಸಮಾರಂಭದಲ್ಲಿ ಪರಸಯ್ಯನಹುಂಡಿ ಸುರೇಶ್, ಮಾಜಿ ತಾ.ಪಂ.ಸದಸ್ಯರಾದ ಯೋಗಶ್ರೀನಿವಾಸ್, ಹನುಮಂತು, ಮಾಜಿ ಗ್ರಾ.ಪಂ.ಸದಸ್ಯರಾದ ಕುಮಾರ್, ಗುರೂರು ಶಂಕರ್, ಮಹೇಶ್, ಶ್ರೀರಾಂಪುರ ಗ್ರಾಮಸ್ಥರು, ಲಿಂಗಾಂಬುದಿಪಾಳ್ಯದ ಗ್ರಾಮಸ್ಥರು, ನಿರ್ಮಿತಿ ಕೇಂದ್ರದ ಶ್ವೇತ, ಪಿಡಿಓ ರೂಪೇಶ್, ಶ್ರೀರಾಂಪುರ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸುರೇಶ್ ಇನ್ನಿತರರು ಭಾಗವಹಿಸಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಸೆ.2– ನಾಚನಹಳ್ಳಿ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾಮಗಾರಿ ನಿಮಿತ್ತ ಸೆ.3ರಂದು ಬೆಳಗ್ಗೆ 10ರಿಂದ ಸಂಜೆ 6 ಗಂಟೆವರೆಗೆ ನಾಚನಹಳ್ಳಿ, ಕಾಮಾಕ್ಷಿ ಆಸ್ಪತ್ರೆ ಸುತ್ತ–ಮುತ್ತ, 'ಡಿ' ಬ್ಲಾಕ್ ಜೆ.ಪಿ/ನಗರ, ಸಿದ್ದಲಿಂಗೇಶ್ವರ ಬಡಾವಣೆ 1ನೇ ಹಂತ, ಮುಡಾ 'ಎ' ಮತ್ತು 'ಬಿ' ವಲಯ, ಪೊಲೀಸ್ ಬೂತ್ ಸುತ್ತ–ಮುತ್ತ, ನಂಜನಗೂಡು ರಿಂಗ್ ರಸ್ತೆ ಸುತ್ತ–ಮುತ್ತ, ಕವಿತಾ ಬೇಕರಿ, ಜೆಪಿ.ನಗರ ಕೊನೆ ಬಸ್ ನಿಲ್ದಾಣ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ನಾಳೆ ಹಲವೆಡೆ ವಿದ್ಯುತ್ ವ್ಯತ್ಯಯ

ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿ ತುರ್ತು ನಿರ್ವಹಣಾ ಕಾಮಗಾರಿ ನಿಮಿತ್ತ ಸೆ.4ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6ರವರೆಗೆ ಮದ್ದೂರು, ಮದ್ದೂರು ಹುಂಡಿ, ಚುಂಚರಾಯನಹುಂಡಿ, ಎಸ್ ಕಲ್ಲಹಳ್ಳಿ, ಸೋಲಿಗರ ಕಾಲೋನಿ, ಗುಮ್ಮಚನಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಚೆಲುವಾಂಬ ಹೆರಿಗೆ ಆಸ್ಪತ್ರೆಗೆ ಭೇಟಿ





ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧ್ರಿ ಅವರು ಚೆಲುವಾಂಬ ಹೆರಿಗೆ ಆಸ್ಪತ್ರೆಗೆ ಭೇಟಿ ನೀಡಿ, ಮಹಿಳಾ ರೋಗಿಗಳಿಗೆ ವೈದ್ಯರ ಸ್ಪಂದನೆ, ಕುಡಿಯುವ ನೀರಿನ ಸೌಲಭ್ಯ, ಶೌಚಾಲಯಗಳ ಸೌಲಭ್ಯದ ಬಗ್ಗೆ ವಿಚಾರಿಸಿದರು. ಅಲ್ಲದೆ ಆಸ್ಪತ್ರೆಯ ಪಕ್ಕದಲ್ಲಿ ನಡೆಯುತ್ತಿರುವ ಕಾಮಗಾರಿಯು ನಿಧಾನಗತಿಯಲ್ಲಿರುವುದರಿಂದ ಸಾಕಷ್ಟು ಧೂಳು ಹಾಗೂ ಅನೈರ್ಮಲ್ಯ ವಾತಾವರಣದ ಕಾರಣದಿಂದ ರೋಗಿಗಳಿಗೆ ತೊಂದರೆಯಾಗುತ್ತಿದ್ದು, ನೈರ್ಮಲ್ಯತೆಯನ್ನು ಕಾಪಾಡಿಕೊಳ್ಳುವಂತೆ ಸೂಚಿಸಿದರು.

ದಸರಾ ಕಿರು ಸ್ತಬ್ಧಚಿತ್ರ ಸ್ಪರ್ಧೆಗೆ ಆಹ್ವಾನ

ಮೈಸೂರು, ಸೆ. 2(ಆರ್‌ಕೆ)– 2024ರ ಮೈಸೂರು ದಸರಾ ಕುರಿತು ನಾವೀನ್ಯತೆ ಮತ್ತು ಹೊಸ ಕಲ್ಪನೆಯುಳ್ಳ ಕಿರು ಸ್ತಬ್ಧಚಿತ್ರ ತಯಾರಿಸುವ ಸ್ಪರ್ಧೆಗೆ ಆಹ್ವಾನಿಸಲಾಗಿದೆ.

ಈ ಸ್ಪರ್ಧೆಯು ಸಾಂಸ್ಕೃತಿಕವಾಗಿ ಶ್ರೀಮಂತವಾದ ಮತ್ತು ಭವಿಷ್ಯದ ದೃಷ್ಟಿಕೋನ ಪ್ರತಿಬಿಂಬಿಸುವ ಸ್ತಬ್ಧಚಿತ್ರ ವಿನ್ಯಾಸಗಳನ್ನು ರಚಿಸುವ ಸಲುವಾಗಿ ಸಾರ್ವಜನಿಕ ಭಾಗಿದಾರಿಕೆಯನ್ನು ಉತ್ತೇಜಿಸುವ ಉದ್ದೇಶ ಹೊಂದಿದೆ. ಸ್ಪರ್ಧೆಯಲ್ಲಿ ಆಯ್ಕೆಯಾದ ಅತ್ಯುತ್ತಮ ವಿನ್ಯಾಸವನ್ನು ಸ್ತಬ್ಧಚಿತ್ರವಾಗಿ ಪರಿವರ್ತಿಸಿ ದಸರಾ ಜಂಬೂ ಸವಾರಿ ಮೆರವಣಿಗೆಯಲ್ಲಿ ಪ್ರದರ್ಶಿಸಲಾಗುವುದು ಎಂದು ದಸರಾ ಸ್ತಬ್ಧಚಿತ್ರ ಉಪಸಮಿತಿ ಉಪವಿಶೇಷಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಅಥವಾ ರಾಷ್ಟ್ರದ ಸಾಂಸ್ಕೃತಿಕ ಐತಿಹಾಸಿಕ ಅಥವಾ ಸಾಮಾಜಿಕ ಅಂಶಗಳನ್ನು ಪ್ರತಿಬಿಂಬಿಸುವ ಭವಿಷ್ಯಾತ್ಮಕ ಮುನ್ನೋಟವನ್ನು ಪ್ರೇರೇಪಿಸುವುದು ಇದರ ಉದ್ದೇಶವಾಗಿದ್ದು, ಸ್ಪರ್ಧಿಸಬಯಸುವವರು 2024ರ ಸೆ.13ರೊಳಗಾಗಿ https:||forms.gle|Ep9462Ghi2dx8NiKA ನಮೂನೆ ಭರ್ತಿ ಮಾಡಿ ನೋಂದಾಯಿಸಿಕೊಳ್ಳಬಹುದಾಗಿದೆ. ಸ್ಪರ್ಧಾ ಕಿರುಸ್ತಬ್ಧಚಿತ್ರವನ್ನು ಸೆ.17ರ ಸಂಜೆ 5 ಗಂಟೆಯೊಳಗೆ ಮೈಸೂರಿನ ಜಿಲ್ಲಾ ಪಂಚಾಯ್ತಿ ಕಚೇರಿಗೆ ಸಲ್ಲಿಸಬೇಕು, ಅದರೊಂದಿಗೆ 300 ಪದಗಳ ವಿವರಣೆಯನ್ನೂ ನೀಡಬೇಕು. ವಿಜೇತರಿಗೆ 25,000 ರೂ. ಬಹುಮಾನ ಹಾಗೂ ಪೂರ್ಣ ಪ್ರಮಾಣದ ಸ್ತಬ್ಧಚಿತ್ರವಾಗಿಸಲಾಗುವುದು. 15,000 ರೂ. ದ್ವಿತೀಯ ಹಾಗೂ 10,0000 ರೂ. ತೃತೀಯ ಬಹುಮಾನವಿದ್ದು, ಆಯ್ಕೆಯಾದ ಅತ್ಯುತ್ತಮ 10 ಕಿರುಸ್ತಬ್ಧಚಿತ್ರಗಳನ್ನು ದಸರಾ ವೇಳೆ ಪ್ರದರ್ಶಿಸಲಾಗುವುದು. ಆಸಕ್ತರು ಎಂ.ಚೇತನ್‌ಕುಮಾರ್–8296536692, ಎಂ.ಕೆ.ಯಶವಂತ–973840 5358 ಅವರನ್ನು ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆದುಕೊಳ್ಳುವಂತೆ ಕೋರಲಾಗಿದೆ.

ಉತ್ತರ ಪ್ರದೇಶದಲ್ಲಿ ತೋಳಗಳನ್ನು ಹಿಡಿಯಲು ಮಕ್ಕಳ ಮೂತ್ರದಲ್ಲಿ ಅದ್ದಿದ ಟೆಡ್ಡಿಗಳ ಬಳಕೆ!

ಬಹ್ರೈಚ್: ಕಾಡುಪ್ರಾಣಿಗಳು ನಾಡಿಗೆ ನುಗ್ಗಿ ರೈತರ ಬೆಳೆಗಳಿಗೆ, ಜನರ ಜೀವಕ್ಕೆ ಹಾನಿಯುಂಟುಮಾಡುವುದನ್ನು ತಡೆಯಲು ಹಳ್ಳಿಗಳಲ್ಲಿ ಜನರು ನಾನಾ ತಂತ್ರಗಳ ಮೊರೆ ಹೋಗುವುದನ್ನು ನೋಡಿರುತ್ತೇವೆ. ಉತ್ತರ ಪ್ರದೇಶದ ಬಹ್ರೈಚ್ ಜಿಲ್ಲೆಯಲ್ಲಿ ತೋಳಗಳನ್ನು ಹಿಡಿಯುವ ನಿಟ್ಟಿನಲ್ಲಿ ಇಲ್ಲಿನ ಅರಣ್ಯ ಇಲಾಖೆಯು ಮಕ್ಕಳ ಮೂತ್ರದಲ್ಲಿ ಅದ್ದಿದ ಬಣ್ಣಬಣ್ಣದ ಟೆಡ್ಡಿ ಗೊಂಬೆಗಳನ್ನು ಬಳಸುತ್ತಿದೆ.



ಕಳೆದ ಕೆಲವು ತಿಂಗಳುಗಳಿಂದ, ಬಹ್ರೈಚ್ ಪ್ರದೇಶದಲ್ಲಿ ಮಕ್ಕಳು ಮತ್ತು ಗ್ರಾಮಸ್ಥರ ಮೇಲೆ ತೋಳಗಳ ದಾಳಿ ಹೆಚ್ಚಾಗುತ್ತಿದೆ. ಈ ನರಭಕ್ಷಕಗಳನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ಈಗ ಗಾಢ ಬಣ್ಣದ ಟೆಡ್ಡಿ ಗೊಂಬೆಗಳನ್ನು ಇಟ್ಟು ಅದಕ್ಕೆ ತೋಳಗಳು ಬೀಳುವಂತೆ ಉಪಾಯ ಮಾಡುತ್ತಿದೆ. ಈ ಗೊಂಬೆಗಳನ್ನು ನದಿಯ ದಡದ ಬಳಿ, ತೋಳಗಳು ವಿಶ್ರಾಂತಿ ತೆಗೆದುಕೊಳ್ಳುವ ಸ್ಥಳದಲ್ಲಿ ಮತ್ತು ಗುಹೆಗಳ ಹತ್ತಿರ ಇರಿಸಲಾಗುತ್ತದೆ. ಮನುಷ್ಯನ ವಾಸನೆಯನ್ನು ಹಿಡಿದು ತೋಳಗಳು ಬರಲು ಮಕ್ಕಳ ಮೂತ್ರದಲ್ಲಿ ಗೊಂಬೆಗಳನ್ನು ಅದ್ದಿ ಇಡಲಾಗುತ್ತದೆ. ನಮ್ಮ ತಂತ್ರವು ಅವುಗಳನ್ನು ದಾರಿತಪ್ಪಿಸುವುದು, ವಸತಿ ಪ್ರದೇಶಗಳಿಂದ ದೂರ ಬಲೆಗಳು ಅಥವಾ ಪಂಜರಗಳ ಬಳಿಗೆ ಸೆಳೆಯುವುದಾಗಿದೆ ಎಂದು ವಿಭಾಗೀಯ ಅರಣ್ಯಾಧಿಕಾರಿ ಹೇಳಿದ್ದಾರೆ.

ನಿರ್ದೇಶಕರ ಹುದ್ದೆ ನೇಮಕಾತಿ: ಅವಧಿ ವಿಸ್ತರಣೆ

ಮೈಸೂರು,ಸೆ.2–ಮೈಸೂರು ವಿಶ್ವವಿದ್ಯಾನಿಲಯದ ಸ್ಕೂಲ್ ಆಫ್ ಇಂಜಿನಿಯರಿಂಗ್‌ನಲ್ಲಿನ ನಿರ್ದೇಶಕರ ಹುದ್ದೆಯ ನೇಮಕಾತಿ ಮಾಡುವ ಸಂಬಂಧ ಅರ್ಜಿ ಸಲ್ಲಿಸುವ ದಿನಾಂಕವನ್ನು ಸೆ.13ರವರೆಗೆ ವಿಸ್ತರಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಮೈಸೂರು ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.unimysore.ac.inನಲ್ಲಿ ನಿಗದಿತ ಅರ್ಜಿ ನಮೂನೆಗಳನ್ನು ಪಡೆಯಬಹುದಾಗಿದೆ. ಈ ಹುದ್ದೆಗೆ ಈಗಾಗಲೇ ಅರ್ಜಿ ಸಲ್ಲಿಸಿರುವವರು ಹೊಸದಾಗಿ ಯಾವುದೇ ಅರ್ಜಿಯನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ. ಅರ್ಜಿ ಸಲ್ಲಿಸದಿರುವ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೈಸೂರು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.unimysore.ac.in ಅನ್ನು ಸಂಪರ್ಕಿಸಬಹುದು ಎಂದು ಉಪಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೃತ್ತಿ ರಂಗಭೂಮಿಗಳು ಜೀವನ ವಿಶ್ವವಿದ್ಯಾನಿಲಯಗಳಿದ್ದ ಹಾಗೆ

● ಕರ್ನಾಟಕ ನಾಟಕ ಅಕಾಡೆಮಿ ರಿಜಿಸ್ಟ್ರಾರ್ ನಿರ್ಮಲ ಮಠಪತಿ ಅಭಿಮತ ● ಮೂರು ದಿನಗಳ ಪೌರಾಣಿಕ ರಂಗಸಂಭ್ರಮಕ್ಕೆ ತೆರೆ



ಪೌರಾಣಿಕ ರಂಗಸಂಭ್ರಮ–2024ರ ಮುಕ್ತಾಯ ಸಮಾರಂಭದಲ್ಲಿ ಕ್ಲಾರಿಯೋನೆಟ್ ವಾದಕ ವಿದ್ವಾನ್ ಡಿ.ರಾಮು ಅವರನ್ನು ನಿರ್ಮಲ ಮಠಪತಿ ಅಭಿನಂದಿಸಿದರು.

ಮೈಸೂರು,ಸೆ.2(ಎಸ್‌ಪಿಎನ್)–ವೃತ್ತಿ ಮತ್ತು ಆಧುನಿಕ ರಂಗಭೂಮಿಗಳು 'ಜೀವನ ವಿಶ್ವವಿದ್ಯಾನಿಲಯ' ಇದ್ದಂತೆ ಎಂದು ಕರ್ನಾಟಕ ನಾಟಕ ಅಕಾಡೆಮಿ ರಿಜಿಸ್ಟ್ರಾರ್ ನಿರ್ಮಲ ಮಠಪತಿ ಅಭಿಪ್ರಾಯಪಟ್ಟರು.

ಮೈಸೂರು ಕಲಾಮಂದಿರ ಆವರಣದ ಕಿರು ರಂಗಮಂದಿರದಲ್ಲಿ ಮೈಸೂರು ಶ್ರೀರಾಜೇಶ್ವರಿ ವಸ್ತ್ರಾಲಂಕಾರ ರಂಗ ತಂಡ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ನಡೆದ ಪೌರಾಣಿಕ ರಂಗಸಂಭ್ರಮ–2024ರ ಮುಕ್ತಾಯ ಸಮಾರಂಭದಲ್ಲಿ ಮಾತನಾಡಿದರು.

ಪೌರಾಣಿಕ ನಾಟಕಗಳು ಗ್ರಾಮೀಣ ಜನತೆ ಸಾಂಸ್ಕೃತಿಕ ಚಟುವಟಿಕೆಯ ಜೀವನ ಭಾಗವಾಗಿದ್ದು, ಇದರಲ್ಲಿ ವಿನೋದ, ಬದುಕು ನೋವು ಸೇರಿದಂತೆ ಎಲ್ಲಾ ಅನುಭವಗಳನ್ನು ಪಡೆಯಬಹುದು. ಅಭಿನಯಿಸುವವರು ಅನಕ್ಷರಸ್ಥರಾದರೂ ಪೌರಾಣಿಕ ನಾಟಕಗಳ ಕಂದಪದ್ಯಗಳ ಗಾಯನ, ಸಂಭಾಷಣೆ ಉಚ್ಚಾರಣೆ ಸ್ಫುಟವಾಗಿರುತ್ತದೆ. ಹಾಗಾಗಿ ಪೌರಾಣಿಕ ನಾಟಕಗಳು ಗ್ರಾಮೀಣ ಪ್ರದೇಶದ ಜನರ ಬದುಕಿನ ಅವಿಭಾಜ್ಯ ಅಂಗವಾಗಿವೆ ಎಂದರು.

ಹಿರಿಯ ಕಲಾವಿದ, ನಾಡೋಜ ದಿ.ಏಣಗಿ ಬಾಳಪ್ಪ ಅವರು, ಶ್ರೀ ಬಸವೇಶ್ವರ ನಾಟಕದಲ್ಲಿ ಬಸವಣ್ಣ ಪಾತ್ರಧಾರಿಯಾಗಿ ನಟಿಸಿದ್ದರು. ಆ ನಾಟಕದ ಪ್ರದರ್ಶನ ಮುಗಿದ ಮೇಲೆ ಮೇಕಪ್ ಕಳಚಿ, ಹತ್ತಿರದ ಚಹಾ ಅಂಗಡಿಗೆ ಹೋಗಿ ಟೀ ಕುಡಿಯುತ್ತಿದ್ದರು. ಇದನ್ನು ನೋಡಿದ ಪ್ರೇಕ್ಷಕರೊಬ್ಬರು, ಇದೇನೂ ಬಸವಣ್ಣ ಚಹಾ ಅಂಗಡಿಯಲ್ಲಿ ಟೀ ಕುಡಿಯುತ್ತಿದ್ದಾರೆ ಎಂದು ವ್ಯಂಗ್ಯವಾಡಿದ ಪ್ರಸಂಗವನ್ನು ಏಣಗಿ ಬಾಳಪ್ಪ ಅವರು, ಧನಾತ್ಮಕವಾಗಿ ಪರಿಗಣಿಸಿ, ಅಂದಿನಿಂದ ಸಾರ್ವಜನಿಕವಾಗಿ ಟೀ ಕುಡಿಯುವುದನ್ನು ನಿಲ್ಲಿಸಿದ ಪ್ರಸಂಗವನ್ನು ಉದಾಹರಣೆ ನೀಡಿ, ಇಂದಿನ ಯುವ ಕಲಾವಿದರಿಗೆ 'ಏಣಗಿ ಬಾಳಪ್ಪ' ಅವರ ಜೀವನ ಕ್ರಮ ಮಾದರಿಯಾಗಬೇಕು ಎಂದು ಸಲಹೆ ನೀಡಿದರು.

ಶ್ರೀ ರಾಜೇಶ್ವರಿ ವಸ್ತ್ರಾಲಂಕಾರ ರಂಗ ತಂಡದ ಕಾರ್ಯದರ್ಶಿ ಬಿ.ಎಂ.ರಾಮಚಂದ್ರ ವಿದ್ವಾನ್ ವೈ.ಎಂ.ಪುಟ್ಟಣ್ಣಯ್ಯ ಅವರು ವೃತ್ತಿರಂಗಭೂಮಿಯಲ್ಲಿ ದಿಗ್ಗಜರು. ಅವರು ಕಳೆದ 40 ವರ್ಷಗಳಿಂದ ರಂಗಭೂಮಿಯಲ್ಲಿ ತೊಡಗಿಸಿಕೊಂಡು ಈ ನಾಡಿಗೆ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಈ ವೇಳೆ ಕ್ಲಾರಿಯೋನೆಟ್ ವಾದಕ ವಿದ್ವಾನ್ ಡಿ.ರಾಮು ಅವರನ್ನು ಗೌರವಿಸಲಾಯಿತು. ತದನಂತರ ವರಕವಿ ಬೆಳ್ಳಾವೆ ನರಹರಿಶಾಸ್ತ್ರಿ ವಿರಚಿತ, ವಿದ್ವಾನ್ ವೈ.ಎಂ.ಪುಟ್ಟಣ್ಣಯ್ಯ ನಿರ್ದೇಶನ ಹಾಗೂ ಮೈಸೂರು ಕಲಾಸುರುಚಿ ಮಂಡಳಿ ಕಲಾವಿದರು ಅಭಿನಯಿಸಿರುವ 'ಶ್ರೀಮದ್ ರಾಮಾಯಣ' ನಾಟಕ ಪ್ರದರ್ಶಿಸಿದರು. ನೇಪಥ್ಯದಲ್ಲಿ ವಿದ್ವಾನ್ ಜಯರಾಂ (ತಬಲ), ವಿದ್ವಾನ್ ಡಿ.ರಾಮು ಕ್ಲಾರಿಯೋನೆಟ್ ನುಡಿಸಿದರು.

ಪಾತ್ರಧಾರಿಗಳಾಗಿ ಪ್ರದೀಪ್ ಸುವರ್ಣ (ರಾಮ), ಸುಮನ್‌ಭಟ್(ಲಕ್ಷ್ಮಣ), ದೀಪಿಕಾ ಎನ್.ಕಾಮತ್(ಸೀತೆ), ಸುಪ್ರೀತ್ ಎಸ್.ಸಿಂಗಾನಲ್ಲೂರ್ (ಆಂಜನೇಯ, ಗುಹ), ಭ್ರಮರ ಕೆ.ಉಡುಪ(ಮಂಥರೆ, ಘೋರ, ಶೂರ್ಪನಖಿ, ಲಂಕಿಣಿ, ರಾಕ್ಷಸಿ), ಎಂ.ಪ್ರದೀಪ್‌ಕುಮಾರ್(ದಶರಥ, ವಿಭೀಷಣ), ಸುಭೀಕ್ಷ ಮೋಹನ್ (ಮಂಡೋದರಿ, ಸೇವಕಿ), ವಿಜಯ್ ನರಸಿಂಹನ್(ಭರತ), ವಿಕಾಸ್(ಸುಗ್ರೀವ), ಬೆನಕ್(ಶತ್ರುಘ್ನ), ಧೀರಜ್ ಶೆಟ್ಟಿ(ಅಂಗದ), ಲಿಖಿತ ಸಿ.ಗೌಡ(ಮಾರೀಚ), ಐಶ್ವರ್ಯ (ಮಾಯಾಜಿಂಕೆ), ಪವನ್ ಭಟ್ (ವಸಿಷ್ಠ), ಗೌರಿ ಪರಮಾತ್ಮ(ಕಪಿ), ಕಪಿಸೈನ್ಯದಲ್ಲಿ ರಿತೇಶ್, ಹಿತೈಷ್, ಸುಮೇದ್, ಶಮಿತ್ ಗೌಡ, ಪಿಯೂಷ್ ಬಾಲಾಜಿ(ಜಿಂಕೆ), ರಾಕ್ಷಸ ಸೈನ್ಯದಲ್ಲಿ ಮೋನಿತ್, ಪ್ರಥಮ್, ಸ್ಕಂದ, ಸಮೃದ್, ಸಂದೇಶ್ (ಇಂದ್ರಜಿತ್), ಬಿ.ಆರ್.ದರ್ಶನ್(ಕುಂಭಕರ್ಣ), ಸಿದ್ದು (ರಾಕ್ಷಸ), ಭೂಪತಿ(ರಾಜ, ರಾಕ್ಷಸ) ಅಭಿನಯಿಸಿ, ಪ್ರೇಕ್ಷಕರಿಂದ ಮೆಚ್ಚುಗೆ ಪಡೆದರು.

ದೇಶ - ವಿದೇಶ

ರಷ್ಯಾದ ಬೇಹುಗಾರಿಕೆ ಏಜೆಂಟ್ ದೈತ್ಯ ತಿಮಿಂಗಿಲದ ಕಳೇಬರ ಪತ್ತೆ

ಮಾಸ್ಕೋ: ಕೆಲವೊಮ್ಮೆ ಬೇಹುಗಾರಿಕೆಗೆ ಶ್ವಾನಗಳು ಅಥವಾ ಇತರ ಪ್ರಾಣಿಗಳನ್ನೂ ಬಳಸಿಕೊಳ್ಳಲಾಗುತ್ತದೆ. ಆದರೆ, ತಿಮಿಂಗಿಲಗಳನ್ನು ಬಳಸಿಕೊಂಡಿದ್ದನ್ನು ನಾವೆಲ್ಲೂ ನೋಡಿಲ್ಲ. ಆದರೆ, ಅಂಥದ್ದೊಂದು ಕಾರ್ಯವನ್ನು ರಷ್ಯಾ ಮಾಡಿತ್ತು ಅದರಿಂದಲೇ ಜನರು ಆ ತಿಮಿಂಗಿಲಕ್ಕೆ ವಾಲ್ಡಿಮಿರ್ ಎಂದು ಹೆಸರಿಟ್ಟಿದ್ದರು. ಆದರೆ, ದುರದೃಷ್ಟವಶಾತ್ ರಷ್ಯಾ–ಉಕ್ರೇನ್ ನಡುವೆ ಯುದ್ಧದ ವೇಳೆ ಆ ತಿಮಿಂಗಿಲ ಪ್ರಾಣಬಿಟ್ಟಿದೆ. ಇದು ಸಹಜ ಸಾವೇ ಅಥವಾ ಯಾರಾದರೂ ಇದನ್ನು ಕೊಂದಿದ್ದಾರೆಯೇ ಎಂಬುದರ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿಗಳು ಹೊರಬಿದ್ದಿಲ್ಲ. ಆದರೆ, ಇದು ಸಾವನ್ನಪ್ಪಿರುವಂತೂ ನಿಜ. ರಷ್ಯಾ ಹಾಗೂ ಉಕ್ರೇನ್ ದೇಶಗಳೊಂದಿಗೆ ಗಡಿಯನ್ನು ಹಂಚಿಕೊಂಡಿರುವ ನಾರ್ವೆ ದೇಶದ ಸಮುದ್ರ ತೀರದಲ್ಲಿ ಈ ತಿಮಿಂಗಿಲ ಸತ್ತು ಬಿದ್ದಿರುವುದು ಪತ್ತೆಯಾಗಿದೆ. ಈ ತಿಮಿಂಗಿಲ ಸಮುದ್ರದಲ್ಲಿ ಸಾಗುವ ಹಡಗುಗಳು, ಜಲಾಂತರ್ಗಾಮಿಗಳ ಬಗ್ಗೆ ಮಾಹಿತಿ ಸಂಗ್ರಹಿಸಿ ಅದನ್ನು ರಷ್ಯಾದ ನೌಕಾಪಡೆಗೆ ರವಾನಿಸುತ್ತಿತ್ತು. ಅದರಲ್ಲಿರುವ ಸೆನ್ಸಾರ್‌ಗಳು, ಚಿಪ್‌ಸೆಟ್ ಈ ಸಂದೇಶವನ್ನು ರವಾನಿಸುತ್ತವೆ ಎಂದು ಹೇಳಲಾಗುತ್ತಿತ್ತು.



ತೆಲಂಗಾಣ, ಆಂಧ್ರದಲ್ಲಿ ಭೀಕರ ಮಳೆಗೆ 27 ಮಂದಿ ಬಲಿ

ಹೈದ್ರಾಬಾದ್: ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲಿ ಭಾರಿ ಮಳೆ ಮುಂದುವರೆದಿದ್ದು, ಈ ಅವಾಂತರದಿಂದಾಗಿ ಕನಿಷ್ಠ 27 ಜನರು ಸಾವನ್ನಪ್ಪಿದ್ದಾರೆ. ಹಲವಾರು ಪ್ರದೇಶಗಳಲ್ಲಿ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ ರಸ್ತೆ ಮತ್ತು ರೈಲು ಸಂಚಾರ ಅಸ್ತವ್ಯಸ್ತಗೊಂಡಿದೆ. ಭಾರಿ ಮಳೆಯಾಗುವ ಮುನ್ಸೂಚನೆಯಿಂದಾಗಿ ಹೈದರಾಬಾದ್‌ನ ಎಲ್ಲಾ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆಗಳಿಗೆ ಸೋಮವಾರ ರಜೆ ಘೋಷಿಸಲಾಗಿತ್ತು. ತೆಲಂಗಾಣದಲ್ಲಿ 15 ಜನರು ಮತ್ತು ಆಂಧ್ರ ಪ್ರದೇಶದಲ್ಲಿ 12 ಮಂದಿ ಸಾವನ್ನಪ್ಪಿದ್ದಾರೆ. ಎರಡೂ ರಾಜ್ಯಗಳಲ್ಲಿ ನದಿಗಳು ಉಕ್ಕಿ ಹರಿಯುತ್ತಿವೆ. ಪ್ರವಾಹ ಪೀಡಿತ ಪ್ರದೇಶಗಳಿಂದ ರಾಷ್ಟ್ರೀಯ, ರಾಜ್ಯ ವಿಪತ್ತು ಸ್ಪಂದನಾ ಪಡೆಗಳು ಸಾವಿರಾರು ಜನರನ್ನು ಪರಿಹಾರ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ. ಇಲ್ಲಿಯವರೆಗೆ 100ಕ್ಕೂ ಹೆಚ್ಚು ರೈಲುಗಳನ್ನು ರದ್ದುಗೊಳಿಸಲಾಗಿದೆ, ಆದರೆ ತೆಲಂಗಾಣ ಮತ್ತು ಆಂಧ್ರ ಪ್ರದೇಶದ ಇತರ ರಾಜ್ಯಗಳಿಗೆ ಸೇವೆ ಸಲ್ಲಿಸುವ ಹಲವಾರು ರೈಲುಗಳನ್ನು ಬೇರೆ ಮಾರ್ಗಕ್ಕೆ ತಿರುಗಿಸಲಾಗಿದೆ. ಪ್ರಧಾನಿ ಮೋದಿ ಕೇಂದ್ರದಿಂದ ಸಾಧ್ಯವಿರುವ ಎಲ್ಲ ಸಹಾಯ ನೀಡುವುದಾಗಿ ಭರವಸೆ ನೀಡಿದ್ದಾರೆ.



ಸ್ವಯಂಘೋಷಿತ ದೇವ ಮಾಂತ್ರಿಕನ ಜತೆ ನಾರ್ವೆ ರಾಜಕುಮಾರಿ ಮಾರ್ಥಾ ವಿವಾಹ

ಓಸ್ಲೋ(ನಾರ್ವೆ): ನಾರ್ವೆ ರಾಜಕುಮಾರಿ ಮಾರ್ಥಾ ಲೂಯಿಸ್ ಹಾಗೂ ಸ್ವಯಂ ಘೋಷಿತ ದೇವ(ಮಾಂತ್ರಿಕ) ಮಾನವ ಡ್ಯುರೆಕ್ ವೆರ್ರೆಟ್ ಜೊತೆ 2025ರ ಆಗಸ್ಟ್ 31ರಂದು ವಿವಾಹವಾಗುವುದಾಗಿ ಅಧಿಕೃತವಾಗಿ ಘೋಷಿಸಿದ್ದಾರೆ. ಸಾವನ್ನೇ ಗೆದ್ದು ಬಂದವ ಎಂದು ಬಿಂಬಿಸಿಕೊಂಡಿರುವ ಶಮಾನ್ (ಮಾಂತ್ರಿಕ) ಡ್ಯುರೆಕ್ ಮತ್ತು ರಾಜಕುಮಾರಿ ಮಾರ್ಥಾ ಯುನೆಸ್ಕೋ ವಿಶ್ವ ಪಾರಂಪರಿಕ ತಾಣವೆಂದು ಗುರುತಿಸಲಾದ Fjords ತೀರದ ಗೈರಾಂಗರ್‌ನಲ್ಲಿ ನಡೆಯಲಿರುವ ಖಾಸಗಿ ಕಾರ್ಯಕ್ರಮದಲ್ಲಿ ವಿವಾಹವಾಗಲಿದ್ದಾರೆ ಎಂದು ವರದಿ ವಿವರಿಸಿದೆ.

ರಾಜಕುಮಾರಿ ಮಾರ್ಥಾ ಲೂಯಿಸ್ (52) ನಾರ್ವೆ ರಾಜ ಹರಾಲ್ಡ್‌ಗೆ ಅವರ ಮೊದಲ ಪುತ್ರಿಯಾಗಿದ್ದಾರೆ. ವೆರ್ರೆಟ್ (49) ಸ್ವಯಂಘೋಷಿತ ದೇವಮಾನವ, ಹಾಲಿವುಡ್ ಸ್ಪಿರಿಚ್ಯುವಲ್ ಗುರು ಎಂದೇ ಜನಪ್ರಿಯರಾಗಿದ್ದಾರೆ. 2020ರಲ್ಲಿ ವ್ಯಾನಿಟಿ ಫೇರ್‌ಗೆ ನೀಡಿದ್ದ ಸಂದರ್ಶನದಲ್ಲಿ ಡ್ಯುರೆಕ್, ಅಂಗಾಂಗ ವೈಫಲ್ಯ ರೋಗದಿಂದ 28ನೇ ವಯಸ್ಸಿನಲ್ಲಿ ಸಾವನ್ನಪ್ಪಿದ್ದೆ. ಆ ಕ್ಷಣದಲ್ಲಿ ಉರಿಯುತ್ತಿರುವ ಚಾಕುಗಳು ತನ್ನನ್ನು ಇರಿಯುವಂತೆ ಭಾಸವಾಗಿ, ನನ್ನ ಅಜ್ಜಿಯ ಆತ್ಮ ನನ್ನನ್ನು ಬಿಡುವಂತೆ ಹೇಳಿರುವುದು ಕೇಳಿಸಿತ್ತು.



ಪುರುಷನ ಖಾಸಗಿ ಭಾಗಕ್ಕೆ ಕಚ್ಚಿದ ಚೇಳು; ಹೋಟೆಲ್ ಮೇಲೆ ದೂರು ದಾಖಲು

ವಾಷಿಂಗ್‌ಟನ್: ಅಮೆರಿಕದ ವ್ಯಕ್ತಿಯೋರ್ವ ಫೈವ್‌ಸ್ಟಾರ್ ಹೋಟೆಲ್‌ನಲ್ಲಿ ತಂಗಿದ್ದ ವೇಳೆ ಆತನ ಖಾಸಗಿ ಭಾಗಕ್ಕೆ ಚೇಳು ಕಚ್ಚಿದೆ. ಪರಿಣಾಮ ವ್ಯಕ್ತಿಯ ಸಾಂಸರಿಕ ಜೀವನವೇ ಹಾಳಾಗಿದೆ. ಈ ಹಿನ್ನೆಲೆಯಲ್ಲಿ ಹೋಟೆಲ್ ವಿರುದ್ಧ ವ್ಯಕ್ತಿ ದೂರು ದಾಖಲಿಸಿದ್ದಾರೆ. ಮೈಕಲ್ ಫಾರ್ಜಿ ಎಂಬುವರ ಖಾಸಗಿ ಭಾಗಕ್ಕೆ ಚೇಳು ಕಚ್ಚಿದೆ. ಇವರು ಅಮೆರಿಕಾದ ಲಾಸ್ ವೇಗಾಸ್‌ನಲ್ಲಿರುವ ವೆನೆಶಿಯನ್ ರೆಸಾರ್ಟ್‌ನಲ್ಲಿ ಉಳಿದುಕೊಂಡಿದ್ದರು. ರಾತ್ರಿ ಮಲಗಿದ್ದಾಗ ಇದ್ದಕ್ಕಿದಂತೆ ಖಾಸಗಿ ಭಾಗದಲ್ಲಿ ನೋವು ಶುರುವಾಗಿದೆ. ನಂತರ ನೋವು ದೇಹದ ಎಲ್ಲಾ ಭಾಗಕ್ಕೂ ಆವರಿಸಿದೆ. ಎದ್ದು ನೋಡಿದಾಗ ಚೇಳು ಅವರ ಮರ್ಮಾಂಗವನ್ನು ಕಚ್ಚುತ್ತಿತ್ತು. ಮೈಕೆಲ್ ದಾಖಲಿಸಿದ ದೂರಿನ ಪ್ರಕಾರ, ತೋಳು ಹಾಗೂ ತೊಡೆಯ ಸಂದಿನಲ್ಲಿ ಚೇಳು ಹಲವು ಬಾರಿ ಕಚ್ಚಿದೆ.

ಲಾಸ್‌ವೇಗಾಸ್‌ನಲ್ಲಿರುವ ವೆನೆಶಿಯನ್ ರೆಸಾರ್ಟ್ ಕೀಟ ಹಾಗೂ ಸೊಳ್ಳೆಗಳಿಂದ ತುಂಬಿದೆ. ಇದಕ್ಕಾಗಿ ರೆಸಾರ್ಟ್ ಯಾವುದೇ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳದ ಪರಿಣಾಮ ಚೇಳು ಕಚ್ಚಿದೆ. ಅದರಿಂದ ಪೋಸ್ಟ್–ಟ್ರಾಮಾಟಿಕ್ ಸ್ಟ್ರೆಸ್ ಡಿಸಾರ್ಡರ್ ಮತ್ತು ಮಾನಸಿಕವಾಗಿ ನೊಂದಿದ್ದೇನೆ ಎಂದು ಮೈಕಲ್ ಹೇಳಿಕೊಂಡಿದ್ದಾರೆ. ಆ ಭಾಗದಲ್ಲಿ ಚೇಳು ಕಚ್ಚಿದ್ದರಿಂದ ನಮ್ಮ ಸಾಂಸಾರಿಕ ಜೀವನದ ಮೇಲೆ ನಕಾರಾತ್ಮಕ ಪರಿಣಾಮ ಬೀರಿದೆ ಎಂದು ಮೈಕಲ್ ಪತ್ನಿ ಹೇಳಿದ್ದಾರೆ.



ನಕಲಿ ಉದ್ಯೋಗ ಹಗರಣ: ಲಾವೋಸ್‌ನಲ್ಲಿ 47 ಭಾರತೀಯರ ರಕ್ಷಣೆ

ಲಾವೋಸ್: ಲಾವೋಸ್‌ನಲ್ಲಿದ್ದ ಸೈಬರ್ ಸ್ಕ್ಯಾಮ್ ಕೇಂದ್ರಗಳಲ್ಲಿ ಸಿಲುಕಿದ್ದ 47 ಭಾರತೀಯರನ್ನು ದೇಶದ ಬೊಕಿಯೊ ಪ್ರಾಂತ್ಯದಿಂದ ರಕ್ಷಿಸಲಾಗಿದೆ ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ. ಲಾವೋಸ್‌ನಲ್ಲಿನ ನಕಲಿ ಉದ್ಯೋಗ ಆಫರ್‌ಗಳ ಬಗ್ಗೆ ಎಚ್ಚರದಿಂದ ಇರುವಂತೆ ಭಾರತೀಯ ಅಧಿಕಾರಿಗಳು ಭಾರತೀಯರಿಗೆ ಸಲಹೆ ನೀಡಿದ್ದಾರೆ.

ಭಾರತೀಯ ರಾಯಭಾರ ಕಚೇರಿ ಈವರೆಗೂ 635 ಭಾರತೀಯರನ್ನು ರಕ್ಷಿಸಿದ್ದು, ಸುರಕ್ಷಿತವಾಗಿ ಸ್ವದೇಶಕ್ಕೆ ಕಳಿಸಿಕೊಟ್ಟಿದೆ. ಇತ್ತೀಚಿನ ಪ್ರಕರಣದಲ್ಲಿ, ಬೊಕಿಯೊ ಪ್ರಾಂತ್ಯದ ಗೋಲ್ಡನ್ ಟ್ರಯಾಂಗಲ್ ಸ್ಪೆಷಲ್ ಎಕನಾಮಿಕ್ ಝೋನ್‌ನಲ್ಲಿ ಸೈಬರ್ ಹಗರಣ ಕೇಂದ್ರಗಳಲ್ಲಿ ಸಿಲುಕಿದ್ದ 47 ಭಾರತೀಯರನ್ನು ರಾಯಭಾರ ಕಚೇರಿ ರಕ್ಷಿಸಿದೆ. ಈ ಪೈಕಿ 29 ಮಂದಿಯನ್ನು ಲಾವೋಸ್ ಅಧಿಕಾರಿಗಳು ಗೋಲ್ಡನ್ ಟ್ರಯಾಂಗಲ್ ಎಸ್‌ಇಝಡ್‌ನಲ್ಲಿ ಅಕ್ರಮ ಚಟುವಟಿಕೆಗಳ ವಿರುದ್ಧ ಕಠಿಣ ಕ್ರಮ ಕೈಗೊಂಡ ನಂತರ ರಾಯಭಾರ ಕಚೇರಿಗೆ ಹಸ್ತಾಂತರಿಸಿದ್ದು, ಇತರ 18 ಮಂದಿ ಸಹಾಯ ಕೋರಿ ರಾಯಭಾರ ಕಚೇರಿಯನ್ನು ಸಂಪರ್ಕಿಸಿದ್ದಾರೆ ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಲಾಗಿದೆ.

ಆಹಾರ ಸುರಕ್ಷತೆ, ಗುಣಮಟ್ಟ ಕಾಯ್ದೆ ಉಲ್ಲಂಘಿಸಿದ

37 ಆಹಾರ ಉದ್ದಿಮೆದಾರರಿಗೆ ನೋಟಿಸ್

ಜಿಲ್ಲಾ ಅಂಕಿತಾಧಿಕಾರಿಗಳಿಂದ ಹೋಟೆಲ್, ರೆಸ್ಟೋರೆಂಟ್, ಬೇಕರಿಗಳ ಪರಿಶೀಲನೆ



ಜಿಲ್ಲಾ ಅಂಕಿತಾಧಿಕಾರಿ ಡಾ.ಅನಿಲ್ ಧಾವನ್ ನೇತೃತ್ವದಲ್ಲಿ ಮಡಿಕೇರಿಯ ಹೋಟೆಲ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಲಾಯಿತು.

ಮಡಿಕೇರಿ, ಸೆ.2–ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಉಲ್ಲಂಘಿಸಿದ ಆಹಾರ ತಯಾರಿಕಾ ಕೆಲ ಘಟಕಗಳಿಗೆ 10 ಸಾವಿರ ರೂ. ದಂಡ ವಿಧಿಸಿ ಹಾಗೂ 37 ಆಹಾರ ಉದ್ದಿಮೆದಾರರಿಗೆ ನೋಟಿಸ್ ನೀಡಲಾಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಮತ್ತು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಆಯುಕ್ತರ ಸೂಚನೆ ಮೇರೆಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಅನುಷ್ಠಾನ ಸಂಬಂಧ ಜಿಲ್ಲಾ ಅಂಕಿತಾಧಿಕಾರಿ ಡಾ.ಅನಿಲ್ ಧಾವನ್ ನೇತೃತ್ವದಲ್ಲಿ ಮಡಿಕೇರಿ, ಕುಶಾಲನಗರ ಸೇರಿದಂತೆ ಜಿಲ್ಲೆಯ ವಿವಿಧೆಡೆ ಹೋಟೆಲ್, ರೆಸ್ಟೋರೆಂಟ್, ಬೇಕರಿ, ಬೀದಿಬದಿ ವ್ಯಾಪಾರಿಗಳು ಕ್ಯಾಂಟೀನ್ ಮತ್ತಿತರ 54 ಆಹಾರ ತಯಾರಿಕಾ ಘಟಕಗಳಿಗೆ ಭೇಟಿ ನೀಡಿ, ಪರಿಶೀಲಿಸಿ, ಕೆಲ ಆಹಾರ ಮಾದರಿಗಳನ್ನು ಸಂಗ್ರಹಿಸಲಾಯಿತು.

ಇದೇ ವೇಳೆ ಕಾಯ್ದೆ ಉಲ್ಲಂಘಿಸಿದವರಿಗೆ 10 ಸಾವಿರ ರೂ. ದಂಡ ವಿಧಿಸಿ, ಕೆಲ ಆಹಾರ ಉದ್ದಿಮೆದಾರರಿಗೆ ನೋಟಿಸ್ ನೀಡಲಾಯಿತು. ಸಾರ್ವಜನಿಕರ ಹಿತದೃಷ್ಟಿಯಿಂದ ಆಹಾರ ಪದಾರ್ಥಗಳ ತಯಾರಕರು, ಮಾರಾಟಗಾರರು, ದಾಸ್ತಾನುದಾರರು ಶುಚಿತ್ವಕ್ಕೆ ಒತ್ತು ನೀಡಬೇಕು. ಗ್ರಾಹಕರಿಗೆ ಶುದ್ಧ ಆಹಾರ ಪೂರೈಸಬೇಕು ಹಾಗೂ ಕಾಯ್ದೆ ಮಾನದಂಡ ಮೀರಿ ಕೃತಕ ಬಣ್ಣಗಳನ್ನು ಆಹಾರ ತಯಾರಿಕೆಗೆ ಬಳಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಇದೇ ವೇಳೆ ಸೂಚಿಸಲಾಯಿತು.

ಆಯುಕ್ತರ (ಎಫ್‌ಎಸ್‌ಎಸ್‌ಎ) ಸೂಚನೆಯಂತೆ ವಿಶೇಷ ಆಂದೋಲನ ಹಮ್ಮಿಕೊಂಡು ಜಿಲ್ಲಾದ್ಯಂತ ಮೊಟ್ಟೆ, ಕೋಳಿ, ಮೀನು, ಮಾಂಸ ಪದಾರ್ಥಗಳ ಸಂಗ್ರಹಕರು, ಮಾರಾಟಗಾರರು ಮತ್ತು ತಯಾರಿಕಾ ಸ್ಥಳಗಳಿಗೆ ದಿಢೀರ್ ಭೇಟಿ ನೀಡಿ, ಪದಾರ್ಥಗಳನ್ನು ಸೂಕ್ತ ತಾಪಮಾನದಲ್ಲಿ ಸಂಗ್ರಹಿಸಿ ಗ್ರಾಹಕರಿಗೆ ನೀಡುತ್ತಿದ್ದಾರೆಯೇ ಮತ್ತು ತ್ಯಾಜ್ಯಗಳ ಸೂಕ್ತ ನಿರ್ವಹಣೆ ಸಂಬಂಧಿಸಿದಂತೆ ಪರಿಶೀಲಿಸಲಾಯಿತು.

ಹಳೆಯ ಮಾಂಸ ಪದಾರ್ಥಗಳನ್ನು ಕೆಡದಂತೆ ಹಾನಿಕಾರಕ ರಾಸಾಯನಿಕಗಳನ್ನು ಬಳಸಲಾಗುತ್ತಿದೆಯೇ ಎಂಬ ಬಗ್ಗೆಯೂ ಪರಿಶೀಲಿಸಿ, ಸಂಶಯಾಸ್ಪದ 11 ಆಹಾರ ಪದಾರ್ಥಗಳನ್ನು ಸಂಗ್ರಹಿಸಲಾಯಿತು. ಆಂದೋಲನದಲ್ಲಿ ಜಿಲ್ಲಾ ಹಿರಿಯ ಆಹಾರ ಸುರಕ್ಷಾಧಿಕಾರಿ ಜೆ.ಎನ್. ಮಂಜುನಾಥ ಹಾಗೂ ವಿರಾಜಪೇಟೆ ತಾಲೂಕು ಆಹಾರ ಸುರಕ್ಷತಾಧಿಕಾರಿ ಕೆ.ಆರ್.ನವೀನ್ ಕುಮಾರ್ ಹಾಗೂ ಸಿಬ್ಬಂದಿ ಹಾಜರಿದ್ದರು.

ಭಾಪಾ ಕಾಗದ ಮುಚ್ಚಳಿಕೆ ವಿರೋಧಿಸಿ ಪ್ರತಿಭಟನೆ



ಮಡಿಕೇರಿಯಲ್ಲಿ ಹಿಂದೂ ಜಾಗರಣಾ ವೇದಿಕೆ ಮತ್ತು ವಿವಿಧ ಗಣೇಶೋತ್ಸವ ಸಮಿತಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮಡಿಕೇರಿ, ಸೆ.2–ಗಣೇಶೋತ್ಸವ ಆಚರಣೆಗೆ ಭಾಪಾ ಕಾಗದದಲ್ಲಿ ಮುಚ್ಚಳಿಕೆ ಬರೆದು ಕೊಡಬೇಕೆನ್ನುವ ಆಡಳಿತ ವ್ಯವಸ್ಥೆಯ ನೀತಿ ಹಿಂದೂ ವಿರೋಧಿ ಧೋರಣೆಯಾಗಿದೆ ಎಂದು ಆರೋಪಿಸಿ ಹಿಂದೂ ಜಾಗರಣಾ ವೇದಿಕೆ ಮತ್ತು ವಿವಿಧ ಗಣೇಶೋತ್ಸವ ಸಮಿತಿಗಳು ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದವು.

ನಗರಸಭೆ ಎದುರು ಮಳೆ ನಡುವೆಯೇ ಪ್ರತಿಭಟನೆ ನಡೆಸಿ ವೇದಿಕೆ ಮತ್ತು ವಿವಿಧ ಸಮಿತಿ ಕಾರ್ಯಕರ್ತರು, ಪರಿಸರ ಮತ್ತು ಶಬ್ಧ ಮಾಲಿನ್ಯ ನೆಪವೊಡ್ಡಿ ಇಲ್ಲಸಲ್ಲದ ನೀತಿಗಳನ್ನು ರೂಪಿಸಿ ಗಣೇಶೋತ್ಸವ ಸಮಿತಿಗಳಿಗೆ ಕಿರುಕುಳ ನೀಡಲಾಗುತ್ತಿದೆ. ಹಿಂದೂ ಹಬ್ಬಗಳನ್ನು ಗುರಿಯಾಗಿಸಿಕೊಂಡು ಜಾರಿಗೊಳಿಸುತ್ತಿರುವ ನೀತಿಗಳನ್ನು ತಕ್ಷಣ ಕೈ ಬಿಡಬೇಕು ಎಂದು ಆಗ್ರಹಿಸಿದರು.

ಹಿಂದೂ ಜಾಗರಣಾ ವೇದಿಕೆ ಪ್ರಾಂತ ಸಮಿತಿಯ ಪ್ರಮುಖ್ ಕೆ.ಟಿ.ಉಲ್ಲಾಸ್ ಮಾತನಾಡಿ, ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಮಹತ್ತರ ಪಾತ್ರ ವಹಿಸಿದ್ದ ಸಾರ್ವಜನಿಕ ಗಣೇಶೋತ್ಸವಕ್ಕೆ ಪರಿಸರ ಮಾಲಿನ್ಯ ಹಾಗೂ ಕಾನೂನು ನೆಪವೊಡ್ಡಿ ಅಡ್ಡಿಪಡಿಸುತ್ತಿರುವುದು ಖಂಡನೀಯ. ಕಾನೂನು ಪಾಲನೆ ಕೇವಲ ಹಿಂದೂಗಳಿಗಷ್ಟೇ ಸೀಮಿತ ಎನ್ನುವ ಧೋರಣೆಯನ್ನು ಆಡಳಿತ ನಡೆಸುವವರು ಹಾಗೂ ಅಧಿಕಾರಿಗಳು ಅನುಸರಿಸುತ್ತಿದ್ದಾರೆ. ತಕ್ಷಣ ಈ ಕಠಿಣ ನೀತಿಯನ್ನು ಕೈಬಿಡಬೇಕೆಂದು ಒತ್ತಾಯಿಸಿದರು.

ಹಿಂದೂ ಯುವಶಕ್ತಿ ಮಂಡಳಿ ಪ್ರಮುಖ ಬಿ.ಕೆ.ಅರುಣ್ ಕುಮಾರ್ ಮಾತನಾಡಿ, ಯಾವುದೇ ಕಾರಣಕ್ಕೂ ಹಿಂದೂಗಳು ಮುಚ್ಚಳಿಕೆ ಬಾಂಡ್ ನೀಡಿ ಹಬ್ಬಗಳನ್ನು ಆಚರಿಸುವ ಪರಿಸ್ಥಿತಿ ಉದ್ಭವಿಸಬಾರದು. ನಗರಸಭೆ ಆಯುಕ್ತರು ಮಡಿಕೇರಿ ವ್ಯಾಪ್ತಿ ಗಣೇಶೋತ್ಸವ ಆಚರಣೆಗೆ ನಿಯಮಗಳನ್ನು ಹೇರುತ್ತಿರುವುದು ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಹಿಂದೂ ಜಾಗರಣಾ ವೇದಿಕೆ ಪ್ರಾಂತ ಸಮಿತಿಯ ಸುಭಾಸ್ ತಿಮ್ಮಯ್ಯ, ಜಿಲ್ಲಾ ಸಂಯೋಜಕ ಕುಕ್ಕೇರ ಅಜಿತ್, ಜಿಲ್ಲಾ ಸಹ ಸಂಯೋಜಕ ಚೇತನ್ ಶಾಂತಿನಿಕೇತನ, ವಿಶ್ವ ಹಿಂದೂ ಪರಿಷತ್ ಪ್ರಮುಖರಾದ ಪುದಿಯೊಕ್ಕಡ ರಮೇಶ್, ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಮಹಿಳಾ ಮೋರ್ಚಾ ಅಧ್ಯಕ್ಷೆ ಅನಿತಾ ಪೂವಯ್ಯ, ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಪಿ.ಎಂ.ರವಿ, ನಗರಸಭಾ ಸದಸ್ಯರು, ವಿವಿಧ ಗಣೇಶೋತ್ಸವ ಸಮಿತಿಗಳ ಮುಖಂಡರು ಪಾಲ್ಗೊಂಡಿದ್ದರು.

ವಾಹನಗಳ ಮೇಲೆ ದಾಳಿಗೆ ಯತ್ನಿಸಿದ ಕಾಡಾನೆ

ಸಿದ್ದಾಪುರ, ಸೆ.2–ಕಾಫಿ ತೋಟದಲ್ಲಿದ್ದ ಕಾಡಾನೆ ಹಿಂಡಿನ ಪೈಕಿ ಒಂದು ಕಾಡಾನೆ ಏಕಾಏಕಿ ರಸ್ತೆಗೆ ಓಡಿ ಬಂದು ವಾಹನಗಳ ಮೇಲೆ ದಾಳಿಗೆ ಯತ್ನಿಸಿದ ಘಟನೆ ಸಮೀಪದ ಘಟ್ಟದಳ್ಳ ಮುಖ್ಯ ರಸ್ತೆಯಲ್ಲಿ ಸೋಮವಾರ ನಡೆದಿದೆ.



ಮಾರ್ಗೊಳ್ಳಿ ತೋಟದಲ್ಲಿ ಮರಿಯೊಂದಿಗೆ 6 ಕಾಡಾನೆಗಳು ಪ್ರತ್ಯಕ್ಷಗೊಂಡಿದ್ದು, ಈ ಕಾಡಾನೆ ಹಿಂಡು ಮತ್ತೊಂದು ತೋಟಕ್ಕೆ ತೆರಳಲು ಮುಂದಾದ ಸಂದರ್ಭ ಮರಿಯಾನೆ ಸೇರಿದಂತೆ ಕೆಲ ಆನೆಗಳು ಹಿಂಡಿನಿಂದ ಬೇರ್ಪಟ್ಟಿವೆ. ಈ ವೇಳೆ ಗಾಬರಿಗೊಂಡ ಕಾಡಾನೆಯೊಂದು ಏಕಾಏಕಿ ರಸ್ತೆಗೆ ಬಂದು ವಾಹನಗಳ ಮೇಲೆ ದಾಳಿಗೆ ಯತ್ನಿಸಿತ್ತು. ಇದರಿಂದ ಭಯಭೀತರಾದ ಬಸ್ ಹಾಗೂ ಇತರ ಚಾಲಕರು ತಮ್ಮ ವಾಹನವನ್ನು ಹಿಂದಕ್ಕೆ ಸರಿಸುವ ಮೂಲಕ ಅಪಾಯದಿಂದ ಪಾರಾಗಿದ್ದಾರೆ. ಬಳಿಕ ಕಾಡಾನೆ ತೋಟಕ್ಕೆ ಅಳವಡಿಸಿದ ಸೋಲಾರ್ ಬೇಲಿ ತುಳಿದು ತೋಟದೊಳಗೆ ಮರೆಯಾಗಿದೆ.

ಈ ದೃಶ್ಯಗಳನ್ನು ಸಾರ್ವಜನಿಕರು ತಮ್ಮ ಮೊಬೈಲ್‌ಗಳಲ್ಲಿ ಚಿತ್ರಿಕರಿಸಿದ್ದು, ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.

ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಉಪ ವಲಯ ಅರಣ್ಯಾಧಿಕಾರಿ ಪಿ.ಟಿ.ಶಶಿ ಹಾಗೂ ಸಿಬ್ಬಂದಿ ಹಿಂಡಿನಿಂದ ಬೇರ್ಪಟ್ಟ ಆನೆಗಳನ್ನು ಒಟ್ಟುಗೂಡಿಸಲು ಪ್ರಯತ್ನಿಸಿದರೂ ಸಾಧ್ಯವಾಗಲಿಲ್ಲ. ಅಲ್ಲದೆ, ವಾಹನ ಸಂಚಾರ ಹೆಚ್ಚಿದ್ದ ಕಾರಣ ಕಾಡಾನೆಗಳು ಕೂಡ ರಸ್ತೆ ದಾಟಲು ಮುಂದಾಗದೆ ಕಾಫಿ ತೋಟದಲ್ಲೇ ಬೀಡುಬಿಟ್ಟಿವೆ. ಕಾಡಾನೆಗಳನ್ನು ಕಾಡಿಗಟ್ಟಲು ಕಾರ್ಯಾಚರಣೆ ನಡೆಸಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಸೆ.15ಕ್ಕೆ ರಾಜ್ಯ ಮಟ್ಟದ ಚದುರಂಗ ಸ್ಪರ್ಧೆ



ಸುದ್ದಿಗೋಷ್ಠಿಯಲ್ಲಿ ಗೋಣಿಕೊಪ್ಪಲಿನ ವೈಸ್‌ಮೆನ್ ಕ್ಲಬ್ ಅಧ್ಯಕ್ಷ ಕಾಣತಂಡ ಜಗದೀಶ್ ಮಾತನಾಡಿದರು.

ಮಡಿಕೇರಿ, ಸೆ.2–ಗೋಣಿಕೊಪ್ಪಲಿನ ವೈಸ್‌ಮೆನ್ ಕ್ಲಬ್ ವತಿಯಿಂದ ಸೆ.15ರಂದು ವಿರಾಜಪೇಟೆಯ ಸಂತ ಅನ್ನಮ್ಮ ಶಾಲಾ ಆವರಣದಲ್ಲಿ ದ್ವಿತೀಯ ವರ್ಷದ ರಾಜ್ಯ ಮಟ್ಟದ ಚದುರಂಗ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಕ್ಲಬ್ ಅಧ್ಯಕ್ಷ ಕಾಣತಂಡ ಜಗದೀಶ್ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂದ್ಯಾವಳಿಯಲ್ಲಿ 300ಕ್ಕೂ ಹೆಚ್ಚು ಸ್ಪರ್ಧಿಗಳು ಪಾಲ್ಗೊಳ್ಳುವ ನಿರೀಕ್ಷೆ ಇದೆ. ಕಳೆದ ಸಾಲಿನಲ್ಲಿ 180 ಸ್ಪರ್ಧಿಗಳು ಪಾಲ್ಗೊಂಡಿದ್ದರು ಎಂದು ಮಾಹಿತಿ ನೀಡಿದರು.

ಕ್ಲಬ್‌ನ ಯೋಜನಾ ನಿರ್ದೇಶಕ ಬಿ.ಜೆ.ಬೋಪಣ್ಣ ಮಾತನಾಡಿ, ಪಂದ್ಯಾವಳಿ 13 ವರ್ಷದೊಳಗಿನ ಮಕ್ಕಳ ಪ್ರಥಮ ವಿಭಾಗ, 13 ರಿಂದ 18 ವರ್ಷದೊಳಗಿನ ದ್ವಿತೀಯ ವಿಭಾಗ ಮತ್ತು ಮುಕ್ತ ತೃತೀಯ ವಿಭಾಗಗಳಲ್ಲಿ ನಡೆಯಲಿದೆ. ಸ್ಪರ್ಧೆಯ ದಿನ ಬೆಳಗ್ಗೆ 8.30ಕ್ಕೆ ಸ್ಪರ್ಧಿಗಳು ಶುಲ್ಕ ಪಾವತಿಸಿ ನೋಂದಾಯಿಸಿಕೊಳ್ಳಬೇಕು ಮತ್ತು ಸ್ಪರ್ಧಿಗಳು ಜನ್ಮದಿನಾಂಕವನ್ನು ದೃಢೀಕರಿಸುವ ಯಾವುದೇ ದಾಖಲೆಯನ್ನು ಹಾಜರುಪಡಿಸುವುದು ಕಡ್ಡಾಯ. ಚೆಸ್ ಬೋರ್ಡ್ ಮತ್ತು ಗಡಿಯಾರವನ್ನು ಸ್ಪರ್ಧಿಗಳೇ ತರಬೇಕು. ಪಂದ್ಯಾವಳಿಯನ್ನು ವಿರಾಜಪೇಟೆ ಸರ್ವೋದಯ ಕಾಲೇಜಿನ ಚೆಸ್ ಮಾಸ್ಟರ್ ಹಾಗೂ ಪಂದ್ಯಾವಳಿ ನಿರ್ದೇಶಕ ಪಿ.ಆರ್.ಪ್ರದೀಪ್ ನಡೆಸಿಕೊಡಲಿದ್ದಾರೆ ಎಂದರು.

ಪಂದ್ಯಾವಳಿಯ ಪ್ರಥಮ ಮತ್ತು ದ್ವಿತೀಯ ವಿಭಾಗಗಳಲ್ಲಿ ಪ್ರಥಮ ಬಹುಮಾನವಾಗಿ ತಲಾ 8 ಸಾವಿರ ರೂ., ದ್ವಿತೀಯ 6 ಸಾವಿರ ರೂ. ಮತ್ತು ತೃತೀಯ 4 ಸಾವಿರ ರೂ. ಮತ್ತು ಟ್ರೋಫಿ ನೀಡಲಾಗುವುದು. ಮುಕ್ತ ವಿಭಾಗದ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ 10 ಸಾವಿರ ರೂ., ದ್ವಿತೀಯ 8 ಸಾವಿರ ರೂ. ಮತ್ತು ತೃತೀಯ 6 ಸಾವಿರ ರೂ. ಮತ್ತು ಟ್ರೋಫಿ ನೀಡಲಾಗುವುದು. ಮಾಹಿತಿಗಾಗಿ ಕೆ.ಎಸ್.ಜಗದೀಶ್ ಮೊ.ಸಂ:9448644267, ಅನಿತಾ ಲೋಬೋ ಮೊ.ಸಂ:7760699881 ಅವರನ್ನು ಸಂಪರ್ಕಿಸಬಹುದೆಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕ್ಲಬ್‌ನ ನಿರ್ದೇಶಕ ರಾಬಿನ್ ಆಂಟೋನಿ, ಕಾರ್ಯದರ್ಶಿ ಸಿ.ಜೆ.ಆಂಟೋ, ಖಜಾಂಚಿ ಅನಿತಾ ಲೋಬೋ ಉಪಸ್ಥಿತರಿದ್ದರು.

ಸೆ.30ರವರೆಗೆ ಜಮಾಅತೆ ಇಸ್ಲಾಮಿ ಹಿಂದ್ ಮಹಿಳಾ ಅಭಿಯಾನ



ಸುದ್ದಿಗೋಷ್ಠಿಯಲ್ಲಿ ಜಮಾಅತೆ ಇಸ್ಲಾಮಿ ಹಿಂದ್ ಮಹಿಳಾ ವಿಭಾಗದ ಜಿಲ್ಲಾ ಸಂಚಾಲಕಿ ಪಿ.ಎ.ಝೈನಬಾ ರೆಹೆಮಾನ್ ಮಾತನಾಡಿದರು.

ವಿರಾಜಪೇಟೆ, ಸೆ.2– ಜಮಾಅತೆ ಇಸ್ಲಾಮಿ ಹಿಂದ್ ಮಹಿಳಾ ವಿಭಾಗದಿಂದ ದೇಶಾದ್ಯಂತ ನೈತಿಕತೆಯೇ ಸ್ವಾತಂತ್ರ್ಯ ಎಂಬ ಧ್ಯೇಯ ವಾಕ್ಯದಡಿ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಲಾಗಿದ್ದು, ಸೆ.30ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ವಿಭಾಗದ ಜಿಲ್ಲಾ ಸಂಚಾಲಕಿ ಪಿ.ಎ.ಝೈನಬಾ ರೆಹೆಮಾನ್ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಭಿಯಾನದಲ್ಲಿ ಧರ್ಮದಲ್ಲಿ ನೈತಿಕತೆ ಕಲ್ಪನೆ ಶೀರ್ಷಿಕೆಯಡಿ ವಿಚಾರಗೋಷ್ಠಿ, ಮಹಿಳಾ ಸಮಾವೇಶ, ಸತ್ಕಾರಕೂಟ, ಶಾಲಾ–ಕಾಲೇಜುಗಳಲ್ಲಿ ಉಪನ್ಯಾಸ, ವೈಯಕ್ತಿಕ ಭೇಟಿ, ಸಮಾಜದ ಗಣ್ಯರ ಸಂದರ್ಶನ, ಲೇಖನ–ಭಾಷಣ, ರಸಪ್ರಶ್ನೆ ಸ್ಪರ್ಧೆ ನಡೆಸಲಾಗುವುದು. ಈಗಾಗಲೇ ಬೆಂಗಳೂರಿನಲ್ಲಿ ಅಭಿಯಾನಕ್ಕೆ ಜಮಾಅತೆ ಇಸ್ಲಾಮಿ ಹಿಂದ್ ರಾಜ್ಯಾಧ್ಯಕ್ಷ ಡಾ.ಮುಹಮ್ಮದ್ ಸಾದ್ ಬೆಳಗಾಮಿ ಚಾಲನೆ ನೀಡಿದ್ದಾರೆ ಎಂದರು.

ಮಾನವ ಜೀವನ ಸುಭಿಕ್ಷೆ ಮತ್ತು ಮನೋಹರತೆ ಬದುಕಿನಲ್ಲಿ ನೈತಿಕತೆ ಪಾಲಿಸುವುದರಿಂದ ಮಾತ್ರ ಸಾಧ್ಯ. ಪ್ರಸಕ್ತ ನಮ್ಮ ಸಮಾಜದ ಸಮಸ್ಯೆ ಮತ್ತು ಸವಾಲುಗಳು ಬಹಳ ಕಳವಳಕಾರಿಯಾಗಿವೆ. ನಗ್ನತೆ, ಜೂಜು, ಮದ್ಯಪಾನ, ಮಾದಕ ವ್ಯಸನ, ವಿವಾಹೇತರ ಸಂಬಂಧಗಳು, ಸಲಿಂಗಕಾಮ ಹಾಗೂ ವೇಶ್ಯಾವಾಟಿಕೆಗಳಂತಹ ಕೆಡುಕುಗಳು ಹಾಗೂ ನೈತಿಕ, ಸಾಮಾಜಿಕ ಮತ್ತು ಜೈವಿಕ ಮಟ್ಟದಲ್ಲಿ ಅಸಂಖ್ಯಾತ ಸಮಸ್ಯೆಗಳನ್ನು ಹುಟ್ಟುಹಾಕಿವೆ. ಜೊತೆಗೆ ಯುವ ಜನಾಂಗ ದಾರಿ ತಪ್ಪುತ್ತಿದ್ದು, ಇದರಿಂದ ಸಮಾಜದ ಸ್ಥಿತಿ ಅತ್ಯಂತ ಚಿಂತಾಜನಕವಾಗಿದೆ. ಆದ್ದರಿಂದ ಜಾಗೃತಿ ಮೂಡಿಸಲು ಅಭಿಯಾನ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸ್ಥಾನೀಯ ಶಾಖೆ ಕಾರ್ಯದರ್ಶಿ ಸಮೀರಾ ರಾಫಿಕ್, ಕಾರ್ಯಕರ್ತೆ ಮುಬೀನಾ ನಾಸಿರ್, ಜಿಐಓ ಸಂಘಟನೆಯ ಫಿಧಾ ಸ್ವಾಲಿಹ ಹಾಜರಿದ್ದರು.

ಮಹಿಳೆಯರ ಮೇಲಿನ ಅತ್ಯಾಚಾರ ಖಂಡಿಸಿ

ಮಹಿಳೋದಯ ಒಕ್ಕೂಟದಿಂದ ಪ್ರತಿಭಟನೆ



ಮಹಿಳೆಯರ ಮೇಲಿನ ಅತ್ಯಾಚಾರ ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟದಿಂದ ಪ್ರತಿಭಟನೆ.

ಚಾಮರಾಜನಗರ, ಸೆ.2–ಮಹಿಳೆಯರ ಮೇಲಿನ ಅತ್ಯಾಚಾರ, ಕೊಲೆ ಹಾಗೂ ಲೈಂಗಿಕ ಕಿರುಕುಳ ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟದಿಂದ ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಚಾಮರಾಜೇಶ್ವರ ದೇವಸ್ಥಾನ ಎದುರು ಸಮಾವೇಶಗೊಂಡ ಪ್ರತಿಭಟನಾಕಾರರು, ಅಲ್ಲಿಂದ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನದವರೆಗೆ ಮೆರವಣಿಗೆ ನಡೆಸಿದರು. ನಂತರ ಕೆಲಕಾಲ ಪ್ರತಿಭಟನೆ ನಡೆಸಿ ಉಪ ತಹಸೀಲ್ದಾರ್ ರಂಗರಾಜು ಅವರಿಗೆ ಮನವಿ ಸಲ್ಲಿಸಿದರು.

ಕೋಲ್ಕತ್ತಾದಲ್ಲಿ ವೈದ್ಯ ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿ ಕೊಲೆ ಮಾಡಿದ ಆರೋಪಿಸಿಗಳನ್ನು ಕೂಡಲೇ ಬಂಧಿಸಿ, ಮರಣ ದಂಡನೆ ವಿಧಿಸಬೇಕು. ಮಹಿಳೆಯರ ಮೇಲಿನ ಹೀನಕೃತ್ಯ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರಿಗೆ ಸುರಕ್ಷತೆ ವಾತಾವರಣ ನಿರ್ಮಿಸಬೇಕು. ಹೆಣ್ಣುಮಕ್ಕಳ ವಸತಿ ನಿಲಯಗಳ ಬಳಿ ಸೂಕ್ತ ಭದ್ರತೆ ನೀಡಬೇಕು ಎಂದು ಒತ್ತಾಯಿಸಿದರು.

ಮಹಿಳೆಯರ ಮೇಲೆ ನಡೆಯುವ ಅಪರಾಧ ಕುರಿತು ರಾಜ್ಯ ಹಾಗೂ ಕೇಂದ್ರ ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು. ಕೋರ್ಟ್‌ಗಳಲ್ಲಿ ಮಹಿಳೆಯರ ಮೇಲಿನ ಪ್ರಕರಣಗಳು ತ್ವರಿತವಾಗಿ ವಿಲೇವಾರಿ ಮಾಡಬೇಕು. ಮಹಿಳೆಯರು ನಿರ್ಭೀತಿಯಿಂದ ಜೀವಿಸಲು ತಳಮಟ್ಟದಿಂದ ರಾಷ್ಟ್ರಮಟ್ಟದವರೆಗೂ ಸೂಕ್ತ ರಕ್ಷಣೆ ನೀಡಬೇಕು. ಅತ್ಯಾಚಾರಿಗಳಿಗೆ ವಿಧಿಸುವ ಶಿಕ್ಷೆಯನ್ನು ಕಠಿಣಗೊಳಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಹಿಳೋದಯ ಒಕ್ಕೂಟದ ಜಿಲ್ಲಾಧ್ಯಕ್ಷೆ ಅನುಪಮಾ, ಉಪಾಧ್ಯಕ್ಷೆ ಶ್ರೀದೇವಿ, ಸಂಯೋಜಕಿ ಲತಾ, ವಲಯ ಸಂಯೋಜಕ ಸಿದ್ದರಾಜು, ಕಾರ್ಯಕರ್ತರು ಭಾಗವಹಿಸಿದ್ದರು.

ಕೊಳ್ಳೇಗಾಲ ನಗರಸಭೆ ಅಧ್ಯಕ್ಷಗಾದಿ ಹಿನ್ನೆಲೆ

ಕಾಂಗ್ರೆಸ್ ಪ್ರವಾಸದಲ್ಲಿ ಇಬ್ಬರು ಬಿಜೆಪಿ ಸದಸ್ಯರು



ಕೊಳ್ಳೇಗಾಲ ನಗರಸಭೆ ಕಾಂಗ್ರೆಸ್ ಸದಸ್ಯರ ಪ್ರವಾಸದಲ್ಲಿ ಬಿಜೆಪಿ ಸದಸ್ಯರು ಕಾಣಿಸಿ ಕೊಂಡಿರುವುದು.

ಕೊಳ್ಳೇಗಾಲ, ಸೆ.2–ಕೊಳ್ಳೇಗಾಲ ನಗರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಸೆ.5ರಂದು ಚುನಾವಣೆ ನಡೆಯಲಿದ್ದು, ಅಧಿಕಾರ ಹಿಡಿಯಲು ಕಾಂಗ್ರೆಸ್ ಸದಸ್ಯರು ಕೈಗೊಂಡಿರುವ ಪ್ರವಾಸದಲ್ಲಿ ನಾಲ್ವರು ಪಕ್ಷೇತರರು ಹಾಗೂ ಇಬ್ಬರು ಬಿಜೆಪಿ ಸದಸ್ಯರು ತೆರಳಿದ್ದಾರೆ.

ಸೋಮವಾರ ಮಧ್ಯಾಹ್ನ ಕಾಂಗ್ರೆಸ್‌ನ ಜಿ.ಎಂ.ಸುರೇಶ್, ರೇಖಾ ರಮೇಶ್, ಸುಶೀಲಾ ಶಾಂತರಾಜು, ಬಸ್ತಿಪುರ ಶಾಂತರಾಜು, ಪುಷ್ಪಲತಾ ಶಾಂತರಾಜು, ಭಾಗ್ಯಮ್ಮ, ಮಾಜಿ ಉಪಾಧ್ಯಕ್ಷ ಅಕ್ಮಲ್ ಪಾಷ ಸೇರಿದಂತೆ 10 ಸದಸ್ಯರು ತೆರಳಿದ್ದಾರೆ. ಇವರೊಂದಿಗೆ ಪಕ್ಷೇತರ ಸದಸ್ಯರಾದ ಮನೋಹರ್, ಎ.ಪಿ.ಶಂಕರ್, ಕವಿತಾ ರಾಜೇಶ್, ಶಂಕರ ನಾರಾಯಣ ಗುಪ್ತ ಹಾಗೂ ಬಿಜೆಪಿಯ ನಾಗೇಂದ್ರ (ನಾಗ), ಧರಣೇಶ್ ಪ್ರವಾಸಕ್ಕೆ ತೆರಳಿದ್ದಾರೆ. ಇನ್ನೂ ಕಾಂಗ್ರೆಸ್‌ನ ಸುಮ ಸುಬ್ಬಣ್ಣ ಮತ್ತು ಮುಡಿಗುಂಡ ಮಹದೇವಮ್ಮ ತುರ್ತು ಹಿನ್ನೆಲೆಯಲ್ಲಿ ಪ್ರವಾಸಕ್ಕೆ ತೆರಳಿಲ್ಲ.

ಕುಗ್ಗಿದ ಬಿಜೆಪಿ ಸಂಖ್ಯಾಬಲ: ಕಾಂಗ್ರೆಸ್ ಸದಸ್ಯರೊಂದಿಗೆ ಬಿಜೆಪಿಯ ಇಬ್ಬರು ಸದಸ್ಯರು ತೆರಳಿದ್ದು, ಇದರಿಂದ ಪಕ್ಷದ 13 ಸಂಖ್ಯಾಬಲ 11ಕ್ಕೆ ಕುಗ್ಗಿದಂತಾಗಿದೆ. ಇನ್ನೂ ಅನೇಕ ಕಾರಣಗಳಿಂದ ಬಿಜೆಪಿಯ ಜಿ.ಪಿ.ಶಿವಕುಮಾರ್, ಮಾನಸ ಪ್ರಭುಸ್ವಾಮಿ ಪಕ್ಷದ ಸಭೆಗಳಿಂದ ದೂರ ಉಳಿದಿದ್ದಾರೆ. ಭಾನುವಾರ ರಾತ್ರಿ ನಡೆದ ಬಿಜೆಪಿ ಸಭೆಯಲ್ಲಿ ನಾಗೇಂದ್ರ ಹಾಗೂ ಧರಣೇಶ್ ಇಬ್ಬರೂ ಹಾಜರಿದ್ದು, ಸೋಮವಾರ ಕಾಂಗ್ರೆಸ್ ಪ್ರವಾಸದಲ್ಲಿ ತೆರಳಿದ್ದಾರೆ.

ಕೈ ಸಂಖ್ಯಾಬಲ ಮೇಲುಗೈ: ಕೊಳ್ಳೇಗಾಲ ನಗರಸಭೆ ಸಂಖ್ಯಾಬಲದಲ್ಲಿ ಕಾಂಗ್ರೆಸ್ ಮೇಲುಗೈ ಸಾಧಿಸಿದೆ. ಒಟ್ಟು 31 ಸದಸ್ಯರಿದ್ದು, ಕಾಂಗ್ರೆಸ್ 12, ಬಿಜೆಪಿ 13, ಪಕ್ಷೇತರರು 4 ಹಾಗೂ ಬಿಎಸ್ಪಿ 2 ಸದಸ್ಯರು ಇದ್ದಾರೆ. ಇನ್ನು ಬಿಜೆಪಿಯ ಮೂವರು ಕಾಂಗ್ರೆಸ್‌ನಲ್ಲಿ ಗುರುತಿಸಿಕೊಂಡಿದ್ದು, ಸಂಸದ ಹಾಗೂ ಶಾಸಕ ಸೇರಿ ಕಾಂಗ್ರೆಸ್ 20 ಸಂಖ್ಯಾಬಲಕ್ಕೆ ಏರಲಿದೆ. ಈ ಹಿನ್ನೆಲೆಯಲ್ಲಿ ರಾಜಕೀಯ ಚಟುವಟಿಕೆ ಗರಿಗೆದರಿದೆ.

ಕಾಲಮಿತಿಯಲ್ಲಿ ವೇತನ ನೀಡದ ಏಜೆನ್ಸಿ ಕಪ್ಪುಪಟ್ಟಿಗೆ ಸೇರಿಸಿ

ಪೌರಕಾರ್ಮಿಕರ ಕುಂದುಕೊರತೆ ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಸೂಚನೆ



ಚಾಮರಾಜನಗರ ಡಿಸಿ ಕಚೇರಿ ಸಭಾಂಗಣದಲ್ಲಿ ನಡೆದ ಕುಂದುಕೊರತೆ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಪೌರಕಾರ್ಮಿಕರ ಅಹವಾಲು ಆಲಿಸಿದರು.

ಚಾಮರಾಜನಗರ, ಸೆ.2–ಪೌರಕಾರ್ಮಿಕರಿಗೆ ನಿಗದಿತ ಕಾಲಮಿತಿಯಲ್ಲಿ ವೇತನ ಪಾವತಿಸದ ಏಜೆನ್ಸಿಯನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದ ಸೋಮವಾರ ನಡೆದ ನಗರಸಭೆ ವ್ಯಾಪ್ತಿಯ ಪೌರ ಕಾರ್ಮಿಕರ ಕುಂದುಕೊರತೆ ಸಭೆಯಲ್ಲಿ ಪೌರ ಕಾರ್ಮಿಕರ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ಪೌರಕಾರ್ಮಿಕರು ಪ್ರತಿನಿತ್ಯ ನಗರದ ಸ್ವಚ್ಛತಾ ಕಾಯಕದಲ್ಲಿ ನಿರತರಾಗಿದ್ದಾರೆ. ಆದ್ದರಿಂದ ಪೌರ ಕಾರ್ಮಿಕರಿಗೆ ಇಎಸ್‌ಐ ಕಾರ್ಡ್ ಒದಗಿಸಬೇಕು. ವೈದ್ಯಕೀಯ ವೆಚ್ಚ ಮರುಪಾವತಿ ಹಾಗೂ ವಿದ್ಯಾರ್ಥಿ ವೇತನ ಸೌಲಭ್ಯ ನೀಡಬೇಕು. ಪ್ರತಿ ತಿಂಗಳ ವೇತನದ ಜೊತೆಗೆ ಸಂಕಷ್ಟ ಭತ್ಯೆ ನೀಡಬೇಕು ಎಂದು ಆದೇಶಿಸಿದರು.

ಸಮಾನ ಕೆಲಸಕ್ಕೆ ಸಮಾನ ವೇತನದಡಿ ಹೊರಗುತ್ತಿಗೆ ನೇರ ಪಾವತಿ ಕಾರ್ಮಿಕರನ್ನು ಕಾಯಂಗೊಳಿಸಲು ಬೇಡಿಕೆ ಇದೆ. ಅಲ್ಲದೆ, ಗೃಹಭಾಗ್ಯ ಯೋಜನೆಯಡಿ ಪೌರಕಾರ್ಮಿಕರು ಹಾಗೂ ಸಫಾಯಿ ಕರ್ಮಚಾರಿಗಳಿಗೆ ಮನೆ ನಿರ್ಮಾಣಕ್ಕಾಗಿ 2 ಎಕರೆ ಭೂಮಿ ಮಂಜೂರಾಗಿದ್ದು, ಹಕ್ಕುಪತ್ರಗಳನ್ನು ನೀಡಲಾಗಿದೆ. ಮನೆ ನಿರ್ಮಾಣಕ್ಕೆ ಅನುದಾನ ಅಗತ್ಯವಿದ್ದು, ಈಗಾಗಲೇ ಮನೆ ನಿರ್ಮಾಣವಾಗಿರುವ ಕಾಲೋನಿಗಳಲ್ಲಿ ಮೂಲಸೌಕರ್ಯ ಕೊರತೆ ಇದೆ. ಸಮಸ್ಯೆಗಳ ಪರಿಹಾರಕ್ಕೆ ಅಧಿಕಾರಿಗಳು ತುರ್ತು ಕ್ರಮವಹಿಸಬೇಕು ಎಂದರು.

ಜಿಲ್ಲೆಯ ಎಲ್ಲಾ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಪೌರಕಾರ್ಮಿಕರ ಸಮಸ್ಯೆಗಳನ್ನು ಪರಿಹರಿಸಿ, ಮಾದರಿ ಕಾಲೋನಿ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕು. ಆಗಬೇಕಾಗಿರುವ ಕೆಲಸಗಳನ್ನು ಮೇಲಧಿಕಾರಿಗಳ ಜೊತೆ ಚರ್ಚಿಸಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ಮಾಹಿತಿಗಳನ್ನು ಕ್ರೋಢಿಕರಿಸಿ ಪ್ರಸ್ತಾವನೆ ಸಲ್ಲಿಸಬೇಕು. ಪ್ರತಿಬಾರಿ ಇದೇ ಸಮಸ್ಯೆಗಳು ಮರುಕಳಿಸಬಾರದು. ಕೌನ್ಸಿಲ್ ಸಭೆ ನಡೆಯುವ ಮೊದಲೇ ಪೌರಕಾರ್ಮಿಕರ ಕುಂದುಕೊರತೆ ಪರಿಹಾರಕ್ಕೆ ಕ್ರಿಯಾಯೋಜನೆ ತಯಾರಿಸಿ ಮಂಡಿಸುವಂತೆ ಜಿಲ್ಲಾ ನಗರಾಭಿವೃದ್ಧಿ ಕೋಶ ಹಾಗೂ ನಗರಸಭೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇದೇ ವೇಳೆ ನಗರಸಭೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದವರನ್ನು ಸನ್ಮಾನಿಸಲಾಯಿತು. ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕಿ ಎಂ.ವಿ.ಸುಧಾ, ನಗರಸಭೆ ಪೌರಾಯುಕ್ತ ಎಸ್.ವಿ.ರಾಮದಾಸ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಮುನಿರಾಜು, ನಗರಸಭೆ ಯೋಜನಾಧಿಕಾರಿ ವೆಂಕಟನಾಯಕ್, ಕಂದಾಯಾಧಿಕಾರಿ ಶರವಣ, ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ್, ನಾರಾಯಣ್, ಸುಷ್ಮಾ ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಮೂರು ಹಂತಗಳಲ್ಲಿ ತಪಾಸಣೆ

ಚಾಮರಾಜನಗರ ನಗರಸಭಾ ವ್ಯಾಪ್ತಿ 138 ಪೌರಕಾರ್ಮಿಕರಿದ್ದು, ಈಗಾಗಲೇ 66 ಮಂದಿಗೆ ಆರೋಗ್ಯ ತಪಾಸಣೆ ಮಾಡಲಾಗಿದೆ. ಉಳಿದ ಎಲ್ಲಾ ಕಾರ್ಮಿಕರಿಗೂ ತಪಾಸಣೆ ನಡೆಸಲು ಶೇ.50ರ ರಿಯಾಯಿತಿ ದರದಲ್ಲಿ ಮೈಸೂರಿನ ಅಪೋಲೊ ಆಸ್ಪತ್ರೆ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ. ಪೌರಕಾರ್ಮಿಕರ ಕಣ್ಣಿನ ತೊಂದರೆ, ಅಲರ್ಜಿ, ಮಹಿಳೆಯರಿಗೆ ಗರ್ಭಕೋಶದ ತೊಂದರೆ ಇನ್ನಿತರೆ ಆರೋಗ್ಯ ಸಮಸ್ಯೆಗಳನ್ನು ಮೂರು ಹಂತಗಳಲ್ಲಿ ತಪಾಸಣೆ ಮಾಡಿ ಚಿಕಿತ್ಸೆ ಕೊಡಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆ ಪ್ರತಿ ಮೂರು ತಿಂಗಳಿಗೊಮ್ಮೆ ಪರಿಶಿಷ್ಟ ಜಾತಿ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆ ನಡೆಸಲಿದ್ದು, ಪೌರಕಾರ್ಮಿಕರ ಸಮಸ್ಯೆಗಳನ್ನು ನಿವಾರಿಸಲು ಚಾಮರಾಜನಗರ, ಕೊಳ್ಳೆಗಾಲ ನಗರಸಭೆ, ಯಳಂದೂರು, ಹನೂರು ಪಟ್ಟಣ ಪಂಚಾಯಿತಿ ಹಾಗೂ ಗುಂಡ್ಲುಪೇಟೆ ಪುರಸಭೆ ಸೇರಿದಂತೆ ಒಟ್ಟು 5 ಪೌರಕಾರ್ಮಿಕ ಪ್ರತಿನಿಧಿಗಳನ್ನು ಸಭೆಗೆ ಆಹ್ವಾನಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಕ್ರಮ ಮದ್ಯ ಮಾರುತ್ತಿದ್ದ ಐವರ ಬಂಧನ

ಚಾಮರಾಜನಗರ : ಮಹದೇಶ್ವರ ಬೆಟ್ಟದ ವಿವಿಧೆಡೆ ಅಕ್ರಮವಾಗಿ ಮದ್ಯ ಮಾರುತ್ತಿದ್ದ ಐವರನ್ನು ಪೊಲೀಸ್ ಹಾಗೂ ಅಬಕಾರಿ ಅಧಿಕಾರಿಗಳು ಬಂಧಿಸಿ 98 ಸಾವಿರ ರೂ. ಮೌಲ್ಯದ ಮದ್ಯ ಹಾಗೂ 28 ಸಾವಿರ ರೂ. ನಗದು ವಶಪಡಿಸಿಕೊಂಡಿದ್ದಾರೆ.

ಮಹದೇಶ್ವರಬೆಟ್ಟದ ಸಿದ್ದಪ್ಪ, ಎನ್. ಕುಮಾರ್, ಬಾಬು ಪೂಜಾರಿ, ಮಹೇಶ, ಮಾದೇವಿಯನ್ನು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ರಾಚಪ್ಪ, ವೆಂಟಕಲಕ್ಷ್ಮಿ, ಪುಟ್ಟಮ್ಮ ಹಾಗೂ ಕೌದಳ್ಳಿ ಗ್ರಾಮದ ಲಕ್ಷ್ಮಿ ವೈನ್ಸ್ ಮಾಲೀಕ ತಲೆಮರೆಸಿಕೊಂಡಿದ್ದಾರೆ. ಜಂಟಿ ಕಾರ್ಯಾಚರಣೆ ನಡೆಸಿದ ಪೊಲೀಸ್ ಹಾಗೂ ಅಬಕಾರಿ ಅಧಿಕಾರಿಗಳು 5 ಪ್ರಕರಣಗಳನ್ನು ದಾಖಲಿಸಿದ್ದಾರೆ.

ಹನೂರು ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಶಶಿಕುಮಾರ್, ಎಸ್‌ಐ ಸಿ.ಮಂಜುನಾಥ ಪ್ರಸಾದ್, ರಾಮಾಪುರ ಎಸ್‌ಐ ಈಶ್ವರ್ ಹಾಗೂ ಮಲೆ ಮಹದೇಶ್ವರ ಪೊಲೀಸ್ ಠಾಣೆ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಡಿಸಿಗೆ ನಿವೃತ್ತ ನೌಕರರ ಮನವಿ ಸಲ್ಲಿಕೆ



7ನೇ ವೇತನ ಆಯೋಗದ ಅನುಷ್ಠಾನದ ವೇತನ ಶ್ರೇಣಿ ಸೌಲಭ್ಯ ಒದಗಿಸಿಕೊಡುವಂತೆ ಒತ್ತಾಯಿಸಿ ನಿವೃತ್ತ ನೌಕರರು ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ: ಏಳನೇ ವೇತನ ಆಯೋಗದ ಅನುಷ್ಠಾನದಲ್ಲಿ 2022ರ ಜ.7ರಿಂದ 2024ರ ಜು.31ರ ಅವಧಿಯಲ್ಲಿ ನಿವೃತ್ತರಾದ ಅಧಿಕಾರಿ ಹಾಗೂ ನೌಕರರಿಗೆ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಸೌಲಭ್ಯ ಒದಗಿಸಿಕೊಡುವಂತೆ ಒತ್ತಾಯಿಸಿ ಕರ್ನಾಟಕ ನಿವೃತ್ತ ನೌಕರರ ವೇದಿಕೆ ಜಿಲ್ಲಾ ಪದಾಧಿಕಾರಿಗಳು ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಿದರು.

ವೇತನ ಶ್ರೇಣಿಗಳ ಪರಿಷ್ಕರಣೆ ಕಾರಣದಿಂದ ಉಂಟಾಗುವ ವೇತನ ಮತ್ತು ಭತ್ಯೆ ಹೆಚ್ಚಳವನ್ನು 2022 ಜು.1ರಿಂದ 2024ರ ಜು.31ರ ಅವಧಿಯಲ್ಲಿ ಸೇವೆಯಿಂದ ನಿವೃತ್ತರಾದ ಅಥವಾ ಸೇವೆಯಲ್ಲಿರುವಾಗ ಮರಣ ಹೊಂದಿದವರನ್ನು ಪರಿಗಣಿಸಬೇಕು. 7ನೇ ವೇತನ ಆಯೋಗದ ವರದಿಯಂತೆ ಪರಿಷ್ಕೃತ ವೇತನದಲ್ಲಿ ನಿವೃತ್ತಿ ಆರ್ಥಿಕ ಸೌಲಭ್ಯಗಳನ್ನು ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ನೌಕರರ ವೇದಿಕೆಯ ಜಿಲ್ಲಾ ಸಂಚಾಲಕರಾದ ಎ.ಶಿವಣ್ಣ, ಕೆ.ಎನ್. ಶಿವಸ್ವಾಮಿ, ಮಹದೇವಯ್ಯ, ಎಂ.ರಾಜಶೇಖರ್, ಎಂ.ಮಲ್ಲು, ನಾಗರಾಜು, ಬಿಆರ್‌ಸಿ ಎಸ್.ಭಾಗ್ಯ, ಪುಟ್ಟಗೋಪಮ್ಮ, ಇತರರು ಹಾಜರಿದ್ದರು.

ಗುಂಬಳ್ಳಿ ಗ್ರಾಮದಲ್ಲಿ ಜನಸಂಪರ್ಕ ಸಭೆ

ಯಳಂದೂರು, ಸೆ.2– ಯಳಂದೂರು ಪೊಲೀಸ್ ಠಾಣೆ ವ್ಯಾಪ್ತಿಯ ಗುಂಬಳ್ಳಿ ಗ್ರಾಮದಲ್ಲಿ ಆರಕ್ಷಕ ಉಪ ನಿರೀಕ್ಷಕ ಹನುಮಂತ ಉಪ್ಪಾರ ಅಧ್ಯಕ್ಷತೆಯಲ್ಲಿ ಜನಸಂಪರ್ಕ ಸಭೆ ನಡೆಯಿತು.

ಸಭೆಯಲ್ಲಿ ಗ್ರಾಮದ ಮುಖಂಡರು ಹಾಗೂ ಸಾರ್ವಜನಿಕರಿಗೆ ಸಂಚಾರ ನಿಯಮ, ಕಾನೂನು ಅರಿವು, ಉಲ್ಲಂಘನೆ, ಅಪಘಾತ, ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ, ತುರ್ತುಸೇವೆ, ಸೈಬರ್ ಅಪರಾಧಗಳ ಬಗ್ಗೆ ಅರಿವು ಮೂಡಿಸಲಾಯಿತು.



ಗುಂಬಳ್ಳಿ ಗ್ರಾಮದಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಆರಕ್ಷಕ ಉಪ ನಿರೀಕ್ಷಕ ಹನುಮಂತ ಉಪ್ಪಾರ ಮಾತನಾಡಿದರು.

ಮುಖ್ಯಮಂತ್ರಿ ಕುರ್ಚಿ ಖಾಲಿ ಇಲ್ಲ

● ಡಿಸಿಎಂ ಡಿಕೆಶಿ ಸ್ಪಷ್ಟನೆ ● ದೇಶಪಾಂಡೆ ಹೇಳಿಕೆಗೆ ಆಕ್ಷೇಪ


ಡಿ.ಕೆ.ಶಿವಕುಮಾರ್

ಬೆಂಗಳೂರು, ಸೆ.2(ಕೆಎಂಶಿ)–ಮುಖ್ಯಮಂತ್ರಿ ಕುರ್ಚಿ ಖಾಲಿಯಿಲ್ಲ, ಈ ಕುರ್ಚಿ ಖಾಲಿ ಇದ್ದಿದ್ದರೆ ಮಾತನಾಡ ಬಹುದಿತ್ತು. ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಸರ್ಕಾರ ನಡೆಯುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿರಿಯರಾದ ಆರ್.ವಿ.ದೇಶಪಾಂಡೆ ಅವರು ಮುಖ್ಯಮಂತ್ರಿ ಗಾದಿಗೆ ಆಸೆ ಪಡುವುದು ತಪ್ಪಲ್ಲ, ಆದರೆ ಮಾಧ್ಯಮಗಳ ಮುಂದೆ ಮಾತನಾಡಬಾರ ದಿತ್ತು. ಹಿರಿಯರಾದ ಅವರಿಗೆ ಏನು ಗೌರವ ನೀಡಲಾಗುವುದೋ ಅದನ್ನು ನೀಡೋಣ ಎಂದರು. ನ್ಯಾಯಾಲಯದಲ್ಲಿ ಸಿದ್ದರಾಮಯ್ಯ ಅವರ ಮುಡಾ ವಿಚಾ ರಣೆಗೆ ಸಂಬಂಧಿಸಿದಂತೆ ಯಾವುದೇ ವ್ಯತಿರಿಕ್ತವಾಗುವುದಿಲ್ಲ, ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಗಳಾಗಿ ಮುಂದು ವರೆಯುತ್ತಾರೆ, ಕೆಲಸ ಮಾಡುತ್ತಾರೆ ಎಂದರು. ಸಂಸದ ಡಾ.ಕೆ.ಸುಧಾಕರ್ ಕಾಂಗ್ರೆಸ್‌ನಲ್ಲಿದ್ದು ಬಿಜೆಪಿಗೆ ಹೋಗಿದ್ದಾರೆ. ಅವರು ತಮ್ಮ ಹೇಳಿಕೆಯ ಬಗ್ಗೆ ಮೊದಲು ಪ್ರಮಾಣ ಪತ್ರ ನೀಡಲಿ. ಅವರ ರಕ್ತ, ಆಚಾರ–ವಿಚಾರ ಎಲ್ಲವೂ ಕಾಂಗ್ರೆಸ್ ಆಗಿತ್ತು. ಈಗ ನಾಲ್ಕೈದು ವರ್ಷದಿಂದ ಬದಲಾಗಿದೆ. ನಾನು ಕೋವಿಡ್ ಹಗರಣದ ವರದಿ ಓದಿಲ್ಲ. ಕೇವಲ ಮಾಧ್ಯಮಗಳ ವರದಿ ಓದಿದ್ದೇನೆ. ವರದಿ ಪರಿಶೀಲನೆ ನಂತರ ಪ್ರತಿಕ್ರಿಯಿಸುತ್ತೇನೆ. ಯಡಿಯೂರಪ್ಪ ಅವರ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣದ ಶೀಘ್ರ ತನಿಖೆಗೆ ರಾಜ್ಯ ಮಹಿಳಾ ಆಯೋಗ ಸೂಚಿಸಿರುವ ಬಗ್ಗೆ ತಮಗೆ ಮಾಹಿತಿ ಇಲ್ಲ ಎಂದರು.

ಸೆ.22ಕ್ಕೆ ಪಿಎಸ್‌ಐ ಪರೀಕ್ಷೆ: 66,000 ಮಂದಿ ಅರ್ಜಿ ಸಲ್ಲಿಕೆ



ಬೆಂಗಳೂರು: ಸೆ.22ಕ್ಕೆ ಪಿಎಸ್‌ಐ ಪರೀಕ್ಷೆ ನಡೆಸುವುದಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದೆ. 402 ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ನಡೆಯಲಿರುವ ಪರೀಕ್ಷೆಗೆ ಒಟ್ಟು 66,000 ಮಂದಿ ಅರ್ಜಿ ಸಲ್ಲಿಸಿದ್ದಾರೆ. ಪರೀಕ್ಷೆಗೆ ಒಂದು ವಾರ ಮೊದಲು ಪ್ರವೇಶ ಪತ್ರ ಬಿಡುಗಡೆ ಮಾಡಲಾಗುವುದು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಗ್ರಾಮ ಆಡಳಿತಾಧಿಕಾರಿ ಹುದ್ದೆಗೆ ಕನ್ನಡ ಕಡ್ಡಾಯ ಪರೀಕ್ಷೆ ಸೆ.29ರಂದು ನಡೆಯಲಿದೆ. ಈ ಪರೀಕ್ಷೆಯಲ್ಲಿ ಉತ್ತೀರ್ಣರಾದವರು ಮಾತ್ರ ಅ.27ಕ್ಕೆ ನಡೆಯುವ ಪ್ರಮುಖ ಪರೀಕ್ಷೆಗೆ ಅರ್ಹತೆ ಪಡೆಯಲಿದ್ದಾರೆ. 1000 VAO ಹುದ್ದೆಗಳಿಗೆ 5.7 ಲಕ್ಷ ಮಂದಿ ಅರ್ಜಿ ಸಲ್ಲಿಸಿದ್ದು ಈ ಪರೀಕ್ಷೆಗೂ ತಯಾರಿ ನಡೆಸಲಾಗಿದೆ. UGNEET24 ಸೀಟು ಪಡೆದ ಕೆಲವು ಅಭ್ಯರ್ಥಿಗಳು ಯೂನಿಯನ್ ಬ್ಯಾಂಕಿನ ಚಲನ್ ಡೌನ್‌ಲೋಡ್ ಮಾಡಿ ಕೊಂಡು ಶುಲ್ಕ ಪಾವತಿಸದೇ ಇದ್ದರೆ ಅಂತಹವರು ಅದೇ ಬ್ಯಾಂಕಿನಲ್ಲಿ ಹಣ ಕಟ್ಟಬಹುದು. ಇತರ ಬ್ಯಾಂಕ್ ಗಳ ಚಲನ್ ಡೌನ್‌ಲೋಡ್ ಮಾಡಿಯೂ ಪಾವತಿಸಬಹುದು. ಗೊಂದಲ ಬೇಡ ಅಂತಹವರಿಗೆಲ್ಲರಿಗೂ ಪ್ರವೇಶ ಪತ್ರ ಡೌನ್‌ಲೋಡ್ ಆಗುತ್ತದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಒಂದನೇ ಪುಟದಿಂದ

ದಿನೇಶ್‌ಕುಮಾರ್ ಅಮಾನತು

ಪಡೆಯದೇ ಅಕ್ಕಪಕ್ಕದ ಜಮೀನುಗಳಲ್ಲಿ ಕಾಮಗಾರಿ ಕೈಗೊಂಡಿರುವುದಾಗಿ ಮುಡಾ ತಾಂತ್ರಿಕ ಶಾಖೆಯಿಂದ ನೀಡಿದ ವರದಿ ಆಧಾರದ ಮೇರೆಗೆ ಬದಲಿ ನಿವೇಶನ ಮಂಜೂರಾತಿಗೆ ನಿಯಮ ಬಾಹಿರವಾಗಿ ಶಿಫಾರಸು ಮಾಡಿ ಕ್ರಮ ವಹಿಸಲಾಗಿದೆ. ಅಭಿವೃದ್ಧಿಪಡಿಸಿದ ಹಳೇ ಬಡಾವಣೆಗಳಲ್ಲಿ ಭೂಸ್ವಾಧೀನಪಡಿಸಿಕೊಂಡು ಯೋಜನೆಯನ್ನು ಅನುಷ್ಠಾನಗೊಳಿಸಿ, ನಿವೇಶನಗಳ ಹಂಚಿಕೆ ಪೂರ್ಣಗೊಳಿಸಿದ ಎಷ್ಟೋ ವರ್ಷಗಳ ನಂತರ ಭೂ ಪರಿಹಾರ ಮೊತ್ತವನ್ನು ನೀಡುವ ಬಗ್ಗೆ ನಿಯಮಬಾಹಿರವಾಗಿ ಶಿಫಾರಸು ಮಾಡಿ ಕ್ರಮ ಕೈಗೊಳ್ಳಲಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

ನಿಯಮಬಾಹಿರ ಕ್ರಮಗಳಿಂದ ಗೊಂದಲ: ಪ್ರಾಧಿಕಾರದಲ್ಲೇ ನಿವೇಶನ ಹಂಚಿಕೆ ಕುರಿತು ಪೂರ್ಣ ಮಾಹಿತಿ ಲಭ್ಯವಾಗಿದ್ದರೂ ಅದನ್ನು ಪರಿಶೀಲಿಸದೇ ಅದನ್ನು ನಿಯಮಬಾಹಿರವಾದ ಕ್ರಮಗಳನ್ನು ಕೈಗೊಳ್ಳಲಾಗಿದೆ ಹಾಗೂ ಈ ಮೂಲಕ ಕಾನೂನಾತ್ಮಕ ಗೊಂದಲಗಳಿಗೆ ಅವಕಾಶ ಕಲ್ಪಿಸಲಾಗಿದೆ ಎಂದಿರುವ ವರದಿಯು ಪ್ರಾಧಿಕಾರ ಇಲ್ಲಿಯವರೆಗೆ ಕೈಗೊಂಡಿರುವ ಮತ್ತು ಅಭಿವೃದ್ಧಿಪಡಿಸಿರುವ ಯೋಜನಾವಾರು ಭೂಸ್ವಾದೀನಗೊಂಡಿರುವ ಜಮೀನುಗಳು, ರಚಿಸಲಾದ ನಿವೇಶನಗಳು, ಮೂಲೆ ನಿವೇಶನಗಳು, ಬಿಡಿ ನಿವೇಶನಗಳು, ತುಂಡು ಜಾಗ ಮತ್ತು ಬಾಕಿ ಉಳಿದ ನಿವೇಶನಗಳ ವಿವರಗಳನ್ನು ನಕ್ಷೆಯೊಂದಿಗೆ ಕಾಲ ಕಾಲಕ್ಕೆ ಸಿದ್ಧಪಡಿಸಿ, ನಿರ್ವಹಿಸಿರುವುದು ಕಂಡುಬಂದಿಲ್ಲ.

ಸಮರ್ಪಕ ನಿರ್ವಹಣೆ ಮಾಡದೇ ಇರುವುದು: ಪ್ರಾಧಿಕಾರದ ವಸತಿ ಯೋಜನೆಗಳಲ್ಲಿ ನಿವೇಶನಗಳನ್ನು ರಚಿಸಿದ ನಂತರ ಒಟ್ಟಾರೆ ನಿವೇಶನಗಳನ್ನು ಕಡತದಲ್ಲಿ ನಮೂದಿಸದೇ ಮಂಜೂರಾತಿಗಾಗಿ ಅಧಿಸೂಚಿಸಿದ ಮಧ್ಯಂತರ ನಿವೇಶನಗಳ ಹಂಚಿಕೆ ನಂತರ ಅಂತಹ ಮಂಜೂರಾದ ನಿವೇಶನಗಳ ವಿವರಗಳನ್ನು ನಮೂದಿಸಿದ್ದು, ಮೂಲೆ ನಿವೇಶನಗಳ ವಿವರಗಳನ್ನು ನಮೂದಿಸಿಲ್ಲ. ಹರಾಜಿಗಾಗಿ ಬಾಕಿ ಇರುವ ಮೂಲೆ, ಬಿಡಿ, ಮಧ್ಯಂತರ ನಿವೇಶನಗಳ ಮಾಹಿತಿಯನ್ನು ಪ್ರತ್ಯೇಕವಾಗಿ ನಮೂದಿಸಿಲ್ಲ. ಹರಾಜಿಗಾಗಿ ಅಥವಾ ಹಂಚಿಕೆಗಾಗಿ ಬಾಕಿ ಇರುವ ನಿವೇಶನಗಳ ವಿವರಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿರುವುದಿಲ್ಲ ಎಂದು ವರದಿಯಲ್ಲಿ ತಿಳಿಸಲಾಗಿದೆ. ಮೇಲ್ಕಂಡ ತಾಂತ್ರಿಕ ಸಮಿತಿಯ ವರದಿಯನ್ನು ಪರಿಶೀಲಿಸಿದಾಗ, ದಿನೇಶ್‌ಕುಮಾರ್ ಅವರು ಗಂಭೀರ ಸ್ವರೂಪದ ಕರ್ತವ್ಯ ಲೋಪ ಎಸಗಿರುವುದು ಮನವರಿಕೆಯಾಗಿದೆ. ಈ ಅಧಿಕಾರಿ ಸರ್ಕಾರಿ ಸೇವೆಯಲ್ಲಿ ಮುಂದುವರೆದರೆ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇರುವುದರಿಂದ ಇಲಾಖಾ ವಿಚಾರಣೆ ಬಾಕಿ ಇರಿಸಿ ಅಮಾನತುಗೊಳಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಮುಡಾ ನಿವೇಶನ ಪ್ರಕರಣ ಬಯಲಾಗುತ್ತಿದ್ದಂತೆಯೇ ಜುಲೈ 1ರಂದು ಬೆಂಗಳೂರಿಂದ ದೌಡಾಯಿಸಿ, ಮುಡಾದಲ್ಲಿ ಸಭೆ ನಡೆಸಿ, ದಿನೇಶ್‌ಕುಮಾರ್ ಸೇರಿ ಕೆಲವು ಅಧಿಕಾರಿಗಳನ್ನು ಮುಡಾದಿಂದ ವರ್ಗಾವಣೆ ಮಾಡಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದರು. ಈ ಮಧ್ಯೆ ದಿನೇಶ್‌ಕುಮಾರ್ ಅವರನ್ನು ಆಗಸ್ಟ್ 29ರಂದು ಹಾವೇರಿ ವಿಶ್ವವಿದ್ಯಾನಿಲಯದ ಕುಲಸಚಿವರನ್ನಾಗಿ ಸರ್ಕಾರ ನೇಮಿಸಿತ್ತು. ಈ ಬಗ್ಗೆ ವಿಪಕ್ಷಗಳು ತೀವ್ರ ಟೀಕಾ ಪ್ರಹಾರ ನಡೆಸಿದ್ದವು. ಅದರ ಬೆನ್ನಲ್ಲೇ ಆಗಸ್ಟ್ 31ರಂದು ಅವರನ್ನು ಅಮಾನತುಪಡಿಸಲಾಗಿದೆ.

ಸೆ.9ಕ್ಕೆ ಮುಂದೂಡಿಕೆ

ಮುಂದುವರಿದು ವಾದ ಮಂಡಿಸಿದ ಅವರು, ಇಲ್ಲಿ, ಮುಖ್ಯಮಂತ್ರಿ ಅವರು ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು, ಪ್ರಭಾವ ಬಳಸಿ ತಮ್ಮ ಕುಟುಂಬಕ್ಕೆ ನಿವೇಶನಗಳನ್ನು ನೀಡಿದ್ದಾರೆ ಎಂಬುದಕ್ಕಷ್ಟೇ ಸೀಮಿತ. ಸಿದ್ದರಾಮಯ್ಯ ಕರ್ನಾಟಕ ಸರ್ಕಾರದಲ್ಲಿ ಕಳೆದ ಎರಡು ದಶಕಗಳಿಂದ ಒಂದಲ್ಲಾ ಒಂದು

ಅಧಿಕಾರದಲ್ಲಿ ಭಾಗಿಯಾಗಿದ್ದಾರೆ. ಅವರು ಎರಡು ಬಾರಿ ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ನಿವೇಶನಗಳ ಹಂಚಿಕೆ ಆಗದಿರಬಹುದು. ಆದರೆ, ಅವರು ಬೇರೆ ಬೇರೆ ಅಧಿಕಾರ ಹುದ್ದೆಯಲ್ಲಿ ಇದ್ದಾಗ ಈ ಪ್ರಕ್ರಿಯೆ ನಡೆದಿದೆ ಎಂದು ವಕೀಲರು ಕೆಲವು ದಾಖಲೆಗಳನ್ನು ನ್ಯಾಯಪೀಠದ ಗಮನಕ್ಕೆ ತಂದರು.

2015ರಲ್ಲಿ 50:50ರ ಅನುಪಾತದಲ್ಲಿ ನಿವೇಶನ ಹಂಚಿಕೆ ಸೂತ್ರ ರೂಪಿಸಲಾಯಿತು. ಇದಕ್ಕೂ ಮೊದಲು ಅಂದರೆ 2014ರಲ್ಲಿ ಮುಖ್ಯಮಂತ್ರಿ ಅವರ ಪತ್ನಿ 1998ರಲ್ಲಿ ನಡೆದ ಭೂಸ್ವಾಧೀನಕ್ಕೆ ಪರ್ಯಾಯ ನಿವೇಶನ ನೀಡುವಂತೆ ಮನವಿ ಮಾಡಿದರು. 2017ರಲ್ಲಿ 50:50ರ ಅನುಪಾತದಲ್ಲಿ ನಿವೇಶನ ಹಂಚಿಕೆಯ ತೀರ್ಮಾನ ಕೈಗೊಳ್ಳಲಾಯಿತು, ಅಂದು ತೆಗೆದುಕೊಂಡ ತೀರ್ಮಾನಕ್ಕೂ ಮುಖ್ಯಮಂತ್ರಿ ಅವರಿಗೂ ಸಂಬಂಧವಿದೆ.

ಒಂದೂ ನಿವೇಶನದ ಅರ್ಹತೆ ಇಲ್ಲದವರಿಗೆ 14 ನಿವೇಶನ ನೀಡಿದ್ದಾರೆ. ಇಂತಹ ಕೃತ್ಯಕ್ಕೆ ತನಿಖೆ ಅವಶ್ಯಕತೆ ಇಲ್ಲ ಎಂದು ಹೇಳಲು ಸಾಧ್ಯವೇ? ಎಂದು ವಾದ ಮುಂದಿಟ್ಟರು. ಅಷ್ಟೇ ಅಲ್ಲ, ನಿಯಮ 17ಎ ಪ್ರಕಾರ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸದೆಯೂ ರಾಜ್ಯಪಾಲರು ದಾಖಲೆಗಳನ್ನು ಆಧರಿಸಿ ಪ್ರಾಸಿಕ್ಯೂಷನ್‌ಗೆ ನೀಡಬಹುದು.

ಇಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ, ನಿಮ್ಮ ತೀರ್ಪೂ ಸೇರಿದಂತೆ ಅನೇಕ ತೀರ್ಪುಗಳಿವೆ ಎಂದಾಗ, ಮಧ್ಯಪ್ರವೇಶಿಸಿದ ನ್ಯಾಯಮೂರ್ತಿಗಳು, ಯಾವುದೇ ಮನವಿ ಸಲ್ಲಿಸದೆಯೂ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬಹುದು. ಈಗಾಗಲೇ ಹಿಂದಿನ ತೀರ್ಪಿನಲ್ಲಿ ನಿಲುವು ತೆಗೆದುಕೊಳ್ಳಲಾಗಿದೆ. ಪೊಲೀಸ್ ಅಧಿಕಾರಿಯೇ ಮನವಿ ಸಲ್ಲಿಸುವ ಅಗತ್ಯವಿಲ್ಲ ಎಂದರು. ನಂತರ ವಕೀಲರು ವಾದ ಮುಂದು ವರಿಸಿ, ಮುಖ್ಯಮಂತ್ರಿ ಅವರು ತಮ್ಮ ಕುಟುಂಬಕ್ಕೆ ನಿವೇಶನ ಪಡೆಯುವಲ್ಲಿ ಒಮ್ಮೆ ಮಾತ್ರ ತಪ್ಪು ಮಾಡಿಲ್ಲ. ಪದೇ ಪದೆ ಇಂತಹ ಕೃತ್ಯ ಪುನರಾವರ್ತನೆ ಯಾದರೆ, ಇದು ದುರುದ್ದೇಶದಿಂದ ಕೂಡಿದೆ ಎಂದರ್ಥ. 1998ರಲ್ಲಿ 3.16 ಎಕರೆಗೆ 3.24 ಲಕ್ಷ ರೂ. ಪರಿಹಾರ ನಿಗದಿಪಡಿಸಲಾಗಿತ್ತು, ಆದರೆ ಮುಖ್ಯಮಂತ್ರಿ ಅವರ ಪತ್ನಿಗೆ ಆ ಪರಿಹಾರ ನೀಡದೆ 14 ನಿವೇಶನ ನೀಡಲಾಗಿದೆ. ಅದರ ಮೌಲ್ಯ ಎಷ್ಟಿದೆ, ಸುಣ್ಣಕ್ಕೆ ಬೆಣ್ಣೆ ಬೆಲೆ ನೀಡುತ್ತಿದ್ದೀರಾ ಎಂದರು.

ಮೈಸೂರು ದಕ್ಷಿಣ ಭಾರತ ಪ್ರವಾಸೋದ್ಯಮದ ಕೇಂದ್ರಬಿಂದುವಾಗಲು ಉದ್ಯಮಿಗಳು ಶ್ರಮಿಸಬೇಕು

ಸಂಸದ ಯದುವೀರ್ ಅಭಿಮತ


ಮೈಸೂರಿನಲ್ಲಿ ನಡೆದ 'ಟ್ರಿಪ್‌ಡೋರ್' ಟ್ರಾವಲ್ಸ್ ಸಂಸ್ಥೆಯ ಉದ್ಘಾಟನಾ ಸಮಾರಂಭದಲ್ಲಿ ಸಂಸದ ಯದುವೀರ್, ಸಂಸ್ಥೆಯ ಲೋಗೋ ಬಿಡುಗಡೆ ಮಾಡಿದರು.

ಮೈಸೂರು, ಸೆ.2– ಮೈಸೂರು ದಕ್ಷಿಣ ಭಾರತದ ಪ್ರವಾಸೋದ್ಯಮದ ಕೇಂದ್ರಬಿಂದುವಾಗಬೇಕು ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಶಯ ವ್ಯಕ್ತಪಡಿಸಿದರು.

ಇತ್ತೀಚೆಗೆ ನಗರದ ಖಾಸಗಿ ಸಭಾಂಗಣದಲ್ಲಿ ನಡೆದ 'ಟ್ರಿಪ್‌ಡೋರ್' ಟ್ರಾವಲ್ಸ್ ಸಂಸ್ಥೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಂಸ್ಥೆಯ ಲೋಗೋ ಬಿಡುಗಡೆ ಮಾಡಿ ಮಾತನಾಡಿದ ಅವರು, ಮೈಸೂರು ದೇಶದ ಪ್ರಮುಖ ಪ್ರವಾಸಿ ಕೇಂದ್ರವಾಗಬೇಕು. ದಕ್ಷಿಣ ಭಾರತದ ಪ್ರವಾಸೋದ್ಯಮದ ಕೇಂದ್ರಬಿಂದುವಾಗಿ ದೇಶ–ವಿದೇಶದ ಅಪಾರ ಪ್ರವಾಸಿಗರನ್ನು ಆಕರ್ಷಿಸುವಂತಾಗಬೇಕು. ಈ ನಿಟ್ಟಿನಲ್ಲಿ ಟ್ರಾವೆಲ್ಸ್ ಸಂಸ್ಥೆಗಳು ಸೇರಿದಂತೆ ಪ್ರವಾಸೋದ್ಯಮಕ್ಕೆ ಪೂರಕವಾದ ಉದ್ಯಮಗಳ ಅಭಿವೃದ್ಧಿಯಾಗಬೇಕು. ಇದರಿಂದ ಮೈಸೂರಿನ ಆರ್ಥಿಕತೆ ಜೊತೆಗೆ ಪ್ರವಾಸೋದ್ಯಮದ ಅಭಿವೃದ್ಧಿ ಸಾಧ್ಯವಿದೆ ಎಂದರು.

ಮೈಸೂರು ಸಂಘ ಸಂಸ್ಥೆಗಳ ಒಕ್ಕೂಟ ಹಾಗೂ ಮೈಸೂರು ಟ್ರಾವೆಲ್ಸ್ ಅಸೋಸಿಯೇಶನ್ ಅಧ್ಯಕ್ಷ ಬಿ.ಎಸ್.ಪ್ರಶಾಂತ್ ಮಾತನಾಡಿ, ಮೈಸೂರು ಪ್ರವಾಸಿ ತಾಣಗಳ ಕೇಂದ್ರವಾದರೂ ಇಲ್ಲಿನ ಪ್ರವಾಸೋದ್ಯಮ ಕ್ಷೇತ್ರ ಬಹಳಷ್ಟು ಅಭಿವೃದ್ಧಿಯಾಗಬೇಕಿದೆ. ಒಂದೆರಡು ವಿಶೇಷ ಸಂದರ್ಭಗಳಲ್ಲಿ ಮಾತ್ರವಲ್ಲದೆ ವರ್ಷವಿಡೀ ಮೈಸೂರಿನಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳು ನಡೆಯಬೇಕಿದೆ. ಎಲ್ಲಾ ಸಮಯದಲ್ಲೂ ಪ್ರವಾಸಿಗರು ಮೈಸೂರಿಗೆ ಆಗಮಿಸುವ ವಾತಾವರಣ ಸೃಷ್ಟಿಯಾಗಬೇಕಿದೆ. ಸಾಮಾಜಿಕ ಜಾಲತಾಣಗಳಲ್ಲಿ ಮೈಸೂರಿನ ಪ್ರಸಿದ್ಧಿಯನ್ನು ಹಂಚಿಕೊಳ್ಳುವ ಮೂಲಕ ಯುವ ಸಮುದಾಯ ಪ್ರವಾಸೋದ್ಯಮ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಸ್ಕಾಲ್ ಇಂಟರ್‌ನ್ಯಾಷನಲ್ ಸಂಘಟನೆಯ ಮೈಸೂರು ವಿಭಾಗದ ಅಧ್ಯಕ್ಷ ಸಿ.ಎ.ಜಯಕುಮಾರ್ ಮಾತನಾಡಿ, ಮೈಸೂರಿನಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಯುವ ಪ್ರತಿಭೆಗಳ ಹೊಸ ಪ್ರಯತ್ನಗಳು ಬಹಳ ಮುಖ್ಯ. ಈ ನಿಟ್ಟಿನಲ್ಲಿ ಪ್ರವಾಸೋದ್ಯಮದ ಮೇಲಿನ ಆಸಕ್ತಿಯೊಂದಿಗೆ ಸಮರ್ಥ್ ವೈದ್ಯ ಹಾಗೂ ಅಂಜಲಿ ಸಮರ್ಥ್ ಟ್ರಿಪ್‌ಡೋರ್ ಸಂಸ್ಥೆ ಆರಂಭಿಸಿದ್ದಾರೆ ಎಂದು ಪ್ರಶಂಸಿಸಿದರು.

ಮೈಸೂರು ಯೋಗ ಫೆಡರೇಶನ್ ಅಧ್ಯಕ್ಷ ಶ್ರೀಹರಿ ಮಾತನಾಡಿ, ಈಗಾಗಲೇ ಚಾಲ್ತಿಯಲ್ಲಿರುವ ಸಂಸ್ಥೆ ಈಗ ರೀಬ್ರ್ಯಾಂಡ್ ಆಗಿದೆ. ಇಂತಹ ಪ್ರಯತ್ನಗಳಿಂದ ಮೈಸೂರಿನ ಪ್ರವಾಸೋದ್ಯಮಕ್ಕೆ ಉತ್ತೇಜನ ಸಿಗಲಿದೆ ಎಂದರು.

ಇದೇ ವೇಳೆ ಹಿರಿಯ ಪ್ರವಾಸಿ ಮಾರ್ಗದರ್ಶಕ ಎಸ್.ಆರ್.ಪ್ರಸಾದ್ ಹಾಗೂ ಪರ್ವತಾರೋಹಿ ಡಾ.ಉಷಾ ಹೆಗ್ಡೆ ಅವರನ್ನು ಸನ್ಮಾನಿಸಲಾಯಿತು. ಮಹಾಜನ ಪಿಜಿ ಸೆಂಟರ್‌ನ ನಿರ್ದೇಶಕ ಡಾ.ಸಿ.ಕೆ.ರೇಣುಕಾರ್ಯ, ಟ್ರಿಪ್‌ಡೋರ್ ಸಂಸ್ಥೆ ಸಂಸ್ಥಾಪಕಿ ಅಂಜಲಿ ಸಮರ್ಥ್, ಸಹ ಸಂಸ್ಥಾಪಕ ಸಮರ್ಥ್ ವೈದ್ಯ, ನಟಿ ಶ್ವೇತಾ ಆರ್.ಪ್ರಸಾದ್, ವಿಪ್ರ ಪ್ರೊಫೆಶನಲ್ ಫೋರಂನ ಅಧ್ಯಕ್ಷ ಶ್ರೀನಿವಾಸ್ ಭಾಷ್ಯಂ, ಟ್ರಿಪ್‌ಡೋರ್‌ನ ಸೇಲ್ಸ್ ಡೈರೆಕ್ಟರ್ ಮೊಹಮದ್ ಸರ್ಫರಾಜ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಅಮಾವಾಸ್ಯೆ ಹಿನ್ನೆಲೆ: ಗಜಪಡೆಗೆ ತಾಲೀಮಿನಿಂದ ವಿನಾಯ್ತಿ


ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ದಸರಾ ಗಜಪಡೆಯ ಸದಸ್ಯರಾದ ಕಂಜನ್, ರೋಹಿತ್ ವಿಹಾರ. ಏಕಲವ್ಯನಿಗೆ ಮಹಾಮಜ್ಜನ.

ಮೈಸೂರು,ಸೆ.2(ಎಂಟಿವೈ)– ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ದಸರಾ ಗಜಪಡೆಗೆ ಅಮಾವಾಸ್ಯೆ ಹಿನ್ನೆಲೆಯಲ್ಲಿ ಸೋಮವಾರ ತಾಲೀಮಿನಿಂದ ವಿನಾಯಿತಿ ನೀಡಲಾಗಿದ್ದು, ದಿನವಿಡೀ ಅರಮನೆ ಆವರಣದಲ್ಲಿ ವಿಶ್ರಾಂತಿ ಪಡೆದವು.

ಪ್ರತಿ ವರ್ಷ ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಎರಡು ತಿಂಗಳು ಮುನ್ನವೇ ಆಗಮಿಸುವ ಗಜಪಡೆಗೆ ಅಮಾವಾಸ್ಯೆ ದಿನದಂದು ವಿರಾಮ ನೀಡುವ ಪದ್ಧತಿಯನ್ನು ಮಾವುತ, ಕಾವಾಡಿಗಳು ಅನುಸರಿಸುತ್ತಾ ಬಂದಿದ್ದು, ಅದರಂತೆ ಇಂದು ತಾಲೀಮಿಗೆ ಆನೆಗಳನ್ನು ಕರೆದೊಯ್ಯದೆ ಅರಮನೆ ಆವರಣದಲ್ಲಿರುವ ಬಿಡಾರದಲ್ಲಿಯೇ ಆರೈಕೆ ಮಾಡಲಾಯಿತು. ಪ್ರತಿದಿನ ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೂ ತಾಲೀಮು ನಡೆಸಲಾಗುತ್ತಿದೆ.

ಮೊದಲ ತಂಡದಲ್ಲಿ ಆಗಮಿಸಿ ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ಎಲ್ಲಾ 9 ಆನೆಗಳಿಗೂ ಅವುಗಳ ಮಾವುತ, ಕಾವಾಡಿಗಳು ಪೌಷ್ಟಿಕ ಆಹಾರ ಪೂರೈಸುತ್ತಿದ್ದಾರೆ. ಅಲ್ಲದೆ, ಗಜಪಡೆಯ ಎಲ್ಲಾ ಸದಸ್ಯರಿಗೆ ಮಜ್ಜನದೊಂದಿಗೆ ವಿಶೇಷ ಆರೈಕೆ ನಡೆದಿದೆ.

ಆನೆಗಳ ಆರಾಧಿಸುವ ಮಾವುತರು, ಕಾವಾಡಿಗರು, ಅಮಾವಾಸ್ಯೆಯ ದಿನ ಅವುಗಳ ತೊಳೆದು ಪೂಜೆ ಸಲ್ಲಿಸುವ ಪದ್ಧತಿ ಅನುಸರಿಸುತ್ತಾ ಬಂದಿದ್ದಾರೆ. ಅಲ್ಲದೆ, ಅಮಾವಾಸ್ಯೆ ದಿನ ಆನೆಗಳ ವರ್ತನೆ ಬದಲಾಗಬಹುದು ಎಂಬ ಮುನ್ನೆಚ್ಚರಿಕೆಯಿಂದ ಈ ನಿರ್ಧಾರಕ್ಕೆ ಬರಲಾಗಿದೆ.

ದೂರದಿಂದಲೇ ದರ್ಶನ: ಅರಮನೆ ವೀಕ್ಷಣೆಗೆ ಬಂದಿದ್ದ ಪ್ರವಾಸಿಗರು, ಇತರೆ ಕುತೂಹಲಿಗಳು ದೂರದಿಂದಲೇ ದಸರಾ ಗಜಪಡೆಯನ್ನು ವೀಕ್ಷಿಸಿ ಸಂಭ್ರಮಿಸಿದರು. ಆದರೆ, ಮಾವುತ, ಕಾವಾಡಿಗಳನ್ನು ಹೊರತುಪಡಿಸಿ ಬೇರೆ ಯಾರೂ ಆನೆಗಳ ಬಳಿ ಹೋಗದಂತೆ ಕಟ್ಟೆಚ್ಚರ ವಹಿಸಲಾಗಿತ್ತು.

ಮಂಗಳವಾರದಿಂದ ತಾಲೀಮು: ನಾಳೆಯಿಂದ ಎಂದಿನಂತೆ ಅರಮನೆಯಿಂದ ಜಂಬೂಸವಾರಿ ಮಾರ್ಗದಲ್ಲಿ ತಾಲೀಮು ನಡೆಸಲಿವೆ. ನಾಳೆ ಧನಂಜಯನಿಗೆ ತೊಟ್ಟಿಲು ಕಟ್ಟಿ ಭಾರ ಹೊರಿಸುವ ತಾಲೀಮು ನಡೆಸಲಾಗುತ್ತದೆ.

ಅಭಿಮನ್ಯು ಮಾವುತ ವಸಂತ್‌ಗೆ ಇಂದು ಸಿಎಂ ಚಿನ್ನದ ಪದಕ ವಿತರಣೆ


ವಸಂತ್

ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಮಂಗಳವಾರ(ಸೆ.3) ಸಂಜೆ 4 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಅಂಬಾರಿ ಆನೆ, ಕ್ಯಾಪ್ಟನ್ ಅಭಿಮನ್ಯು ಮಾವುತ ವಸಂತ್ ಅವರಿಗೆ ಮುಖ್ಯಮಂತ್ರಿಗಳ ಚಿನ್ನದ ಪದಕ ವಿತರಿಸಲಾಗುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಉಪಸ್ಥಿತಿಯಲ್ಲಿ ಕಾರ್ಯಕ್ರಮ ನಡೆಯಲಿದ್ದು, ಗಜಪಡೆಯ ನಾಯಕ ಅಭಿಮನ್ಯುವಿನೊಂದಿಗೆ ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ವಸಂತ್, ಅವರ ಕುಟುಂಬ ಸದಸ್ಯರನ್ನು ಅರಣ್ಯ ಇಲಾಖೆ ಬೆಂಗಳೂರಿಗೆ ಕರೆದೊಯ್ದಿದೆ.

ಅಕ್ರಮ ಪಟಾಕಿ ಘಟಕದಲ್ಲಿ ಸ್ಫೋಟ; 7 ಜನರಿಗೆ ಗಾಯ

ಅಮೃತಸರ: ಇಲ್ಲಿಗೆ ಸಮೀಪದ ಬಾಡಿಗೆ ಮನೆಯೊಂದರಲ್ಲಿ ನಡೆಸುತ್ತಿದ್ದ ಅಕ್ರಮ ಪಟಾಕಿ ಘಟಕದಲ್ಲಿ ಸ್ಫೋಟ ಸಂಭವಿಸಿದ್ದು, 7 ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ. ಅಮೃತಸರ ನಗರದಿಂದ ಸುಮಾರು 25 ಕಿಲೋ ಮೀಟರ್ ದೂರದಲ್ಲಿರುವ ಜಂಡಿಯಾಲ ಪಟ್ಟಣದ ನಾಗಲ್ ಗುರು ಗ್ರಾಮದಲ್ಲಿ ಭಾನುವಾರ ಸಂಜೆ ಈ ಘಟನೆ ನಡೆದಿದೆ.

ಮನೆಯಲ್ಲಿ ಪಟಾಕಿ ತಯಾರಿಕೆಗೆ ಬಳಸುವ ಅಪಾರ ಪ್ರಮಾಣದ ವಸ್ತುಗಳನ್ನು ಸಂಗ್ರಹಿಸಲಾಗಿತ್ತು ಇವುಗಳಿಗೆ ಬೆಂಕಿ ಹೊತ್ತಿಕೊಂಡು ಸ್ಫೋಟ ಸಂಭವಿಸಿದೆ. ಸ್ಫೋಟದಲ್ಲಿ ಏಳು ಮಂದಿ ಗಾಯಗೊಂಡಿದ್ದು, ಮನೆ ಇದ್ದ ಕಟ್ಟಡದ ಗೋಡೆಗಳಿಗೆ ಹಾನಿಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಾಳುಗಳು ಅಮೃತಸರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ತನ್ನ ಮನೆಯಲ್ಲಿ ಅಕ್ರಮ ಪಟಾಕಿ ಘಟಕ ನಡೆಸುತ್ತಿರುವ ಬಗ್ಗೆ ನನಗೆ ತಿಳಿದಿರಲಿಲ್ಲ ಮತ್ತು ಸ್ಫೋಟದ ನಂತರವೇ ಈ ಬಗ್ಗೆ ತಿಳಿದು ಬಂದಿದೆ ಎಂದು ಮನೆಯ ಮಾಲೀಕರು ಹೇಳಿದ್ದು, ಈ ಸಂಬಂಧ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸ್ನೇಹಮಯಿ ಕೃಷ್ಣ ಕೋರ್ಟ್‌ಗೆ ನೀಡಿರುವ ದಾಖಲೆಗಳೆಲ್ಲಾ ನಕಲಿ

ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ ಆರೋಪ

ಮೈಸೂರು, ಸೆ. 2(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರು ಮುಡಾದಿಂದ ನಿವೇಶನ ಪಡೆದಿರುವ ಸಂಬಂಧ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ನ್ಯಾಯಾಲಯಕ್ಕೆ ನೀಡಿರುವ ಎಲ್ಲಾ ದಾಖಲೆಗಳು ನಕಲಿ ಎಂದು ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ ಆರೋಪಿಸಿದರು.

ನಗರ ಕಾಂಗ್ರೆಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ನೇಹಮಯಿ ಕೃಷ್ಣ ಬ್ಲ್ಯಾಕ್‌ಮೇಲರ್. ಈತನ ವಿರುದ್ಧ ನಗರ ವ್ಯಾಪ್ತಿಯಲ್ಲಿ 17, ಜಿಲ್ಲೆಯಲ್ಲಿ 4 ಸೇರಿದಂತೆ 21 ಪ್ರಕರಣಗಳು ಪೊಲೀಸ್ ಠಾಣೆಯಲ್ಲಿ ದಾಖಲಾಗಿವೆ ಎಂದು ಆಪಾದಿಸಿದರು.

ಬೆಂಗಳೂರಿನ ಏರೋ ಸ್ಪೇಸ್ ಪಾರ್ಕ್‌ನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪುತ್ರ ರಾಹುಲ್ ಖರ್ಗೆ ಅವರ ಸಿದ್ಧಾರ್ಥ ಟ್ರಸ್ಟ್‌ಗೆ ಕಾನೂನುಬದ್ಧವಾಗಿ ನಿವೇಶನ ನೀಡಲಾಗಿದೆ. ಇದರಲ್ಲಿ ಯಾವುದೇ ಅಕ್ರಮ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ಆದರೆ ಈ ವಿಚಾರವಾಗಿ ಬಿಜೆಪಿ ಎಂಎಲ್‌ಸಿ ಛಲವಾದಿ ನಾರಾಯಣಸ್ವಾಮಿ ದೂರು ಕೊಟ್ಟ ಕೂಡಲೇ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಈ ಸಂಬಂಧ ಮಾಹಿತಿ ನೀಡುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ. ಹೆಚ್.ಡಿ. ಕುಮಾರಸ್ವಾಮಿ, ಮುರುಗೇಶ್ ನಿರಾಣಿ, ಶಶಿಕಲಾ ಜೊಲ್ಲೆ ವಿರುದ್ಧದ ಪ್ರಕರಣದ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದ ರಾಜ್ಯಪಾಲರು ಕಾಂಗ್ರೆಸ್ ಸರ್ಕಾರದ ಮಂತ್ರಿಗಳ ವಿಚಾರವಾಗಿ ಏಕೆ ತುರ್ತಾದ ಕ್ರಮ ಕೈಗೊಳ್ಳುತ್ತಿದ್ದಾರೆ ಎಂದು ಪ್ರಶ್ನಿಸಿದರು.

ಈ ಮೂಲಕ ರಾಜ್ಯಪಾಲರ ಕಚೇರಿ ಬಿಜೆಪಿ ಕಚೇರಿಯಾಗಿ ಮಾರ್ಪಟ್ಟಿದೆ ಎಂದು ಲಕ್ಷ್ಮಣ ಆರೋಪಿಸಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ರಾಷ್ಟ್ರೋತ್ಥಾನ ಪರಿಷತ್‌ಗೆ ಬೆಂಗಳೂರು ಸೇರಿ ರಾಜ್ಯದ ವಿವಿಧೆಡೆ ಜಮೀನು ನೀಡಿದ್ದು, ಯಾವ ಮಾನದಂಡದ ಆಧಾರದ ಮೇಲೆ ನೀಡಲಾಗಿದೆ ಎಂದು ಮರು ಪ್ರಶ್ನಿಸಿದರು. ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದ 12 ವರ್ಷದಲ್ಲಿ ಎಷ್ಟು ನಿವೇಶನ ಕೊಟ್ಟಿದ್ದಾರೆ ಎಂದು ಪ್ರಶ್ನಿಸಿದ ಲಕ್ಷ್ಮಣ, ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ 5 ಸಾವಿರ ನಿವೇಶನವನ್ನು ಅಕ್ರಮವಾಗಿ ಹಂಚಿಕೆ ಮಾಡಿದ್ದರೆ ಅದರ ಬಗ್ಗೆ ಸಂಪೂರ್ಣ ಮಾಹಿತಿ ನೀಡಲಿ ಎಂದು ಸವಾಲು ಹಾಕಿದರು.


ಮೈಸೂರು ನಗರ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಪ್ಯಾರಾಲಿಂಪಿಕ್: ಬ್ಯಾಡ್ಮಿಂಟನ್‌ನಲ್ಲಿ ಚಿನ್ನದ ಪದಕ ಗೆದ್ದ ನಿತೇಶ್‌ಕುಮಾರ್



ಪ್ಯಾರಿಸ್: ಅಗ್ರ ಶ್ರೇಯಾಂಕದ ನಿತೇಶ್ ಕುಮಾರ್ ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ನಲ್ಲಿ ಸೋಮವಾರ ನಡೆದ ಪುರುಷರ ಸಿಂಗಲ್ಸ್ ಎಸ್‌ಎಲ್ 3 ವಿಭಾಗದ ಬ್ಯಾಡ್ಮಿಂಟನ್ ಫೈನಲ್‌ನಲ್ಲಿ ಬ್ರಿಟನ್‌ನ ಡೇನಿಯಲ್ ಬೆಥಾಲ್ ಅವರನ್ನು 21–14, 18–21, 23–21 ರಿಂದ ಸೋಲಿಸುವ ಮೂಲಕ ಚಿನ್ನದ ಪದಕ ಗೆದ್ದರು.

ಅವನಿ ಲೆಖರಾ ನಂತರ, ಇದು 2024ರ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾರತಕ್ಕೆ ಎರಡನೇ ಚಿನ್ನದ ಪದಕವಾಗಿದೆ. ಎರಡು ಚಿನ್ನ, ಮೂರು ಬೆಳ್ಳಿ ಹಾಗೂ ನಾಲ್ಕು ಕಂಚಿನ ಪದಕಗಳನ್ನು ಒಳಗೊಂಡಿರುವ ಪ್ಯಾರಿಸ್ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಇದು ಒಟ್ಟಾರೆ ಭಾರತಕ್ಕೆ ಒಂಬತ್ತನೇ ಪದಕವಾಗಿದೆ.

ಮೊದಲ ಗೇಮ್ ಅನ್ನು 21–14 ರಿಂದ ಗೆದ್ದುಕೊಂಡರೂ, ನಿತೀಶ್ ಅವರು ನೆಟ್‌ನಲ್ಲಿ ಹಿಡಿತ ಸಾಧಿಸಲು ಕಷ್ಟಪಟ್ಟರು. ಇದಕ್ಕೂ ಮೊದಲು, ನಿತೀಶ್ ಹತ್ತು ಪಂದ್ಯಗಳಲ್ಲಿ ಬೆಥಾಲ್ ಅನ್ನು ಸೋಲಿಸಲಿಲ್ಲ. ಆದರೆ ಈ ಬಾರಿ ಅವರು ತಮ್ಮ ವೃತ್ತಿಜೀವನದ ಅತಿದೊಡ್ಡ ಗೆಲುವು ಸಾಧಿಸಿದರು.

ಮಹದೇಶ್ವರ ಬಡಾವಣೆಯಲ್ಲಿ ಶಾಸಕ ಹರೀಶ್‌ಗೌಡರ ಪಾದಯಾತ್ರೆ

ಸಾರ್ವಜನಿಕರ ಸಮಸ್ಯೆ ಪರಿಹರಿಸುವ ಭರವಸೆ


ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ಸೋಮವಾರ ಮಹದೇಶ್ವರ ಬಡಾವಣೆಯಲ್ಲಿ ಪಾದಯಾತ್ರೆ ನಡೆಸಿ, ಜನರ ಸಮಸ್ಯೆ ಆಲಿಸಿದರು.

ಮೈಸೂರು, ಸೆ.2– ಮೈಸೂರಿನ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ಸೋಮವಾರ ಮಹದೇಶ್ವರ ಬಡಾವಣೆಯಲ್ಲಿ ಪಾದಯಾತ್ರೆ ನಡೆಸಿ, ಸಾರ್ವಜನಿಕರ ಕುಂದು–ಕೊರತೆ ಆಲಿಸಿದರು.

ಮಹದೇಶ್ವರ ಬಡಾವಣೆ(ವಾರ್ಡ್ 3)ಯ ತ್ರಿವೇಣಿ ವೃತ್ತದ ಚಾಮುಂಡೇಶ್ವರಿ ದೇವಾಲಯದಿಂದ ಅಧಿಕಾರಿಗಳೊಂದಿಗೆ ಪಾದಯಾತ್ರೆ ಆರಂಭಿಸಿದ ಶಾಸಕರು, 1ರಿಂದ 12ನೇ ಕ್ರಾಸ್‌ನಲ್ಲಿ ಸಂಚರಿಸಿ, ಜನರ ಸಮಸ್ಯೆ ಆಲಿಸಿದರು. ಹಲವೆಡೆ ಶಾಸಕರಿಗೆ ಮಹಿಳೆಯರು ಆರತಿ ಬೆಳಗಿದರು. ಟೀ–ಕಾಫಿ ನೀಡಿ ಸತ್ಕರಿಸಿದರು.

ಪುಟ್ಟ ಮನೆಯಲ್ಲಿ 8 ಮಂದಿ ಜೀವನ ನಡೆಸುತ್ತಿದ್ದು, ನಮಗೊಂದು ಸೂರು ಕಲ್ಪಿಸಿಕೊಡಿ. ಸಮರ್ಪಕ ಸ್ವಚ್ಛತೆ ಹಾಗೂ ಚರಂಡಿ ನಿರ್ವಹಣೆಗೆ ಸೂಚಿಸಿ. ಮುರಿಯುವ ಸ್ಥಿತಿಯಲ್ಲಿರುವ ವಿದ್ಯುತ್ ಕಂಬಗಳನ್ನು ಗುರುತಿಸಿ, ಅವುಗಳನ್ನು ಬದಲಿಸಲು ಸೆಸ್ಕ್ ಅಧಿಕಾರಿಗಳಿಗೆ ತಿಳಿಸಿ. ಅಕ್ರಮ–ಸಕ್ರಮದಡಿ ಮನೆ ಖಾತೆ ಮಾಡಿಸಿಕೊಳ್ಳಲು ಅವಕಾಶ ಮಾಡಿಕೊಡಿ. ಹೀಗೆ ಹತ್ತಾರು ದೂರುಗಳನ್ನು ಸಾರ್ವಜನಿಕರು ಮುಂದಿಟ್ಟರು. ಜನರ ಸಮಸ್ಯೆಯನ್ನು ಸಮಾಧಾನದಿಂದ ಆಲಿಸಿದ ಶಾಸಕರು, ಸಮಸ್ಯೆ ಬಗೆಹರಿಸಿದ ನಂತರ ಮತ್ತೆ ನಿಮ್ಮನ್ನು ಸಂಪರ್ಕಿಸುವುದಾಗಿ ಭರವಸೆ ನೀಡಿದರು.

ಜನಸಂಪರ್ಕ ಸಭೆ: ಪಾದಯಾತ್ರೆ ಬಳಿಕ ಚಾಮುಂಡೇಶ್ವರಿ ದೇವಸ್ಥಾನದ ಆವರಣದಲ್ಲಿ ಜನಸಂಪರ್ಕ ಸಭೆ ನಡೆಸಿದ ಶಾಸಕ ಕೆ.ಹರೀಶ್‌ಗೌಡರು, ಪ್ರಮುಖವಾಗಿ ಬಹಳ ಜನ ಸೂರು ಕಲ್ಪಿಸುವಂತೆ ಕೇಳಿದ್ದು, ಈ ಬಗ್ಗೆ ನಿಯಮಾನುಸಾರವಾಗಿ ಕ್ರಮ ವಹಿಸಲಾಗುವುದು. ಇದು ಕುದಾಯ ಬಡಾವಣೆಯಾಗಿದ್ದು ಅಕ್ರಮ–ಸಕ್ರಮದಡಿ ಖಾತೆ ಮಾಡಿಸಿಕೊಳ್ಳಲು ಅವಕಾಶ ಕೇಳಿದ್ದಾರೆ. ಈ ಬಗ್ಗೆ ಸರ್ಕಾರದ ಗಮನ ಸೆಳೆಯಲಾಗುವುದು. ವಿದ್ಯುತ್ ಕಂಬ ಬದಲಾವಣೆ ಸೇರಿದಂತೆ ಹಲವು ಸಮಸ್ಯೆಗಳ ಪರಿಹಾರಕ್ಕೆ ತ್ವರಿತವಾಗಿ ಕ್ರಮ ವಹಿಸುವುದಾಗಿ ತಿಳಿಸಿದರು.

ಈಗಾಗಲೇ ಕುಂಬಾರಕೊಪ್ಪಲು, ಮಂಚೇಗೌಡನಕೊಪ್ಪಲು ಭಾಗದಲ್ಲಿ ಸೆಸ್ಕ್, ರೆವಿನ್ಯೂ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಪಾಲಿಕೆ ಅಧಿಕಾರಿಗಳು ಮತ್ತು ಪಕ್ಷದ ಮುಖಂಡರೊಂದಿಗೆ ಪಾದಯಾತ್ರೆ ನಡೆಸಿದ್ದು, ಕೆಲ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಲಾಗಿದೆ. ಮತ್ತಷ್ಟು ಸಮಸ್ಯೆಗಳ ಪರಿಹಾರಕ್ಕೆ ಕ್ರಮ ವಹಿಸಲಾಗಿದೆ ಎಂದು ತಿಳಿಸಿದ ಅವರು, ಪಾಲಿಕೆ ಸದಸ್ಯರಾಗಿದ್ದಾಗ ಶಿವಮಾದು ಅವರು ಇಲ್ಲಿ ಉತ್ತಮ ಕೆಲಸ ಮಾಡಿದ್ದಾರೆ ಎಂದು ಇದೇ ವೇಳೆ ಬಣ್ಣಿಸಿದರು.

ಈ ವೇಳೆ ಇಂದಿರಾ ಗಾಂಧಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಂಚೇಗೌಡನ ಕೊಪ್ಪಲು ರವಿ, ವಾರ್ಡ್ ಮುಖಂಡರಾದ ಶಿವಮಾದು, ಸುರೇಶ್, ಮಹೇಶ್, ರಾಮಪ್ರಸಾದ್ ಮತ್ತಿತರರು ಉಪಸ್ಥಿತರಿದ್ದರು.

ಪ್ರತಿ ತಾಲೂಕಿನಲ್ಲಿ 10 ಕೋಟಿ ಶಿಕ್ಷಣ ನಿಧಿ ಸ್ಥಾಪನೆ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯಾಧ್ಯಕ್ಷ ಶಂಕರ ಮಹದೇವ ಬಿದರಿ

ತಿ.ನರಸೀಪುರ, ಸೆ.2– ವೀರಶೈವ ಲಿಂಗಾಯತ ಸಮಾಜದಿಂದ ಪ್ರತಿ ತಾಲೂಕಿನಲ್ಲಿ 10 ಕೋಟಿ ರೂ. ಶಿಕ್ಷಣ ನಿಧಿ ಸ್ಥಾಪಿಸಲಾಗುವುದು. ಅದರಿಂದ ಬರುವ ಬಡ್ಡಿಯನ್ನು ತಾಲೂಕಿನ ಬಡ ವೀರಶೈವ ಲಿಂಗಾಯತ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಬಳಸಲಾಗುವುದು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯಾಧ್ಯಕ್ಷ ಶಂಕರ ಮಹದೇವ ಬಿದರಿ ತಿಳಿಸಿದರು.

ವೀರಶೈವ ಲಿಂಗಾಯತ ಮಹಾಸಭಾ ರಾಜ್ಯಾಧ್ಯಕ್ಷರಾದ ಬಳಿಕ ಮೊದಲಬಾರಿಗೆ ಪಟ್ಟಣಕ್ಕೆ ಆಗಮಿಸಿದ ಅವರನ್ನು ಶ್ರೀಶಿವ ಕುಮಾರಸ್ವಾಮಿ ಸೇವಾಟ್ರಸ್ಟ್ ಮುಖ್ಯಸ್ಥ ಹಾಗೂ ಶಂಕರ ಬಿದರಿ ಅಭಿಮಾನಿ ಬಳಗದ ಅಧ್ಯಕ್ಷ ನಿಂಗಪ್ಪ ಅವರು ಕಾಲೇಜು ವೃತ್ತದಲ್ಲಿ ಸನ್ಮಾನಿಸಿದ ವೇಳೆ ಮಾತನಾಡಿದ ಅವರು, ಪ್ರತಿ ತಾಲೂಕಿನಲ್ಲಿ 10 ಕೋಟಿ ರೂ. ಶಿಕ್ಷಣ ನಿಧಿ ಸ್ಥಾಪಿಸಿ, ಅದರಿಂದ ಪ್ರತಿ ವರ್ಷ ಕೋಟಿ ರೂ. ಬಡ್ಡಿ ಬರಲಿದ್ದು, ಆ ಹಣವನ್ನು ಬಡ ವೀರಶೈವ ಲಿಂಗಾಯತ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಬಳಸಲಾಗುತ್ತದೆ. 2029ರ ವೇಳೆಗೆ ಸಮಾಜದಲ್ಲಿ ಶೇ.100ರಷ್ಟು ಶಿಕ್ಷಿತರಾಗಬೇಕೆಂಬುದು ನಮ್ಮ ಮುಖ್ಯ ಗುರಿ ಎಂದರು.

ಲಿಂಗಾಯತ ಸಮಾಜದಲ್ಲಿ ಮೈಸೂರು ರಾಷ್ಟ್ರ ಮಟ್ಟದ ನಾಯಕರನ್ನು ಹೊಂದಿರುವ ಜಿಲ್ಲೆಯಾಗಿದ್ದು, ಮಲೆ ಮಹದೇಶ್ವರರು, ಕಂಬಳೀಶ್ವರರು, ಗುರು ಮಲ್ಲೇಶ್ವರರು, ಶಿವರಾತ್ರಿ ರಾಜೇಂದ್ರ ಶ್ರೀಗಳು ಇಲ್ಲೇ ಅವತರಿಸಿ ನಮ್ಮನ್ನೆಲ್ಲಾ ಉದ್ಧಾರ ಮಾಡಿ ಹೋಗಿದ್ದಾರೆ. ಹಾಗೆಯೇ ರಾಜಕೀಯ ಕ್ಷೇತ್ರದಲ್ಲಿ ಚನ್ನಬಸಪ್ಪ, ನಾಗರತ್ನಮ್ಮ, ಗುರುಪಾದಸ್ವಾಮಿ, ರಾಜಶೇಖರಮೂರ್ತಿ, ಬಸಪ್ಪ, ಪುಟ್ಟಸ್ವಾಮಿ ಮಹದೇವು ಅವರು ನಮ್ಮ ಸಮಾಜ ಸೇವೆ ಮಾಡಿ ನೆಲವನ್ನು ಪವಿತ್ರಗೊಳಿಸಿದ್ದಾರೆ. ನಮ್ಮ ವೀರಶೈವ ಸಮಾಜ ಮೈಸೂರು ಜಿಲ್ಲೆಯಲ್ಲಿ ನಂಬರ್ 1 ಸ್ಥಾನದಲ್ಲಿದ್ದರೂ ಇಂದು ಬಹಳ ದುಸ್ಥಿಗೆ ಬಂದಿರುವುದು ವಿಷಾದನೀಯ. ನಮ್ಮಲ್ಲಿರುವ ಒಡಕು, ಗುಂಪುಗಾರಿಕೆಯೇ ನಮ್ಮ ಈ ದುಸ್ಥಿತಿಗೆ ಕಾರಣ. ಪ್ರತಿ ತಾಲೂಕು, ಹೋಬಳಿ, ಗ್ರಾಮಗಳಲ್ಲಿ ಸಮಾಜದವರು ಗುಂಪುಗಳಾಗಿ ಚದುರಿ ಹೋಗಿದ್ದಾರೆ. ನಾವು ವೈಯಕ್ತಿಕ ಭಿನ್ನಾಭಿಪ್ರಾಯ ಮರೆತು ಎಲ್ಲಿವರೆಗೆ ಒಗ್ಗಟ್ಟಾಗುವುದಿಲ್ಲವೋ ಅಲ್ಲಿವರೆಗೂ ಈ ದುಸ್ಥಿತಿಯೇ ಮುಂದುವರೆಯುತ್ತದೆ. ಹಾಗಾಗಿ ಎಲ್ಲರೂ ಸಣ್ಣಪುಟ್ಟ ಭಿನ್ನಾಭಿಪ್ರಾಯ ಮರೆತು ವೀರಶೈವರು, ಲಿಂಗಾಯತರು ನಾವೆಲ್ಲರೂ ಒಂದೇ ಎಂಬ ಭಾವನೆಯನ್ನು ತಾಲೂಕಿನಲ್ಲಿ ಬಿತ್ತುವ ಕೆಲಸ ಮಾಡಲು ಮುಂದಾಗಬೇಕೆಂದು ಕರೆ ನೀಡಿದರು.

ವೀರಶೈವ ಲಿಂಗಾಯತ ಮಹಾಸಭಾದಿಂದ ಸಮಾಜವನ್ನು ಅಭಿವೃದ್ಧಿ ಪಡಿಸುವ ಮತ್ತು ಮುಂದಿನ ಪೀಳಿಗೆ ಸದೃಢಗೊಳಿಸುವ ಕೆಲಸವನ್ನು ಹಮ್ಮಿಕೊಳ್ಳಲಾಗಿದೆ. ಪ್ರತಿ ತಾಲೂಕಿನಲ್ಲಿ ಸಂಗ್ರಹವಾಗುವ ಹಣದಲ್ಲಿ ಶೇ.80ರಷ್ಟನ್ನು ತಾಲೂಕು ಸಮಿತಿಗೆ, ಶೇ.7.5ರಷ್ಟು ರಾಜ್ಯ ಸಮಿತಿಗೆ, ಮತ್ತೆ 7.5ರಷ್ಟು ಜಿಲ್ಲಾ ಸಂಘಕ್ಕೆ ಉಳಿಕೆ ಶೇ.5ರಷ್ಟು ಹಣ ಎರಡೂ ಸಮಿತಿಗೆ ಹೋಗುತ್ತದೆ ಎಂದರು. ತಾಲೂಕಿನಲ್ಲಿ ಪ್ರತಿ ಮನೆಗೆ ಕನಿಷ್ಠ ಒಬ್ಬರನ್ನು ಸಮಿತಿಗೆ ಸದಸ್ಯರನ್ನಾಗಿ ಮಾಡುವ ಮೂಲಕ ತಾಲೂಕಿನಿಂದ 10 ಸಾವಿರ ಸದಸ್ಯರನ್ನು ಮಾಡಬೇಕು ಎಂದರು.

ಈ ವೇಳೆ ವೀರಶೈವ ಮಹಾಸಭಾ ಅಧ್ಯಕ್ಷ ಎಸ್‌ಎಂಆರ್ ಪ್ರಕಾಶ್, ವಕೀಲರ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ನಿರ್ದೇಶಕರಾದ ಸುಗಂಧರಾಜ್, ಸುಧಾ, ಜ್ಞಾನೇಶ್ವರಿ, ಅಂಬಿಕಾ, ತೊಂಟೇಶ್, ಕಾರ್ ಮಲ್ಲಪ್ಪ, ನಂಜುಂಡಸ್ವಾಮಿ, ಪುರಸಭಾ ಸದಸ್ಯ ಎಸ್.ಕೆ.ಕಿರಣ್, ಬಿಜೆಪಿ ಕ್ಷೇತ್ರ ಅಧ್ಯಕ್ಷ ಶಿವಕುಮಾರ್, ಕುರುಬೂರು ಶಾಂತರಾಜು, ಮಾಯಪ್ಪ, ಕುಮಾರ್, ಕಾರ್ಯದರ್ಶಿ ಪರಶಿವಮೂರ್ತಿ, ನಿವೃತ್ತ ಕೆಇಬಿ ನೌಕರ ಸಿದ್ದಲಿಂಗಸ್ವಾಮಿ, ಡೈರಿ ಮಾಜಿ ಅಧ್ಯಕ್ಷ ಮಂಟೇಲಿಂಗಪ್ಪ, ಅಂಗಡಿ ನಾಗೇಶ್, ಶೇಖರ್, ಪುರಸಭೆ ಮಾಜಿ ಅಧ್ಯಕ್ಷ ವೀರೇಶ್, ಎಪಿಎಂಸಿ ಮಾಜಿ ಅಧ್ಯಕ್ಷ ಚೌಹಳ್ಳಿ ಮಹದೇವಪ್ಪ, ಪಿಎಸಿಎಸ್ ಅಧ್ಯಕ್ಷ ಮಲ್ಲಣ್ಣ, ವಾಸವಳ್ಳಿ ಉಮೇಶಪ್ಪ ಕಿರಗಸೂರು ಗ್ರಾಪಂ ಸದಸ್ಯ ಮಹದೇವಸ್ವಾಮಿ, ವಕೀಲ ಜ್ಞಾನೇಂದ್ರ ಮೂರ್ತಿ, ಮಾಯಪ್ಪ ಮತ್ತಿತರಿದ್ದರು.



ತಿ.ನರಸೀಪುರಕ್ಕೆ ಭೇಟಿ ನೀಡಿದ ಶಂಕರ ಮಹದೇವ ಬಿದರಿ ಅವರನ್ನು ಶ್ರೀಶಿವಕುಮಾರಸ್ವಾಮಿ ಟ್ರಸ್ಟ್‌ನಿಂದ ಸನ್ಮಾನಿಸಲಾಯಿತು.

> ‘ಶತಮಾನಗಳಿಂದಲೂ ವೀರಶೈವ ಸಮಾಜ ಯಾರನ್ನೂ ಹೊರಗಿನವರಂತೆ ನೋಡಿಲ್ಲ. ಬ್ರಾಹ್ಮಣರು, ಶೂದ್ರರು, ವೈಶ್ಯರು ಹಾಗೂ ಕ್ಷತ್ರಿಯರನ್ನಷ್ಟೇ ನಾವು ನಮ್ಮವರೆಂದು ತಿಳಿಯದೇ ಮುಸ್ಲಿಮರು, ಜೈನರನ್ನು ನಮ್ಮವರೆಂದು ತಿಳಿದು ಅವರ ಏಳಿಗೆಗಾಗಿ ಕೆಲಸ ಮಾಡುತ್ತಿದ್ದೇವೆ. ಶತಮಾನಗಳಿಂದ ಸೌಹಾರ್ದತೆ, ಪ್ರೀತಿ ಬೆಳೆಸಿದ್ದೇವೆಂಬೇ ಹೊರತು, ಯಾರೊಂದಿಗೂ ದ್ವೇಷ ಬೆಳೆಸಿಲ್ಲ.
> - ಶಂಕರ ಮಹದೇವ ಬಿದರಿ

ಮೂಗೂರಲ್ಲಿ ಸಂಭ್ರಮದ ಗಿರಿಜಾ ಕಲ್ಯಾಣ ಮಹೋತ್ಸವ



ಮೂಗೂರಿನ ಶ್ರೀದೇಶೇಶ್ವರಸ್ವಾಮಿ ದೇವಾಲಯದಲ್ಲಿ ಗಿರಿಜಾ ಕಲ್ಯಾಣ ನಡೆಯಿತು.

ಮೂಗೂರು, ಸೆ.2– ಗ್ರಾಮದ ಶ್ರೀದೇಶೇಶ್ವರಸ್ವಾಮಿ ದೇವಾಲಯದಲ್ಲಿ ಭಾನುವಾರ ರಾತ್ರಿ ಗಿರಿಜಾ ಕಲ್ಯಾಣ ಮಹೋತ್ಸವ ಭಕ್ತರ ಸಮ್ಮುಖದಲ್ಲಿ ಅದ್ಧೂರಿಯಾಗಿ ನಡೆಯಿತು.

ಗಿರಿಜಾ ಕಲ್ಯಾಣ ಅಂಗವಾಗಿ ಬೆಳಗ್ಗೆಯಿಂದಲೇ ದೇವಾಲಯದಲ್ಲಿ ಶ್ರೀದೇಶೇಶ್ವರಸ್ವಾಮಿ ಹಾಗೂ ಶ್ರೀಪಾರ್ವತಿ ಅಮ್ಮನವರಿಗೆ ಅಭಿಷೇಕ ಸೇರಿದಂತೆ ವಿಶೇಷ ಹೂವಿನ ಅಲಂಕಾರ ಮಾಡಿ, ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಗ್ರಾಮದ ಮಹಿಳೆಯರು ದಿಬ್ಬಣ ಹೊರಡುವ ಮೂಲಕ ಶ್ರೀ ಪಾರ್ವತಿ ಅಮ್ಮನವರಿಗೆ ಪೂಜೆ ಸಲ್ಲಿಸಿ ದೇಗುಲದ ಆವರಣದಲ್ಲಿ ಧಾರ್ಮಿಕ ವಿಧಿ ವಿಧಾನದಂತೆ ಮಾಂಗಲ್ಯ ಧಾರಣೆಯೊಂದಿಗೆ ಗಿರಿಜಾ ಕಲ್ಯಾಣ ಕಾರ್ಯಕ್ರಮ ಬೆಂಗಳೂರು ನಿವಾಸಿ ರಮೇಶ್ ಸೇವಾರ್ಥದಲ್ಲಿ ಆನಂದ್ ದೀಕ್ಷಿತ್ ಹಾಗೂ ಸುಬ್ರಹ್ಮಣ್ಯ ಶಾಸ್ತ್ರಿ ಅವರ ನೇತೃತ್ವದಲ್ಲಿ ವಿಜೃಂಭಣೆಯಿಂದ ನಡೆಯಿತು. ಬಳಿಕ ಉತ್ಸವ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಿ ಪ್ರಸಾದ ವಿನಿಯೋಗ ಮಾಡಲಾಯಿತು. ಈ ವೇಳೆ ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಬನ್ನೂರಲ್ಲಿ ಕರ್ನಾಟಕ ಸಂಭ್ರಮ–50 ರಥಕ್ಕೆ ಸ್ವಾಗತ



ಬನ್ನೂರಲ್ಲಿ ಕರ್ನಾಟಕ ಸಂಭ್ರಮ–50 ರಥವನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಬನ್ನೂರು, ಸೆ.2– ಕನ್ನಡಿಗರಾದ ನಾವೆಲ್ಲರೂ ಕನ್ನಡ ನಾಡು, ನುಡಿ ರಕ್ಷಣೆ ಬದ್ಧರಾಗಿರಲು ಪ್ರತಿಯೊಬ್ಬರಿಗೂ ಕನ್ನಡಾಭಿಮಾನ ಅಗತ್ಯ ಎಂದು ಪುರಸಭಾ ಮುಖ್ಯಾಧಿಕಾರಿ ಹೇಮಂತ್ ರಾಜ್ ತಿಳಿಸಿದರು.

ಪಟ್ಟಣದ ಸಂತೇಮಾಳದ ಬಸವೇಶ್ವರ ವೃತ್ತದಲ್ಲಿ ಸೋಮವಾರ ತಿ.ನರಸೀಪುರದಿಂದ ಆಗಮಿಸಿದ ಕರ್ನಾಟಕ ಸಂಭ್ರಮ–50 ರಥದಲ್ಲಿ ಆಸೀನವಾಗಿದ್ದ ಭುವನೇಶ್ವರಿ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಅದ್ಧೂರಿ ಸ್ವಾಗತ ಕೋರಿ ಮಾತನಾಡಿದ ಅವರು, ಮೈಸೂರು ರಾಜ್ಯವನ್ನು ಕರ್ನಾಟಕವೆಂದು ಮರುನಾಮಕರಣಗೊಂಡು 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಕರ್ನಾಟಕ ಸಂಭ್ರಮ–50 ರಥಯಾತ್ರೆ ರಾಜ್ಯಾದ್ಯಂತ ಸಂಚರಿಸುತ್ತಿದ್ದು, ಇಂದು ಬನ್ನೂರಿಗೆ ಆಗಮಿಸಿದೆ ಎಂದರು.

ಕಸಾಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೈ.ಎಸ್. ರಾಮಸ್ವಾಮಿ ಮಾತನಾಡಿ, ಕನ್ನಡ ನಾಡಿನ ಬಗ್ಗೆ ಪ್ರತಿಯೊಬ್ಬರೂ ಅಭಿಮಾನ ಹೊಂದಬೇಕು. ನಮ್ಮ ಕಲೆ, ಸಂಸ್ಕೃತಿ, ಆಚಾರ ವಿಚಾರಗಳ ಬಗ್ಗೆ ಮುಂದಿನ ತಲೆಮಾರಿನ ಮಕ್ಕಳಿಗೆ ತಿಳಿಸುವಂತಹ ಕಾರ್ಯಕ್ರಮವನ್ನು ಅದ್ದೂರಿಯಾಗಿ ನಡೆಸಬೇಕು ಎಂದು ಕರೆ ನೀಡಿದರು.

ಈ ವೇಳೆ ಸಿಆರ್‌ಪಿ ಬೋರೇಗೌಡ, ಹಿಂದಿ ಶಿಕ್ಷಕ ಸಂಘದ ತಾಲೂಕು ಅಧ್ಯಕ್ಷ ಸಿದ್ದೇಗೌಡ, ನಾರಾಯಣ್, ಕಾಂತರಾಜ್, ಪರಿಸರ ಅಭಿಯಂತರ ನಸೀಂ ಅಜುಂ, ವಿನುತಾ, ಸೋಮಪ್ರಭಾ, ಪುಷ್ಪಲತಾ, ಅರುಣ್, ಹರಿಪ್ರಸಾದ್, ಬಿ.ಡಿ.ಪ್ರೇಮ, ಸಮು ದಾಯ ಸಂಘಟಕ ಕುಮಾರ್, ಲತಾ, ಹರೀಶ್, ರಾಮಕೃಷ್ಣ, ಸೋಮಶೇಖರ್, ನಾಗೇಂದ್ರ, ಪುಟ್ಟಸ್ವಾಮಿ, ಅಮಿತ್ ಕದಂ, ಉಪ ತಹಸೀಲ್ದಾರ್ ರೂಪಾ, ಅಕ್ಷಯ್, ರಾಜೇಶ್, ಕಸಾಪ ಅಧ್ಯಕ್ಷ ಪುಟ್ಟಸ್ವಾಮಿ, ಕಾರ್ಯದರ್ಶಿ ಶಿವಶಂಕರ್ ಮೂರ್ತಿ, ಹೋಬಳಿ ಅಧ್ಯಕ್ಷ ಪುಟ್ಟರಾಜು, ಉಪಾಧ್ಯಕ್ಷ ಸುಬ್ರಹ್ಮಣ್ಯ, ರಾಮಚಂದ್ರ, ತಿ.ನರಸೀಪುರ ಪುರಸಭಾ ಮುಖ್ಯಾಧಿಕಾರಿ ವಸಂತಕುಮಾರಿ, ಕಸಾಪ ಗ್ರಾಮೀಣ ಮಹಿಳಾ ಅಧ್ಯಕ್ಷೆ ಮಂಜುಳಾ ಸೇರಿದಂತೆ ಹಲವರಿದ್ದರು.

ಸೇವಾ ಕಾರ್ಯಗಳೊಂದಿಗೆ ನಟ ಸುದೀಪ್ ಹುಟ್ಟುಹಬ್ಬ ಆಚರಣೆ

ರಕ್ತದಾನ, ಶಾಲಾ ಮಕ್ಕಳಿಗೆ ಬ್ಯಾಗ್, ಸಮವಸ್ತ್ರ ವಿತರಣೆ

ತಿ.ನರಸೀಪುರ, ಸೆ.2– ಅಭಿನಯ ಚಕ್ರವರ್ತಿ, ನಟ ಕಿಚ್ಚ ಸುದೀಪ್ 51ನೇ ಹುಟ್ಟುಹಬ್ಬದ ಅಂಗವಾಗಿ ತಾಲೂಕಿನ ಕೆಂಡನಕೊಪ್ಪಲು ಗ್ರಾಮದ ಕಿಚ್ಚ ಸುದೀಪ್ ಸಹಾಯ ಸೇನೆ ಸದಸ್ಯರು ಸೇವಾ ಕಾರ್ಯಗಳ ಮೂಲಕ ನೆಚ್ಚಿನ ನಾಯಕನ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿದರು.

ಕಿಚ್ಚ ಸುದೀಪ್ ಸಹಾಯ ಸೇನೆ ಯುವ ಸದಸ್ಯರು ಕಿಚ್ಚ ಸುದೀಪ್ ಭಾವಚಿತ್ರವುಳ್ಳ 'ಮೊದಲು ಮಾನವನಾಗು' ಎಂಬ ಬರಹವುಳ್ಳ ಟೀ ಶರ್ಟ್ ಧರಿಸಿ ಗ್ರಾಮದ ಶ್ರೀಮಂಟೇಸ್ವಾಮಿ ದೇವಸ್ಥಾನದಲ್ಲಿ ಸುದೀಪ್ ಹೆಸರಲ್ಲಿ ವಿಶೇಷ ಪೂಜೆ ಸಲ್ಲಿಸಿ ಆಯಸ್ಸು ವೃದ್ಧಿಗಾಗಿ ಪ್ರಾರ್ಥನೆ ಸಲ್ಲಿಸಿದರು. ನಂತರ ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ತೆರಳಿ ಒಳರೋಗಿಗಳಿಗೆ ಹಣ್ಣು–ಬ್ರೆಡ್ ವಿತರಿಸಿದರು. ಈ ವೇಳೆ ನೇತ್ರ ತಜ್ಞೆ ಭಾರತಿ ಹಾಗೂ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ನಾಗೇಶ್ ಅವರನ್ನು ಸನ್ಮಾನಿಸಲಾಯಿತು.

ಕೆಂಡನಕೊಪ್ಪಲು ಗ್ರಾಮಕ್ಕೆ ಆಗಮಿಸಿದ ಅಭಿಮಾನಿಗಳು ಶಾಲಾವರಣದಲ್ಲಿ ಹಮ್ಮಿಕೊಂಡಿದ್ದ ಶಿಬಿರದಲ್ಲಿ ರಕ್ತದಾನ ಮಾಡಿದರು. ಇದೇ ವೇಳೆ ಸುದೀಪ್ ಸಹಾಯ ಸೇನೆ ವತಿಯಿಂದ ಮಕ್ಕಳಿಗೆ ಶಾಲಾ ಬ್ಯಾಗ್, ಸಮವಸ್ತ್ರ ವಿತರಿಸಲಾಯಿತು. ಗ್ರಾಮಸ್ಥರಿಗೆ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು.

ಅನಾಥ ಶವಗಳ ಮುಕ್ತಿದಾತ ಹಾಗೂ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಎಂ. ಮಾದೇಶ್ ಮಾತನಾಡಿ, ಗ್ರಾಮದ ಯುವಕರು ತಮ್ಮ ನೆಚ್ಚಿನ ನಟನ ಹುಟ್ಟುಹಬ್ಬದಂದು ರಕ್ತದಾನದಂತಹ ಉತ್ತಮ ಕಾರ್ಯಕ್ರಮ ಆಯೋಜಿಸಿರುವುದು ಶ್ಲಾಘನೀಯ. ರಕ್ತದಾನ ಮಹಾದಾನ. ಜೀವ ರಕ್ಷಣೆಗೆ ರಕ್ತ ಅವಶ್ಯಕ. ಆದ್ದರಿಂದ ಪ್ರತಿಯೊಬ್ಬರೂ ರಕ್ತದಾನಕ್ಕೆ ಮುಂದಾಗಬೇಕು ಎಂದರು.

ಈ ವೇಳೆ ಸಿಪಿಐ ಧನಂಜಯ್, ಕಿಚ್ಚ ಸುದೀಪ್ ಸಹಾಯ ಸೇನೆಯ ಲೋಕೇಶ್, ಪ್ರಸನ್ನ ಕುಮಾರ್, ಶಶಿಕುಮಾರ್, ನಂಜುಂಡಸ್ವಾಮಿ, ಚಂದ್ರಶೇಖರ್, ವಿನೋದ್, ಪುನೀತ್, ಆನಂದ್, ಗಂಗಾಧರ್, ರವಿ, ಯಶವಂತ್, ಹರೀಶ್ ಗೋಪಾಲ್, ವಿ.ರಾಮ, ರಂಗಸ್ವಾಮಿ, ಗೋಪಾಲ, ಎನ್.ಶಶಿಕುಮಾರ್, ಕೆ.ಗವಿಸಿದ್ದ, ಮರಡೀಪುರ ನಾಗರಾಜು ಮತ್ತಿತರಿದ್ದರು.



ತಿ.ನರಸೀಪುರ ಸರ್ಕಾರಿ ಆಸ್ಪತ್ರೆ ವೈದ್ಯರಾದ ಡಾ.ಭಾರತಿ ಹಾಗೂ ನಾಗೇಶ್ ಅವರನ್ನು ಸನ್ಮಾನಿಸಲಾಯಿತು.

ರಸ್ತೆ, ಯಾತ್ರಿ ನಿವಾಸ ಕಾಮಗಾರಿಗೆ ಭೂಮಿ ಪೂಜೆ



ರಸ್ತೆ ಅಭಿವೃದ್ಧಿ, ಯಾತ್ರಿ ನಿವಾಸ ಕಾಮಗಾರಿಗೆ ಶಾಸಕ ದರ್ಶನ್ ಚಾಲನೆ ನೀಡಿದರು.

ನಂಜನಗೂಡು/ಮಲ್ಲುಂಡಿ, ಸೆ.2– ತಾಲೂಕಿನ ತರಗನಹಳ್ಳಿ ಬಳಿಯ ಕಂತೆ ಮಹದೇಶ್ವರಬೆಟ್ಟ ಪುಣ್ಯಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಪ್ರವಾಸಿ ತಾಣವಾಗಿಸಲಾಗುವುದು ಎಂದು ಶಾಸಕ ದರ್ಶನ್ ತಿಳಿಸಿದರು.

ಕಂತೆ ಮಹದೇಶ್ವರ ಬೆಟ್ಟದಲ್ಲಿ 1 ಕೋಟಿ ರೂ. ವೆಚ್ಚದ ರಸ್ತೆ ಅಭಿವೃದ್ಧಿ ಮತ್ತು ಯಾತ್ರಿ ನಿವಾಸ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಒಂದು ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಮತ್ತು ಯಾತ್ರಿ ನಿವಾಸ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಾಗಿದೆ. ಈಗಾಗಲೇ ಮೊದಲ ಹಂತದಲ್ಲಿ 33 ಲಕ್ಷ ಬಿಡುಗಡೆಯಾಗಿದ್ದು ಕಾಮಗಾರಿ ಪ್ರಾರಂಭವಾಗಲಿದೆ. ಸಿಎಂ ಸಿದ್ದರಾಮಯ್ಯನವರ ಮನವೊಲಿಸಿ ಅತೀ ಶೀಘ್ರ ಉಳಿಕೆ ಅನುದಾನ ಬಿಡುಗಡೆಗೊಳಿಸಿ ಕಾಮಗಾರಿ ಪೂರ್ಣಗೊಳಿಸಲಾಗುವುದು. ಜೊತೆಗೆ ಈ ಪುಣ್ಯಕ್ಷೇತ್ರಕ್ಕೆ ಬರುವ ಭಕ್ತರಿಗೆ ಮೂಲ ಸೌಕರ್ಯದ ಕೊರತೆ ಇರುವುದಾಗಿ ಸ್ವಾಮೀಜಿ ತಿಳಿಸಿದ್ದಾರೆ. ಈ ಪುಣ್ಯಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಪ್ರವಾಸಿ ತಾಣವನ್ನಾಗಿ ರೂಪಿಸುವ ಮೂಲಕ ಭಕ್ತರಿಗೆ ಅನುಕೂಲ ಕಲ್ಪಿಸಲಾಗುವುದು ಎಂದರು. ಈ ವೇಳೆ ಮಾಜಿ ಶಾಸಕ ಕೇಶವ ಮೂರ್ತಿ, ತರಗನಹಳ್ಳಿ ಶಿಲಾ ಮಠದ ಶ್ರೀಮಹಾಂತ ದೇಶಿಕೇಂದ್ರ ಸ್ವಾಮೀಜಿ, ಹುಲ್ಲಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠ ನಾಯಕ, ತರಗನಹಳ್ಳಿ ಗ್ರಾಪಂ ಅಧ್ಯಕ್ಷ ಶಿವನಾಗಪ್ಪ, ಮುಖಂಡರಾದ ನಂಜುಂಡಸ್ವಾಮಿ, ಎಂ.ಮಾದಪ್ಪ, ರಾಂಪುರ ಪಟೇಲ್ ಮಹದೇವಪ್ಪ, ಮಂಜು ಪಟೇಲ್, ಬಸವರಾಜ್, ಸಂಗರಾಜು, ಪ್ರಭುಸ್ವಾಮಿ, ಸೋಮೇಶ್, ಶಿವಪ್ಪ ದೇವರು, ಶಿವಕುಮಾರ್, ದೇಬೂರು ಅಶೋಕ್, ಶಿವಣ್ಣ, ಲ್ಯಾಂಡ್ ಆರ್ಮಿ ಎಇಇ ಶೋಭಾ, ಎಇ ಲೋಕೇಶ್, ಶರಣ್ ಸೇರಿದಂತೆ ಇತರರಿದ್ದರು.

ನಂಜನಗೂಡು: ಅಮಾವಾಸ್ಯೆ ಹಿನ್ನೆಲೆ ಕೆಂಡಗಣ್ಣಸ್ವಾಮಿ ಆರಾಧನೆ

ನಂಜನಗೂಡು, ಸೆ.2– ಅಮಾವಾಸ್ಯೆ ಹಿನ್ನೆಲೆ ಸೋಮವಾರ ನಗರದ ಕೆಂಡಗಣ್ಣಸ್ವಾಮಿ ಮಠದಲ್ಲಿ ಕೆಂಡಗಣ್ಣಸ್ವಾಮಿಯವರ ಆರಾಧನೆ ನಡೆಯಿತು.

ಬಿಜೆಪಿ ಮುಖಂಡ ಎಸ್.ಸಿ.ಅಶೋಕ್ ಮಾತನಾಡಿ, ಕೆಂಡಗಣ್ಣಸ್ವಾಮಿ ಮಠದ ಜೀರ್ಣೋದ್ಧಾರಕ್ಕಾಗಿ ಬಿಜೆಪಿ ಸರ್ಕಾರದ ಅವಧಿಯಲ್ಲಿ 1.75 ಕೋಟಿ ಅನುದಾನ ನೀಡಲಾಗಿದೆ. ಮಾಜಿ ಶಾಸಕ ಬಿ.ಹರ್ಷವರ್ಧನ್ ಮಠದ ಆವರಣದಲ್ಲಿ ಬಸವೇಶ್ವರರ ಪತ್ರಿಮೆ ಸ್ಥಾಪಿಸಲು ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸಿದ್ದರು. ಬಸವೇಶ್ವರರ ಪ್ರತಿಮೆ ಇರಿಸುವ ಪೀಠವನ್ನು 50 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗಿದೆ. ದೇವಾಲಯದ ಜೀರ್ಣೋದ್ಧಾರ ಕಾಮಗಾರಿ ಭರದಿಂದ ಸಾಗಿದ್ದು, ಮಠದಲ್ಲಿ ಬಸವೇಶ್ವರರ ಪುತ್ಥಳಿ ಹಾಗೂ ಕೆಂಡಗಣ್ಣಸ್ವಾಮಿಗಳ ಪುತ್ಥಳಿ ಸ್ಥಾಪಿಸಲಾಗುವುದು ಎಂದರು. ಇದೇ ವೇಳೆ ಸಾವಿರಾರು ಭಕ್ತರಿಗೆ ಅನ್ನ ಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು. ಮಠದ ಟ್ರಸ್ಟಿಗಳಾದ ಎಂ.ಸಿ. ಬಸವಣ್ಣ, ವಿನಯ್ ಕುಮಾರ್, ತಾಲೂಕು ಜೆಡಿಎಸ್ ಅಧ್ಯಕ್ಷ ಆರ್.ವಿ.ಮಹದೇವಸ್ವಾಮಿ, ಕಾಂಗ್ರೆಸ್ ಮುಖಂಡರಾದ ಟಿ.ಎನ್. ಗಿರೀಶ್, ಕೆ.ಬಿ.ಸ್ವಾಮಿ, ಎಪಿಎಂಸಿ ಸದಸ್ಯ ಗುರುಸ್ವಾಮಿ ಉಪಸ್ಥಿತರಿದ್ದರು.



ಅಮಾವಾಸ್ಯೆ ಪ್ರಯುಕ್ತ ಕೆಂಡಗಣ್ಣಸ್ವಾಮಿ ಆರಾಧನೆ ನಡೆಯಿತು.

ನಾಳೆ ವಿದ್ಯುತ್ ವ್ಯತ್ಯಯ

ಹೆಚ್.ಡಿ.ಕೋಟೆ, ಸೆ.2– ಹೆಚ್.ಡಿ. ಕೋಟೆ ಪಟ್ಟಣ, ಮೇಟಿಕುಪ್ಪೆ, ಚಿಕ್ಕೋಡನಹಳ್ಳಿ, ಭೀಮನಹಳ್ಳಿ, ಹಿರೇಹಳ್ಳಿ, ಅಣ್ಣೂರು, ಪಡುಕೋಟೆ, ಸೌವ್ವೆ, ನಾಗನಹಳ್ಳಿ, ಚಿಕ್ಕಕೆರೆಯೂರು ಗ್ರಾಪಂ ವ್ಯಾಪ್ತಿ, ಹ್ಯಾಂಡ್ ಪೋಸ್ಟ್, ಹೈರಿಗೆ, ಹೆಬ್ಬಲಗುಪ್ಪೆ, ನೂರಲಕುಪ್ಪೆ ಗ್ರಾಪಂ ವ್ಯಾಪ್ತಿ ಹಾಗೂ ಹಂಪಾಪುರ, ಕಂಚಮಳ್ಳಿ, ಹೊಮ್ಮರಗಳ್ಳಿ, ಮಾದಾಪುರ, ಕೆ.ಬೆಳೆತೂರು, ಮಲಗನಹಳ್ಳಿ, ಬಾಚೇಗೌಡನಹಳ್ಳಿ ಗ್ರಾಪಂ ವ್ಯಾಪ್ತಿಯ ಸುತ್ತ ಮುತ್ತಲ ಗ್ರಾಮಗಳಲ್ಲಿ ತುರ್ತು ಕಾಮಗಾರಿ ಹಮ್ಮಿಕೊಂಡಿರುವ ಕಾರಣ ಸೆ.4 ರಂದು ಬೆಳಗ್ಗೆ 10 ರಿಂದ ಸಂಜೆ 6ವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಸೆ.9ಕ್ಕೆ, ಹುಣಸೂರು ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ

ಅಧಿಕಾರಕ್ಕಾಗಿ ಬಿರುಸುಗೊಂಡ ರಾಜಕೀಯ ಚಟುವಟಿಕೆ



ಭವ್ಯ



ಗಣೇಶ್‌ಕುಮಾರ್‌ಸ್ವಾಮಿ



ಮಾಲೀಕ್ ಪಾಷ



ಸರವಣ



ಸಯ್ಯದ್ ಯೂನಸ್



ಸ್ವಾಮಿಗೌಡ



ಜಬಿವುಲ್ಲಾ



ಆಶಾ ಕೃಷ್ಣ

ಹುಣಸೂರು, ಸೆ.2– ಇಲ್ಲಿನ ನಗರಸಭೆ 2ನೇ ಅವಧಿಯ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಸೆ.9ರಂದು ಚುನಾವಣೆ ನಡೆಯಲಿದ್ದು, ರಾಜಕೀಯ ಚಟುವಟಿಕೆಗಳು ಬಿರುಸುಗೊಂಡಿವೆ.

ನಗರಸಭೆ ಅಧ್ಯಕ್ಷ ಸ್ಥಾನ ಹಿಂದುಳಿದ ವರ್ಗ 'ಎ', ಉಪಾಧ್ಯಕ್ಷ ಸ್ಥಾನ ಎಸ್‌ಟಿ ಮಹಿಳೆ ವರ್ಗಕ್ಕೆ ಮೀಸಲಿರುವುದರಿಂದ ಅಧಿಕಾರ ಹಿಡಿಯಲು ಮೈತ್ರಿ ಪಕ್ಷಗಳಾದ ಜೆಡಿಎಸ್–ಬಿಜೆಪಿ, ಕಾಂಗ್ರೆಸ್, ಎಸ್‌ಡಿಪಿಐ ಒಳಗೊಳಗೆ ಭಾರೀ ಕಸರತ್ತು ನಡೆಯುತ್ತಿವೆ.

ಕಳೆದ 15 ತಿಂಗಳಿಂದ ವರಿಷ್ಠರಿಲ್ಲದೇ ಆಡಳಿತಾಧಿಕಾರಿಗಳಿಂದ ನಡೆಯುತ್ತಿದ್ದ ಹುಣಸೂರು ನಗರಸಭೆಯಲ್ಲಿ ಕಾಂಗ್ರೆಸ್ 14 ಸದಸ್ಯರ ಪ್ರಾಬಲ್ಯವಿದ್ದರೂ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸದಸ್ಯರೊಬ್ಬರು ಜೆಡಿಎಸ್‌ನಲ್ಲಿ ಗುರ್ತಿಸಿಕೊಂಡಿರುವ ಕಾರಣ ಸಂಖ್ಯಾಬಲ ಕಡಿಮೆಯಾಗಿದ್ದು, ಅಧಿಕಾರ ಹಿಡಿಯಲು ಹರಸಾಹಸಪಡುವಂತಾಗಿದೆ.

ಇತ್ತ ಮೈತ್ರಿಕೂಟದಲ್ಲಿ ಜೆಡಿಎಸ್ 7, ಬಿಜೆಪಿ 3 ಸೇರಿದಂತೆ ಒಟ್ಟು 10 ಸದಸ್ಯರಿದ್ದು, ಐವರು ಪಕ್ಷೇತರರು, ಶಾಸಕರು, ಸಂಸದರೊಂದಿಗೆ ಒಟ್ಟು ಸಂಖ್ಯಾಬಲ 17 ಆಗಲಿದ್ದು, ಈ ಬಾರಿ ನಗರಸಭೆ ಅಧಿಕಾರವನ್ನು ಜೆಡಿಎಸ್–ಬಿಜೆಪಿ ಮೈತ್ರಿಕೂಟ ಹಿಡಿಯುವುದು ಬಹುತೇಕ ಖಚಿತ ಎನ್ನಲಾಗಿದೆ.

ಮೊದಲ ಅವಧಿಯಲ್ಲಿ ನಗರಸಭೆ ಆಡಳಿತ ಹಿಡಿದಿದ್ದ ಕಾಂಗ್ರೆಸ್ ಈ ಬಾರಿ ಅಗತ್ಯವಿರುವ ಸಂಖ್ಯಾಬಲ ಇಲ್ಲದಿದ್ದರೂ ಅಧಿಕಾರ ಹಿಡಿಯುವ ವಿಶ್ವಾಸದಲ್ಲಿದೆ. ಇನ್ನು ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್‌ನಿಂದ 5ನೇ ವಾರ್ಡ್‌ನ ಸ್ವಾಮಿಗೌಡ, 4ನೇ ವಾರ್ಡ್‌ನ ಭವ್ಯ , 22ನೇ ವಾರ್ಡ್‌ನ ಜಬಿಉಲ್ಲಾ (ಅಂಡಿ ಅಸ್ಲಾಂ), ಎಸ್‌ಡಿಪಿಐನಿಂದ ಸಯ್ಯದ್ ಯೂನಸ್ ಪ್ರಬಲ ಅಕಾಂಕ್ಷಿಗಳಾಗಿದ್ದು, ಬಿಜೆಪಿಯಿಂದ ಮಾಜಿ ಹುಡಾ ಅಧ್ಯಕ್ಷ, 26ನೇ ವಾರ್ಡ್‌ನ ಗಣೇಶ ಕುಮಾರಸ್ವಾಮಿ, 12ನೇ ವಾರ್ಡ್‌ನ ವಿವೇಕ, 11ನೇ ವಾರ್ಡ್‌ನ ಹರೀಶ, ಜೆಡಿಎಸ್‌ನಿಂದ 7ನೇ ವಾರ್ಡ್‌ನ ಸರವಣ, 14ನೇ ವಾರ್ಡ್‌ನ ಸಾಯಿನ್ ತಾಜ್ ಹಾಗೂ ಪಕ್ಷೇತರ ಸದಸ್ಯ 13ನೇ ವಾರ್ಡ್‌ನ ಮಾಲೀಕ್ ಪಾಷ ಆಕಾಂಕ್ಷಿಗಳಾಗಿದ್ದಾರೆ.

ಜೆಡಿಎಸ್ ಸದಸ್ಯ ಸರವಣ ಮಾತನಾಡಿ, ನಾನು ಕಾಲೇಜು ದಿನಗಳಿಂದ ಜೆಡಿಎಸ್‌ನಲ್ಲಿದ್ದು, ಇದೀಗ ಅಧ್ಯಕ್ಷ ಸ್ಥಾನದ ಪ್ರಬಲ ಆಕಾಂಕ್ಷಿಯಾಗಿದ್ದೇನೆ. ರಾಜ್ಯದಲ್ಲಿ ಜೆಡಿಎಸ್, ಬಿಜೆಪಿ ಮೈತ್ರಿಯಾಗಿರುವುದರಿಂದ ನಮಗೆ ಹೊರಗಿನವರ ಆತಂಕ ಇಲ್ಲ. ಅಲ್ಲದೇ ನಾನು ಎಲ್ಲಾ ಪಕ್ಷದವರೊಂದಿಗೆ ಪಕ್ಷಾತೀತವಾಗಿ ಗುರ್ತಿಸಿಕೊಂಡಿದ್ದೇನೆ ಅಲ್ಲದೇ ಸಮಾಜ ಸೇವೆಯಲ್ಲಿ ಗುರ್ತಿಸಿಕೊಂಡಿದ್ದೇನೆ ಎಂದರು.

ಟಿಎಪಿಸಿಎಂಎಸ್ ಇತಿಹಾಸದಲ್ಲಿ ದಲಿತರಿಗೆ ಅವಕಾಶ ಸಿಕ್ಕಿರಲಿಲ್ಲ. ಜಿ.ಡಿ. ಹರೀಶ್‌ಗೌಡರು ಶಾಸಕರಾದ ಮೇಲೆ ದಲಿತರಿಗೆ ಅವಕಾಶ ನೀಡಿ ಇತಿಹಾಸ ನಿರ್ಮಿಸಿದರು. ಅದೇ ರೀತಿ ಇದೀಗ ಗಾಣಿಗ ಸಮುದಾಯಕ್ಕೆ ನಗರಸಭೆಯಲ್ಲಿ ಪ್ರಾತಿನಿಧ್ಯ ನೀಡಿದರೆ ಮತ್ತೊಂದು ಇತಿಹಾಸ ನಿರ್ಮಿಸಿದಂತಾಗುತ್ತದೆ ಎಂದರು.

ಉಪಾಧ್ಯಕ್ಷ ಸ್ಥಾನ ಕ್ಲಿಯರ್

ನಗರಸಭೆ 31 ವಾರ್ಡ್‌ಗಳ ಪೈಕಿ 2ನೇ ವಾರ್ಡ್‌ನಿಂದ ಗೆದ್ದಿರುವ ಏಕೈಕ ಎಸ್‌ಟಿ ಮಹಿಳೆ ಆಶಾ ಅವರು ಮೊದಲ ಅವಧಿಯಲ್ಲಿ ಉಪಾಧ್ಯಕ್ಷೆ ಯಾಗಿದ್ದರು. ಇದೀಗ ಮತ್ತೆ ಮೀಸಲಾತಿ ಒದಗಿ ಬಂದಿದ್ದು, ಯಾರೂ ಸ್ಪರ್ಧಿಗಳಿಲ್ಲದ ಕಾರಣ ಎರಡನೇ ಅವಧಿಗೂ ಅವರೇ ಉಪಾಧ್ಯಕ್ಷೆಯಾಗಿ ಮುಂದುವರೆಯಲಿದ್ದಾರೆ. ಹೀಗಾಗಿ ಉಪಾಧ್ಯಕ್ಷ ಸ್ಥಾನ ಕ್ಲಿಯರ್ ಆದಂತಾಗಿದೆ.

ಯುವಕರಿಗೆ ಉದ್ಯೋಗ ಕಲ್ಪಿಸಿಕೊಡುತ್ತಿರುವ

ಶ್ರೀಆದಿಚುಂಚನಗಿರಿ ಸಂಸ್ಥೆ ಕಾರ್ಯ ಶ್ಲಾಘನೀಯ



ಬೃಹತ್ ಉದ್ಯೋಗ ಮೇಳವನ್ನು ಸಂಸ್ಥೆ ಆಡಳಿತಾಧಿಕಾರಿ ಡಾ.ಕೆ.ಪಿ.ಬಸವೇಗೌಡ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಸೆ.2– ಶಾಲೆ ಶುಲ್ಕ ಕಟ್ಟಿಸಿಕೊಂಡು ಅಲ್ಲಿಗೆ ನಮ್ಮ ಕೆಲಸ ಮುಗಿಯಿತು ಎನ್ನುವ ಸಂಸ್ಥೆಗಳಿರುವಾಗ ಉದ್ಯೋಗ ಮೇಳ ಆಯೋಜಿಸಿ ಯುವಕರಿಗೆ ಉದ್ಯೋಗ ಕಲ್ಪಿಸಿ ಕೊಡುತ್ತಿರುವ ಶ್ರೀಆದಿಚುಂಚನಗಿರಿ ಸಂಸ್ಥೆ ಕಾರ್ಯ ಶ್ಲಾಘನೀಯ ಎಂದು ಫ್ಯೂಚರ್ ವರ್ಲ್ಡ್ ಕಂಪನಿಯ ಎಂಡಿ ಸಂತೋಷ್ ತಿಳಿಸಿದರು.

ಪಟ್ಟಣದ ಶ್ರೀಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಶ್ರೀಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜು, ಫ್ಯೂಚರ್ ವರ್ಲ್ಡ್ ಹಾಗೂ ಆಪ್ಟಿಮಮ್ ಕಂಪನಿ ಸಹಯೋಗದೊಂದಿಗೆ ಸೋಮವಾರ ನಡೆದ ಬೃಹತ್ ಉದ್ಯೋಗ ಮೇಳದಲ್ಲಿ ಮಾತನಾಡಿ, ಕೆಲವು ಶಾಲೆಗಳಲ್ಲಿ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಸಿಗುವುದೇ ಕಷ್ಟ. ಆದರೆ ಪಟ್ಟಣದ ಶ್ರೀಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ನೀಡುವ ಜೊತೆಗೆ ಅವರ ಜೀವನ ರೂಪಿಸಿಕೊಳ್ಳಲು ಉದ್ಯೋಗ ಮೇಳ ಆಯೋಜಿಸಿರುವುದರಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ಜೆ.ಎನ್.ವೆಂಕಟೇಶ್ ಪರಿಶ್ರಮ ಅಪಾರ ಎಂದರು.

ಸಂಸ್ಥೆ ಆಡಳಿತಾಧಿಕಾರಿ ಡಾ.ಕೆ.ಪಿ.ಬಸವೇಗೌಡ ಅಧ್ಯಕ್ಷತೆ ವಹಿಸಿ ಮಾತನಾಡಿ, ತಾಲೂಕಿನಲ್ಲಿ ಕಳೆದ 20 ವರ್ಷಗಳ ಹಿಂದೆ ಹೆಣ್ಣು ಮಕ್ಕಳು ವಿದ್ಯಾಭ್ಯಾಸ ಮಾಡಲು ಸಾಧ್ಯವಿರಲಿಲ್ಲ. ಆದರೆ ಶ್ರೀಬಾಲಗಂಗಾಧರ ನಾಥ ಸ್ವಾಮೀಜಿ ಅವರ ಪರಿಶ್ರಮದಿಂದ 10 ಸಾವಿರಕ್ಕೂ ಹೆಚ್ಚು ಹೆಣ್ಣು ಮಕ್ಕಳು ಸಂಸ್ಥೆಯಲ್ಲಿ ಕಲಿತು ಉದ್ಯೋಗ ಗಳಿಸಿದ್ದಾರೆ. ಯಾವುದೇ ಸ್ವಾಮೀಜಿ ಮಠ ಬಿಟ್ಟು ಬರುವುದಿಲ್ಲ. ಆದರೆ ಶ್ರೀಬಾಲಗಂಗಾಧರನಾಥ ಸ್ವಾಮೀಜಿ ಅವರು ತಾಲೂಕಿನ ಪ್ರತಿ ಗ್ರಾಮಕ್ಕೆ ತೆರಳಿ ಜನರನ್ನು ಮನವೊಲಿಸಿ ಮಕ್ಕಳಿಗೆ ವಿದ್ಯಾಭ್ಯಾಸ ಕೊಡಿಸಲು ಸಾಕಷ್ಟು ಶ್ರಮಿಸಿದರು ಎಂದರು. ನಾವು ಯಾವುದೇ ಕೆಲಸವನ್ನು ನಿಷ್ಠೆಯಿಂದ ಮಾಡಬೇಕು. ಆ ಮೂಲಕ ಯಶಸ್ಸು ಪಡೆಯಲು ಮುಂದಾಗಬೇಕು ಎಂದರು. ಉದ್ಯೋಗ ಮೇಳದಲ್ಲಿ ವಿವಿಧೆಡೆಗಳಿಂದ ಆಗಮಿಸಿದ್ದ 400ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದು, 200ಕ್ಕೂ ಹೆಚ್ಚು ಮಂದಿ ವಿವಿಧ ಕಂಪನಿಗಳಿಗೆ ಆಯ್ಕೆಯಾದರು. ಇದೇ ವೇಳೆ ಮೇಳಕ್ಕೆ ಆಗಮಿಸಿದ್ದವರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ಜೆ.ಎನ್.ವೆಂಕಟೇಶ್, ಪಿಯು ಕಾಲೇಜಿನ ಪ್ರಾಂಶುಪಾಲ ಭೈರೇಗೌಡ, ಪ್ರೌಢಶಾಲೆ ಮುಖ್ಯಶಿಕ್ಷಕಿ ನಂದಿನಿ, ದೈಹಿಕ ಶಿಕ್ಷಣ ನಿರ್ದೇಶಕ ಕಲ್ಲೇಶ್ ಗೌಡ, ಮುಖ್ಯಶಿಕ್ಷಕ ಎ.ಸಿ. ಭೈರಪ್ಪ, ಕಂಪನಿಗಳ ಮುಖ್ಯಸ್ಥರಾದ ಶೃತಿ, ದಿವ್ಯಾ ಆಚಾರ್, ರೀನಾ ಹಾಗೂ ಕಾಳೇಗೌಡ, ಬಿ.ಪಿ.ಭಾಸ್ಕರ್, ಉಪನ್ಯಾಸಕರಾದ ಮಹೇಂದ್ರ, ಸಿದ್ದೇಗೌಡ, ರಾಮಚಂದ್ರ, ಸಿದ್ದರಾಜು, ಚೆನ್ನಕೇಶವ, ಪ್ರಕಾಶ್, ಮಹದೇವ್, ರವೀಶ್, ರವಿ, ಮಹೇಶ್, ಪ್ರೀತಿ, ಚಂದನ, ಮಂಜು, ಸಂಗೀತ, ಅವಿನ, ಶಾಂಭವಿ, ಚಿಕ್ಕದೇವಿ ಇನ್ನಿತರರಿದ್ದರು.

ಮೈಸೂರು ಮಿತ್ರ

ಮಂಗಳವಾರ 3 ಸೆಪ್ಟೆಂಬರ್ 2024

ತಪಸ್ವಿ, ತ್ಯಾಗಿಗಳಿಗೆ ಮಾತ್ರ ಕಲೆ ಒಲಿಯುತ್ತದೆ

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಸಿ.ಸೋಮಶೇಖರ್ ಅಭಿಮತ



ಮೈಸೂರಿನ ನಟರಾಜ ಸಭಾ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹಿರಿಯ ಕಲಾವಿದ ಎಲ್. ಶಿವಲಿಂಗಪ್ಪ ಅವರು ರಚಿಸಿರುವ ವಚನಾಧಾರಿತ ಕಲಾಕೃತಿಗಳನ್ನು ಧಾರವಾಡದ ಕರ್ನಾಟಕ ವಿವಿಯ ಶ್ರೀ ಬಸವೇಶ್ವರ ಪೀಠದ ಸಂಯೋಜಕ ಡಾ.ಸಿ.ಎಂ. ಕುಂದಗೋಳ ಅವರಿಗೆ ಸೋಮವಾರ ಹಸ್ತಾಂತರಿಸಲಾಯಿತು.

ಮೈಸೂರು, ಸೆ.2(ಎಂಟಿವೈ)– ಕಲಾಕೃತಿಗಳ ರಚನೆಗೆ ಸೃಜನಶೀಲತೆ ಮುಖ್ಯ. ತಪಸ್ವಿ ಮತ್ತು ತ್ಯಾಗಿಗಳಿಗೆ ಮಾತ್ರ ಕಲೆ ಒಲಿಯುತ್ತದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಾ.ಸಿ. ಸೋಮಶೇಖರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ನಟರಾಜ ಕಲ್ಯಾಣ ಮಂಟಪದಲ್ಲಿ ಸೋಮವಾರ ನಟರಾಜ ಪ್ರತಿಷ್ಠಾನ, ಕನ್ನಡ ಸಾಹಿತ್ಯ ಕಲಾಕೂಟ ಮತ್ತು ಮೈಸೂರು ಆರ್ಟ್ ಗ್ಯಾಲರಿ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹಿರಿಯ ಕಲಾವಿದ ಎಲ್. ಶಿವಲಿಂಗಪ್ಪ ಅವರ ವಚನಾಧಾರಿತ ಕಲಾಕೃತಿಗಳನ್ನು ಧಾರವಾಡದ ಕರ್ನಾಟಕ ವಿವಿಯ ಶ್ರೀ ಬಸವೇಶ್ವರ ಪೀಠದ ಸಂಯೋಜಕ ಡಾ.ಸಿ.ಎಂ. ಕುಂದಗೋಳ ಅವರಿಗೆ ಹಸ್ತಾಂತರಿಸಿ ಮಾತನಾಡಿದ ಅವರು, ಕಲೆ ಎಲ್ಲರಿಗೂ ಸುಲಭವಾಗಿ ಒಲಿಯುವುದಿಲ್ಲ. ಕಲೆ ಒಲಿಸಿಕೊಳ್ಳಬೇಕಾದರೆ ಅಗಾಧವಾದ ತಪಸ್ಸು ಮಾಡಬೇಕು. ಕಲಾಯೋಗಿಗಳಿಗೆ, ತ್ಯಾಗಿಗಳಿಗೆ ಮಾತ್ರ ಕಲೆ ಒಲಿಯುತ್ತದೆ. ಇದರೊಂದಿಗೆ ದೈಹಿಕ, ಮಾನಸಿಕ, ಹೃದಯ ಸಮನ್ವಯತೆ ಇದ್ದಾಗ ಮಾತ್ರ ಉತ್ತಮ ಚಿತ್ರ ರಚಿಸಬಹುದು. ಹೃದಯದ ಭಾವನೆ, ಚಿಂತನಾಶೀಲತೆ, ಧನಾತ್ಮಕ ಸಾರ್ಥಕಭಾವ ಇದ್ದಲ್ಲಿ ಮಾತ್ರ ಕಲಾಕೃತಿಗಳ ರಚನೆ ಉತ್ತಮವಾಗಿ ಮೂಡಿ ಬರುತ್ತದೆ ಎಂದು ತಿಳಿಸಿದರು.

ಕಲಾಕೃತಿಗಳ ರಚನೆ, ಸಾಹಿತ್ಯ, ಸಂಶೋಧನೆಗೆ ಸೃಜನಶೀಲತೆ ಮುಖ್ಯ. ಗ್ರಹಿಸಿ, ಆಸ್ವಾದಿಸಿ ನೋಡುವ ಕಲೆ ಅಪರೂಪದ ಸಾಧನ. ಕೇವಲ ಒಂದು ಕಲಾಕೃತಿ ಸಾವಿರ ಪದಗಳು ಹೇಳುವ ಗುಣ ಹೊಂದಿರುತ್ತವೆ. ಆಶಯ ವ್ಯಕ್ತಪಡಿಸುವಂತೆ ಚಿತ್ರ ರಚಿಸುವುದು ಸವಾಲಿನ ಕೆಲಸ. ಕಲಾವಿದ ಎಲ್. ಶಿವಲಿಂಗಪ್ಪ ಆರು ದಶಕಗಳಿಗೂ ಹೆಚ್ಚಾಗಿ ಕಲಾ ಸೇವೆಯಲ್ಲಿ ತೊಡಗಿರುವ ಕಲಾತಪಸ್ವಿಯಾಗಿದ್ದಾರೆ. ಶಿವಲಿಂಗಪ್ಪ ಅವರ ನಿಷ್ಠೆ, ಶರಣ ಸಾಹಿತ್ಯದ ಮೇಲಿನ ಒಲವು ಅಮೂರ್ತವಾದುದನ್ನು ಮೂರ್ತವಾಗಿಸಿದೆ. ಆದರೆ, ಅವರಿಗೆ ಸಿಗಬೇಕಾದ ಪ್ರಶಸ್ತಿಗಳು ಸಿಕ್ಕಿಲ್ಲ. ಅದಕ್ಕೆ ನಿರಾಶರಾಗದೆ ಇನ್ನಷ್ಟು ಕಲಾಕೃತಿಗಳ ರಚನೆಯಲ್ಲಿ ತೊಡಗಿಸಿಕೊಂಡಿರುವುದು ಶ್ಲಾಘನೀಯ ಎಂದರು.

ಕಲಾಕೃತಿಗಳನ್ನು ಸ್ವೀಕರಿಸಿದ ಧಾರವಾಡ ಕರ್ನಾಟಕ ವಿವಿ ಶ್ರೀ ಬಸವೇಶ್ವರ ಪೀಠದ ಸಂಯೋಜಕ ಡಾ.ಸಿ.ಎಂ. ಕುಂದಗೋಳ ಮಾತನಾಡಿ, ಫ.ಗು. ಹಳಕಟ್ಟಿಯವರು ಸಂಗ್ರಹಿಸಿದ ವಚನ ಸಾಹಿತ್ಯದಿಂದಾಗಿ ನಮಗೆ ಬಸವಣ್ಣನವರ ಪ್ರಭಾವ ಅರಿಯಲು ಸಾಧ್ಯವಾಯಿತು. ವಚನಗಳು ನಮಗೆ ಬೆಳಕಿನ ದೀಪಗಳಾಗಿವೆ. ಬಸವೇಶ್ವರ ಪೀಠವು ಕಳೆದ 54 ವರ್ಷಗಳಿಂದಲೂ ಕಾರ್ಯನಿರ್ವಹಿಸುತ್ತಿದೆ. 1981ರಿಂದ ಡಿಪ್ಲೊಮಾ, ಇತ್ತೀಚಿನ ವರ್ಷಗಳಲ್ಲಿ ಓಪನ್ ಎಲೆಕ್ಟಿವ್ ಕೋರ್ಸ್ ನಡೆಸುತ್ತಿದೆ.ಈವರೆಗೆ 80 ಗ್ರಂಥಗಳನ್ನು ಪ್ರಕಟಿಸಿದೆ. ವಚನಾಧಾರಿತ ಕಲಾಕೃತಿಗಳ ಮ್ಯೂಸಿಯಂ ಮಾಡಿ, ಪ್ರದರ್ಶನಕ್ಕೆ ಇಡಲಾಗುವುದು ಎಂದು ಭರವಸೆ ನೀಡಿದರು.

ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ.ಎಸ್. ಶಿವರಾಜಪ್ಪ ವಹಿಸಿದ್ದರು. ಇದೇ ವೇಳೆ ಕಲಾಕೃತಿ ಕುರಿತು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿದರು. ಈ ಸಂದರ್ಭದಲ್ಲಿ ಶರಣ ಸಾಹಿತ್ಯ ಪರಿಷತ್ ನಗರಾಧ್ಯಕ್ಷ ಮ.ಗು. ಸದಾನಂದಯ್ಯ, ಜಿಲ್ಲಾಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಪೋಸ್ಟ್ ಎಂಬ ಕೂಗು ಎಲ್ಲರನ್ನು ಎಚ್ಚರಿಸುವ ಮಾಂತ್ರಿಕ ಶಕ್ತಿ

ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕ ವಚನ ಕುಮಾರಸ್ವಾಮಿ ಅಭಿಮತ



ಮೈಸೂರು, ಸೆ.2– ಪೋಸ್ಟ್ ಎಂಬ ಕೂಗು ಎಲ್ಲರನ್ನು ಎಚ್ಚರಿಸುವ ಮಾಂತ್ರಿಕ ಶಕ್ತಿಯನ್ನು ಹೊಂದಿದೆ ಎಂದು ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕ ವಚನ ಕುಮಾರಸ್ವಾಮಿ ಹೇಳಿದರು.

ಭಾರತೀಯ ಅಂಚೆ ಇಲಾಖೆ ಬೋಗಾದಿಯ ಬಯಲುರಂಗ ಮಂದಿರದಲ್ಲಿ ಏರ್ಪಡಿಸಿದ್ದ ಅಂಚೆ ಸಂಪರ್ಕ ಅಭಿಯಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಪ್ರಪಂಚದಲ್ಲಿ ಮೊದಲ ಬಾರಿಗೆ ಬ್ಯಾಬಿಲೋನಿಯಾ ಸಾಮ್ರಾಜ್ಯದಲ್ಲಿ ಮಣ್ಣಿನ ಫಲಕಗಳ ಮೂಲಕ ಪ್ರಾರಂಭವಾದ ಅಂಚೆ ಸೇವೆಯು ನಂತರ ಈಜಿಪ್ಟ್, ಪರ್ಷಿಯಾದಲ್ಲಿ ವಿಸ್ತರಿಸಿ ಭಾರತದಲ್ಲಿ 1766 ರಲ್ಲಿ ಪ್ರಾರಂಭವಾಯಿತು.

ಅಲ್ಲಿಂದ ಇಲ್ಲಿಯವರೆಗೆ ಪ್ರಪಂಚದ ಜನರ ನಡುವೆ ಸಂಬಂಧವನ್ನು ಬೆಸೆಯುವ ಕೆಲಸವನ್ನು ಅಂಚೆ ಇಲಾಖೆ ನಿರ್ವಹಿಸುತ್ತಿರುವುದು ಹೆಮ್ಮೆಯ ವಿಷಯ. ಸೊಗಸಿನ ಸುದ್ದಿ ಮತ್ತು ವ್ಯಸನದ ವಾರ್ತೆಯನ್ನು ಕೊಡುವ ಅಂಚೆ ಇಲಾಖೆಗೆ ಎಲ್ಲಾ ಸುದ್ದಿಗಳು ಒಂದೇ ಆಗಿದ್ದು, ನಿಟ್ಟುಸಿರೆದೆಯನ್ನು ನೀಗಿಸಿ, ನಿರಾಸೆ ಎದೆಯನ್ನು ಬೆಳಗಿಸಿ, ಹೆಣ್ಣಿನ ಕಂಬನಿ ಬತ್ತಿಸಿ, ಆಶಾ ಜ್ಯೋತಿಯನ್ನು ಹೊತ್ತಿಸುವ ಸೇವಾ ಕೈಂಕರ್ಯವನ್ನು ಭಾರತೀಯ ಅಂಚೆ ಇಲಾಖೆ ನಿರ್ವಹಿಸುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಭಾರತೀಯ ಅಂಚೆ ಇಲಾಖೆಯ ಮೈಸೂರಿನ ವೆಸ್ಟ್ ಸಬ್‌ಡಿವಿಷನ್‌ನ ಎ.ಎಸ್.ಪಿ ಎಂ.ಜೆ ಶ್ರೀನಿವಾಸ್ ಪ್ರಾಸ್ತಾವಿಕವಾಗಿ ಮಾತನಾಡಿ, ಕೇಂದ್ರ ಸರ್ಕಾರವು ಅಂಚೆ ಸೇವೆಯನ್ನು ಮನೆ ಬಾಗಿಲಿಗೆ ಕೊಂಡೊಯ್ಯುವ ಕಾರ್ಯಕ್ರಮವನ್ನು ಅಂಚೆ ಇಲಾಖೆ ಮೂಲಕ ಪ್ರಾರಂಭಿಸಿದ್ದು, ಉಳಿತಾಯ ಖಾತೆ, ಆಧಾರ್ ಸೇವೆ, ಐ.ಪಿ.ಪಿ.ಬಿ ಖಾತೆ, ಜೀವವಿಮೆ ಮತ್ತು ವಿವಿಧ ಬಿಲ್‌ಗಳ ಪಾವತಿಗಳನ್ನು ಅಂಚೆ ಸಂಪರ್ಕ ಅಭಿಯಾನದಲ್ಲಿ ಸೇರಿಸಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬೋಗಾದಿ ಅಂಚೆ ಕಚೇರಿಯ ಎಸ್.ಪಿ.ಎಂ ಸುಜಾತ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಗ್ರಾ.ಪಂ ಅಧ್ಯಕ್ಷ ನಾಗರಾಜು ಮಾತನಾಡಿದರು. ನಯನ .ಎಸ್ ಸ್ವಾಮಿ ಪ್ರಾರ್ಥಿಸಿದರೆ, ಪ್ರಸನ್ನ ಕುಮಾರ್ ಸ್ವಾಗತಿಸಿದರು. ಟಿ. ರಾಣಿ ನಿರೂಪಿಸಿ, ನಟೇಶ್ ವಂದಿಸಿದರು.

ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಲ್ಲಿ ಸಹಪಠ್ಯ ಚಟುವಟಿಕೆಗಳ ಉದ್ಘಾಟನೆ



ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಸಹಪಠ್ಯ ಚಟುವಟಿಕೆಗಳ ಉದ್ಘಾಟನಾ ಕಾರ್ಯಕ್ರಮವನ್ನು ಮೈಸೂರು ನಗರ ಉಪ ಪೊಲೀಸ್ ಆಯುಕ್ತ ಎಂ.ಮುತ್ತುರಾಜ್ ನೆರವೇರಿಸಿದರು.


ಮೈಸೂರು, ಸೆ.2– ವಿದ್ಯಾರ್ಥಿಗಳಿಗೆ ಮೂರು ಬಲಗಳ ಅವಶ್ಯಕತೆಯಿದೆ. ತೋಳ್ಬಲ, ಮನೋಬಲ ಮತ್ತು ಆತ್ಮ ಬಲ ಈ ಮೂರು ಬಲಗಳು ವಿದ್ಯಾರ್ಥಿಯನ್ನು ಯಶಸ್ಸಿನೆಡೆಗೆ ಕೊಂಡೊಯ್ಯುತ್ತವೆ ಎಂದು ಮೈಸೂರು ನಗರದ ಕಾನೂನು ಸುವ್ಯವಸ್ಥೆಯ ಉಪ ಪೊಲೀಸ್ ಆಯುಕ್ತ ಎಂ.ಮುತ್ತುರಾಜ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಸಹಪಠ್ಯ ಚಟುವಟಿಕೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಅವರು ತಮ್ಮ ಕನ್ನಡದ ಮೇಲಿನ ಅಭಿಮಾನವನ್ನು ವ್ಯಕ್ತಪಡಿಸುತ್ತಾ, ನಾನು ಇಂಜಿನಿಯರಿಂಗ್ ವಿದ್ಯಾರ್ಥಿಯಾದರೂ ಕೆ.ಎ.ಎಸ್ ಪರೀಕ್ಷೆಯನ್ನು ಕನ್ನಡದ ವಿಷಯದಲ್ಲಿ ತೆಗೆದುಕೊಂಡು ಅದರಲ್ಲಿ ಯಶಸ್ಸನ್ನು ಸಾಧಿಸಿದೆ. ಯಾವುದೇ ವಿದ್ಯಾರ್ಥಿಯು ಯಾವುದೇ ವಿಷಯದಲ್ಲಿ ಪದವಿಯನ್ನು ಪಡೆದಿದ್ದರೂ ಎಲ್ಲಾ ವಿಷಯಗಳನ್ನು ತಿಳಿದುಕೊಳ್ಳುವ ಪ್ರಯತ್ನ ಮಾಡಬೇಕು. ವಿದ್ಯಾರ್ಥಿಗಳಿಗೆ ತಮ್ಮ ಬಗ್ಗೆ ಎಂದೂ ಕೀಳರಿಮೆ ಇರಬಾರದು. ನಾನು ಓದುತ್ತೇನೆಂಬ ಗರ್ವ, ಹುಚ್ಚು ಇರಬೇಕು. ಆಗ ಏನನ್ನಾದರೂ ಸಾಧಿಸಬಹುದು. ವಿದ್ಯಾರ್ಥಿಗಳು ಸಾಮಾನ್ಯವಾಗಿ ಬರೆದು ಅಭ್ಯಾಸವನ್ನು ಮಾಡಬೇಕು. ಕಾಲೇಜು ಸಮಯದಲ್ಲಿ ಡ್ರಗ್ಸ್‌ನಂತಹ ವ್ಯಸನಗಳಿಗೆ ಒಳಗಾಗಬಾರದು. ತಂದೆ–ತಾಯಿ, ಗುರು–ಹಿರಿಯರಿಂದ ಸಂಸ್ಕಾರವನ್ನು ಕಲಿತು ಬದುಕಿನ ಪ್ರತಿ ಗಳಿಗೆಯನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದರು.

ವಿದ್ಯಾವರ್ಧಕ ಸಂಘದ ಗೌರವ ಅಧ್ಯಕ್ಷ ಗುಂಡಪ್ಪಗೌಡ ಅಧ್ಯಕ್ಷತೆ ವಹಿಸಿದ್ದರು. ಗೌರವ ಕಾರ್ಯದರ್ಶಿ ಪಿ.ವಿಶ್ವನಾಥ್, ಗೌರವ ಕೋಶಾಧ್ಯಕ್ಷ ಶ್ರೀಶೈಲರಾಮಣ್ಣವರ್, ಕಾಲೇಜಿನ ಆಡಳಿತ ಮಂಡಳಿ ಸದಸ್ಯ ನಾಗರಾಜು, ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ಮರೀಗೌಡ ಉಪಸ್ಥಿತರಿದ್ದರು.

ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳ ಸಾಧನೆ



ಎಂಐಟಿ ಮ್ಯಾನೇಜ್‌ಮೆಂಟ್ ಕಾಲೇಜು ಬೆಳವಾಡಿ ಇದರ ಆಶ್ರಯದಲ್ಲಿ ಶ್ರೀರಂಗಪಟ್ಟಣದ ನಗುವಿನಹಳ್ಳಿಯಲ್ಲಿ ನಡೆದ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ವಿಜಯಶಾಲಿಯಾದರು. ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷ ಗುಂಡಪ್ಪಗೌಡ, ಕಾರ್ಯದರ್ಶಿ ಪಿ.ವಿಶ್ವನಾಥ್, ಖಜಾಂಚಿ ಶ್ರೀಶೈಲರಾಮಣ್ಣವರ್, ಕಾಲೇಜು ನಿರ್ವಹಣಾ ಮಂಡಳಿ ಅಧ್ಯಕ್ಷ ಎನ್.ನಾಗರಾಜು, ಪ್ರಾಂಶುಪಾಲ ಡಾ.ಎಸ್.ಮರೀಗೌಡ, ಅಧ್ಯಾಪಕ ಸಲಹೆಗಾರ ಡಾ. ಪಿ.ಕೆ.ಗೋವರ್ಧನ್ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕ ಡಾ.ಕೆ.ಎನ್.ಹರಿಪ್ರಸಾದ್ ಆಟಗಾರರ ಅಭಿನಂದಿಸಿದರು.

ರೈಲ್ವೆ ಕಂಬಿಗಳ ಕಳವು; ನಾಲ್ವರು ಆರೋಪಿಗಳ ಬಂಧನ

3.60 ಲಕ್ಷ ಮೌಲ್ಯದ 1707 ಕೆಜಿ ಕಬ್ಬಿಣ, ಕಾಂಕ್ರೀಟ್ ಮಿಷನ್, ಆಟೋ ಜಪ್ತಿ

ಮೈಸೂರು, ಸೆ.2(ಎಂಕೆ)– ರೈಲ್ವೆ ಹಳಿ ಕಂಬಿಗಳನ್ನು ಕಳ್ಳತನ ಮಾಡುತ್ತಿದ್ದ ನಾಲ್ವರು ಆರೋಪಿಗಳನ್ನು ಬಂಧಿಸಿರುವ ಮೇಟಗಳ್ಳಿ ಠಾಣೆ ಪೊಲೀಸರು, ಬಂಧಿತರಿಂದ 3.60 ಲಕ್ಷ ರೂ.ಮೌಲ್ಯದ 1707 ಕೆಜಿ ಕಬ್ಬಿಣದ ಕಂಬಿಗಳು, ಒಂದು ಕಾಂಕ್ರೀಟ್ ಮಿಷನ್ ಹಾಗೂ ಒಂದು ಪ್ಯಾಸೆಂಜರ್ ಆಟೋ ರಿಕ್ಷಾವನ್ನು ವಶಕ್ಕೆ ಪಡೆದಿದ್ದಾರೆ.

ಠಾಣೆ ವ್ಯಾಪ್ತಿಯ ಬಸವೇಶ್ವರನಗರದ 2ನೇ ಕ್ರಾಸ್ ರಸ್ತೆಯಲ್ಲಿ ಆ.27 ರಂದು ಚರಂಡಿ ಕೆಲಸ ಮಾಡಿಸಲು ಉಪಯೋಗಿಸುತ್ತಿದ್ದ ಕಾಂಕ್ರೀಟ್ ಮತ್ತು ಸಿಮೆಂಟ್ ಮಿಕ್ಸ್ ಮಾಡುವ ಮಿಷನ್ ಕಳವು ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಮೇಟಗಳ್ಳಿ ಪೊಲೀಸರು, ಆ.29ರ ಬೆಳಗ್ಗೆ ಆರೋಪಿಗಳನ್ನು ಬಂಧಿಸಿದ್ದಾರೆ.

ನಂಬರ್ ಪ್ಲೇಟ್ ಇಲ್ಲದ ಟಾಟಾ ಏಸ್ ಗೂಡ್ಸ್ ವಾಹನದಲ್ಲಿ ರೈಲ್ವೆಯ ಹಳಿ ಕಂಬಿಗಳನ್ನು ಜೋಡಿಸುವ ಕಬ್ಬಿಣದ ತುಂಡುಗಳನ್ನು ಹಾಗೂ ವಾಹನದ ಹಿಂಭಾಗದಲ್ಲಿ ಕಾಂಕ್ರೀಟ್ ಮತ್ತು ಸಿಮೆಂಟ್ ಮಿಕ್ಸ್ ಮಾಡುವ ಮಿಷನ್ ಅನ್ನು ಹಗ್ಗದಿಂದ ಕಟ್ಟಿಕೊಂಡು ಹೋಗುತ್ತಿದ್ದವರನ್ನು ತಡೆದು ನಿಲ್ಲಿಸಿ ವಾಹನದಲ್ಲಿದ್ದ ಇಬ್ಬರು ಆರೋಪಿಗಳನ್ನು ವಿಚಾರಿಸಿದಾಗ ಕಳ್ಳತನ ಮಾಡಿರುವುದಾಗಿ ತಿಳಿದು ಬಂದಿದೆ.

ಹೆಚ್ಚಿನ ವಿಚಾರಣೆಗೊಳಪಡಿಸಿದಾಗ ಕೆ.ಆರ್.ಎಸ್.ರಸ್ತೆಯ ರಾಯಲ್ ಇನ್ ಜಂಕ್ಷನ್ ಬಳಿ ಅಂಡರ್ ಬ್ರಿಡ್ಜ್ ಮೇಲೆ ಹಾದು ಹೋಗುವ ರೈಲ್ವೆ ಟ್ರ್ಯಾಕ್ ಬಳಿ ಇಟ್ಟಿದ್ದ ರೈಲ್ವೆಯ ಹಳಿಯ 60 ಕಂಬಗಳನ್ನು ಹಾಗೂ ಬಸವೇಶ್ವರನಗರದ 2ನೇ ಮುಖ್ಯ ರಸ್ತೆಯಲ್ಲಿ ಕಾಂಕ್ರೀಟ್ ಮಿಷನ್ ಹಾಗೂ ಬೋಗಾದಿಯಲ್ಲಿ ಪ್ಯಾಸೆಂಜರ್ ಆಟೋವನ್ನು ಕಳವು ಮಾಡಿರುವುದಾಗಿ ಒಪ್ಪಿಕೊಂಡ ಆರೋಪಿಗಳ ನೀಡಿದ ಹೇಳಿಕೆ ಹಿನ್ನಲೆಯಲ್ಲಿ ಕೃತ್ಯದಲ್ಲಿ ಭಾಗಿಯಾಗಿದ್ದ ಮತ್ತಿಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ. ಈ ಮೂಲಕ ಸರಸ್ವತಿಪುರಂ ಪೊಲೀಸ್ ಠಾಣೆ, ರೈಲ್ವೆ ರಕ್ಷಣಾ ದಳ ಠಾಣೆಯತ ತಲಾ ಒಂದೊಂದು ಪ್ರಕರಣ ಸೇರಿದಂತೆ ಒಟ್ಟು 3 ಪ್ರಕರಣಗಳು ಪತ್ತೆಯಾಗಿದೆ.

ಡಿಸಿಪಿ ಎಸ್.ಜಾಹ್ನವಿ ಮಾಗದರ್ಶನ, ಎಸಿಪಿ ಜಿ.ಎಸ್.ಗಜೇಂದ್ರ ಪ್ರಸಾದ್ ನೇತೃತ್ವದಲ್ಲಿ ಮೇಟಗಳ್ಳಿ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಆರ್.ದಿವಾಕರ್, ಪಿಎಸ್ಐ ವಿ.ಆರ್.ಶಬರೀಶ್, ಎಎಸ್ಐಗಳಾದ ಜೋಸೆಫ್ ನರ್ಹೋನ, ಎಸ್.ಮಹದೇವ, ಸಿಬ್ಬಂದಿಗಳಾದ ಕೃಷ್ಣ, ಕೆ.ಎನ್.ಹರೀಶ್, ಎಸ್.ಜಿ.ಮಾಣಿಕ, ಪರಶುರಾಮ್, ಪ್ರತಾಪ್, ವಿಠಲ್, ನಾಗರಾಜು, ಮಹೇಶ್, ನಂದೀಶ್ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಗೌರಿ–ಗಣೇಶ ಹಬ್ಬ: ಕೆಎಸ್‌ಆರ್‌ಟಿಸಿಯಿಂದ 1500 ಹೆಚ್ಚುವರಿ ಬಸ್

ಮುಂಗಡ ಬುಕ್ಕಿಂಗ್‌ಗೆ ಶೇ.10ರಷ್ಟು ರಿಯಾಯಿತಿ

ಬೆಂಗಳೂರು: ಗೌರಿ–ಗಣೇಶ ಹಬ್ಬಕ್ಕೆ ಬೆಂಗಳೂರಿನಿಂದ ತಮ್ಮ ತಮ್ಮ ಊರುಗಳಿಗೆ ತೆರಳುವ ಸಾರ್ವಜನಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ(ಕೆಎಸ್‌ಆರ್‌ಟಿಸಿ) ಸೆಪ್ಟೆಂಬರ್ 5 ರಿಂದ 10 ರ ವರೆಗೆ ಹೆಚ್ಚುವರಿ ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಿದೆ.

ಸೆಪ್ಟೆಂಬರ್ 5 ರಿಂದ ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ ಹೆಚ್ಚುವರಿಯಾಗಿ 1,500 ಬಸ್‌ಗಳನ್ನು ಓಡಿಸಲಾಗುವುದು ಎಂದು ಕೆಎಸ್ ಆರ್ ಟಿಸಿ ಸೋಮವಾರ ತಿಳಿಸಿದೆ.

ಸೆಪ್ಟೆಂಬರ್ 6ರಂದು ಶುಕ್ರವಾರ ಗೌರಿ ಹಬ್ಬ, 7ರಂದು ಶನಿವಾರ ಗಣೇಶ ಚತುರ್ಥಿ ಹಾಗೂ 8ರಂದು ಭಾನುವಾರ ಸಾರ್ವಜನಿಕ ರಜೆ ಇರುತ್ತದೆ. ಹಬ್ಬದ ಆಚರಣೆಗಾಗಿ ಬೆಂಗಳೂರು, ಮಂಗಳೂರು, ಪುಣೆ, ಮುಂಬೈ, ಗೋವಾ ಮತ್ತಿತರ ಪ್ರಮುಖ ಊರುಗಳಲ್ಲಿ ನೆಲೆಸಿರುವ ಹಲವರು ಹಬ್ಬದ ಆಚರಣೆಗಾಗಿ ಸ್ವಂತ ಊರುಗಳಿಗೆ ಆಗಮಿಸಲಿದ್ದಾರೆ. ಅವರ ಅನುಕೂಲಕ್ಕಾಗಿ ಸಪ್ಟೆಂಬರ್ 5 ರಿಂದ 10ರವರೆಗೆ ಹೆಚ್ಚುವರಿ ವಿಶೇಷ ಬಸ್ಗಳ ವ್ಯವಸ್ಥೆ ಮಾಡಲಾಗಿದೆ. ಅದಕ್ಕಾಗಿ ವೋಲ್ವೋ ಎಸಿ ಐರಾವತ, ಎಸಿ ಸ್ಲೀಪರ್, ನಾನ್ ಎಸಿ ಸ್ಲೀಪರ್, ರಾಜಹಂಸ ಹಾಗೂ ವೇಗದೂತ ಸಾರಿಗೆಗಳು ಸೇರಿದಂತೆ ವಿವಿಧ ಮಾದರಿಯ ಬಸ್‌ಗಳನ್ನು ನಿಯೋಜಿಸಲಾಗಿದೆ.

ಕೆಎಸ್‌ಆರ್‌ಟಿಸಿ ಪ್ರಕಾರ, ಬೆಂಗಳೂರು ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಹ್ಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಕಾರವಾರ, ರಾಯಚೂರು, ಕಲಬುರಗಿ,



ಕಲಬುರಗಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್ ಮತ್ತು ಇತರ ಸ್ಥಳಗಳಿಗೆ ಹೆಚ್ಚುವರಿ ಬಸ್‌ಗಳು ಸಂಚರಿಸಲಿವೆ. ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ವಿಶೇಷ ಬಸ್‌ಗಳು ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಕಡೆಗೆ ಪ್ರತ್ಯೇಕವಾಗಿ ಕಾರ್ಯನಿರ್ವಹಿಸಲಿವೆ.

ಈ ವಿಶೇಷ ಬಸ್‌ಗಳಿಗೆ https://www.ksrtc.in ಅಥವಾ KSRTC Mobile App ಹಾಗೂ ಬಸ್ ನಿಲ್ದಾಣಗಳಲ್ಲಿ ಮುಂಗಡವಾಗಿ ಕಾಯ್ದಿರಿಸುವ ಸೌಲಭ್ಯವನ್ನು ಒದಗಿಸಲಾಗಿದೆ ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆಯಲ್ಲಿ ತಿಳಿಸಿದೆ. KSRTCಯ ವಿಶೇಷ ಮತ್ತು ನಿಗದಿತ ಬಸ್‌ಗಳಿಗೆ ಟಿಕೆಟ್‌ಗಳ ಮುಂಗಡ ಕಾಯ್ದಿರಿಸುವಿಕೆಯನ್ನು ಕರ್ನಾಟಕ ಮತ್ತು ಇತರ ರಾಜ್ಯಗಳಲ್ಲಿನ ಕೌಂಟರ್‌ಗಳ ಮೂಲಕ ಬುಕ್ ಮಾಡಬಹುದು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ದ ರೂಲರ್ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಭೀಮಾ (ಕ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕರಿಯ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ಸರಿಪೋದಾ ಶನಿವಾರಂ (ತೆ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಕರಿಯಾ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಿಸ್ಟರ್ ಬಚನ್ (ತೆ)	4 ಪ್ರದರ್ಶನಗಳು
ಪ್ರಭಾ	
ಅಹೋ ವಿಕ್ರಮಾರ್ಕ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ವಾಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ಬೆ.10.20ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.12.55ಕ್ಕೆ, ಸಂ.4ಕ್ಕೆ, ಸರಿಪೋದಾ ಶನಿವಾರಂ (ತೆ): ರಾ.7.10ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಪೆಪೆ (ಕ): ಬೆ.11ಕ್ಕೆ, ಸಂ.4.30ಕ್ಕೆ, ಸ್ತ್ರೀ 2 (ಹಿಂ): ಮ.1.30ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 3	ಅಫ್ರೇಡ್ (ಇಂ): ಬೆ.11.30ಕ್ಕೆ, ರಾ.10ಕ್ಕೆ, ಕೊಟೇಷನ್ ಗ್ಯಾಂಗ್ ಪಾರ್ಟ್ 1 (ತ): ಮ.1.30ಕ್ಕೆ, ಸರಿಪೋದಾ ಶನಿವಾರಂ (ತೆ): ಸಂ.4ಕ್ಕೆ, ಲಾಫಿಂಗ್ ಬುದ್ಧ (ಕ): ರಾ.7.20ಕ್ಕೆ.
ಸ್ಕ್ರೀನ್ 4	ಕೃಷ್ಣಂ ಪ್ರಣಯ ಸಖಿ (ತ): ಬೆ.10.05ಕ್ಕೆ, ರಾ.7.05ಕ್ಕೆ, ರಾ.10.10ಕ್ಕೆ, ಭೀಮಾ (ಕ): ಮ.1.15ಕ್ಕೆ, ಅಹೋ ವಿಕ್ರಮಾರ್ಕ (ತೆ): ಸಂ.4.15ಕ್ಕೆ.

ಐನಾಕ್ಸ್ ಮೂವೀಸ್

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಕೃಷ್ಣಂ ಪ್ರಣಯ ಸಖಿ (ಕ): ಬೆ.10.30ಕ್ಕೆ, ಪೆಪೆ (ಕ): ಮ.1.35ಕ್ಕೆ, ಲಾಫಿಂಗ್ ಬುದ್ಧ (ಕ): ಸಂ.4.05ಕ್ಕೆ, ವಾಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ಸಂ.6.45ಕ್ಕೆ, ಸ್ತ್ರೀ 2 (ಹಿಂ): ರಾ.9.15ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಮ.12.30ಕ್ಕೆ, ಸಂ.6.25ಕ್ಕೆ, ರಾ.9.30ಕ್ಕೆ, ಭೀಮಾ (ಕ): ಮ.3.35ಕ್ಕೆ.
ಸ್ಕ್ರೀನ್ 3	ಭೀಮಾ (ಕ): ಮ.12.45ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.45ಕ್ಕೆ, ಸ್ತ್ರೀ 2 (ಹಿಂ): ಸಂ.6.45ಕ್ಕೆ, ದೇವಧೂತನ್ (ಮ): ರಾ.9.30ಕ್ಕೆ.
ಸ್ಕ್ರೀನ್ 4	ಪೆಪೆ (ಕ): ಬೆ.10.40ಕ್ಕೆ, ಮ.3.45ಕ್ಕೆ, ಅಹೋ ವಿಕ್ರಮಾರ್ಕ (ತೆ): ಮ.1.05ಕ್ಕೆ, ಸರಿಪೋದಾ ಶನಿವಾರಂ (ತೆ): ಸಂ.6.15ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸೆ. 4,5 ಮಣ್ಣಿನ ಗಣಪನ ಮೂರ್ತಿ ತಯಾರಿಕೆ ಕಾರ್ಯಾಗಾರ

ಮೈಸೂರು,ಸೆ.2(ಎಂಟಿವೈ)– ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಪರಿಸರ ಸ್ನೇಹಿ ಮಣ್ಣಿನ ಗಣಪನ ಮೂರ್ತಿಯನ್ನು ಪೂಜಿಸಲು ಉತ್ತೇಜನ ನೀಡುವ ನಿಟ್ಟಿನಲ್ಲಿ ಪರಿಸರ ಬಳಗದ ವತಿಯಿಂದ ಸೆ.4 ಮತ್ತು 5ರಂದು ವಿವಿಧೆಡೆ ಶಾಲಾ ಮಕ್ಕಳಿಗಾಗಿ 'ಮಣ್ಣಿನ ಗಣಪನ ಮೂರ್ತಿ ತಯಾರಿಸುವ ಕಾರ್ಯಾಗಾರ' ಆಯೋಜಿಸಲಾಗಿದೆ ಎಂದು ಪರಿಸರ ಬಳಗದ ಸಂಸ್ಥಾಪಕ ಪರಶುರಾಮೇಗೌಡ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರೀಸ್ ಹಾಗೂ ಪರಿಸರಕ್ಕೆ ಮಾರಕವಾದ ರಾಸಾಯನಿಕ ಅಂಶವುಳ್ಳ ಬಣ್ಣ ಬಳಸಿ ತಯಾರಿಸಿದ ಗಣಪತಿ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜಿಸಿದ ಬಳಿಕ ಜಲ ಮೂಲಗಳಲ್ಲಿ ವಿಸರ್ಜನೆ ಮಾಡುತ್ತಿರುವುದು ಹೆಚ್ಚಾಗುತ್ತಿದೆ. ಇದರಿಂದ ಪರಿಸರ ಮಾತ್ರವಲ್ಲದೆ, ಜಲ ಮೂಲ, ಜಲಚರಗಳ ಮೇಲೂ ದುಷ್ಪರಿಣಾಮ ಬೀರುತ್ತಿದೆ. ಈ ಹಿನ್ನೆಲೆಯಲ್ಲಿ ಪರಿಸರ ಸ್ನೇಹಿ ಮಣ್ಣಿನ ಗಣಪನ ಮೂರ್ತಿಯನ್ನೇ ಪೂಜಿಸುವಂತೆ ಜಾಗೃತಿ ಮೂಡಿಸಲಾಗುತ್ತಿದೆ. ಮಕ್ಕಳಲ್ಲಿ ಪರಿಸರ ಪ್ರಜ್ಞೆ ಹೆಚ್ಚಿಸುವುದಕ್ಕಾಗಿ ಸೆ.4 ಮತ್ತು 5ರಂದು ಪರಿಸರ ಬಳಗ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಚೇರಿ–1ರ ಸಂಯುಕ್ತಾಶ್ರಯದಲ್ಲಿ ಗೌರಿ–ಗಣೇಶ ಹಬ್ಬದ ಪ್ರಯುಕ್ತ 'ಮಣ್ಣಿನ ಗಣಪತಿ ಮಾಡುವ ಕಾರ್ಯಾಗಾರ' ನಡೆಸಲಾಗುತ್ತಿದೆ ಎಂದರು.

ಈ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲು 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹೆಸರು ನೋಂದಾಯಿಸಿದ್ದಾರೆ. 40–45 ಮಕ್ಕಳನ್ನು ಒಂದೊಂದು ತಂಡವಾಗಿ ಬೇರ್ಪಡಿಸಿ, 8 ತಂಡಗಳಲ್ಲಿ ಮಕ್ಕಳಿಗೆ ಮಣ್ಣಿನ ಗಣಪನ ಮೂರ್ತಿ ತಯಾರಿಸುವುದಕ್ಕೆ ಹೇಳಿ ಕೊಡಲಾಗುತ್ತದೆ. ಕಾರ್ಯಾಗಾರವನ್ನು ನುರಿತ ಕಲಾವಿದರಿಂದ ನಡೆಸಲಾಗುತ್ತಿದೆ. ಎರಡೂ ದಿನವೂ ಬೆಳಗ್ಗೆ 9ರಿಂದ ಸಂಜೆ 5.30ರವರೆಗೆ ಗಣಪನ ಮೂರ್ತಿ ತಯಾರಿಸುವುದನ್ನು ಕಲಿಸಲಾಗುತ್ತದೆ ಎಂದರು ತಿಳಿಸಿದರು.

ಮೊದಲ ದಿನ ವಿಜಯನಗರದ ಯೋಗ ನರಸಿಂಹಸ್ವಾಮಿ ದೇವಾಲಯದ ಮುಂಭಾಗದ ಪಾರ್ಕ್ ಹಾಗೂ ಎರಡನೇ ದಿನ ಸಿದ್ದಾರ್ಥನಗರ ಬಡಾವಣೆಯ ಲಲಿತ್ ಮಹಲ್ ಪ್ಯಾಲೇಸ್ ಹೋಟೆಲ್ ಪಕ್ಕದ ಮೈದಾನದಲ್ಲಿ ತರಬೇತಿ ಕಾರ್ಯಾಗಾರ ನಡೆಯಲಿದೆ ಈ ಕಾರ್ಯಾಗಾರದಲ್ಲಿ ಜೆಎಸ್‌ಎಸ್ ವಿದ್ಯಾಸಂಸ್ಥೆ, ಶಾಂತಲಾ ವಿದ್ಯಾ ಪೀಠ, ತಿರುಮಲ ಪಬ್ಲಿಕ್ ಶಾಲೆ, ಭಾರತೀಯ ವಿದ್ಯಾಭವನ, ಸಂಜೀವಯ್ಯ ಶಾಲೆ ಇನ್ನಿತರ ಶಾಲೆಗಳಿಂದ 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡು ಮಣ್ಣಿನ ಗಣಪತಿಯನ್ನು ತಯಾರಿಸಿ, ತಮ್ಮ ತಮ್ಮ ಮನೆಯಲ್ಲಿ ಅದನ್ನೇ ಪೂಜಿಸಲಿದ್ದಾರೆ ಎಂದು ತಿಳಿಸಿದರು.

ಗಣಪತಿ ಮೂರ್ತಿ ತಯಾರಿಸಲು ಪರಿಸರ ಬಳಗದ ಸ್ವಯಂ ಸೇವಕರಿಂದ ಜೇಡಿಮಣ್ಣನ್ನು ಒದಗಿಸಲಾಗುತ್ತದೆ. ಗಣಪತಿ ತಯಾರಿಸುವ ಸಂದರ್ಭದಲ್ಲಿ ಸಾರ್ವಜನಿಕರು ವೀಕ್ಷಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ. 9980399368, 8310285546/95387 ಅನ್ನು ಸಂಪರ್ಕಿಸುವಂತೆ ಕೋರಿದರು.

ಸುದ್ದಿಗೋಷ್ಠಿಯಲ್ಲಿ ಪರಿಸರ ಬಳಗದ ಸದಸ್ಯರಾದ ಗಂಟಯ್ಯ, ಎಸ್.ಸತೀಶ್, ಪ್ರಭಾ ನಂದೀಶ್, ಶಾಂತ ಇದ್ದರು.

ಹೂಟಗಳ್ಳಿ ನಗರಸಭೆ ವ್ಯಾಪ್ತಿ ವಿಶೇಷ ಸ್ವಚ್ಛತಾ ಅಭಿಯಾನಕ್ಕೆ ಜಿಟಿಡಿ ಚಾಲನೆ





ಚಾಮುಂಡೇಶ್ವರಿ ಕ್ಷೇತ್ರದ ಬೆಳವಾಡಿಯಲ್ಲಿ ಸ್ವಚ್ಛತಾ ಅಭಿಯಾನಕ್ಕೆ ಶಾಸಕ ಜಿ.ಟಿ.ದೇವೇಗೌಡರು ಚಾಲನೆ ನೀಡಿದರು. ಮತ್ತೊಂದು ಚಿತ್ರದಲ್ಲಿ ಅಭಿಯಾನದಲ್ಲಿ ಪಾಲ್ಗೊಂಡಿದ್ದ ಸ್ವಯಂಸೇವಕರನ್ನು ಕಾಣಬಹುದು

ಮೈಸೂರು, ಸೆ.2– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಹೂಟಗಳ್ಳಿ ನಗರಸಭೆ ವ್ಯಾಪ್ತಿಯಲ್ಲಿ ವಿಶೇಷ ಸ್ವಚ್ಛತಾ ಅಭಿಯಾನ ನಡೆಸಲಾಯಿತು.

ಹೂಟಗಳ್ಳಿ ನಗರಸಭೆ, ವಿಜಯನಗರ 4ನೇ ಹಂತದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಸ್ವಚ್ಛಂದ ಮೈಸೂರು, ಜನಸೇವಾ ಟ್ರಸ್ಟ್‌ನ ಚಿಗುರು ಆಶ್ರಮ ಹಾಗೂ ಶ್ರೀ ಚಾಮುಂಡೇಶ್ವರಿ ನಗರ ಅಭಿವೃದ್ಧಿ ಸಹಕಾರ ಸಂಘದ ಸಹಯೋಗದಲ್ಲಿ ಏರ್ಪಡಿಸಿದ್ದ ಸ್ವಚ್ಛತಾ ಅಭಿಯಾನಕ್ಕೆ ಶಾಸಕ ಜಿ.ಟಿ.ದೇವೇಗೌಡರು ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಸ್ವಚ್ಛತೆಯ ಸಮರ್ಪಕ ನಿರ್ವಹಣೆಗೆ ಸ್ಥಳೀಯ ಸಂಸ್ಥೆಗಳ ಜೊತೆಗೆ ಸಂಘ ಸಂಸ್ಥೆಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಸಹಕಾರ ಬಹಳ ಮುಖ್ಯ. ಈ ನಿಟ್ಟಿನಲ್ಲಿ ಇಂದು ನಗರಸಭೆಯೊಂದಿಗೆ ವಿವಿಧ ಸಂಘ ಸಂಸ್ಥೆಗಳು ಕೈ ಜೋಡಿಸಿರುವುದು ಒಳ್ಳೆಯ ಬೆಳವಣಿಗೆ. ಯಾವಾಗಲೂ ನಮ್ಮ ಮನೆಯಂತೆ ಸುತ್ತಮುತ್ತಲಿನ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಎಲ್ಲರ ಜವಾಬ್ದಾರಿ ಎಂದರು.

ವಿದ್ಯಾರ್ಥಿಗಳೂ ಸೇರಿದಂತೆ 300ಕ್ಕೂ ಹೆಚ್ಚು ಸ್ವಯಂ ಸೇವಕರು 7 ಬಡಾವಣೆಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸಿದರು. ಮುಖ್ಯವಾಗಿ ಪರಿಸರಕ್ಕೆ ಮಾರಕವಾದ ಪ್ಲಾಸ್ಟಿಕ್ ಸಂಗ್ರಹಿಸಿ, ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು. ಮನೆ ಹಾಗೂ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿದ್ದರೆ ಹಲವು ಕಾಯಿಲೆಗಳಿಂದ ಪಾರಾಗಬಹುದು ಎಂದು ಸಲಹೆ ನೀಡಿ, ಸ್ವಚ್ಛತೆ ಕಾಯ್ದುಕೊಳ್ಳುವಂತೆ ಮನವಿ ಮಾಡಿದರು.

ಅಭಿಯಾನದಲ್ಲಿ ನಗರಸಭೆ ಪೌರಾಯುಕ್ತ ಚಂದ್ರಶೇಖರ್, ಎಇಇ ಗಿರಿಜಾ, ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಅನಿತಾ, ಚಿಗುರು ಆಶ್ರಮ ಸಂಸ್ಥಾಪಕಿ ಸುಷ್ಮಾ ರವಿಕುಮಾರ್, ಮುಖಂಡ ಬೆಳವಾಡಿ ಶಿವಮೂರ್ತಿ, ರಮೇಶ್, ಶ್ರೀ ಚಾಮುಂಡೇಶ್ವರಿ ನಗರ ಅಭಿವೃದ್ಧಿ ಸಹಕಾರ ಸಂಘದ ಅಧ್ಯಕ್ಷ ಸಿದ್ದರಾಜು, ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರವಿಕುಮಾರ್, ದೇವರಾಜು, ಲಾರಿ ಸ್ವಾಮಿ ಹಾಗೂ ಇತರ ಸ್ವಯಂ ಸೇವಕರು ಪಾಲ್ಗೊಂಡಿದ್ದರು.

ಮಠ–ಮಾನ್ಯಗಳಿಂದಾಗಿ ಮತಾಂತರ ಪಿಡುಗಿಗೆ ಬ್ರೇಕ್ ಬಿದ್ದಿದೆ!

● ಶಾಸಕ ಟಿ.ಎಸ್.ಶ್ರೀವತ್ಸ ಅಭಿಮತ ● ಬಡಮಕ್ಕಳಿಗೆ ಮಠ–ಮಾನ್ಯಗಳು ಅನ್ನ–ಅಕ್ಷರದಾಸೋಹದ ಮೂಲಕ ನೆರವಾಗಿವೆ ● ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ



ವಚನ ಶ್ರಾವಣ ಮಾಸದ ಶರಣ ಸಂದೇಶ ಸಮಾರೋಪದಲ್ಲಿ ಎಸ್ಎಸ್ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ಶಾಸಕ ಟಿ.ಎಸ್.ಶ್ರೀವತ್ಸ ಪ್ರದಾನ ಮಾಡಿದರು.

ಮೈಸೂರು, ಸೆ.2(ಎಸ್‌ಪಿಎನ್)– ಮಠ–ಮಾನ್ಯಗಳು ಪ್ರಸ್ತುತ ನಮ್ಮ ಯುವಕರಿಗೆ ವಿದ್ಯಾಭ್ಯಾಸದ ಜೊತೆಗೆ ನೈತಿಕ ಶಿಕ್ಷಣ ನೀಡುತ್ತಿರುವ ಹಿನ್ನೆಲೆಯಲ್ಲಿ ಮತಾಂತರ ಪಿಡುಗಿನಿಂದ ಬಚಾವ್ ಆಗಿದ್ದಾರೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಅಭಿಪ್ರಾಯಪಟ್ಟರು.

ಮೈಸೂರು ಜೆ.ಪಿ.ನಗರದ ಅಕ್ಕ ಮಹಾದೇವಿ ರಸ್ತೆಯಲ್ಲಿನ ಅಕ್ಕಮಹಾದೇವಿ ಪ್ರತಿಮೆ ಆವರಣದಲ್ಲಿ ಜೆ.ಪಿ.ನಗರ ಶರಣ ವೇದಿಕೆ, ಶರಣ ಸಾಹಿತ್ಯ ಪರಿಷತ್ ಮೈಸೂರು ನಗರ ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ಸಹಯೋಗದೊಂದಿಗೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಮನೆಮನೆಗೆ ಶ್ರಾವಣ ಮಾಸದ ಶರಣ ಸಂದೇಶ ಸಮಾರೋಪದಲ್ಲಿ ಮಾತನಾಡಿದರು.

ಸುತ್ತೂರು ಮಠದಲ್ಲಿ ಸಾವಿರಾರು ವಿದ್ಯಾರ್ಥಿಗಳಿಗೆ ಉಚಿತ ಅನ್ನ ದಾಸೋಹದ ಜೊತೆಗೆ, ಅಕ್ಷರ ದಾಸೋಹ ಕಾರ್ಯ ಜರುಗುತ್ತಿದೆ. ಕೊರೊನಾ ಸಂದರ್ಭದಲ್ಲಿ ಪೋಷಕರನ್ನು ಕಳೆದುಕೊಂಡ ಅನಾಥರಿಗೆ, ಶಿಕ್ಷಣದಿಂದ ವಂಚಿತರಾದ ವಿದ್ಯಾರ್ಥಿಗಳಿಗೆ ಆಸರೆಯಾಗಿದ್ದಾರೆ. ಇಂತಹ ನೆರವು ನೀಡಲು ಮಠ–ಮಾನ್ಯಗಳು ಇಲ್ಲದಿದ್ದರೆ, ಮತಾಂತರದ ಪೀಡುಗೆ ಬಲಿಯಾಗುತ್ತಿದ್ದರು. ಇದನ್ನು ತಪ್ಪಿಸುವಲ್ಲಿ ಮಠ–ಮಾನ್ಯಗಳು ಹಾಗೂ ಸಂಘ–ಸಂಸ್ಥೆಗಳ ಕಾರ್ಯ ಶ್ಲಾಘನೀಯ ಎಂದರು.

ಮೈಸೂರಿನ ಖಾಸಗಿ ಶಾಲೆಯ ವಿದ್ಯಾರ್ಥಿ 30 ನಿಮಿಷದಲ್ಲಿ 150 ಶ್ಲೋಕಗಳನ್ನು ಹೇಳಿ ಗಿನ್ನಿಸ್ ದಾಖಲೆ ಮಾಡಿದ್ದಾನೆ. ಮತ್ತೊಬ್ಬ ವಿದ್ಯಾರ್ಥಿ 14 ಗಂಟೆಗಳು ಸತತ ವಿವೇಕಾನಂದರ ಕುರಿತು ಭಾಷಣ ಮಾಡಿ ಗಿನ್ನಿಸ್ ದಾಖಲೆ ಸೇರ್ಪಡೆಯಾಗಿದ್ದಾನೆ. ಹೀಗೆ ನಮ್ಮ–ನಿಮ್ಮ ನಡುವೆಯೇ ಸಾಧನೆ ಮಾಡುವ ವಿದ್ಯಾರ್ಥಿಗಳಿದ್ದು, ಅವರನ್ನು ಗುರುತಿಸಿ ಪ್ರೋತ್ಸಾಹಿಸುವುದು ನಮ್ಮೆಲ್ಲರ ಕರ್ತವ್ಯ ಎಂದ ಶಾಸಕರು, ಜೆ.ಪಿ.ನಗರ ಶರಣ ವೇದಿಕೆ, ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆಯ ಪದಾಧಿಕಾರಿಗಳು ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತಿರುವುದು ಸಂತೋಷದ ಸಂಗತಿ. ಮುಂದಿನ ವರ್ಷ ಜೆ.ಪಿ.ನಗರ ಶರಣ ವೇದಿಕೆ ಪದಾಧಿಕಾರಿಗಳು ಆಯೋಜಿಸುವ ಪ್ರತಿಭಾ ಪುರಸ್ಕಾರಕ್ಕೆ ನಾನು ವೈಯಕ್ತಿಕವಾಗಿ 10 ಸಾವಿರ ನಗದು ನೀಡುತ್ತೇನೆ ಎಂದು ಘೋಷಿಸಿದರು.

ಹಿರಿಯ ಸಾಹಿತಿ ಶಂಕರ್ ದೇವನೂರು ಮಾತನಾಡಿ, ಸಮಯ ಪ್ರಜ್ಞೆ ಎಂಬುದನ್ನು ನಾನು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹಾಗೂ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರನ್ನು ನೋಡಿ ಕಲಿತಿದ್ದೇನೆ. ಹಾಗಾಗಿ ಪ್ರತಿಯೊಬ್ಬರು ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಕಿವಿಮಾತು ಹೇಳಿದರು.

12ನೇ ಶತಮಾನದ ವಚನಕಾರರ ವಚನಗಳನ್ನು 21ನೇ ಶತಮಾನದಲ್ಲೂ ಸ್ಮರಣೆ ಮಾಡಿಕೊಳ್ಳುತ್ತಿರುವುದು ಉತ್ತಮ ಸಂಗತಿ. ಆಗಿನ ವಚನಕಾರರು ತಮ್ಮ ಸಾಹಿತ್ಯದಲ್ಲಿ ಬಳಸಿರುವ ಶಬ್ದಗಳನ್ನು ಇಂದಿನ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರೂ ಬಳಸಲು ಸಾಧ್ಯವಿಲ್ಲ. ವಚನ ಸಾಹಿತ್ಯ, ಕನ್ನಡ ಸಾಹಿತ್ಯದ ಮೈಲಿಗಲ್ಲು ಎಂದರೆ ತಪ್ಪಾಗಲಾರದು ಎಂದ ಅವರು, ಪ್ರಸ್ತುತ ಬೌದ್ಧಿಕವಾಗಿ ಗೆದ್ದಿದ್ದೇವೆ. ಆದರೆ, ನೈತಿಕವಾಗಿ ಸೋತಿದ್ದೇವೆ. ಹಾಗಾಗಿ ಪ್ರತಿಯೊಬ್ಬರು ವಚನಕಾರರ ಸಾಹಿತ್ಯ ಮತ್ತು ಬದುಕಿನ ಮಾದರಿಯನ್ನು ಅಳವಡಿಸಿಕೊಳ್ಳಲು ಪ್ರಯತ್ನಿಸಬೇಕು. ಅಂದಿನ ವಚನಕಾರರು ಸಮಸಮಾಜ ನಿರ್ಮಿಸಲು ಕ್ರಿಯೆ ಮೂಲಕ ಆಚರಣೆಗೆ ತಂದರು. ಸ್ವತಃ ಬಸವಣ್ಣನವರೇ ಶಿವಯೋಗ ಮಂಟಪದಲ್ಲಿ ಎಲ್ಲರೊಂದಿಗೆ ಕುಳಿತು ಊಟ ಸ್ವೀಕರಿಸುತ್ತಿದ್ದರು ಎಂದು ಮಹನ ಉಲ್ಲೇಖಿಸಿ ತಿಳಿಸಿದರು.

ಭಾರತೀಯ ಆಧ್ಯಾತ್ಮ ಚರಿತ್ರೆಯಲ್ಲಿ ವಚನಕಾರರು ನುಡಿದಂತೆ ನಡೆದು, ಜಗತ್ತಿಗೆ ಮಾದರಿಯಾಗಿದ್ದಾರೆ. ಹಾಗಾಗಿ ಅಂದಿನ ಶರಣರ ತತ್ವ–ಸಿದ್ಧಾಂತಗಳನ್ನು ಇಂದಿನ 21ನೇ ಶತಮಾನದಲ್ಲೂ ಸ್ಮರಿಸುತ್ತಿದ್ದೇವೆ. ಅಂತೆಯೇ 12ನೇ ಶತಮಾನದ ವಚನಕಾರರು ಜಡ್ಡುಗಟ್ಟಿದ ಸಮಾಜಕ್ಕೆ ಕಾಯಕಲ್ಪ ನೀಡಿದವರು ಎಂದು ಜ್ಞಾನಪೀಠ ಪುರಸ್ಕೃತ ಗಿರೀಶ್ ಕಾರ್ನಾಡ್ ಹೇಳಿದ್ದಾರೆ. ಹಾಗೆಯೇ ಬೇಂದ್ರೆ ವಚನಗಳು ನಕ್ಷತ್ರಗಳಿಂದ ಹೆಚ್ಚು ಜ್ಞಾನದ ಹೊಳಪು ಎಂದಿದ್ದಾರೆ. ಬ್ರಿಟನ್ ಲೋಕಸಭೆಯ ಸಭಾಪತಿಗಳು, ಬಸವಣ್ಣನವರ ವಚನವನ್ನು ಉಲ್ಲೇಖಿಸಿ, ಭಾರತೀಯ ಆಧ್ಯಾತ್ಮಿಕತೆ ಕುರಿತು ಮಾತನಾಡಿದ್ದಾರೆ ಎಂದು ಕೆಲ ಐತಿಹಾಸಿಕ ಘಟನೆಗಳನ್ನು ಉಲ್ಲೇಖಿಸಿದರು.

ಸಮಾಜದಲ್ಲಿ ನಾವಾಡುವ ಮಾತು ಸ್ಫುಟವಾಗಿರಬೇಕು. ಮಾತು ಮಾತಾಗಿ ಬಂದರೆ ಜನರು ಜನರಾಗುತ್ತಾರೆ. ಮಾತುಗಳನ್ನು ವಚನವಾಗಿ ನೋಡಿದರೆ, ಇಂದಿನ ಜನರೆಲ್ಲಾ ಶರಣರಾಗಿ ಬದಲಾಗುತ್ತಾರೆ. ಹಾಗಾಗಿ ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ದೇವರು ಎಂದು ಅಂದಿನ ಶರಣರು ಅನೇಕ ಬಾರಿ ಹೇಳಿದ್ದಾರೆ ಎಂದು ಕೆಲವು ವಚನಗಳನ್ನು ಉಲ್ಲೇಖಿಸಿದರು.

ಪ್ರತಿಭಾವಂತರಿಗೆ ಸನ್ಮಾನ: ಈ ವೇಳೆ ಎಸ್‌ಎಸ್‌ಎಲ್‌ಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಎಸ್.ನಾಗಶ್ರೀ, ಹೆಚ್.ರೂಪಶ್ರೀ, ಎ.ಎನ್.ಪ್ರಣತಿ, ಪಿ ಗಾನವಿ, ಎಂ.ಕಿರಣ್ಮಯಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಡಿ.ಎಂ.ತೇಜಸ್ವಿ, ಎನ್.ಭರತ್, ಎಸ್.ಮೋನಿಸ್ ಕುಮಾರ್ ಅವರನ್ನು 2 ಸಾವಿರ ನಗದು ಹಾಗೂ ಪ್ರಮಾಣ ಪತ್ರವನ್ನು ನೀಡಿ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಕನಕಪುರ ದೇಗುಲ ಮಠದ ಕಿರಿಯ ಶ್ರೀಗಳಾದ ಚನಬಸವ ಸ್ವಾಮೀಜಿ, ಶರಣ ಸಾಹಿತ್ಯ ಪರಿಷತ್ ಮೈಸೂರು ಘಟಕ ಅಧ್ಯಕ್ಷ ಮ.ಗು. ಸದಾನಂದಯ್ಯ, ಜೆ.ಪಿ.ನಗರ ಶರಣ ವೇದಿಕೆ ಅಧ್ಯಕ್ಷ ಎಸ್.ಮುಟ್ಟರಾಜಪ್ಪ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾಶಿವಲಿಂಗಸ್ವಾಮಿ ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮದ ನಂತರ ಶ್ರೀಗಾಯಿತ್ರಿ ಕಲಾಬಳದ ವತಿಯಿಂದ ಅನ್ನಸಂತರ್ಪಣೆ ನಡೆಯಿತು.

ಮೈಸೂರಲ್ಲಿದ್ದಾರೆ ಸಿಎಂ ಸಿದ್ದರಾಮಯ್ಯ

ಇಂದು ಚಾಮುಂಡೇಶ್ವರಿ ದರ್ಶನ; ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಮೊದಲ ಸಭೆಯಲ್ಲಿ ಭಾಗಿ



ಮೈಸೂರು, ಸೆ.2– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ರಾತ್ರಿ ಮೈಸೂರಿಗೆ ಆಗಮಿಸಿದರು.

ಬೆಂಗಳೂರಿನಿಂದ ವಿಶೇಷ ವಿಮಾನದಲ್ಲಿ ರಾತ್ರಿ 8.30ರ ಸುಮಾರಿಗೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಸಿಎಂ, ಅಲ್ಲಿಂದ ನೇರವಾಗಿ ಶಾರದಾದೇವಿ ನಗರದ ತಮ್ಮ ನಿವಾಸಕ್ಕೆ ತೆರಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸಿಎಂ ಜೊತೆಯಲ್ಲಿದ್ದರು. ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮಾಜಿ ಎಂಎಲ್‌ಸಿ ಮರಿತಿಬ್ಬೇಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ವಕ್ತಾರ ಎಂ.ಲಕ್ಷ್ಮಣ್ ಸೇರಿದಂತೆ ಅನೇಕ ಸ್ಥಳೀಯ ಮುಖಂಡರು ಮುಖ್ಯಮಂತ್ರಿಗಳನ್ನು ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು.

ಇಂದು ಚಾಮುಂಡಿ ದರ್ಶನ: ಮಂಗಳವಾರ ಬೆಳಗ್ಗೆ 10ಕ್ಕೆ ಚಾಮುಂಡಿಬೆಟ್ಟಕ್ಕೆ ತೆರಳಿ, ತಾಯಿ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಅಲ್ಲಿನ ದಾಸೋಹ ಭವನದಲ್ಲಿ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಮೊದಲ ಸಭೆ ನಡೆಸಲಿದ್ದಾರೆ. ಸಭೆ ಬಳಿಕ ಪ್ರಸಾದ ಸೇವಿಸಿ, ತಮ್ಮ ಅಧಿಕಾರಾವಧಿಯಲ್ಲಾದ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಲಿದ್ದಾರೆ. ಬಳಿಕ ಮಧ್ಯಾಹ್ನ 2 ಗಂಟೆಗೆ ವಿಶೇಷ ವಿಮಾನದಲ್ಲಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ.

ರಾಜ್ಯಪಾಲರ ಹುದ್ದೆ ರದ್ದುಪಡಿಸಬೇಕು ಇಲ್ಲವೇ ಆ ಹುದ್ದೆಗೆ ಒಮ್ಮತದ ವ್ಯಕ್ತಿಗಳನ್ನ ನೇಮಿಸಬೇಕು

ಕಾಂಗ್ರೆಸ್ ನಾಯಕ ಅಭಿಷೇಕ್ ಮನು ಸಿಂಘ್ವಿ ಅಭಿಮತ



ಬೆಂಗಳೂರು: ರಾಜ್ಯಪಾಲರು ಮತ್ತು ಪ್ರತಿಪಕ್ಷಗಳ ಆಡಳಿತದ ರಾಜ್ಯ ಸರ್ಕಾರಗಳ ನಡುವಿನ ಘರ್ಷಣೆ ಹೆಚ್ಚುತ್ತಿದ್ದು, ಹಿರಿಯ ಕಾಂಗ್ರೆಸ್ ನಾಯಕ ಅಭಿಷೇಕ್ ಮನು ಸಿಂಘ್ವಿ ಸೋಮವಾರ ರಾಜ್ಯಪಾಲರ ಹುದ್ದೆಯನ್ನು ರದ್ದುಗೊಳಿಸಬೇಕು ಅಥವಾ ರಾಜಕೀಯದಲ್ಲಿಲ್ಲದ ವ್ಯಕ್ತಿಯನ್ನು ಒಮ್ಮತದಿಂದ ನೇಮಿಸಬೇಕು ಎಂದು ಹೇಳಿದ್ದಾರೆ.

ಕಳೆದ ವಾರ ತೆಲಂಗಾಣದಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾದ ಸಿಂಘ್ವಿ, ಸಂಸತ್ತಿನ ಉಭಯ ಸದನಗಳಲ್ಲಿ ಸಭಾಧ್ಯಕ್ಷರು ಮತ್ತು ಪ್ರತಿಪಕ್ಷಗಳ ನಡುವಿನ ಪುನರಾವರ್ತಿತ ಘರ್ಷಣೆಯನ್ನು ಉಲ್ಲೇಖಿಸಿದ್ದಾರೆ. ಸಭಾಧ್ಯಕ್ಷರು ಪಕ್ಷಪಾತಿಯಲ್ಲ ಎಂದು ಖಚಿತಪಡಿಸಿಕೊಳ್ಳಲು ಸುಧಾರಣೆ ತರಬೇಕು ಎಂದು ಕರೆ ನೀಡಿದ್ದಾರೆ.

ಪಿಟಿಐಗೆ ನೀಡಿದ ಸಂದರ್ಶನದಲ್ಲಿ, ನಾಲ್ಕು ಬಾರಿ ಸಂಸದರಾಗಿರುವ ಸಿಂಘ್ವಿ, ಈ ಸರ್ಕಾರದ ಅತ್ಯಂತ ದೊಡ್ಡ ವೈಫಲ್ಯವೆಂದರೆ ಅದು ಪ್ರತಿ ಸಂಸ್ಥೆಯನ್ನು 'ಅವಮಾನ, ಅಪಮೌಲ್ಯಗೊಳಿಸುತ್ತಿದೆ ಮತ್ತು ಕುಗ್ಗಿಸುತ್ತಿದೆ'. ರಾಜ್ಯಪಾಲರನ್ನು ದುರ್ಬಳಕೆ ಮಾಡಿಕೊಂಡಿರುವ ಹಲವಾರು ನಿದರ್ಶನಗಳಿವೆ ಎಂದಿದ್ದಾರೆ.

ರಾಜ್ಯಪಾಲರ ಹುದ್ದೆಯನ್ನು ರದ್ದುಪಡಿಸಬೇಕು ಅಥವಾ ಒಮ್ಮತದ ಮೂಲಕ ಈ ಕ್ಷುಲ್ಲಕ ರಾಜಕೀಯಕ್ಕೆ ಬಾರದ ವ್ಯಕ್ತಿಯನ್ನು ನೇಮಿಸಬೇಕು ಎಂದು ಸಿಂಘ್ವಿ ಪ್ರತಿಪಾದಿಸಿದ್ದಾರೆ. ಗೋಪಾಲಕೃಷ್ಣ ಗಾಂಧಿಯಂತಹವರು ಇಂತಹ ಕೆಲಸವನ್ನು ಮಾಡುತ್ತಾರೆಯೇ. ಉಪರಾಷ್ಟ್ರಪತಿ ಸ್ಥಾನಕ್ಕೆ ನಮ್ಮ ಪಕ್ಷದಿಂದ ಅವರ ಹೆಸರನ್ನು ಸೂಚಿಸಲ್ಪಟ್ಟಿದ್ದರೂ ನಾನು ಅವರ ಹೆಸರನ್ನು ತೆಗೆದುಕೊಳ್ಳುತ್ತಿದ್ದೇನೆ. ಯಾವುದೇ ತಪ್ಪುಗಳನ್ನು ಮಾಡದ ಅಂತಹ ಜನರು ನೇಮಿಸಬೇಕು ಅಥವಾ ರಾಜ್ಯ ಪಾಲರ ಹುದ್ದೆಯನ್ನೇ ರದ್ದುಪಡಿಸಬೇಕು" ಎಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರು ಆಗ್ರಹಿಸಿದ್ದಾರೆ.

ಬಿಡಿಎ ನಿವೇಶನಕ್ಕಾಗಿ 72 ಕೋಟಿ ರೂ. ಬಿಡ್ ಮಾಡಿದ್ದ ಇಂಜಿನಿಯರ್ ಈಗ 4 ಲಕ್ಷ ಠೇವಣಿಗಾಗಿ ಪರದಾಟ!



ಬೆಂಗಳೂರು: ತುಮಕೂರು ಜಿಲ್ಲೆಯ ತಿಪಟೂರಿನ ಸಾಫ್ಟ್‌ವೇರ್ ಇಂಜಿನಿಯರ್ ಒಬ್ಬರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ(ಬಿಡಿಎ) 60x40 ಚದರ ಅಡಿ ಅಳತೆಯ ಕಾರ್ನರ್ ಸೈಟ್‌ಗೆ 72 ಕೋಟಿ ರೂ.ಗೆ ಬಿಡ್ ಮಾಡಿ ಸುದ್ದಿಯಾಗಿದ್ದರು.

ಎರಡು ವರ್ಷಗಳ ಹಿಂದೆ ಸೈಟ್‌ನ ಮಾರುಕಟ್ಟೆ ಮೌಲ್ಯವು ಕೇವಲ 6 ಕೋಟಿ ರೂ.ಗಳಾಗಿದ್ದು, ಅದರ ನಿಜವಾದ ಮೌಲ್ಯಕ್ಕಿಂತ ಶೇ. 1,270 ರಷ್ಟು ಹೆಚ್ಚು ಬಿಡ್ ಆಗಿತ್ತು ಮತ್ತು ಇದು ಬಿಡಿಎ ಇತಿಹಾಸದಲ್ಲಿ ಅತ್ಯಧಿಕ ಮೊತ್ತದ ಬಿಡ್ ಆಗಿತ್ತು. ಆದರೆ ಬಿಡ್ಡರ್ ಟಿಸಿ ಶಶಾಂಕ್ ಪಟೇಲ್ ಅವರು 72 ಗಂಟೆಗಳ ಒಳಗೆ ಮೊತ್ತದ ನಾಲ್ಕನೇ ಒಂದು ಭಾಗ(ಬಿಡ್‌ನ ಶೇ. 25 ರಷ್ಟು ಹಣ)ವನ್ನು ಪಾವತಿಸಲು ವಿಫಲವಾದ ಕಾರಣ ಬಿಡಿಎ ಅವರ ಸೈಟ್ ಹಂಚಿಕೆಯನ್ನು ರದ್ದುಗೊಳಿಸಿತ್ತು.

ಪಟೇಲ್ ಅವರು ತಾವು ತಪ್ಪಾಗಿ ಬಿಡ್ ಮಾಡಿದ್ದು, ಮೊತ್ತವು ಸಂಪೂರ್ಣ ಸೈಟ್‌ಗೆ ಎಂದು ಭಾವಿಸಿದ್ದೆ. ಅದು ಪ್ರತಿ ಚದರ ಮೀಟರ್‌ಗೆ ಎಂಬುದು ತಿಳಿದಿರಲಿಲ್ಲ ಎಂದು ಹೇಳಿಕೊಂಡಿದ್ದಾರೆ. ಇದೀಗ ಅವರು ಆರ್‌ಟಿಐ ಅರ್ಜಿ ಮೂಲಕ ಬಿಡಿಎ ವಿರುದ್ಧ ಹರಿಹಾಯ್ದಿದ್ದು, ಬಿಡ್ ಮಾಡಲು ತಾನು ಪಾವತಿಸಿದ 4 ಲಕ್ಷ ರೂ. ಠೇವಣಿ ಮೊತ್ತವನ್ನು ವಾಪಸ್ ನೀಡುವಂತೆ ಕೇಳಿಕೊಂಡಿದ್ದಾರೆ. ಪಟೇಲ್ ಅವರು ಬಿಡ್ ಮಾಡಿದ್ದ ಎಚ್‌ಎಸ್‌ಆರ್ ಲೇಔಟ್ 4ನೇ ಸೆಕ್ಟರ್‌ನಲ್ಲಿರುವ ನಿವೇಶನವನ್ನು(ಸರ್ವೆ ನಂ. 276) ಅಂತಿಮವಾಗಿ ಈ ವರ್ಷದ ಆರಂಭದಲ್ಲಿ 10.57 ಕೋಟಿ ರೂ.ಗೆ ಮತ್ತೊಬ್ಬ ಬಿಡ್‌ದಾರರಿಗೆ ಹಂಚಿಕೆ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ.

ಸಾರ್ವಜನಿಕರ ಗಮನಕ್ಕಾಗಿ

ನನ್ನ ಕಕ್ಷಿದಾರರ ಇರಾದೆಯ ಮೇರೆಗೆ, ಈ ಸಾರ್ವಜನಿಕ ಪ್ರಕಟಣೆಯ ಕ್ರಮವೇನೆಂದರೆ, ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಸಂಬಂಧ ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ದೇವಗಳ್ಳಿ ಗ್ರಾಮ, ಮನೆ ನಂ.19 ರಲ್ಲಿ ವಾಸವಾಗಿರುವ ಲೇಟ್ ಮಹದೇವಪ್ಪನವರ ಮಗ ಶಿವಪ್ಪ, ಶಿವಪ್ಪನವರ ಧರ್ಮಪತ್ನಿ ಶ್ರೀಮತಿ.ಚಿಕ್ಕತಾಯಮ್ಮ, ಶಿವಪ್ಪನವರ ಮಗ ಮಹದೇವಸ್ವಾಮಿ.ಎಸ್, ಹಾಗೂ ಶಿವಪ್ಪನವರ ಮಗಳು ಶ್ರೀಮತಿ. ಮಹದೇವಮ್ಮ. ಎಸ್ ರವರುಗಳಿಗೂ ನನ್ನ ಕಕ್ಷಿದಾರರಿಗೂ ಕೆಳಕಂಡ ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡುವ ಸಂಬಂಧ ಒಡಂಬಡಿಕೆಯಾಗಿದ್ದು ದಿನಾಂಕ 01/11/2023 ರಂದು ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಾಯಿತ ಕ್ರಯದ ಕರಾರು ಪತ್ರ ಆಗಿರುತ್ತದೆ. ಸದರಿ ಸ್ವತ್ತನ್ನು ನನ್ನ ಕಕ್ಷಿದಾರರು ಕ್ರಯಕ್ಕೆ ಪಡೆಯಲು ಇಚ್ಛಿಸಿದ್ದು, ಈಗಾಗಲೇ ಆ ಸಂಬಂಧ ನನ್ನ ಕಕ್ಷಿದಾರರಿಗೆ ಕೆಲವು ದಾಖಲಾತಿಗಳನ್ನು ಹಾಜರು ಮಾಡಿದ್ದು ನನ್ನ ಕಕ್ಷಿದಾರರು ಸದರಿ ಜಮೀನನ್ನು ನೋಂದಾಯಿತ ಕ್ರಯ ಪತ್ರದ ಮೂಲಕ ಖರೀದಿಸಲು ತೀರ್ಮಾನಿಸಿರುತ್ತಾರೆ. ಸದರಿ ಜಮೀನಿನ ಸಂಬಂಧ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ ಇದ್ದಲ್ಲಿ ಸಂಬಂಧಪಟ್ಟವರು ಈ ಪತ್ರಿಕಾ ಪ್ರಕಟಣೆ ಹೊರಡಿಸಿದ 7 ದಿವಸದೊಳಗಾಗಿ ನನ್ನ ಕಕ್ಷಿದಾರರಿಗಾಗಲೀ, ನನಗಾಗಲೀ ಲಿಖಿತವಾಗಿ ಸಂಬಂಧಪಟ್ಟ ದಾಖಲಾತಿಗಳೊಡನೆ ನನ್ನ ಕೆಳಕಂಡ ವಿಳಾಸದ ಕಛೇರಿಯ ಸಮಯದಲ್ಲಿ ಹಾಜರಾಗಿ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು. ಮೇಲ್ಕಂಡ ಸಮಯದೊಳಗೆ ಯಾವುದೇ ತಂಟೆ ತಕರಾರು ಬರದೇ ಇದ್ದ ಪಕ್ಷದಲ್ಲಿ ನನ್ನ ಕಕ್ಷಿದಾರರು ಕೆಳಕಂಡ ಸ್ವತ್ತಿನ ಸಂಬಂಧ ಕ್ರಯ ಪತ್ರವನ್ನು ಪಡೆದುಕೊಳ್ಳಲು ಮುಂದಾಗುತ್ತಾರೆ ಹಾಗೂ ಮುಂದೆ ಬರುವ ಯಾವುದೇ ತಂಟೆ ತಕರಾರುಗಳಿಗೆ ನನ್ನ ಕಕ್ಷಿದಾರರು ಬದ್ಧರಾಗಿರುವುದಿಲ್ಲವೆಂದು ಈ ಮೂಲಕ ತಿಳಿಯತಕ್ಕದ್ದು.

ಷೆಡ್ಯೂಲ್ ಸ್ವತ್ತು

ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ದಾರಿಪುರ ಗ್ರಾಮಕ್ಕೆ ಸೇರಿದ ಸರ್ವೆ ನಂ. **115/2A** ರಲ್ಲಿರುವ 1ಎಕರೆ 16 ಗುಂಟೆ ಪೈಕಿ 20 ಗುಂಟೆ ವಿಸ್ತೀರ್ಣದ ಖುಷ್ಕಿ ಜಮೀನಿಗೆ ಚೆಕ್ಕುಬಂದಿ : ಪೂರ್ವಕ್ಕೆ : ಸರ್ವೆ ನಂ.**115/2B** ರ ಚಾಮುಂಡಿ ಪಾಪೇಗೌಡ ಬಿನ್ ಲೇಟ್.ಮಾಲೇಗೌಡ ರವರ ಜಮೀನು, ಪಶ್ಚಿಮಕ್ಕೆ : ಬರಡನಪುರ ಗ್ರಾಮ ಗಡಿ, ಉತ್ತರಕ್ಕೆ : ಸರ್ವೆ ನಂ **115/2 A** ರ ಉಳಿಕೆ ಶಿವಪ್ಪನವರ ಜಮೀನು ದಕ್ಷಿಣಕ್ಕೆ : ಸರ್ವೆ ನಂ. **110/6** ರ ಎಸ್.ನಾಗರಾಜು ಬಿನ್ ಸಿದ್ದರಾಮೇಗೌಡ ರವರ ಜಮೀನು.

ಕಕ್ಷಿದಾರರ ಪರ ವಕೀಲರು
ಸಹಿ/– ಶ್ರೀ ಪಾಲಾಕ್ಷ,
ವಕೀಲರು, ನಂ. 645, ಮೊದಲನೇ ಮಹಡಿ, ನಾರಾಯಣ ಶಾಸ್ತ್ರಿ ರಸ್ತೆ, ಶಾಂತಲ ಚಿತ್ರ ಮಂದಿರ ಹತ್ತಿರ, ಮೈಸೂರು. **Mob: 9448075718**

ಆರೋಪಿಯಾದ ಮಾತ್ರಕ್ಕೆ 'ಬುಲ್ಡೋಜರ್ ನ್ಯಾಯ' ಸರಿಯಲ್ಲ



ನವದೆಹಲಿ: ಹಲವು ಅಪರಾಧ ಪ್ರಕರಣಗಳಲ್ಲಿ ಆರೋಪಿಯಾಗಿರುವವರ ಮನೆಯನ್ನು ಧ್ವಂಸಗೊಳಿಸುವ ಪರಿಪಾಠವನ್ನು ಸುಪ್ರೀಂ ಕೋರ್ಟ್ ತೀವ್ರವಾಗಿ ಆಕ್ಷೇಪಿಸಿದೆ.

ಈ ರೀತಿಯ ಸಮಸ್ಯೆಗಳನ್ನು ಬಗೆಹರಿಸುವುದಕ್ಕೆ ಮುಂದಿನ ದಿನಗಳಲ್ಲಿ ತಾನೇ ಮಾರ್ಗಸೂಚಿಗಳನ್ನು ಪ್ರಕಟಿಸಬೇಕಾಗುತ್ತದೆ ಎಂದು ಕೋರ್ಟ್ ಹೇಳಿದೆ.

ಒಬ್ಬ ವ್ಯಕ್ತಿ ಕೇವಲ ಆರೋಪಿ ಎಂಬ ಕಾರಣಕ್ಕಾಗಿ ಹೇಗೆ ಆತನಿಗೆ ಸಂಬಂಧಪಟ್ಟ ಆಸ್ತಿಯನ್ನು ಧ್ವಂಸಗೊಳಿಸುವುದು ಸಾಧ್ಯ ಎಂದು ನ್ಯಾ. ಬಿಆರ್ ಗವಾಯಿ ಹಾಗೂ ಕೆವಿ ವಿಶ್ವನಾಥನ್ ಅವರಿದ್ದ ಪೀಠ ಪ್ರಶ್ನಿಸಿದೆ.

ಅಕ್ರಮವಾಗಿ ಆಸ್ತಿಗಳನ್ನು ಧ್ವಂಸ ಮಾಡುತ್ತಿರುವ ವಿಷಯವಾಗಿ ಕಳವಳ ವ್ಯಕ್ತವಾಗುತ್ತಿದ್ದು, ಇದನ್ನು ಬಗೆಹರಿಸಲು ದೇಶಾದ್ಯಂತ ಅನ್ವಯವಾಗುವ ರೀತಿಯಲ್ಲಿ ಮಾರ್ಗಸೂಚಿಗಳನ್ನು ವಿಧಿಸುವುದಾಗಿ ಕೋರ್ಟ್ ಇದೇ ವೇಳೆ ತಿಳಿಸಿದೆ.

ನಾವು ಉತ್ತರ ಪ್ರದೇಶ ರಾಜ್ಯ ತೆಗೆದುಕೊಂಡಿರುವ ನಿಲುವನ್ನು ಪ್ರಶಂಸಿಸುತ್ತೇವೆ. ದೇಶಾದ್ಯಂತ ಅನ್ವಯವಾಗುವ ಮಾರ್ಗಸೂಚಿಗಳನ್ನು ನ್ಯಾಯಾಲಯವು ರೂಪಿಸಲು ಕಕ್ಷಿದಾರರ ವಕೀಲರು ಸಲಹೆಗಳನ್ನು ನೀಡುವುದು ಸೂಕ್ತವೆಂದು ನಾವು ಕಂಡುಕೊಂಡಿದ್ದೇವೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ರಾಜಸ್ಥಾನದ ರಶೀದ್ ಖಾನ್ ಮತ್ತು ಮಧ್ಯಪ್ರದೇಶದ ಮೊಹಮ್ಮದ್ ಹುಸೇನ್ ಅವರು ತಮ್ಮ ಆಸ್ತಿಗಳನ್ನು ಕಾನೂನುಬಾಹಿರವಾಗಿ ಮತ್ತು ಅಧಿಕಾರಿಗಳು 'ಸೇಡಿನ' ರೂಪದಲ್ಲಿ ಕೆಡವಿದ್ದಾರೆ ಎಂದು ಆರೋಪಿಸಿ ಸಲ್ಲಿಸಿದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುತ್ತಿದೆ.

60 ವರ್ಷದ ಆಟೋ ರಿಕ್ಷಾ ಚಾಲಕ ಖಾನ್ ಅವರ ಬಾಡಿಗೆ ಮನೆಯನ್ನು ಉದಯಪುರ ಜಿಲ್ಲಾಡಳಿತ ನೆಲಸಮಗೊಳಿಸಿದೆ, ಖಾನ್ ಅವರ ಮಗ, 15 ವರ್ಷದ ಶಾಲಾ ಬಾಲಕ ತನ್ನ ಸಹಪಾಠಿಯನ್ನು ಇರಿದ ಆರೋಪದ ಮೇಲೆ ಹಿಂದೂಗಳೊಂದಿಗೆ ನಗರದಲ್ಲಿ ಹಿಂಸಾಚಾರ ಆರಂಭವಾಗಿತ್ತು. ಸ್ವತ್ತುಗಳನ್ನು ಧ್ವಂಸಗೊಳಿಸಿ, ವಾಹನಗಳಿಗೆ ಬೆಂಕಿ ಹಚ್ಚಲಾಗಿತ್ತು. ಮತ್ತೊಬ್ಬ ಅರ್ಜಿದಾರ ಮೊಹಮ್ಮದ್ ಹುಸೇನ್ ತನ್ನ ಮನೆ ಮತ್ತು ಅಂಗಡಿಯನ್ನು ಮಧ್ಯಪ್ರದೇಶದ ಆಡಳಿತವು ಅಕ್ರಮವಾಗಿ ನೆಲಸಮಗೊಳಿಸಿದೆ ಎಂದು ಆರೋಪಿಸಿದ್ದರು.

ಹರ್ಯಾಣದ ನುಹ್‌ನಲ್ಲಿ ನಡೆದ ಹಿಂಸಾಚಾರದ ನಂತರ ಜಮಿಯತ್ ಉಲಾಮಾ–ಇ–ಹಿಂದ್ ಮುಸ್ಲಿಂ ಮನೆಗಳನ್ನು ಕೆಡವುವುದರ ವಿರುದ್ಧ ಈ ಹಿಂದೆ ಸಲ್ಲಿಸಿದ್ದ ಪ್ರಕರಣದಲ್ಲಿ ಎರಡು ಅರ್ಜಿಗಳನ್ನು ಸಲ್ಲಿಸಲಾಗಿತ್ತು ಹಿರಿಯ ವಕೀಲರಾದ ದುಶ್ಯಂತ್ ದವೆ (ಜಮಿಯತ್ ಉಲಾಮಾ–ಇ–ಹಿಂದ್ ಪರ ವಾರ) ಮತ್ತು ಸಿಯು ಸಿಂಗ್ (ಅರ್ಜಿದಾರರ ಪರ ಹಾಜರಾಗಿದ್ದಾರೆ) ಹಲವಾರು ಪ್ರಕರಣಗಳಲ್ಲಿ ತೆರವು ಕಾರ್ಯಾಚರಣೆ ಶಿಕ್ಷೆಯ ವಿಧಾನವಾಗಿ ನಡೆಸಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು.